

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ನವೆಂಬರ್ 18 ಶನಿವಾರ 2023

ಸಂಪುಟ: 44 | ಸಂಚಿಕೆ: 211 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ– ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.cor..

₹4



ಆರ್.ಅಶೋಕ್ ವಿಧಾನಸಭೆ ವಿಪಕ್ಷ ನಾಯಕ

● ಏಳು ಬಾರಿ ಶಾಸಕ, ಮಾಜಿ ಡಿಸಿಎಂ, ಸಚಿವರಾಗಿ ಅನುಭವಿ ● ಪಕ್ಷದ ರಾಜ್ಯಾಧ್ಯಕ್ಷನಾಗಿ ವಿಜಯೇಂದ್ರ ನೇಮಕವಾದ ವಾರದಲ್ಲಿ ವಿಪಕ್ಷ ನಾಯಕನ ಆಯ್ಕೆ ● ಮತ್ತೊಮ್ಮೆ ಪಕ್ಷದಲ್ಲಿ ಮೇಲುಗೈ ಸಾಧಿಸಿದ ಬಿಎಸ್‌ವೈ ಬಣ ● ಪಕ್ಷದ ಸಾರಥಿ ವೀರಶೈವ ಲಿಂಗಾಯತರಾದ್ದರಿಂದ ಮತ್ತೊಂದು ಪ್ರಬಲ ಒಕ್ಕಲಿಗ ಸಮುದಾಯಕ್ಕೆ ಮಣೆ



ವಿಧಾನಸಭೆ ವಿಪಕ್ಷ ನಾಯಕನಾಗಿ ಆಯ್ಕೆಯಾದ ಆರ್.ಅಶೋಕ್ ಅವರನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಪಕ್ಷದ ವೀಕ್ಷಕರಾದ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್, ಪ್ರಧಾನ ಕಾರ್ಯದರ್ಶಿ ದುಶ್ಯಂತಕುಮಾರ್ ಗೌತಮ್, ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಅಭಿನಂದಿಸಿದರು.

ಬೆಂಗಳೂರು, ನ.17(ಕೆಎಂಶಿ)–ಮಾಜಿ ಉಪ ಮುಖ್ಯಮಂತ್ರಿ, ಬಿಜೆಪಿಯ ಹಿರಿಯ ಶಾಸಕ ಆರ್.ಅಶೋಕ್ ವಿಧಾನಸಭೆಯ ಪ್ರತಿಪಕ್ಷದ ನಾಯಕರಾಗಿ ಆಯ್ಕೆಯಾಗಿದ್ದಾರೆ.

ಇಂದು ಸಂಜೆ ನಗರದ ಖಾಸಗಿ ಹೋಟೆಲ್‌ನಲ್ಲಿ ನಡೆದ ಬಿಜೆಪಿ ಶಾಸಕಾಂಗ ಪಕ್ಷದ ಸಭೆಯಲ್ಲಿ ಅಶೋಕ್ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.

ಶಾಸಕಾಂಗ ಪಕ್ಷದ ನಾಯಕನ ಆಯ್ಕೆಗಾಗಿ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್, ಬಿಜೆಪಿಯ ರಾಷ್ಟ್ರೀಯ ಪ್ರಧಾನಕಾರ್ಯದರ್ಶಿ ದುಷ್ಯಂತ್ ಕುಮಾರ್ ಗೌತಮ್ ಅವರನ್ನು ವರಿಷ್ಠರು ವೀಕ್ಷಕರಾಗಿ ಕಳುಹಿಸಿದ್ದರು.

ಶಾಸಕಾಂಗ ಪಕ್ಷದ ಸಭೆಗೂ ಮುನ್ನ ವೀಕ್ಷಕರು ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್.ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ ಅವರನ್ನು ಭೇಟಿ ಮಾಡಿ ಈ ಸಂಬಂಧ ಚರ್ಚೆ ನಡೆಸಿದ್ದರು. ತದನಂತರ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸೇರಿದಂತೆ ಕೆಲವು ಮುಖಂಡರನ್ನು ಕರೆಸಿಕೊಂಡು ಅಭ್ಯರ್ಥಿ ಆಯ್ಕೆ ಸಂಬಂಧ ಹಾಗೂ ಲೋಕಸಭಾ ಚುನಾವಣೆ ಸಿದ್ಧತೆ ಬಗ್ಗೆಯೂ ಚರ್ಚೆ ಮಾಡಿದರು. ಬಹುತೇಕ ನಾಯಕರು ● 6ನೇ ಪುಟಕ್ಕೆ

ಬಿ.ವೈ.ವಿಜಯೇಂದ್ರ, ನಾನು ಜೋಡೆತ್ತುಗಳಾಗಿ ಕೆಲಸ ಮಾಡ್ತೇವೆ...

ಬೆಂಗಳೂರು, ನ. 17–ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮತ್ತು ನಾನು ಜೋಡೆತ್ತುಗಳಾಗಿ ರಾಜ್ಯದಲ್ಲಿ ಮತ್ತೊಮ್ಮೆ ಪಕ್ಷವನ್ನು ಅಧಿಕಾರಕ್ಕೆ ತರಲು ಕೆಲಸ ಮಾಡುತ್ತೇವೆ ಎಂದು ವಿಧಾನಸಭೆ ವಿರೋಧ ಪಕ್ಷದ ನೂತನ ನಾಯಕ ಆರ್.ಅಶೋಕ್ ಹೇಳಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಎರಡು ಗುಂಪುಗಳಾಗಿವೆ. ಅಧಿಕಾರಕ್ಕೆ ಬಂದ ತಕ್ಷಣವೇ ವರ್ಗಾವಣೆ ದಂಧೆ ಶುರು ಮಾಡಿದೆ. ಕಾಂಗ್ರೆಸ್‌ನವರು ಗ್ಯಾರಂಟಿ ಯೋಜನೆಗಳನ್ನು ಘೋಷಣೆ ಮಾಡಿದ್ದರು. ಆದರೆ ಗ್ಯಾರಂಟಿ ಯೋಜನೆ ಶೇಕಡಾ 50ರಷ್ಟು ಜನರಿಗೂ ತಲುಪಿಲ್ಲ ಎಂದು ಕಿಡಿಕಾರಿದರು. ನಾವು ಅಧಿಕಾರದಲ್ಲಿದ್ದಾಗ ರೈತರ ಪರ ನಿಂತಿದ್ದೆವು. ಆದರೆ ಈಗ ಕಾಂಗ್ರೆಸ್ ಸರ್ಕಾರ ರೈತರ ಯೋಜನೆಗಳನ್ನೇ ನಿಲ್ಲಿಸಿದೆ. ಕರ್ನಾಟಕ ಕಾಂಗ್ರೆಸ್ ಸರ್ಕಾರ ರೈತರಿಗೆ ಮೋಸ ಮಾಡುತ್ತಿದೆ. ನಮ್ಮ ಶಾಸಕರ ಅನುದಾನ ಕಡಿತಗೊಳಿಸಿದ್ದಾರೆ ಎಂದು ವಾಗ್ದಾಳಿ ನಡೆಸಿದರು. ಜೆಡಿಎಸ್ ಜತೆ ಸೇರಿ ಸರ್ಕಾರದ ● 6ನೇ ಪುಟಕ್ಕೆ

ಅಗತ್ಯ ಬಿದ್ದರೆ ಹೆಚ್.ಡಿ.ಕುಮಾರಸ್ವಾಮಿ ಭ್ರಷ್ಟಾಚಾರ ಪ್ರಕರಣಗಳ ಬಗ್ಗೆಯೂ ತನಿಖೆ

● ಸುಳ್ಳು ಕುಮಾರಸ್ವಾಮಿ ಮನೆ ದೇವರು ● ನನ್ನ ಮಗನ ಬಗ್ಗೆ ಸುಳ್ಳು ಸುದ್ದಿ ಹಬ್ಬಿಸಿದರು ● ಜಿಎಸ್‌ಟಿ ಮಾದರಿಯ ವೈಎಸ್‌ಟಿ ಎಂದರೇನು? ● ರಾಮಮಂದಿರದಿಂದ ಮತದಾರರ ಬದಲಾವಣೆ ಅಸಾಧ್ಯ



ಮೈಸೂರು, ನ.17 (ಬಿಎಲ್‌ಯು)–ಅಗತ್ಯ ಬಿದ್ದರೆ ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಅವರ ಭ್ರಷ್ಟಾಚಾರ ಪ್ರಕರಣಗಳ ಬಗ್ಗೆಯೂ ತನಿಖೆ ನಡೆಸಲು ಹಿಂದೆ ಬೀಳುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣದಲ್ಲಿ ಇಂದು ಪತ್ರಕರ್ತರ ಜೊತೆ ಮಾತನಾಡಿದ ಅವರು, ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ನಡೆದಿರುವ ಬಿಟ್ ಕಾಯಿನ್, ಕೋವಿಡ್, ಮೆಡಿಕಲ್ ಕಾಲೇಜು ಮಂಜೂರಾತಿ, ಶೇ.40 ಪರ್ಸೆಂಟ್ ಕಮಿಷನ್ ಸೇರಿದಂತೆ ಹಲವು ಭ್ರಷ್ಟಾಚಾರ ಪ್ರಕರಣಗಳ ಬಗ್ಗೆ ಈಗಾಗಲೇ ತನಿಖೆಗೆ ಆದೇಶಿಸಲಾಗಿದೆ. ● 6ನೇ ಪುಟಕ್ಕೆ

ನರೇಂದ್ರ ಮೋದಿಗೆ ನನ್ನ ಕಂಡರೆ ಭಯ

ಪ್ರಧಾನಮಂತ್ರಿ ನರೇಂದ್ರ ಮೋದಿಗೆ ನನ್ನನ್ನು ಕಂಡರೆ ಭಯ. ಆದ ಕಾರಣ ಭಾರತದ ಯಾವುದೇ ರಾಜ್ಯದ ಚುನಾವಣೆಗೆ ಹೋದರೂ ನನ್ನ ಬಗ್ಗೆ ಮಾತನಾಡುತ್ತಾರೆ ಎಂದು ಸಿದ್ದರಾಮಯ್ಯ ಗೇಲಿ ಮಾಡಿದರು. ಕಾಂಗ್ರೆಸ್ ಪಕ್ಷದ ಗ್ಯಾರಂಟಿ ಯೋಜನೆ ಟೀಕಿಸುತ್ತಿದ್ದ ನರೇಂದ್ರ ಮೋದಿ, ಅದೇ ಗ್ಯಾರಂಟಿಗಳನ್ನೆ ಬೇರೆ ರಾಜ್ಯಗಳ ಚುನಾವಣೆಯಲ್ಲಿ ಘೋಷಣೆ ಮಾಡಿದ್ದಾರೆ. ಇತ್ತೀಚೆಗೆ ವಿಕಸಿತ ಭಾರತ್ ಯಾತ್ರೆ ಆರಂಭಿಸಿದ್ದಾರೆ. ಅದರಲ್ಲಿ ಪ್ರಧಾನಮಂತ್ರಿಗಳ ಗ್ಯಾರಂಟಿ ಯೋಜನೆ ಎಂದು ಬೋರ್ಡ್ ಹಾಕಿದ್ದಾರೆ. ಇದನ್ನೆ ರಾಜಕೀಯ ಇಬ್ಬಂದಿತನ ಎಂದು ಟೀಕಿಸಿದರು. ಬರ ಪರಿಹಾರದ ಹಣ ಬಿಡುಗಡೆ ಮಾಡುವಂತೆ ಈಗಾಗಲೇ ● 6ನೇ ಪುಟಕ್ಕೆ







ಶ್ರೀನಿವಾಸಪ್ರಸಾದ್, ಅನಂತಕುಮಾರ್ ಹೆಗಡೆ ಸೇರಿದಂತೆ 13 ಹಾಲಿ ಸಂಸದರ ಕ್ಷೇತ್ರಗಳಲ್ಲಿ

ಹೊಸ ಮುಖಗಳ ಪರಿಚಯಕ್ಕೆ ಬಿಜೆಪಿ ವರಿಷ್ಠರ ನಿರ್ಧಾರ

ಬೆಂಗಳೂರು, ನ.17(ಕೆಎಂಶಿ)–ಕೇಂದ್ರದ ಮಾಜಿ ಸಚಿವರಾದ ವಿ.ಶ್ರೀನಿವಾಸ ಪ್ರಸಾದ್, ಅನಂತ್ ಕುಮಾರ್ ಹೆಗಡೆ ಸೇರಿದಂತೆ ರಾಜ್ಯದ 13 ಹಾಲಿ ಸಂಸದರ ಕ್ಷೇತ್ರಗಳಿಗೆ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಹೊಸ ಮುಖಗಳ ಪರಿಚಯಕ್ಕೆ ಬಿಜೆಪಿ ವರಿಷ್ಠರು ಮುಂದಾಗಿದ್ದಾರೆ.

ಈಗಾಗಲೇ ವಿ.ಶ್ರೀನಿವಾಸಪ್ರಸಾದರೂ ಸೇರಿ ದಂತೆ ಕೆಲವರು ಚುನಾವಣಾ ನಿವೃತ್ತಿ ಘೋಷಣೆ ಮಾಡಿದ್ದು, ಮತ್ತೆ ಕೆಲವರಿಗೆ ಪಕ್ಷದ ನಿಯಮದ ಪ್ರಕಾರ 75ರ ವಯೋಮಿತಿ ಕಣಕ್ಕೆ ಇಳಿಯಲು ಅಡ್ಡಿ ಬರುತ್ತದೆ. ಪಕ್ಷ ಸಂಘಟನೆಯಲ್ಲಿ ತೊಡಗಿ ಸಿಕೊಳ್ಳಲು, ಕ್ಷೇತ್ರದಲ್ಲಿ ಜನರಿಂದ ದೂರ ಉಳಿದವರನ್ನೂ ಕೈಬಿಟ್ಟು ಹೊಸಬರಿಗೆ ಅವಕಾಶ ಮಾಡಿ ಕೊಡಲು ಪಕ್ಷ ಮುಂದಾಗಿದೆ.

2024ರ ಏಪ್ರಿಲ್–ಮೇನಲ್ಲಿ ನಡೆಯಲಿರುವ ಸಾರ್ವತ್ರಿಕ ಲೋಕಸಭಾ ಚುನಾವಣೆಯಲ್ಲಿ ರಾಜ್ಯದ 28 ಕ್ಷೇತ್ರಗಳಿಗೆ ಅಭ್ಯರ್ಥಿ ಗಳ ಆಯ್ಕೆ ಸಂಬಂಧ ಈಗಾಗಲೇ ನಾಲ್ಕು ಸಮೀಕ್ಷೆ ಗಳನ್ನು ಬಿಜೆಪಿ ರಾಷ್ಟ್ರೀಯ ಘಟಕ ನಡೆಸಿದ್ದು, ಅವು ಈಗಾಗಲೇ ಪ್ರಾಥಮಿಕ ವರದಿ ನೀಡಿವೆ. ಪಕ್ಷದ ವಿವಿಧ ಸಂಘಟನೆಗಳು ಮತ್ತು ಸಮೀಕ್ಷೆಗಳ ವರದಿ ಆಧಾರದ ಮೇಲೆ ಹಾಲಿ 13 ಮಂದಿಗೆ ಕೊಕ್ ಕೊಡುವ ತೀರ್ಮಾ ನಕ್ಕೆ ಬರಲಾಗಿದೆ. ಜೆಡಿಎಸ್ ಪಕ್ಷ, ಎನ್‌ಡಿಎ ಮೈತ್ರಿಕೂಟ ಸೇರಿದ ನಂತರ ಕರ್ನಾಟಕದ ಮಟ್ಟಿಗೆ ಎರಡೂ ಪಕ್ಷಗಳಿಗೆ ಬಲ ಬಂದಿದೆ.

■ ಕೆಲವರು ಸ್ವಯಂ ನಿವೃತ್ತಿ ಘೋಷಿಸಿದ್ದರೆ, ಮತ್ತೆ ಕೆಲವರ ವಯೋಮಿತಿ 75 ಮೀರಿದೆ
■ ಕಾರ್ಯಕರ್ತರ, ಸಾರ್ವಜನಿಕರ ಆಕ್ರೋಶಕ್ಕೆ ತುತ್ತಾಗಿರುವವರಿಗೂ ಟಿಕೆಟ್ ಕೈತಪ್ಪುವ ಸಾಧ್ಯತೆ

ಚುನಾವಣಾ ಮೈತ್ರಿಯ ಹಿನ್ನೆಲೆಯಲ್ಲಿ ಜೆಡಿಎಸ್‌ಗೆ ನಾಲ್ಕು ಸ್ಥಾನಗಳನ್ನು ಬಿಟ್ಟುಕೊಡಲಿದ್ದು, ಹಾಗಾಗಿ ಈ ಸಂದರ್ಭದಲ್ಲೂ ಬಿಜೆಪಿಯ ಹಾಲಿ ಸಂಸದರಿಗೆ ಅವ ಕಾಶ ತಪ್ಪಲಿದೆ. ಸಂಸದರಾದ ಶ್ರೀನಿವಾಸ ಪ್ರಸಾದ್ (ಚಾಮರಾಜನಗರ), ಡಿ.ವಿ.ಸದಾನಂದಗೌಡ (ಬೆಂಗ ಳೂರು ಉತ್ತರ), ಶಿವಕುಮಾರ್ ಉದಾಸಿ(ಹಾವೇರಿ), ಜಿ.ಎಸ್.ಬಚ್ಚೇಗೌಡ (ಚಿಕ್ಕಬಳ್ಳಾಪುರ) ಈಗಾಗಲೇ ಚುನಾ ವಣೆಯಲ್ಲಿ ಸ್ಪರ್ಧಿಸುವುದಿಲ್ಲ ಎಂದು ಘೋಷಿಸಿದ್ದಾರೆ.

ವಿವಿಧ ಕಾರಣಗಳಿಗಾಗಿ ಜಿ.ಎಸ್.ಬಸವರಾಜು (ತುಮಕೂರು), ಮಂಗಳಾ ಸುರೇಶ್ ಅಂಗಡಿ (ಬೆಳಗಾವಿ), ಪಿ.ಸಿ.ಗದ್ದಿಗೌಡರ್ (ಬಾಗಲಕೋಟೆ), ರಮೇಶ್ ಜಿಗಜಿಣಗಿ (ವಿಜಯಪುರ), ರಾಜಾ ಅಮರೇಶ್ ನಾಯಕ್ (ರಾಯ ಚೂರು), ದೇವೇಂದ್ರಪ್ಪ(ಬಳ್ಳಾರಿ), ಅನಂತ್‌ಕುಮಾರ್ ಹೆಗಡೆ (ಉತ್ತರ ಕನ್ನಡ) ಕ್ಷೇತ್ರಗಳಿಗೆ ಹೊಸಬರಿಗೆ ಅವಕಾಶ ನೀಡಲು ಹೊಸಮುಖಗಳ ಅನ್ವೇಷಣೆ ನಡೆದಿದೆ.

ಇನ್ನು ಕೆಲವು ಸಂಸದರು ಕಾರ್ಯಕರ್ತರು, ಸಾರ್ವಜನಿಕರ ವಿಶ್ವಾಸ ಕಳೆದುಕೊಂಡಿರುವ ವರದಿ ಇದ್ದು, ಅವರಿಗೂ ಟಿಕೆಟ್ ಸಿಗುವುದು ಅನುಮಾನ ಎಂದು ಹೇಳಲಾಗುತ್ತಿದೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ 75 ಹೊಸ ಮುಖಗಳನ್ನು ಕಣಕ್ಕಿಳಿಸಿ ನಡೆಸಿದ ಪ್ರಯೋಗ ವಿಫಲವಾಗಿದ್ದರೂ, ಬಿಜೆಪಿ ಮತ್ತೆ ಅದೇ ಪ್ರಯೋಗವನ್ನು ಲೋಕಸಭಾ ಚುನಾವಣೆಯಲ್ಲೂ ಮಾಡಲು ಮುಂದಾಗಿದೆ.

ಪ್ರಧಾನಿ ನರೇಂದ್ರ ಮೋದಿ ಅವರ ವರ್ಚಸ್ಸು, ಹಿಂದುತ್ವವಾದ ಮತ್ತು ಜೆಡಿಎಸ್ ಮೈತ್ರಿ ಹಾಗೂ ವೀರಶೈವ ಸಮುದಾಯಕ್ಕೆ ಸೇರಿರುವ ಪ್ರಭಾವಿ ನಾಯಕ ಬಿ.ಎಸ್.ಯಡಿಯೂರಪ್ಪ ಅವರ ಪುತ್ರ ವಿಜಯೇಂದ್ರ ಅವರಿಗೆ ರಾಜ್ಯಾಧ್ಯಕ್ಷ ಸ್ಥಾನ ನೀಡಿರುವುದರಿಂದ ಈ ಪ್ರಯೋಗ ಯಶಸ್ವಿಯಾಗಲಿದೆ ಎಂಬ ಲೆಕ್ಕಾಚಾರವಿದೆ.

ಕಳೆದ 2019ರಲ್ಲಿ ನಡೆದ ಲೋಕಸಭಾ ಚುನಾವಣೆಯಲ್ಲಿ ರಾಜ್ಯದ 28 ಕ್ಷೇತ್ರಗಳ ಪೈಕಿ 25 ಕ್ಷೇತ್ರಗಳಲ್ಲಿ ಬಿಜೆಪಿ ಜಯ ಸಾಧಿಸಿದ್ದು, 2024ರ ಲೋಕಸಭಾ ಚುನಾವಣೆ ಯಲ್ಲೂ 20ಕ್ಕೂ ಹೆಚ್ಚು ಕ್ಷೇತ್ರ ಗೆಲ್ಲಬೇಕೆಂದು ಎಂದು ಪಣ ತೊಟ್ಟಿದೆ. ಅದಕ್ಕಾಗಿ ಹೊಸ ಪ್ರಯೋಗವನ್ನೂ ನಡೆಸಲಿದೆ. ಕಾಂಗ್ರೆಸ್ ಕೂಡ ಇದೇ ರೀತಿ 20 ಕ್ಷೇತ್ರಗಳ ಗೆಲುವಿನ ಗುರಿ ಇಟ್ಟುಕೊಂಡು ಹೋರಾಟ ನಡೆಸಿದೆ. ಹಿಂದೆ ಕರ್ನಾ ಟಕದಲ್ಲಿ ಕಾಂಗ್ರೆಸ್ ಅಧಿಕಾರದಲ್ಲಿದ್ದ ಸಂದರ್ಭದಲ್ಲೂ ಬಿಜೆಪಿ ಎರಡು ಅಂಕಿಗಿಂತ ಕಡಿಮೆ ಸ್ಥಾನಗಳಿಸಿರಲಿಲ್ಲ. ಸಿದ್ದರಾಮಯ್ಯ ನೇತೃತ್ವದ ಸರ್ಕಾರವಿದ್ದರೂ ಮೋದಿ ಅವರ ವರ್ಚಸ್ಸು ಹಾಗೂ ವಿವಿಧ ಕಾರಣಗಳಿಗೆ ರಾಜ್ಯದಲ್ಲಿ ಜನರು ಬಿಜೆಪಿ ಬೆಂಬಲಿಸಲಿದ್ದಾರೆ ಎಂಬ ನಂಬಿಕೆ ವರಿಷ್ಠರಿಗೆ ಇದೆ.

ಚಾಮುಂಡಿ ಮಕ್ಕಳ ಮನೆಯಲ್ಲಿ ಕನ್ನಡ ರಾಜ್ಯೋತ್ಸವ; ಹಿರಿಯ ವೈದ್ಯ ಡಾ.ಜೆ.ವಿ.ನಾರಾಯಣರಿಗೆ ಅಭಿನಂದನೆ



ಮೈಸೂರು, ನ. 17–ಮೈಸೂರಿನ ಬೃಂದಾವನ ಬಡಾವಣೆಯಲ್ಲಿನ ಚಾಮುಂಡಿ ಮಕ್ಕಳ ಮನೆಯಲ್ಲಿ, 68ನೇ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು. ಕನ್ನಡ ಧ್ವಜಾರೋಹಣದೊಂದಿಗೆ ಮಕ್ಕಳು ಸುಶ್ರಾವ್ಯವಾಗಿ ನಾಡಗೀತೆ ಹಾಡಿದರು.

ಇದೇ ಸಂದರ್ಭದಲ್ಲಿ ಸುಮಾರು 30 ವರ್ಷಗಳಿಗೂ ಅಧಿಕ ಕಾಲದಿಂದ ಮೈಸೂರು ಮೆಡಿಕಲ್ ಕಾಲೇಜು ನಿವೃತ್ತ ಪ್ರಾಧ್ಯಾಪಕ, ಮಕ್ಕಳ ತಜ್ಞ ವೈದ್ಯರು ಚಾಮುಂಡಿ ಮಕ್ಕಳ ಮನೆಯ ಆಡಳಿತ ಮಂಡಳಿ ಉಪಾಧ್ಯಕ್ಷರಾಗಿ ಸುದೀರ್ಘ ಸೇವೆ ಸಲ್ಲಿಸಿ, ಆರೋಗ್ಯ ದೃಷ್ಟಿಯಿಂದ ನಿವೃತ್ತಿ ಪಡೆದಂತಹ ಡಾ.ಜೆ.ವಿ. ನಾರಾಯಣ್ ಅವರನ್ನು ಆತ್ಮೀಯವಾಗಿ ಅಭಿನಂದಿಸಲಾಯಿತು.

ಈ ವೇಳೆ ಹಿರಿಯ ಸದಸ್ಯರಾದ ಎಂ.ಸಿ. ನಂದಕುಮಾರ್, ಕಾರ್ಯದರ್ಶಿ ಟಿ.ವಿ. ರಘೋತ್ತಮರಾವ್, ಹೊರನಾಡು ಕನ್ನಡಿಗರಾದ ಸುಷ್ಮ ಗೋಪಿನಾಥ್, ಸಿಬ್ಬಂದಿ ವರ್ಗ, ಮಕ್ಕಳು ಉಪಸ್ಥಿತರಿದ್ದರು.



ಮೈಸೂರಿನ ಸಿದ್ಧಾರ್ಥನಗರದಲ್ಲಿರುವ ಎಂಆರ್‌ಸಿ ಕಣ್ಣಿನ ಆಸ್ಪತ್ರೆಯಲ್ಲಿ ಶುಕ್ರವಾರ ಆಯೋಜಿಸಿದ್ದ ನೇತ್ರ ತಪಾಸಣಾ ಶಿಬಿರವನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪ ಉದ್ಘಾಟಿಸಿದರು. ಇದೇ ವೇಳೆ ತಾವೂ ಕಣ್ಣು ಪರೀಕ್ಷಿಸಿಕೊಂಡರು. ಎಂಆರ್‌ಸಿ ಅಧ್ಯಕ್ಷ ಕೆ.ಎಂ. ಚಂದ್ರೇಗೌಡ, ಸದಸ್ಯರು ಹಾಗೂ ಕೈಗಾರಿಕೋದ್ಯಮಿ ಆರ್. ಗುರು, ಜಿಲ್ಲಾ ಆರೋಗ್ಯಾಧಿಕಾರಿ ಡಾ. ಪಿ.ಸಿ. ಕುಮಾರಸ್ವಾಮಿ ಹಾಗೂ ಇತರರನ್ನು ಚಿತ್ರದಲ್ಲಿ ಕಾಣಬಹುದು.

ಪತ್ನಿಯನ್ನು ಕೊಂದು ಹೂತು ಹಾಕಿದ ಪತಿ

ಶನಿವಾರಸಂತೆ, ನ17–ಕಾರ್ಮಿಕನೋರ್ವ ಪತ್ನಿಯನ್ನು ಹತ್ಯೆ ಮಾಡಿ ಹೂತು ಹಾಕಿ ರುವ ಘಟನೆ ಶನಿವಾರಸಂತೆ ಹೋಬಳಿ ಕ್ಯಾತನಹಳ್ಳಿ ಗ್ರಾಮದಲ್ಲಿ ನಡೆದಿರುವುದು ಒಂದು ವಾರದ ನಂತರ ಬೆಳಕಿಗೆ ಬಂದಿದೆ.

ಕಡ್ಲೆಮಕ್ಕಿ ಗ್ರಾಮದ ಜೇನು ಕುರುಬರ ಅಣ್ಣಯ್ಯ(35), ತನ್ನ ಪತ್ನಿ ನೀಲಾ ಅವ ರನ್ನು ಹತ್ಯೆಗೈದ ಆರೋಪಿಯಾಗಿದ್ದು, ಆತನನ್ನು ಪೊಲೀಸರು ಬಂಧಿಸಿದ್ದಾರೆ.

ವಿವರ: ಕಡ್ಲೆಮಕ್ಕಿ ಗ್ರಾಮದ ಜೇನು ಕುರುಬರ ಅಣ್ಣಯ್ಯ ಮತ್ತು ಆತನ ಪತ್ನಿ ನೀಲಾ ಕ್ಯಾತನಹಳ್ಳಿಯ ಹಿರಣ್ಣಯ್ಯ ಎಂಬುವರ ತೋಟದಲ್ಲಿ ಕಳೆದ 10 ತಿಂಗಳಿಂದ ಕೆಲಸ ಮಾಡುತ್ತಿದ್ದರು. ಹಿರಣ್ಣಯ್ಯ ಅವರ ತೋಟದಲ್ಲೇ ಗುಡಿಸಲು ನಿರ್ಮಿಸಿಕೊಂಡಿದ್ದ ಈ ದಂಪತಿ ನ.6ರಿಂದ ನಾಪತ್ತೆಯಾಗಿದ್ದರು. ನ.14ರಂದು ತೋಟಕ್ಕೆ ಹಿಂತಿರುಗಿದ ಅಣ್ಣಯ್ಯನ ಬಳಿ ಹಿರಣ್ಣಯ್ಯ ಅವರು ನೀಲಾ ಬಗ್ಗೆ ವಿಚಾರಿಸಿದಾಗ ಆತ ನ.6ರಂದು ರಾತ್ರಿ 8 ಗಂಟೆ ಸುಮಾರಿನಲ್ಲಿ ತನಗೂ ಪತ್ನಿಗೂ ಜಗಳವಾಗಿದ್ದು, ಈ ವೇಳೆ ಕೋಪದಿಂದ ನಾನು ಹೊಡೆದಾಗ ಆಕೆ ಗುಡಿಸಲಿನಲ್ಲಿಯೇ ಸತ್ತು ಹೋದಳು. ನಂತರ ಯಾರಿಗೂ ತಿಳಿಯದಂತೆ ಶವವನ್ನು ಹೂತು ಹಾಕಿದ್ದೇನೆ ಎಂದು ತಿಳಿಸಿದ್ದಾನೆ. ಈ ಸಂಬಂಧ ಹಿರಣ್ಣಯ್ಯ ನೀಡಿದ ದೂರನ್ನು ದಾಖಲಿಸಿಕೊಂಡ ಶನಿವಾರ ಸಂತೆ ಠಾಣೆ ಪೊಲೀಸರು ಅಣ್ಣಯ್ಯನನ್ನು ಬಂಧಿಸಿ ತನಿಖೆ ಮುಂದುವರೆಸಿದ್ದಾರೆ.

ಟ್ರ್ಯಾಕ್ಟರ್ ಡಿಕ್ಕಿ: ಬೈಕ್ ಸವಾರ ಸಾವು

ಬಿಳಿಕೆರೆ, ನ.17–ಬೈಕ್‌ಗೆ ಟ್ರ್ಯಾಕ್ಟರ್ ಡಿಕ್ಕಿ ಹೊಡೆದ ಪರಿಣಾಮ ರೈತ ಸಾವನ್ನಪ್ಪಿದ ಘಟನೆ ಹುಣಸೂರು ತಾಲೂಕು ಚಿಕ್ಕಬೀಚನಹುಂಡಿ ಗ್ರಾಮದ ಬಳಿ ಸಂಭವಿಸಿದೆ.

ಬಿಳಿಕೆರೆ ಗ್ರಾಮದ ರಂಗನಾಯಕ(34) ಅಪಘಾತದಲ್ಲಿ ಮೃತಪಟ್ಟ ರೈತನಾಗಿದ್ದು, ಈತ ನ.15ರಂದು ಸಂಜೆ 6.30ರ ಸಮಯದಲ್ಲಿ ತನ್ನ ಚಿಕ್ಕಪ್ಪನ ಮಗ ಸುರೇಶ್ ನಾಯಕನೊಂದಿಗೆ ಬೈಕ್‌ನಲ್ಲಿ (ಕೆಎ 45 ವಿ 0410) ಬಿಳಿಕೆರೆ–ಗಂಗಡ ಹೊಸಹಳ್ಳಿ ಮುಖ್ಯ ರಸ್ತೆಯಲ್ಲಿ ತೆರಳುತ್ತಿದ್ದಾಗ ಶಂಕಹಳ್ಳಿ ಗ್ರಾಮದ ಕಡೆಯಿಂದ ಬಂದ ಟ್ರ್ಯಾಕ್ಟರ್ (ಕೆಎ 45 ಟಿ 5490) ಇವರ ಬೈಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ರಘುನಾಯಕ ಸ್ಥಳದಲ್ಲೇ ಸಾವನ್ನಪ್ಪಿದ್ದು, ಗಾಯಗೊಂಡ ಸುರೇಶ್ ನಾಯಕನನ್ನು ಮೈಸೂರಿನ ಆಸ್ಪತ್ರೆಯಲ್ಲಿ ದಾಖಲಿಸಲಾಗಿದೆ.

ಮುನ್ನೆಚ್ಚರಿಕೆಯಾಗಿ ಕಬ್ಬು ಬೆಳೆಗಾರರು ಪೊಲೀಸ್ ವಶಕ್ಕೆ

ಇಂದು ಮುಖ್ಯಮಂತ್ರಿ ಜೊತೆ ಸಭೆ ನಿಗದಿ

ಮೈಸೂರು, ನ.17(ಬಿಎಲ್‌ಯು)– ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮೈಸೂರು ಭೇಟಿ ಹಿನ್ನೆಲೆಯಲ್ಲಿ ಪ್ರತಿ ಭಟನೆ ಮಾಡುತ್ತಾರೆಂಬ ಮುಂಜಾಗ್ರತಾ ಕ್ರಮವಾಗಿ ರಾಜ್ಯ ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ಕುರುಬೂರು ಶಾಂತ ಕುಮಾರ್ ಸೇರಿದಂತೆ ಹಲವು ಮುಖಂಡ ರನ್ನು ಪೊಲೀಸರು ಶುಕ್ರವಾರ ಏಕಾಏಕಿ ವಶಕ್ಕೆ ಪಡೆದಿದ್ದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೈಸೂರಿನಲ್ಲಿ ಎರಡು ದಿನಗಳ ಕಾಲ ಪ್ರವಾಸ ಕೈಗೊಂಡಿದ್ದು, ಕಬ್ಬು ಬೆಳೆ ಗಾರರು ದಿಢೀರ್ ಪ್ರತಿಭಟನೆ ನಡೆಸ ಬಹುದಾದ ಸಾಧ್ಯತೆ ಹಿನ್ನೆಲೆಯಲ್ಲಿ ಪೊಲೀಸರು ಅವರನ್ನು ವಶಕ್ಕೆ ಪಡೆದರು.

ನಂಜನಗೂಡು, ತಿ.ನರಸೀಪುರದ ಕಾರ್ಯಕ್ರಮದಲ್ಲಿ ಸಿದ್ದರಾಮಯ್ಯ ಭಾಗಿಯಾಗುತ್ತಿರುವ ಕಾರಣ ಅಲ್ಲಿನ ಕಬ್ಬು ಬೆಳೆಗಾರರ ಸಂಘದ ಮುಖಂಡರನ್ನು ಇಂದು ಬೆಳಿಗ್ಗೆ ವಶಕ್ಕೆ ಪಡೆಯಲಾಯಿತು.

ಈ ವಿಚಾರದ ಬಗ್ಗೆ ನಗರ ಪೊಲೀಸ್ ಆಯುಕ್ತ ರಮೇಶ್ ಅವರಿಗೆ ದೂರು ನೀಡಲು ಕುರುಬೂರು ಶಾಂತಕುಮಾರ್ ತಮ್ಮ ಬೆಂಬಲಿಗರೊಡನೆ ನಜರ್‌ಬಾದ್‌ನ ಅವರ ಕಚೇರಿಗೆ ಆಗಮಿಸಿದ್ದರು. ಈ ವೇಳೆ ಕಬ್ಬು ಬೆಳೆಗಾರರ ಸಂಘದವರು ಸರ್ಕಾರ ಹಾಗೂ ಪೊಲೀಸರ ವಿರುದ್ಧ ಧಿಕ್ಕಾರದ ಘೋಷಣೆಗಳನ್ನು ಕೂಗಿದರು.

ಈ ಸಂದರ್ಭದಲ್ಲಿ ಪೊಲೀಸರು ಹಾಗೂ ಕಬ್ಬು ಬೆಳೆಗಾರರ ಸಂಘದ ಕಾರ್ಯ ಕರ್ತರ ನಡುವೆ ವಾಗ್ವಾದ ನಡೆಯಿತು. ತರುವಾಯ ಪೊಲೀಸರು ಕುರುಬೂರು ಶಾಂತಕುಮಾರ್, ಬರಡನಪುರ ನಾಗ ರಾಜ್, ವೆಂಕಟೇಶ್ ನಂಜುಂಡಸ್ವಾಮಿ, ಗಿರೀಶ್, ಕಾಟೂರು ಮಹದೇವಸ್ವಾಮಿ, ಶಿವಸ್ವಾಮಿ ಸೇರಿದಂತೆ ಇತರರನ್ನು ವಶಕ್ಕೆ ಪಡೆದು ಡಿಎಆರ್ ಗ್ರೌಂಡ್‌ಗೆ ಕರೆದೊಯ್ದರು.

ಶನಿವಾರ ಬೆಳಿಗ್ಗೆ 10 ಗಂಟೆಗೆ ಮುಖ್ಯ ಮಂತ್ರಿ ಸಿದ್ದರಾಮಯ್ಯ ಅವರ ಜೊತೆ ಚರ್ಚೆಗೆ ಸಮಯ ನಿಗದಿ ಮಾಡಲಾಗಿದೆ ಎಂದು ಪೊಲೀಸ್ ಆಯುಕ್ತ ರಮೇಶ್ ತಿಳಿಸಿದರು. ನಂತರ ಸಂಜೆ 5 ಗಂಟೆ ವೇಳೆಗೆ ವಶಕ್ಕೆ ಪಡೆದಿದ್ದ ಎಲ್ಲರನ್ನು ಬಿಡುಗಡೆಗೊಳಿಸಲಾಯಿತು.

ನ.26ರಿಂದ ರೈತ ಸಂಘದಿಂದ ಮಹಾ ಧರಣಿ

ಮೈಸೂರು, ನ. 17(ಬಿಎಲ್‌ಯು)– ಎಪಿಎಂಸಿ ಕಾಯ್ದೆ ರದ್ದು ಸೇರಿದಂತೆ ಹಲವು ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ನವೆಂಬರ್ 26 ರಿಂದ 28 ರವರೆಗೆ ಬೆಂಗ ಳೂರಿನ ಫ್ರೀಡಂ ಪಾರ್ಕ್‌ನಲ್ಲಿ 72 ಗಂಟೆ ಗಳ ಮಹಾ ಧರಣಿ ಹಮ್ಮಿಕೊಳ್ಳಲಾಗಿದೆ ಎಂದು ರಾಜ್ಯ ರೈತ ಸಂಘದ ಅಧ್ಯಕ್ಷ ಬಡಗಲಪುರ ನಾಗೇಂದ್ರ ತಿಳಿಸಿದ್ದಾರೆ.

ಮೈಸೂರಿನ ಜಲದರ್ಶಿನಿ ಅತಿಥಿ ಗೃಹ ದಲ್ಲಿ ಇಂದು ನಡೆದ ಪತ್ರಿಕಾಗೋಷ್ಠಿ ಯಲ್ಲಿ ಮಾತನಾಡಿದ ಅವರು, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಜಾರಿ ಗೊಳಿಸಿರುವ ರೈತ ಹಾಗೂ ಕಾರ್ಮಿಕ ವಿರೋಧಿ ಕಾಯ್ದೆಗಳನ್ನು ರದ್ದು ಮಾಡಿ ಪರ್ಯಾಯ ಜನಪರ ನೀತಿ ಜಾರಿ ಮಾಡುವಂತೆ ಸಂಯುಕ್ತ ಕಿಸಾನ್ ಮೋರ್ಚಾ, ಕೇಂದ್ರ ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿ ದೇಶದಾದ್ಯಂತ ಧರಣಿಗೆ ಕರೆ ನೀಡಿದ್ದು, ಕರ್ನಾಟಕದಲ್ಲೂ ಪ್ರತಿಭಟನೆ ನಡೆಸಲಾಗುವುದು ಎಂದರು.


ಬೆಳಗಾವಿಯಲ್ಲಿ ನಡೆಯುವ ಚಳಿ ಗಾಲದ ವಿಧಾನಸಭಾ ಅಧಿವೇಶನದಲ್ಲಿ ಕರ್ನಾಟಕ ಭೂ ಸುಧಾರಣಾ ಕಾಯ್ದೆ, ಎಪಿಎಂಪಿ ಕಾಯ್ದೆ ಹಾಗೂ ಕರ್ನಾಟಕ ಜಾನುವಾರು ಸಂರಕ್ಷಣಾ ತಿದ್ದುಪಡಿ ಕಾಯ್ದೆಗಳನ್ನು ರಾಜ್ಯ ಸರ್ಕಾರ ರದ್ದು ಮಾಡಬೇಕು ಎಂದು ಬಡಗಲಪುರ ನಾಗೇಂದ್ರ ಆಗ್ರಹಿಸಿದರು.

ರಾಷ್ಟ್ರೀಯ ಕನಿಷ್ಟ ವೇತನವನ್ನು ಮಾಸಿಕ ವಾಗಿ 26,000 ರೂಪಾಯಿಗೆ ನಿಗದಿ. ಸಮಾನ ಕೆಲಸಕ್ಕೆ ಸಮಾನ ವೇತನ ಜಾರಿ ಮಾಡಬೇಕು, ಖಾಯಂ ಸ್ವರೂಪದ ಕೆಲಸದಲ್ಲಿ ತೊಡಗುವ ಕಾರ್ಮಿಕರಿಗೆ ಖಾಯಂ ಶಾಸನ ರೂಪಿಸಬೇಕು ಎಂಬುದು ಸೇರಿದಂತೆ ಹತ್ತಾರು ಬೇಡಿಕೆ ಮುಂದಿಟ್ಟು ಧರಣಿ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಇಡೀ ದೇಶದಲ್ಲಿ ನಡೆಯುತ್ತಿರುವ ಈ ಪ್ರತಿಭಟನೆಯನ್ನು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಗಂಭೀರವಾಗಿ ಪರಿಗಣಿಸಿ ಬೇಡಿಕೆ ಈಡೇರಿಸದಿದ್ದರೆ ತೀವ್ರ ರೀತಿಯ ಹೋರಾಟ ಮಾಡಬೇಕಾಗುತ್ತದೆ ಎಂದು ಬಡಗಲಪುರ ನಾಗೇಂದ್ರ ಎಚ್ಚರಿಸಿದರು.

ರೈತ ಸಂಘದ ಮಂಡ್ಯ ಜಿಲ್ಲಾಧ್ಯಕ್ಷ ಎ.ಎಲ್.ಕೆಂಪುಗೌಡ, ಮುಖಂಡರಾದ ಹೊಸೂರು ಕುಮಾರ್, ಹೊಸಕೋಟೆ ಬಸವರಾಜು, ಟಿ,ಮರಂಕಯ್ಯ ಪತ್ರಿಕಾ ಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ನಿಧನ



ಫಿಲೋಮಿನಮ್ಮ

ಮೈಸೂರು, ನ. 17–ಮೈಸೂರಿನ ಯಾದವಗಿರಿ ನಿವಾಸಿ ಫಿಲೋಮಿನಮ್ಮ (88) ಶುಕ್ರವಾರ ನಿಧನರಾದರು.

ಮೂಲತಃ ಕೆ.ಆರ್.ನಗರ ತಾಲೂಕಿನ ಡೋರ್ನಹಳ್ಳಿಯವರಾದ ಇವರು ಫಾ.ಕ್ಸೇವಿಯರ್ (ಯಾದವಗಿರಿಯ ಸೇಕ್ರೇಡ್ ಹಾರ್ಟ್ ಚರ್ಚ್‌ನ ಧರ್ಮಗುರು) ಸೇರಿದಂತೆ ಮೂವರು ಪುತ್ರರು, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು–ಬಳಗ, ಮಿತ್ರರನ್ನು ಅಗಲಿದ್ದಾರೆ. ಅಂತಿಮ ವಿಧಿ ವಿಧಾನ ಡೋರ್ನಹಳ್ಳಿ ಚರ್ಚ್‌ನಲ್ಲಿ ಶನಿವಾರ ಮಧ್ಯಾಹ್ನ 3 ಗಂಟೆಗೆ ನಡೆಯಲಿದ್ದು, ನಂತರ ಅಂತ್ಯಕ್ರಿಯೆ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

18.11.2023 ಶನಿವಾರ, ಮಳೆ ನಕ್ಷತ್ರ: ವಿಶಾಖ, 07.11.2023 ರಿಂದ 19.11.2023
ಶ್ರೀ ಶೋಭಕೃತ್ ನಾಮ ಸಂವತ್ಸರ, ದಕ್ಷಿಣಾಯನ, ಶರದ್ ಋತು, ಕಾರ್ತೀಕ ಮಾಸ, ಶುಕ್ಲ ಪಕ್ಷ, ತಿಥಿ: ಚೌತಿ, ನಕ್ಷತ್ರ: ಪೂಷಾ, ರಾಹುಕಾಲ: ಬೆಳಗ್ಗೆ 9 ರಿಂದ 10.30ರವರೆಗೆ

■ **ರಾಮ್‌ಸನ್ಸ್ ಬೊಂಬೆ ಮನೆ :** ದಸರಾ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10ರಿಂದ ಸಂಜೆ 7 ಗಂಟೆವರೆಗೆ

■ **ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ :** ಅಂತಾರಾಷ್ಟ್ರೀಯ ಕರಾಟೆ ಪಂದ್ಯಾವಳಿ, ಉದ್ಘಾಟನೆ : ಡಿಎಫ್‌ಓ ಡಾ. ಕೆ.ಎನ್. ಬಸವರಾಜು, ಅಧ್ಯಕ್ಷತೆ : ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಉಪಸ್ಥಿತರು : ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಭಾಸ್ಕರ್ ನಾಯಕ್, ಕೆಆರ್‌ಎಸ್ ಆಧುನೀಕರಣ ಮತ್ತು ಮಧ್ಯಮ ನೀರಾವರಿ ಯೋಜನೆಗಳ ಅಧೀಕ್ಷಕ ಇಂಜಿನಿಯರ್ ಕೆ. ರಘುರಾಮನ್, ಪಾಲಿಕೆ ಮಾಜಿ ಸದಸ್ಯೆ ಸವಿತಾ ಸುರೇಶ್, ತರಬೇತುದಾರ ಸಂಜೀವ್ ಶ್ರೇಷ್ಠ, ಎಸ್. ಸುನಿಲ್‌ಕುಮಾರ್, ಸ್ಥಳ: ಚಾಮುಂಡಿ ವಿಹಾರ ಕ್ರೀಡಾಂಗಣ, ನಜರ್‌ಬಾದ್, ಬೆಳಗ್ಗೆ 9.15ಕ್ಕೆ.

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಲೈಪೋಮ (ಬೊಜ್ಜಿನ ಗಂಟು) ಹಾಗೂ ಗ್ರಂಥಿಗಳಿಗೆ ವೈದ್ಯಕೀಯ ತಪಾಸಣಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 10 ರಿಂದ.

■ **ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜು :** ಸ್ನಾತಕೋತ್ತರ ವಿದ್ಯಾರ್ಥಿಗಳ ವೇದಿಕೆ ಉದ್ಘಾಟನಾ ಸಮಾರಂಭ, ಮುಖ್ಯ ಅತಿಥಿಗಳು : ಪಾಲಿಕೆ ಸಹಾಯಕ ಆಯುಕ್ತರಾದ ಶ್ರೀಮತಿ ಎಂ.ಎಸ್. ಪ್ರತಿಭಾ, ಅಧ್ಯಕ್ಷತೆ : ವಿದ್ಯಾವರ್ಧಕ ಸಂಘದ ಅಧ್ಯಕ್ಷ ಗುಂಡಪ್ಪಗೌಡ, ಗೌರವ ಅತಿಥಿಗಳು :ಪಿ. ವಿಶ್ವನಾಥ್, ಶ್ರೀಶೈಲ ರಾಮಣ್ಣವರ್, ಕಾಲೇಜು ಅಧ್ಯಕ್ಷ ಟಿ. ನಾಗರಾಜು, ಸ್ಥಳ: ಪಿ.ಎಂ. ಚಿಕ್ಕಬೋರಯ್ಯ ಸಭಾಂಗಣ, ಬೆಳಗ್ಗೆ 10ಕ್ಕೆ.

■ **ರಾಮಕೃಷ್ಣ ವಿದ್ಯಾ ಕೇಂದ್ರ, ಆರ್‌ಕೆವಿಕೆ ಸಂಯುಕ್ತ ಪದವಿಪೂರ್ವ ಕಾಲೇಜು :** ಕನ್ನಡ ರಾಜ್ಯೋತ್ಸವ, ಅಧ್ಯಕ್ಷತೆ : ಶ್ರೀ ರಾಮಕೃಷ್ಣ ಸೇವಾ ಸಂಘದ ಅಧ್ಯಕ್ಷ ಎಂ. ಪಾಪೇಗೌಡ, ಮುಖ್ಯ ಅತಿಥಿಗಳು : ಕಸಾಪ ಮಾಜಿ ಅಧ್ಯಕ್ಷ ಎಂ. ಚಂದ್ರಶೇಖರ್, ಸ್ಥಳ: ಶಾಲೆಯ ಶ್ರೀ ಶಾರದಾ ಸಭಾಂಗಣ, ಬೆಳಗ್ಗೆ 10ಕ್ಕೆ.

■ **ಎಸ್ ಕೆ ಫೌಂಡೇಶನ್ ಟ್ರಸ್ಟ್ :** ಕನ್ನಡ ರಾಜ್ಯೋತ್ಸವ ಅಂಗವಾಗಿ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಸಾಧಕರಿಗೆ ಕನ್ನಡ ಅಭಿಮಾನಿ ಕಲ್ಪತರು ಪ್ರಶಸ್ತಿ ಪ್ರಧಾನ ಸಮಾರಂಭ, ಉದ್ಘಾಟನೆ : ವರನಟ ಡಾಕ್ಟರ್ ರಾಜಕುಮಾರ್ ಅವರ ಪುತ್ರಿ ಲಕ್ಷ್ಮಿ ಗೋವಿಂದರಾಜು, ಮುಖ್ಯ ಅತಿಥಿಗಳು : ಶಾಸಕರಾದ ದರ್ಶನ್ ಧ್ರುವ ನಾರಾಯಣ್, ಗಣೇಶ್ ಪ್ರಸಾದ್, ವಿಶ್ರಾಂತ ಮುಖ್ಯ ಅಭಿಯಂತರರಾದ ಶಂಕರ್ ದೇವನೂರು, ಮೈಸೂರು ವಿಶ್ವವಿದ್ಯಾನಿಲಯದ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ಪ್ರಾಧ್ಯಾಪಕರಾದ ಡಾ. ಎನ್ ಕೆ ಲೋಲಾಕ್ಷಿ, ಉದ್ಯಮಿ ಚೇತನ್ ಕುಮಾರ್, ಅಂತರರಾಷ್ಟ್ರೀಯ ಜಾನಪದ ಗಾಯಕರಾದ ಅಮ್ಮ ರಾಮಚಂದ್ರ, ಸ್ಥಳ: ಸಿಪಾಯಿ ಗ್ರಾಂಡ್ ಹೋಟೆಲ್, ಬೆಳಗ್ಗೆ 10:30ಕ್ಕೆ

■ **ಭಾವನೆಗಳ ಅನಾವರಣಕ್ಕೊಂದು ವೇದಿಕೆ :** ವಾರ್ಷಿಕೋತ್ಸವ, ಕನ್ನಡ ರಾಜ್ಯೋತ್ಸವ ಸಮಾರಂಭ, ಸಾನ್ನಿಧ್ಯ : ಶ್ರೀ ಇಳೈ ಆಳ್ವಾರ್ ಸ್ವಾಮೀಜಿ, ಉದ್ಘಾಟನೆ : ಕರ್ನಾಟಕ ಮುಕ್ತಕ ಅಕಾಡೆಮಿ ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷ ಎಸ್. ರಾಮಪ್ರಸಾದ್, ಅಧ್ಯಕ್ಷತೆ : ಮೈಸೂರು ಸಾಹಿತ್ಯ ದಾಸೋಹ ಸಂಸ್ಥಾಪಕ ಎಂ.ಆರ್. ಆನಂದ್, ಮುಖ್ಯ ಅತಿಥಿಗಳು: ರಘುರಾಂ ವಾಜಪೇಯಿ, ಶ್ರೀಮತಿ ಪದ್ಮಾ ಆನಂದ್, ಸ್ಥಳ: ನೇಗಿಲಯೋಗಿ ಸಭಾಂಗಣ, ಜಯನಗರ, ಬೆಳಗ್ಗೆ 10.30ಕ್ಕೆ.

■ **ಕರ್ನಾಟಕ ರಾಜ್ಯ ಪತ್ರಿಕಾ ವಿತರಕರ ಒಕ್ಕೂಟ, ಮೈಸೂರು ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘ :** ಗೌರವ ಡಾಕ್ಟರೇಟ್ ಹಾಗೂ ಕನ್ನಡ ರಾಜ್ಯೋತ್ಸವ ಪುರಸ್ಕೃತರಿಗೆ ಅಭಿನಂದನಾ ಸಮಾರಂಭ, ಸನ್ಮಾನಿಸುವವರು : ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್, ಸನ್ಮಾನಿತರು : ಮೈಸೂರು ವಿವಿ ಗೌರವ ಡಾಕ್ಟರೇಟ್ ಪುರಸ್ಕೃತರು ಹಾಗೂ 'ಮೈಸೂರು ಮಿತ್ರ' ಮತ್ತು 'ಸ್ಟಾರ್ ಆಫ್ ಮೈಸೂರ್' ಪತ್ರಿಕೆ ಸಂಸ್ಥಾಪಕ ಸಂಪಾದಕರಾದ ಡಾ.ಕೆ.ಬಿ.ಗಣಪತಿ ಹಾಗೂ ಹಿರಿಯ ಪತ್ರಿಕಾ ವಿತರಕರು ಮತ್ತು ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಜವರಪ್ಪ, ಮುಖ್ಯ ಅತಿಥಿಗಳು: ಶಾಸಕ ಕೆ.ಹರೀಶ್‌ಗೌಡ, ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶಿವಾನಂದ ತಗಡೂರು, ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಎಸ್.ಟಿ.ರವಿಕುಮಾರ್, ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ.ರಾಜೀವ್, ರಾಜ್ಯ ಪತ್ರಿಕಾ ವಿತರಕರ ಒಕ್ಕೂಟದ ರಾಜ್ಯಾಧ್ಯಕ್ಷ ಕೆ.ಶಂಭುಲಿಂಗ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಂಸ್ಥೆ ಅಧ್ಯಕ್ಷ ರಾಜಪ್ಪ, ಪ್ರಜಾ ಪ್ರಗತಿ ಸಂಪಾದಕ ಎಸ್. ನಾಗಣ್ಣ, ಅಧ್ಯಕ್ಷತೆ : ಮೈಸೂರು ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ಗೌರವಾಧ್ಯಕ್ಷ ಸಿ.ಕೆ. ಮಹೇಂದ್ರ, ಸ್ಥಳ: ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಆವರಣ, ಬೆಳಗ್ಗೆ 11 ಗಂಟೆಗೆ

■ **ಶ್ರೀ ಭುವನೇಶ್ವರಿ ಸೇವಾ ಟ್ರಸ್ಟ್:** ಪುನೀತ್ ರಾಜ್‌ಕುಮಾರ್ ಸ್ಮರಣೆ ಅಂಗವಾಗಿ ಚಿತ್ರಕಲಾ ಸ್ಪರ್ಧೆ, ಮುಖ್ಯ ಅತಿಥಿಗಳು: ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ.ಪ್ರಕಾಶ್, ಪಾಲಿಕೆ ಸದಸ್ಯೆ ಪ್ರಮೀಳಾ ಭರತ್, ಪ್ರಜ್ಞಾವಂತ ನಾಗರಿಕ ವೇದಿಕೆ ಅಧ್ಯಕ್ಷ ಕಡಕೊಳ ಜಗದೀಶ್, ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಡಾ.ಕೆ.ಲೀಲಾಪ್ರಕಾಶ್, ಸ್ಥಳ: ಸ್ವಾತಂತ್ರ್ಯ ಹೋರಾಟಗಾರರ ಉದ್ಯಾನವನ, ನಾರಾಯಣಶಾಸ್ತ್ರಿ ರಸ್ತೆ, ಬೆಳಗ್ಗೆ 11.30ಕ್ಕೆ.

■ **ಅಭಿರುಚಿ ಪ್ರಕಾಶನ:** ಪ.ಮಲ್ಲೇಶ್ ಅವರು ರಚಿಸಿರುವ ಬುದ್ಧ ನಾಗಾರ್ಜುನರ ಶೂನ್ಯಯಾನ ಪುಸ್ತಕ ಲೋಕಾರ್ಪಣೆ ಸಮಾರಂಭ, ಪುಸ್ತಕ ಲೋಕಾರ್ಪಣೆ: ಮುಖ್ಯಮಂತ್ರಿ ಸಿದ್ದರಾಮಯ್ಯ, ಪುಸ್ತಕ ಕುರಿತು ಮಾತನಾಡುವವರು: ಪತ್ರಕರ್ತ ಜಿ.ಪಿ.ಬಸವರಾಜು, ಉಪಸ್ಥಿತರು: ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ನೃಪತುಂಗ ಕನ್ನಡ ವಿಕಾಸ ವಿದ್ಯಾಸಂಸ್ಥೆ ಅಧ್ಯಕ್ಷ ಡಾ.ಯತೀಂದ್ರ ಸಿದ್ದರಾಮಯ್ಯ, ಸವಿತಾ ಪ.ಮಲ್ಲೇಶ್, ಭಕ್ತ ರಾಮೇಗೌಡ, ವಿಧಾನ ಪರಿಷತ್ ಸದಸ್ಯ ಡಾ.ಡಿ. ತಿಮ್ಮಯ್ಯ, ಉಗ್ರ ನರಸಿಂಹೇಗೌಡ, ಅಭಿರುಚಿ ಗಣೇಶ್, ಸ್ಥಳ: ರಮಾಗೋವಿಂದ ರಂಗಮಂದಿರ, ರಾಮಕೃಷ್ಣನಗರ, ಬೆಳಗ್ಗೆ 11.30ಕ್ಕೆ.

■ **ಶ್ರೀ ಬಸವೇಶ್ವರ ವಧು–ವರರ ವಿವಾಹ ವೇದಿಕೆ, ಶ್ರೀ ಬಸವೇಶ್ವ ಸಾಂಸ್ಕೃತಿಕ ಪ್ರತಿಷ್ಠಾನ:** ವೀರಶೈವ ಲಿಂಗಾಯಿತ ವಧುವರರ ಸಮಾವೇಶ, ಸಾನ್ನಿಧ್ಯ: ಶ್ರೀ ಫಲಹಾರ ಪ್ರಭುದೇವ ಸ್ವಾಮೀಜಿ, ಉದ್ಘಾಟನೆ : ಜೀವಧಾರ ರಕ್ತನಿಧಿ ಕೇಂದ್ರ ನಿರ್ದೇಶಕ ಎಸ್.ಇ. ಗಿರೀಶ್, ಅಧ್ಯಕ್ಷತೆ: ಮೂಗೂರು ನಂಜುಂಡಸ್ವಾಮಿ, ಮುಖ್ಯ ಅತಿಥಿಗಳು: ಕೆ.ಎಸ್.ಮಹದೇವಪ್ರಸಾದ್, ಹೆಚ್.ಎಂ. ಮಂಜುಳ ಮಧು, ಬುಲೆಟ್ ಮಹದೇವಪ್ಪ, ಸ್ಥಳ: ವಿದ್ಯಾಭಾರತಿ ಕಲ್ಯಾಣ ಮಂಟಪ, ಬೆಳಗ್ಗೆ 11ರಿಂದ.

■ **ವ್ಯವಸ್ಥಾಪಕರು:** ಡಾ.ಹರೀಶ್‌ಕುಮಾರ್ ಅವರು ರಚಿಸಿರುವ ಆಧುನಿಕ ಭಾರತದ ನಿರ್ಮಾತೃ ಡಾ.ಬಾಬು ಜಗಜೀವನರಾಂ ಮತ್ತು ಬಾಬೂಜಿ ಚಿತ್ರ ಸಂಪುಟ ಕೃತಿಗಳ ಬಿಡುಗಡೆ ಸಮಾರಂಭ, ಕೃತಿಗಳ ಬಿಡುಗಡೆ: ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಸ್ಥಿತರು: ಮಾಜಿ ಶಾಸಕ ಡಾ. ಯತೀಂದ್ರ ಸಿದ್ದರಾಮಯ್ಯ, ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪ, ಕೆ.ವಿ.ಪ್ರಭಾಕರ್, ಡಾ.ಡಿ.ತಿಮ್ಮಯ್ಯ, ಪ್ರೊ. ಪಿ.ಎಂ.ಅನುರಾಧ, ಕೃತಿ ಕುರಿತು ಮಾತನಾಡುವವರು: ಪ್ರೊ.ಸಿ.ನಾಗಣ್ಣ, ಸ್ಥಳ:ಕಲಾಮಂದಿರ, ಸಂಜೆ 4ಕ್ಕೆ

■ **ಮೈಸೂರು ಸಾಂಸ್ಕೃತಿಕ ಹಾಗೂ ಶೈಕ್ಷಣಿಕ ವಿಕಾಸ ವೇದಿಕೆ, ಡಾ.ಯತೀಂದ್ರ ಸಿದ್ದರಾಮಯ್ಯ ಅಭಿಮಾನಿ ವೇದಿಕೆ :** ಪ್ರತಿಭಾವಂತ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ವಿತರಣಾ ಸಮಾರಂಭ, ಸಾನ್ನಿಧ್ಯ : ಶ್ರೀ ಶರತ್‌ಚಂದ್ರ ಸ್ವಾಮೀಜಿ, ಮುಖ್ಯ ಅತಿಥಿಗಳು: ಶಾಸಕರಾದ ಅನಿಲ್ ಚಿಕ್ಕಮಾದು, ಗಣೇಶ್ ಪ್ರಸಾದ್, ದರ್ಶನ್ ಧ್ರುವನಾರಾಯಣ, ವಿಶೇಷ ಆಹ್ವಾನಿತರು: ಡಾ.ಯತೀಂದ್ರ ಸಿದ್ದರಾಮಯ್ಯ, ಅಧ್ಯಕ್ಷತೆ : ವೇದಿಕೆ ಅಧ್ಯಕ್ಷ ವರುಣಾ ಮಹೇಶ್, ಉಪಸ್ಥಿತರು: ಕೆಎಸ್‌ಒಯು ಕುಲಪತಿ ಶರಣಪ್ಪ ಅಲಸೆ, ಬಿ.ಜೆ. ವಿಜಯಕುಮಾರ್, ಮೈಸೂರು ವಿವಿ ಕುಲಪತಿ ಪ್ರೊ. ಎನ್.ಕೆ. ಲೋಕನಾಥ್, ಸ್ಥಳ: ಲಲಿತ ಕಲಾ ರಂಗಮಂದಿರ, ಮೈಸೂರು ವಿವಿ, ಸಂಜೆ 4ಕ್ಕೆ.

■ **ಸುರುಚಿ ರಂಗಮನೆ:** ನಿವೃತ್ತ ಶಿಕ್ಷಕ ಬಾಲಕೃಷ್ಣಯ್ಯ ಅವರಿಂದ ಕಥೆ ಕೇಳೋಣ ಬನ್ನಿ ಕಾರ್ಯಕ್ರಮ, ಸ್ಥಳ: ಸುರುಚಿ ರಂಗಮನೆ, ಕುವೆಂಪುನಗರ, ಸಂಜೆ 4.30 ರಿಂದ.

■ **ಅಖಿಲ ಭಾರತೀಯ ಸಾಹಿತ್ಯ ಪರಿಷತ್:** ವಾಲ್ಮೀಕಿ ಜಯಂತಿ ಹಾಗೂ ಅಭಿನಂದನಾ ಸಮಾರಂಭ, ವಿದ್ವಾನ್ ಡಾ. ಕಬ್ಬಿನಾಲೆ ವಸಂತ ಭಾರದ್ವಾಜ್ ಅವರಿಗೆ ಅಭಿನಂದನೆ, ಆಕಾಶವಾಣಿ ಕಾರ್ಯಕ್ರಮ ನಿರ್ವಾಹಕರಾದ ದಿವಾಕರ ಹೆಗಡೆ ಅವರಿಂದ ಅಭಿನಂದನಾ ನುಡಿಗಳು, ಪರಿಷದ್ ಉಪಾಧ್ಯಕ್ಷ ಬಿ.ಕೆ. ಜಗದೀಶ್ ಅವರಿಂದ ವಾಲ್ಮೀಕಿ ಕುರಿತು ಉಪನ್ಯಾಸ, ಅಧ್ಯಕ್ಷತೆ : ವಿಜಯ ವಿಠ್ಠಲ ಪದವಿಪೂರ್ವ ಕಾಲೇಜು ಪ್ರಾಂಶುಪಾಲ ಎಚ್. ಸತ್ಯಪ್ರಸಾದ್, ಉಪಸ್ಥಿತರು : ಪರಿಷತ್ ವಲಯ ಪ್ರಮುಖ ಡಾ. ವಿ. ರಂಗನಾಥ್, ಸ್ಥಳ: ವಿಜಯವಿಠ್ಠಲ ಶಾಲೆ, ಸರಸ್ವತಿಪುರಂ, ಸಂಜೆ 4.45ಕ್ಕೆ

■ **ಶ್ರೀ ರಾಘವೇಂದ್ರಸ್ವಾಮಿ ಸೇವಾ ಸಮಿತಿ :** ವಿದ್ವಾನ್ ಖೇಡ ವೇದವ್ಯಾಸಚಾರ್ಯ ಅವರಿಂದ ಉಪನಿಷದ್‌ಗಳ ಬಗ್ಗೆ ಪ್ರವಚನ, ಸ್ಥಳ: ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, ಜಯಲಕ್ಷ್ಮಿಪುರಂ, ಸಂಜೆ 5 ರಿಂದ.

■ **ಪರಮಹಂಸ ಯೋಗ ಮಹಾವಿದ್ಯಾಲಯ :** ಅಂತರರಾಷ್ಟ್ರೀಯ ಯೋಗ ಟೀಚರ್ಸ್ ಟ್ರೈನಿಂಗ್ ಸರ್ಟಿಫಿಕೇಟ್ ಕೋರ್ಸ್ ಉದ್ಘಾಟನಾ ಸಮಾರಂಭ, ಉಪಸ್ಥಿತರು : ಶಿವಪ್ರಕಾಶ್ ಗುರೂಜಿ, ಡಾ. ಆರ್. ಅರ್ಪಣ, ತರುಣ್ ಆರ್. ಕುಮಾರ್, ತರುಣ್ ಶೆಟ್ಟಿ, ಡಾ. ಭಾವನಾ, ಸ್ಥಳ: ಪರಮಹಂಸ ಯೋಗ ಮಹಾವಿದ್ಯಾಲಯ, ರಾಮಕೃಷ್ಣನಗರ, ಸಂಜೆ 5ಕ್ಕೆ.

■ **ಭಾರತೀಯ ವಿದ್ಯಾ ಭವನ, ಮೈಸೂರು ಕೇಂದ್ರದ ಕಲಾ ಭಾರತಿ ವಿಭಾಗ:** ತಿಂಗಳ ಕಾರ್ಯಕ್ರಮ, ಉದ್ಘಾಟನೆ :ಭಾರತೀಯ ವಿದ್ಯಾಭವನದ ಮೈಸೂರು ಕೇಂದ್ರದ ಅಧ್ಯಕ್ಷರು, ಮೈಸೂರು ವಿವಿ ಗೌರವ ಡಾಕ್ಟರೇಟ್ ಪುರಸ್ಕೃತರು ಹಾಗೂ 'ಮೈಸೂರು ಮಿತ್ರ' ಮತ್ತು 'ಸ್ಟಾರ್ ಆಫ್ ಮೈಸೂರ್' ಸಂಸ್ಥಾಪಕ ಸಂಪಾದಕರಾದ ಡಾ.ಕೆ.ಬಿ.ಗಣಪತಿ, ಸಂಜೆ 5.35 ರಿಂದ ವಿದ್ಯಾಭವನದ ಕಲಾ ಭಾರತಿ ಕರ್ನಾಟಕ ಸಂಗೀತ ವಿಭಾಗದ ವಿದ್ಯಾರ್ಥಿಗಳಿಂದ ಪ್ರಾರ್ಥನೆ, ಸಂಜೆ 5.40ರಿಂದ ಬಿವಿಬಿ ಸದಸ್ಯರಾದ ಡಾ.ತುಳಸಿ ರಾಮಚಂದ್ರ ಅವರಿಂದ ಸ್ವಾಗತ ಮತ್ತು ಕಲಾವಿದರ ಪರಿಚಯ, ಸಂಜೆ 6ಕ್ಕೆ ರಾವ್ ಆರ್.ಶರತ್ ಅವರಿಂದ ಗಾಯನ, ವಿದ್ವಾನ್ ಪ್ರದೇಶಚಾರ್–ಪಿಟೀಲು, ನಿಕ್ಷಿತ್ ಪುತ್ತೂರು–ಮೃದಂಗ, ವಿದ್ವಾನ್ ರಘು ನಂದನ್–ಘಟ, ಸ್ಥಳ: ಭಾರತೀಯ ವಿದ್ಯಾಭವನದ ಪ್ರೊ. ವೈ.ಟಿ.ತಾತಾಚಾರಿ ಸಭಾಂಗಣ, ಸಂಜೆ 5.30ಕ್ಕೆ

■ **ಅದಮ್ಯ ರಂಗಶಾಲೆ :** ಕುವೆಂಪು ಶಿಕ್ಷಣ ಚೇತನ ಪ್ರಶಸ್ತಿ ಪ್ರದಾನ, ಮಕ್ಕಳ ನಾಟಕ ಪ್ರದರ್ಶನ, ಉದ್ಘಾಟನೆ : ಹೆಚ್ಚುವರಿ ಜಿಲ್ಲಾಧಿಕಾರಿ ಆರ್.ಲೋಕನಾಥ್, ಪ್ರಶಸ್ತಿ ಪ್ರದಾನ : ಹಿರಿಯ ಸಾಹಿತಿ ಡಾ. ಸಿ.ಪಿ.ಕೃಷ್ಣಕುಮಾರ್, ಅಧ್ಯಕ್ಷತೆ: ಜಾನಪದ ವಿದ್ವಾಂಸ ಪ್ರೊ. ನಂಜಯ್ಯ ಹೊಂಗನೂರು, ಆಶಯ ನುಡಿ: ಅದಮ್ಯ ರಂಗಶಾಲೆ ಗೌರವ ಕಾರ್ಯದರ್ಶಿ ಟಿ.ಸತೀಶ್‌ಜವರೇಗೌಡ, ಮುಖ್ಯ ಅತಿಥಿಗಳು: ದಿ ನೆಸ್ಟ್ ಸಂಸ್ಥಾಪಕ ಅಧ್ಯಕ್ಷ ಲಯನ್ ಡಿ.ಎಸ್.ಸತೀಶ್, ಅದಮ್ಯ ಶಾಲೆ ಮಕ್ಕಳಿಂದ ಹುಯ್ಯೋ ಹುಯ್ಯೋ ಮಳೆರಾಯ ನಾಟಕ ಪ್ರದರ್ಶನ, ನಿರ್ದೇಶನ: ಮನೋಜ್ ಎಂ. ಅದಮ್ಯ, ಸ್ಥಳ: ಕುವೆಂಪು ರಂಗಮಂದಿರ, ವಿವೇಕಾನಂದ ಪದವಿಪೂರ್ವ ಕಾಲೇಜು, ಸಂಜೆ 5.30ಕ್ಕೆ.

■ **ಶ್ರೀರಾಮಕೃಷ್ಣ ಆಶ್ರಮ:** ಸ್ವಾಮಿ ಮಹಮೇಧಾನಂದ ಅವರಿಂದ ಉಪನ್ಯಾಸ, ಸ್ಥಳ: ಆಶ್ರಮದ ಸ್ವಾಮಿ ಶಾಂಭವಾನಂದಜಿ ಸಭಾಂಗಣ, ಯಾದವಗಿರಿ, ಸಂಜೆ 6ಕ್ಕೆ.

■ **ಶ್ರೀ ರಾಮಾಭ್ಯುದಯ ಸಭಾ ಚಾರಿಟೆಬಲ್ ಟ್ರಸ್ಟ್:** ವಿದುಷಿ ಪ್ರತೀಕ್ಷಾ ಜಿ. ರಾವ್ ಅವರಿಂದ ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ, ಪಂಡಿತ್ ರಾಮಪ್ಪ ಪದ್ಮಪ್ಪ ಹೂಗಾರ್–ತಬಲ, ಡಾ. ವೆಂಕಟೇಶ್ ಕುಲಕರ್ಣಿ–ಹಾರ್ಮೋನಿಯಂ, ಸ್ಥಳ: ಶ್ರೀ ರಾಮಮಂದಿರ ಆವರಣ, ಶ್ರೀರಾಮಪೇಟೆ, ಸಂಜೆ 6ಕ್ಕೆ

■ **ಇನ್‌ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್:** ಡಾ.ರಾಮದಾಸ್ ಬಾಲಕೃಷ್ಣನ್ ಅವರಿಂದ ಸಂಶೋಧನೆಯ ಅವಶ್ಯಕತೆ ಕುರಿತು ತಾಂತ್ರಿಕ ಉಪನ್ಯಾಸ, ಅಧ್ಯಕ್ಷತೆ : ಇಂಜಿನಿಯರ್ಸ್ ಸಂಸ್ಥೆ ಅಧ್ಯಕ್ಷ ಡಾ. ಆರ್. ದೀಪು, ಸ್ಥಳ: ಎಸ್.ಪಿ. ಭಟ್ ಹಾಲ್, ಸಂಜೆ 6.30ಕ್ಕೆ.

ಸುತ್ತೂರು ಶ್ರೀ ಕ್ಷೇತ್ರದಲ್ಲಿಂದು, ನಂಜನಗೂಡು ತಾ.

■ **ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ :** ಕಾರ್ತಿಕಮಾಸದ ವಿಶೇಷ ಪೂಜಾ ಕಾರ್ಯಕ್ರಮಗಳು, ಸ್ಥಳ: ಸುತ್ತೂರು ಶ್ರೀ ಕ್ಷೇತ್ರ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10ಕ್ಕೆ ಸಿ.ಎಫ್.ಟಿ.ಆರ್.ಐ ಶೋಧ ಅನುಶೋಧ – ಪ್ರಾಯೋಜಿತ ಕಾರ್ಯಕ್ರಮ, ಪ್ರಸ್ತುತಿ– ಡಾ. ವಿ.ಬಿ. ಕುಡಚಿರ, 6.40 ಸಿರಿಗನ್ನಡಂ ಗೆಲ್ಗೆ, ಪ್ರಸ್ತುತಿ– ಜಿ.ಕೆ. ರವೀಂದ್ರ ಕುಮಾರ್, 6.45 ಕಲ್ಯಾಣ ಕರೆದಿದೆ ಕಲ್ಯಾಣ–ಪ್ರಾಯೋಜಿತ ಕಾರ್ಯಕ್ರಮ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 10.00 ಎಂ.ಎಸ್. ಗೋಪಾಲಕೃಷ್ಣನ್ – ವಯೋಲಿನ್

ಮಧ್ಯಾಹ್ನ: 12.30 ದೇವರನಾಮ, 12.45 ಜನಪದ ಸಂಗೀತ, 1.20 ಭಾವಗೀತೆ, 3.30 ಮಕ್ಕಳ ಮಂಟಪ – ವಾಜಮಂಗಲದ ರೋಟರಿ ಶಾಲೆಯ ಮಕ್ಕಳಿಂದ ಕಾರ್ಯಕ್ರಮ ವೈವಿಧ್ಯ, 4.00 ನಾಟಕ ಅದಲು ಬದಲು, ರಚನೆ– ಕೆ.ಟಿ.ಗಟ್ಟಿ, ನಿರ್ಮಾಣ– ಡಾ.ಬಿ.ಎಂ.ಶರಭೇಂದ್ರಸ್ವಾಮಿ ಮತ್ತು ಕಾನ್ಸೆಪ್ಟಾ ಫರ್ನಾಂಡೀಸ್, 4.30 ನೆನಪಿನಂಗಳ–ರಾಷ್ಟ್ರಕವಿ ಕುವೆಂಪು ಅವರೊಂದಿಗೆ ಮಕ್ಕಳು ನಡೆಸಿದ್ದ ಸಂವಾದ, 6.50 ಕೃಷಿರಂಗ–ತೋರಣ ಹೂರಣ–ವಾರದ ಗ್ರಾಮೀಣ ಕಾರ್ಯಕ್ರಮ, ಪ್ರಸ್ತುತಿ– ಎನ್. ಕೇಶವಮೂರ್ತಿ, ಆರ್. ಲೋಕೇಶ್ವರಿ, ಡಾ. ಮೈಸೂರು ಉಮೇಶ್, ಪರಾಗ– ಬೇಸಾಯದ ಬದುಕು ಸರಾಗ– ಬಾನುಲಿ ಸರಣಿ, 8.00 ಯುವವಾಣಿ, 9.30 ಒಂದು ಕೊಂಡರೆ ಒಂದು ಉಚಿತ–ವಿನೋದ ಭಾಷಣ ಪ್ರವೀಣ್ ಕುಮಾರ್ ಮಾವಿನಕಾಡು ಅವರಿಂದ. 10.00 ರಾಷ್ಟ್ರೀಯ ಸಂಗೀತ ಕಾರ್ಯಕ್ರಮ–ಟಿ. ಸಂತೋಷ್–ನಾಗಸ್ವರ ವಾದನ

ನಿರಂತರ ಐದು ದಶಕಗಳ ಹೋರಾಟ, ಸೇವಾ ಸಾಧನೆಯಿಂದಲೇ ಉನ್ನತ ಸ್ಥಾನಕ್ಕೇರಿದ 'ಸಾಮ್ರಾಟ'



ಬೆಂಗಳೂರು, ನ.17– ವಿದ್ಯಾರ್ಥಿ ನಾಯಕನಾಗಿ ಗಮನ ಸೆಳೆದು ತುರ್ತು ಪರಿಸ್ಥಿತಿಯ ವೇಳೆ ಬಿಜೆಪಿ ಹಿರಿಯ ಮುತ್ಸದ್ದಿ ಎಲ್.ಕೆ.ಅಡ್ವಾನಿ ಅವರೊಂದಿಗೆ ಜೈಲು ವಾಸ ಅನುಭವಿಸಿದಂದಿನಿಂದ ರಾಜ್ಯದ ಉಪ ಮುಖ್ಯಮಂತ್ರಿಯಾಗುವವರೆಗೆ ಐದು ದಶಕಗಳ ಹೋರಾಟ ಮತ್ತು ಜನಸೇವೆಯ ಅನುಭವ ಹೊಂದಿರುವ 'ಸಾಮ್ರಾಟ್' ಎಂದೇ ಕರೆಯಲ್ಪಡುವ ಆರ್.ಅಶೋಕ್, ಇದೀಗ ರಾಜ್ಯ ವಿಧಾನಸಭೆಯ ಪ್ರತಿಪಕ್ಷದ ನಾಯಕ.

ಶಾಸಕನಾಗಿ 26 ವರ್ಷಗಳ ಅನುಭವ ಹೊಂದಿರುವ ಅಶೋಕ್ ಅವರು ಎಲ್ಲರೊಂದಿಗೆ ಚೆನ್ನಾಗಿ ಬೆರೆಯಬಲ್ಲ ಗುಣ ಹೊಂದಿರುವ, ಅಜಾತಶತ್ರು ರಾಜಕಾರಣಿ. ಬೆಂಗಳೂರಿನ ಪದ್ಮನಾಭ ನಗರ ಕ್ಷೇತ್ರದ ಹಾಲಿ ಶಾಸಕರಾಗಿರುವ ಆರ್.ಅಶೋಕ್ ಅವರು ಸತತವಾಗಿ ಏಳು ಬಾರಿ ವಿಧಾನಸಭೆ ಪ್ರವೇಶಿಸುವ ಮೂಲಕ ಸೋಲಿಲ್ಲದ ಸರದಾರನಾಗಿ ಹೊರ ಹೊಮ್ಮಿರುವವರು.

ಬಾಲ್ಯದಿಂದಲೇ ಆರೆಸ್ಸೆಸ್ ಸಂಪರ್ಕ

ಬೆಂಗಳೂರಿನ ಜಾಲಹಳ್ಳಿಯ ರಾಮಯ್ಯ ಮತ್ತು ಆಂಜನಮ್ಮ ದಂಪತಿ ಮಗನಾಗಿ 1957ರ ಜುಲೈ 1ರಂದು ಜನಿಸಿದ ಆರ್.ಅಶೋಕ್, ಬಾಲ್ಯದಿಂದಲೂ ಆರ್‌ಎಸ್‌ಎಸ್ ಜತೆ ನಂಟು ಹೊಂದಿ, ವಿದ್ಯಾರ್ಥಿ ನಾಯಕರಾಗಿ ಬೆಳೆದಿದ್ದರು. ಬೆಂಗಳೂರಿನ ವಿಶ್ವೇಶ್ವರಪುರಂ ಕಾಲೇಜಿನಲ್ಲಿ ವಿಜ್ಞಾನ ಪದವಿ ಪಡೆದ ಅವರು ಕಾಲೇಜಿನಲ್ಲಿ ಕಬಡ್ಡಿ ಚಾಂಪಿಯನ್ ಆಗಿದ್ದರು.

ಬದುಕು ಬದಲಿಸಿದ ತುರ್ತು ಪರಿಸ್ಥಿತಿ ಹೋರಾಟ

ಆರ್.ಅಶೋಕ್ ಅವರ ಬದುಕು ಬದಲಾಗಿದ್ದು 1975ರಲ್ಲಿ ತುರ್ತು ಪರಿಸ್ಥಿತಿಯ ವಿರುದ್ಧ ನಡೆದ ಹೋರಾಟದಲ್ಲಿ. 1975–77ರಲ್ಲಿ ಇಂದಿರಾ ಗಾಂಧಿಯವರು ಘೋಷಿಸಿದ ತುರ್ತು ಪರಿಸ್ಥಿತಿಯ ಸಮಯದಲ್ಲಿ ಎಲ್.ಕೆ.ಅಡ್ವಾಣಿಯಂತಹ ಹಿರಿಯ ನಾಯಕರೊಂದಿಗೆ ಬೆಂಗಳೂರಿನ ಕೇಂದ್ರ ಕಾರಾಗೃಹದಲ್ಲಿ ಒಂದು ತಿಂಗಳುಗಳ ಕಾಲ ಜೈಲು ಶಿಕ್ಷೆ ಅನುಭವಿಸಿದ್ದ ಅಶೋಕ್, ಮುಂದೆ ರಾಜಕೀಯದಲ್ಲಿ ಹಂತ ಹಂತವಾಗಿ ಬೆಳೆದರು.

1995ರಲ್ಲಿ ಬಿಜೆಪಿಯ ಬೆಂಗಳೂರು ನಗರ ಅಧ್ಯಕ್ಷರಾಗಿ ಸರ್ಕಾರದ ವಿರುದ್ಧ ಹೋರಾಟ ಆರಂಭಿಸಿದ ಅವರು, 1997ರಲ್ಲಿ ಕರ್ನಾಟಕ ವಿಧಾನಸಭೆಗೆ ನಡೆದ ಉಪ ಚುನಾವಣೆಯಲ್ಲಿ ಉತ್ತರಹಳ್ಳಿ ವಿಧಾನಸಭಾ ಕ್ಷೇತ್ರದಿಂದ ಮೊದಲ ಬಾರಿ ಶಾಸಕರಾಗಿ ಆಯ್ಕೆಯಾದರು.

ನಂತರ 1999 ಮತ್ತು 2004 ಕರ್ನಾಟಕ ವಿಧಾನಸಭಾ ಸಾರ್ವತ್ರಿಕ ಚುನಾವಣೆಯಲ್ಲಿ ಅದೇ ಕ್ಷೇತ್ರದಿಂದ ಶಾಸಕರಾಗಿ ಆಯ್ಕೆಯಾದ ಅವರು, ಕ್ಷೇತ್ರ ಪುನರ್ ವಿಂಗಡಣೆಯ ನಂತರ ಪದ್ಮನಾಭನಗರ ವಿಧಾನಸಭಾ ಕ್ಷೇತ್ರದಿಂದ 2008, 2013, 2018, 2023ರ ಕರ್ನಾಟಕ ವಿಧಾನಸಭಾ ಸಾರ್ವತ್ರಿಕ ಚುನಾವಣೆಗಳಲ್ಲಿ ಸತತವಾಗಿ ವಿಜಯ ಸಾಧಿಸುವ ಮೂಲಕ 7 ಬಾರಿ ಶಾಸಕರಾಗಿ ಆಯ್ಕೆಯಾದರು.

ಆರೋಗ್ಯ ಸಚಿವರಾಗಿ ಮಡಿಲು ತುಂಬಿದವರು

2006–2007ರಲ್ಲಿನ ಬಿಜೆಪಿ ಮತ್ತು ಜೆಡಿಎಸ್ ಸಮ್ಮಿಶ್ರ ಸರ್ಕಾರದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾಗಿ ಕರ್ತವ್ಯ ನಿರ್ವಹಿಸಿದರು. ಈ ಸಮಯದಲ್ಲಿ 'ಮಡಿಲು ಕಿಟ್' ನೂತನ ಯೋಜನೆಯನ್ನು ಅನುಷ್ಠಾನಗೊಳಿಸುವ ಮೂಲಕ ಅಸಂಖ್ಯಾತ ಬಡ ಕುಟುಂಬದ ನವಜಾತ ಶಿಶುಗಳಿಗೆ ಸೌಲಭ್ಯ ದೊರೆಯುವಂತೆ ಮಾಡಿದ ಸಾಧನೆ ಅಶೋಕ್ ಅವರದು. ಜೊತೆಗೆ ಹಲವು ಆಸ್ಪತ್ರೆಗಳಿಗೆ ಅನಿರೀಕ್ಷಿತ ಭೇಟಿ ನೀಡುವ ಮೂಲಕ ಆಡಳಿತ ವ್ಯವಸ್ಥೆಯನ್ನು ಚುರುಕುಗೊಳಿಸಿದ್ದರು. ಗ್ರಾಮೀಣ ಭಾಗದಲ್ಲಿಯೂ ಹಲವು ಆಸ್ಪತ್ರೆಗಳಿಗೆ ಭೇಟಿ ನೀಡಿ ನಕಲಿ ಡಾಕ್ಟರ್‌ಗಳ ಹಾವಳಿಯನ್ನು ತಡೆಯಲು ಯತ್ನಿಸಿದ್ದರು.

ಸಾರಿಗೆ ಸಚಿವರಾಗಿ ಆಧುನೀಕರಣಕ್ಕೆ ಒತ್ತು

2008–2010ರಲ್ಲಿ ಬಿ.ಎಸ್.ಯಡಿಯೂರಪ್ಪರವರ ಸರ್ಕಾರದಲ್ಲಿ ಸಾರಿಗೆ ಹಾಗೂ ಆಹಾರ ಮತ್ತು ನಾಗರಿಕ ಸರಬರಾಜು, ಗ್ರಾಹಕರ ವ್ಯವಹಾರ ಖಾತೆಗಳ ಸಚಿವರಾಗಿ ಹತ್ತು ಹಲವು ಜನಾನುರಾಗಿ ಕಾರ್ಯಗಳನ್ನು ಮಾಡಿದ್ದಾರೆ. ಸಾರಿಗೆ ಇಲಾಖೆಯ ಆಧುನೀಕರಣಕ್ಕೆ ಮತ್ತು ನೂತನ ಸಾರಿಗೆ ಬಸ್‌ಗಳ ವ್ಯವಸ್ಥೆ, ನೂತನ ಬಸ್ ನಿಲ್ದಾಣಗಳ ನಿರ್ಮಾಣದಲ್ಲಿ ತಮ್ಮದೆ ಆದ ಕೊಡುಗೆಯನ್ನು ನೀಡಿದ್ದಾರೆ. ಸರ್ಕಾರದ ಬಸ್ ನಿಲ್ದಾಣಗಳು ಹೈಟೆಕ್ ಸ್ಪರ್ಶ ಪಡೆದದ್ದು ಅಶೋಕ್ ಸಾರಿಗೆ ಸಚಿವರಾಗಿದ್ದಾಗಲೇ ಎಂಬುದು ಗಮನಾರ್ಹ.

2010–2012ನೇ ಸಾಲಿನಲ್ಲಿ ಸಾರಿಗೆ ಮತ್ತು ಗೃಹ ಸಚಿವರಾಗಿದ್ದು, ರಾಜ್ಯದಲ್ಲಿ ಕಾನೂನು–ಸುವ್ಯವಸ್ಥೆ ಮತ್ತು ಶಾಂತಿ ಕಾಪಾಡುವ ನಿಟ್ಟಿನಲ್ಲಿ ಗೃಹ ಇಲಾಖೆಯನ್ನು ದಕ್ಷತೆಯಿಂದ ನಿರ್ವಹಿಸಿದ್ದರು. ಜೊತೆಗೆ ಜನಸ್ನೇಹಿ ಪೊಲೀಸ್ ವ್ಯವಸ್ಥೆಯನ್ನು ಜಾರಿಗೆ ತಂದರು.

2012–2013ರಲ್ಲಿ, ಜಗದೀಶ್ ಶೆಟ್ಟರ್ ನೇತೃತ್ವದ ಸರ್ಕಾರದಲ್ಲಿ ಈ ಎರಡೂ ಖಾತೆಗಳೊಂದಿಗೆ ಉಪ ಮುಖ್ಯಮಂತ್ರಿಗಳಾಗಿ ಕರ್ತವ್ಯ ನಿರ್ವಹಿಸಿದ್ದರು.

2010 ಮತ್ತು 2015ರಲ್ಲಿ ನಡೆದ ಬಿಬಿಎಂಪಿ ಚುನಾವಣೆಯಲ್ಲಿ ಬಿಜೆಪಿ ಹೆಚ್ಚಿನ ಸ್ಥಾನ ಗಳಿಸುವಲ್ಲಿ ಅಶೋಕ್ ಅವರ ಪಾತ್ರ ದೊಡ್ಡದು.

ಜಿಲ್ಲಾಧಿಕಾರಿಗಳ ನಡೆ ಹಳ್ಳಿ ಕಡೆ

2019ರ ಬಿ.ಎಸ್.ಯಡಿಯೂರಪ್ಪ ನೇತೃತ್ವದ ಸರ್ಕಾರದಲ್ಲಿ ಮತ್ತು 2021ರ ಬಸವರಾಜ ಬೊಮ್ಮಾಯಿರವರ ನೇತೃತ್ವದ ಸರ್ಕಾರದಲ್ಲಿ ಕಂದಾಯ ಸಚಿವರಾಗಿ ಹಲವಾರು ಸಮಾಜ ಮುಖಿ ಕಾರ್ಯಗಳನ್ನು ಮಾಡಿರುವ ಅಶೋಕ್, 'ಜಿಲ್ಲಾಧಿಕಾರಿಗಳ ನಡೆ ಹಳ್ಳಿಗಳ ಕಡೆ' ವಿನೂತನ ಕಾರ್ಯಕ್ರಮದಡಿ ಹಳ್ಳಿಯಲ್ಲೇ ವಾಸ್ತವ್ಯ ಹೂಡುವ ಮೂಲಕ ಸ್ಥಳದಲ್ಲಿಯೇ ಹಲವಾರು ಸಮಸ್ಯೆಗಳನ್ನು ಬಗೆಹರಿಸಿದರು. ಮನೆ ಬಾಗಿಲಿಗೆ ಪಿಂಚಣಿ ತಲುಪಿಸುವ ಮೂಲಕ ಅಶಕ್ತರು, ವೃದ್ಧರು, ವಿಧವೆಯರಿಗೆ ಮನೆ ಬಾಗಿಲಲ್ಲೆ ಪಿಂಚಣಿ ಪಡೆಯುವ ವ್ಯವಸ್ಥೆಯನ್ನು ಮಾಡಿದರು.

ಹಲವಾರು ತಾಲೂಕು ಆಡಳಿತ ಸೌಧಗಳನ್ನು ನಿರ್ಮಿಸುವ, ಅವುಗಳಿಗೆ ಜಾಗವನ್ನು ಮೀಸಲಿಡುವ ಮೂಲಕ ಆಡಳಿತ ವ್ಯವಸ್ಥೆಯು ಸುಗಮವಾಗಿ ಸಾಗುವಂತೆ ಮಾಡಿದ್ದರು. 79/ಎ ಮತ್ತು 79/ಬಿಗಳನ್ನು ರದ್ದು ಮಾಡುವ ಮೂಲಕ ರೈತರಲ್ಲದವರು ಸಹ ಕೃಷಿ ಭೂಮಿಯನ್ನು ಖರೀದಿ ಮಾಡಿ ಕೃಷಿಯಲ್ಲಿ ತೊಡಗುವಂತೆ ಮಾಡಿದ್ದರು. ನೋಂದಣಿ, ಮುದ್ರಾಂಕ ಶುಲ್ಕದಲ್ಲಿ ರಿಯಾಯಿತಿ ನೀಡುವ ಮೂಲಕ ರಾಜ್ಯದ ಬೊಕ್ಕಸಕ್ಕೆ ಅಧಿಕ ಆದಾಯ ಬರುವಂತೆ ಮಾಡಿದ್ದರು.

ಮನೆ ಬಾಗಿಲಿಗೆ ಭೂ ದಾಖಲೆ

ಮನೆ ಬಾಗಿಲಿಗೆ ಭೂಮಿಯ ದಾಖಲೆ ಪತ್ರಗಳನ್ನು ಕಳುಹಿಸುವ ಮೂಲಕ ದಾಖಲೆ ಪಡೆಯಲು ಸಾರ್ವಜನಿಕರ ಅಲೆದಾಟವನ್ನು ತಪ್ಪಿಸಿದರು.

ಕಂದಾಯ ಇಲಾಖೆಯ ವತಿಯಿಂದ ಕಲಬುರಗಿ ಜಿಲ್ಲೆಯ ಸೇಡಂ ತಾಲೂಕಿನ ಮಳಕೇಡ ಗ್ರಾಮದಲ್ಲಿ ಸುಮಾರು 50,000ಕ್ಕೂ ಹೆಚ್ಚು ಫಲಾನುಭವಿಗಳಿಗೆ ಒಮ್ಮೆಲೆ ಹಕ್ಕುಪತ್ರ ವಿತರಿಸುವ ಮೂಲಕ ದಾಖಲೆ ಮಾಡಿದ್ದರು.

ಕೊರೊನಾದಲ್ಲಿ ಸಂತ್ರಸ್ತರಿಗೆ ನೆರವು

ರಾಜ್ಯ ವಿಪತ್ತು ನಿರ್ವಹಣೆಯ ಉಪಾಧ್ಯಕ್ಷರಾಗಿ ಕರ್ತವ್ಯ ನಿರ್ವಹಿಸುವ ಸಂದರ್ಭದಲ್ಲಿ ಆದಂತಹ ಪ್ರಾಕೃತಿಕ ವಿಕೋಪಗಳಿಗೆ ಸೂಕ್ತ ಪರಿಹಾರ ಕೊಡಿಸುವಲ್ಲಿ ಶ್ರಮಿಸಿದರು. ಈ 2019ರ ಕೊರೊನಾ ಸಾಂಕ್ರಾಮಿಕದ ವೇಳೆ ಜನತೆಗೆ ಸೂಕ್ತ ವೈದ್ಯಕೀಯ ನೆರವನ್ನು ಕೊಡಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು.

ಕೊರೊನಾ ಮಹಾಮಾರಿಯಿಂದ ಮೃತಪಟ್ಟ ವಾರಸುದಾರರಿಲ್ಲದ ಸಾವಿರಾರು ಅಸ್ಥಿಗಳನ್ನು ಕಾವೇರಿ ನದಿಯಲ್ಲಿ ಸೂಕ್ತ ವಿಧಿ ವಿಧಾನಗಳ ಮೂಲಕ ವಿಸರ್ಜಿಸಿ ನಾಡಿನ ಮತ್ತು ಸಂಸ್ಕೃತಿಯ ಘನತೆಯನ್ನು ಎತ್ತಿ ಹಿಡಿದದ್ದು ಮಾತ್ರವಲ್ಲದೆ ಅನಾಥ ಶವಗಳಿಗೆ ಮುಕ್ತಿ ಕಲ್ಪಿಸಿ ಗಮನ ಸೆಳೆದಿದ್ದರು.

ಪೊಗರು, ಬ್ಲಾಕ್‌ಮೇಲ್‌ಗಳಿಗೆ ನಾನು ಹೆದರಲ್ಲ...

● ಮಾಜಿ ಸಿಎಂ ಕುಮಾರಸ್ವಾಮಿಗೆ ಡಿಸಿಎಂ ಡಿ.ಕೆ.ಶಿವಕುಮಾರ್ ಖಡಕ್ ಸವಾಲು ● ತಮ್ಮ ಲುಲು ಮಾಲ್‌ಗಳ ಬಗ್ಗೆ ಪ್ರಸ್ತಾಪಕ್ಕೆ ಕೆಂಡಾಮಂಡಲ



ಬೆಂಗಳೂರು, ನ.17(ಕೆಎಂಶಿ)–ಪೊಗರು ಮಾತುಗಳು, ಬ್ಲ್ಯಾಕ್ ಮೇಲ್‌ಗಳಿಗೆ ನಾನು ಹೆದರುವುದಿಲ್ಲ. ಇದು ಅವರಿಗೂ ಗೊತ್ತಿದೆ. ಅವರು ಕೇಳಿರುವ ಎಲ್ಲಾ ಲೆಕ್ಕ–ದಾಖಲೆಗಳನ್ನು ಕೊಡಲು ಸಿದ್ಧ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು, ಜೆಡಿಎಸ್ ನಾಯಕ ಹಾಗೂ ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಅವರಿಗೆ ಇಂದಿಲ್ಲಿ ಖಡಕ್ ಉತ್ತರ ನೀಡಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕುಮಾರಸ್ವಾಮಿ ಹುಚ್ಚರಂತಾಗಿದ್ದಾರೆ, ಅವರು ತಾಳ್ಮೆ ಕಳೆದು ಕೊಂಡಿದ್ದಾರೆ. ಹತಾಶೆಯಲ್ಲಿ ಬಾಯಿಗೆ ಬಂದಂತೆ ಮಾತನಾಡುತ್ತಿದ್ದಾರೆ ಎಂದು ಟೀಕಿಸಿದರು. ಅವರು ಏನೇನು ಕೇಳುತ್ತಾರೆ, ಅವರ ಆಚಾರ–ವಿಚಾರದ ಮಾತುಗಳಿಗೆ ರಾಜ್ಯದ ಜನ ಈಗಾಗಲೇ ಉತ್ತರ ಕೊಟ್ಟಿದ್ದಾರೆ. ಅವರು ಕೇಳುತ್ತಿರುವ ಲೆಕ್ಕಾಚಾರದ ಪಟ್ಟಿ ಕೊಡೋಣ. ನಾನು ಮಾಲ್ ಕಟ್ಟಿರುವ ಜಾಗ ಕೇಂದ್ರ ಸರ್ಕಾರದ ಒಂದು ಸಂಸ್ಥೆಗೆ ಸೇರಿದ್ದು. ಆ ಸಂಸ್ಥೆಯವರು ದಾಖಲೆ ಮುಂದಿಟ್ಟು ಟೆಂಡರ್ ಕರೆದಿದ್ದರು. ಅದನ್ನು ನಮ್ಮ ಸ್ನೇಹಿತರು ಖರೀದಿ ಮಾಡಿದ್ದರು. ಅವರಿಂದ ನಾನು ಖರೀದಿ ಮಾಡಿ ಜಂಟಿ ಸಹಯೋಗದಲ್ಲಿ ಮಾಲ್ ಕಟ್ಟಿದ್ದೇವೆ. ಅದರಲ್ಲಿ ಏನಾದರೂ ತಪ್ಪಿದ್ದರೆ ನನ್ನನ್ನು ಗಲ್ಲಿಗೆ ಹಾಕಲಿ. ಈ ರೀತಿ ನನ್ನನ್ನು ನಿಯಂತ್ರಿಸಲು ಅವರು ಈಗಾಗಲೇ ಬೇಕಾದಷ್ಟು ಪ್ರಯತ್ನ ಮಾಡಿದ್ದಾರೆ. ಅವರ ತಂದೆಯವರು ಕೂಡ 10–15 ವರ್ಷಗಳ ಹಿಂದೆಯೇ ಜಯರಾಜ್ ಎಂಬ ಅಧಿಕಾರಿ ಮೂಲಕ ಎಲ್ಲಾ ರೀತಿಯ ಪ್ರಯತ್ನ ಮಾಡಿದ್ದರು. ಈಗಲೂ ಯಾವುದೇ ರೀತಿಯ ತನಿಖೆ ಮಾಡಿಸಲಿ. ನಾನು ಎಲ್ಲದಕ್ಕೂ ಸಿದ್ಧ ಎಂದರು. ಸಾರ್ವಜನಿಕ ಜೀವನದಲ್ಲಿರುವ ವ್ಯಕ್ತಿಯಾಗಿ ಪ್ರತಿ ಸಂದರ್ಭದಲ್ಲೂ ನನ್ನ ಆಸ್ತಿ ವಿವರ ಘೋಷಿಸಿದ್ದೇನೆ. ನಾನು ಅಕ್ರಮವಾಗಿ ಕರೆಂಟ್ ಬಳಸಿರುವ ಬಗ್ಗೆ ಅವರು ಮಾತನಾಡುತ್ತಿದ್ದಾರೆ. ನಾನು ಕಟ್ಟಿರುವ ಮಾಲ್ ಅನ್ನು ನನ್ನ ಪಾರ್ಟ್ನರ್ ಶೋಭಾ ಡೆವಲಪರ್ಸ್ ಅವರು ಕಟ್ಟಿದ್ದು, ನೀವು ಎಷ್ಟು ಕರೆಂಟ್ ಬಳಸಿದ್ದೀರಿ ಎಂದು ದಾಖಲೆ ಸಮೇತ ತಂದು ತೋರಿಸಿ ಎಂದು ಅವರಿಗೆ ಕೇಳುತ್ತೇನೆ ಎಂದರು. ಜಮೀರ್ ಅಹ್ಮದ್ ಅವರ ವಿವಾದಾತ್ಮಕ ಹೇಳಿಕೆ ವಿಚಾರವಾಗಿ, ನನಗೆ ಈ ವಿಚಾರ ತಿಳಿದಿಲ್ಲ, ತಿಳಿದ ನಂತರ ಮಾತನಾಡುತ್ತೇನೆ ಎಂದರು.

ಐಸಿಸಿ ವಿಶ್ವಕಪ್–2023 ಭಾರತ–ಆಸ್ಟ್ರೇಲಿಯಾ ಫೈನಲ್ ಪಂದ್ಯಕ್ಕೂ ಮುನ್ನ ವಾಯುಪಡೆಯಿಂದ ವಿಶೇಷ ಏರ್ ಷೋ!

ಅಹ್ಮದಾಬಾದ್: ಐಸಿಸಿ ಕ್ರಿಕೆಟ್ ವಿಶ್ವಕಪ್ ಟೂರ್ನಿಯ ಭಾರತ ಹಾಗೂ ಆಸ್ಟ್ರೇಲಿಯಾ ನಡುವಿನ ಫೈನಲ್ ಪಂದ್ಯಕ್ಕೂ ಮುನ್ನ ನರೇಂದ್ರ ಮೋದಿ ಮೈದಾನದಲ್ಲಿ ಭಾರತೀಯ ವಾಯು ಸೇನೆ ವಿಶೇಷ ಏರ್ ಷೋ ಹಮ್ಮಿಕೊಂಡಿದೆ.

ಐಸಿಸಿ ಏಕದಿನ ವಿಶ್ವಕಪ್ ಟೂರ್ನಿಯ ಫೈನಲ್ ಪಂದ್ಯದಲ್ಲಿ ಭಾರತ ಹಾಗೂ ಆಸ್ಟ್ರೇಲಿಯಾ ತಂಡಗಳು ಪ್ರಶಸ್ತಿಗಾಗಿ ಸೆಣಸಲಿದ್ದು, ಈ ರೋಚಕ ಫೈನಲ್ ಪಂದ್ಯವು ಅಹಮದಾಬಾದ್‌ನ ನರೇಂದ್ರ ಮೋದಿ ಸ್ಟೇಡಿಯಂನಲ್ಲಿ ಭಾನುವಾರ (ನವೆಂಬರ್ 19) ನಡೆಯಲಿದೆ. ಏಕದಿನ ವಿಶ್ವಕಪ್ ಫೈನಲ್ ಪಂದ್ಯ ಆರಂಭಕ್ಕೂ ಮುನ್ನ ಭಾರತೀಯ ವಾಯುಪಡೆಯು ವಿಶೇಷ ವೈಮಾನಿಕ ಪ್ರದರ್ಶನವನ್ನು ನೀಡಲಿದ್ದು, ವಾಯುಪಡೆಯ ಸೂರ್ಯ ಕಿರಣ್ ತಂಡದ ನೇತೃತ್ವದಲ್ಲಿ ವೈಮಾನಿಕ ಸಾಹಸ ಪ್ರದರ್ಶನ ನಡೆಯಲಿದೆ. ಈ ನಿಟ್ಟಿನಲ್ಲಿ ಮೈದಾನದ ಮೇಲೆ ಪೂರ್ವಾಭ್ಯಾಸ ಕಸರತ್ತು ಭರದಿಂದ ಸಾಗುತ್ತಿದೆ.



ಸೂರ್ಯ ಕಿರಣ್, ಭಾರತೀಯ ವಾಯುಪಡೆಯ ಏರೋಬ್ಯಾಟಿಕ್ಸ್ ಪ್ರದರ್ಶನ ತಂಡವಾಗಿದ್ದು, ಇದು 1996ರಲ್ಲಿ ರೂಪುಗೊಂಡಿತು ಮತ್ತು IAFನ 52ನೇ ಸ್ಕ್ವಾಡ್ರನ್‌ನ ಭಾಗವಾಗಿದೆ.

ಭಾರತ ಹಾಗೂ ಆಸ್ಟ್ರೇಲಿಯಾ ಪ್ರಧಾನಿಗಳು ಭಾಗಿ: ಇನ್ನು ಈ ಮಹತ್ವದ ಪಂದ್ಯಕ್ಕೆ ಭಾರತ ಮತ್ತು ಆಸ್ಟ್ರೇಲಿಯಾ ಪ್ರಧಾನಿಗಳು ಭಾಗಿಯಾಗುತ್ತಿದ್ದು, ಭಾರತದ ಪ್ರಧಾನಮಂತ್ರಿ ನರೇಂದ್ರ ಮೋದಿ, ಏಕದಿನ ವಿಶ್ವಕಪ್ ಫೈನಲ್ ಪಂದ್ಯವನ್ನು ನೋಡಲು ಆಗಮಿಸುವ ನಿರೀಕ್ಷೆಯಿದೆ. ಆಸ್ಟ್ರೇಲಿಯಾದ ಪ್ರಧಾನಿ ಆಂಟನಿ ಅಲ್ಬನೀಸ್ ಅವರಿಗೂ ಪ್ರಧಾನಿ ಮೋದಿ ಆಹ್ವಾನ ನೀಡಿದ್ದಾರೆ ಎಂದು ಮೂಲಗಳು ತಿಳಿಸಿವೆ. ಪ್ರಧಾನಿ ನರೇಂದ್ರ ಮೋದಿ ಅವರಲ್ಲದೆ, ಹಲವಾರು ಹಿರಿಯ ರಾಜಕಾರಣಿಗಳು, ಮಾಜಿ ಕ್ರಿಕೆಟಿಗರಾದ ಸಚಿನ್ ತೆಂಡೂಲ್ಕರ್, ವೀರೇಂದ್ರ ಸೆಹ್ವಾಗ್ ಮತ್ತು ಬಾಲಿವುಡ್ ಸೂಪರ್ ಸ್ಟಾರ್ ಅಮಿತಾಭ್ ಬಚ್ಚನ್, ರಜನಿಕಾಂತ್, ಕಮಲ್ ಹಾಸನ್, ಮೋಹನ್ ಲಾಲ್, ತೆಲುಗು ನಟ ವೆಂಕಟೇಶ್, ನಾಗಾರ್ಜುನ ಮತ್ತು ರಾಮ್ ಚರಣ್ ಸೇರಿದಂತೆ ಭಾರತೀಯ ಚಿತ್ರರಂಗದ ಹಲವ ಕಲಾವಿದರು ಪಾಲ್ಗೊಳ್ಳುವ ನಿರೀಕ್ಷೆಯಿದೆ.

ಕ್ರಿಕೆಟ್, ರಾಜಕೀಯ, ಬಾಲಿವುಡ್ ಸೇರಿದಂತೆ ಹಲವು ಗಣ್ಯರು ಈ ರೋಚಕ ಪಂದ್ಯಕ್ಕೆ ಸಾಕ್ಷಿಯಾಗಲಿದ್ದಾರೆ. 12 ವರ್ಷಗಳ ಬಳಿಕ ಫೈನಲ್ ತಲುಪಿರುವ ಭಾರತ ಟ್ರೋಫಿ ಗೆಲ್ಲುವ ನಿರೀಕ್ಷೆಯಲ್ಲಿದೆ. 2011ರಲ್ಲಿ ತವರಿನಲ್ಲಿ ನಡೆದ ವಿಶ್ವಕಪ್‌ನಲ್ಲಿ ಭಾರತ ಚಾಂಪಿಯನ್ ಆಗಿತ್ತು ಅಂದು ಮುಂಬೈನ ವಾಂಖೆಡೆ ಮೈದಾನದಲ್ಲಿ ಭಾರತ ಜಯಭೇರಿ ಮೊಳಗಿಸಿತ್ತು.

40 ಡಿವೈಎಸ್ಪಿ, 71 ಪೊಲೀಸ್ ಇನ್ಸ್‌ಪೆಕ್ಟರ್ ವರ್ಗಾವಣೆ

ಬೆಂಗಳೂರು, ನ. 17–ರಾಜ್ಯ ಸರ್ಕಾರ 40 ಡಿವೈಎಸ್ಪಿ ಮತ್ತು 71 ಪೊಲೀಸ್ ಇನ್ಸ್‌ಪೆಕ್ಟರ್‌ಗಳನ್ನು ವರ್ಗಾವಣೆ ಮಾಡಿ ಆದೇಶ ಹೊರಡಿಸಿದೆ.

ಮೈಸೂರು ಗ್ರಾಮಾಂತರ ಉಪ ವಿಭಾಗದ ಡಿವೈಎಸ್ಪಿ ಪೂರ್ಣಚಂದ್ರ ತೇಜಸ್ವಿ ಅವರನ್ನು ಕರ್ನಾಟಕ ಲೋಕಾಯುಕ್ತಾಗೆ ವರ್ಗಾವಣೆ ಮಾಡಲಾಗಿದ್ದು, ಅವರ ಸ್ಥಳಕ್ಕೆ ಸಿಐಡಿಯಲ್ಲಿದ್ದ ಅಬ್ದುಲ್ ಕರೀಂ ರಾವುತರ್ ಅವರನ್ನು ವರ್ಗಾಯಿಸಲಾಗಿದೆ. ಮೈಸೂರು ಜಿಲ್ಲಾ ಡಿಸಿಆರ್‌ಬಿ ಡಿವೈಎಸ್ಪಿ ಎ.ಆರ್. ಸುಮೀತ್ ಅವರನ್ನು ಕರ್ನಾಟಕ ಗುಪ್ತವಾರ್ತೆಗೆ ವರ್ಗಾಯಿಸಲಾಗಿದೆ. ಮೈಸೂರಿನ ನಜರ್‌ಬಾದ್ ಇನ್ಸ್‌ಪೆಕ್ಟರ್ ಕೆ. ಜೀವನ್ ಅವರನ್ನು ಲೋಕಾಯುಕ್ತಾಗೆ ವರ್ಗಾಯಿಸಲಾಗಿದ್ದು, ಅವರ ಸ್ಥಳಕ್ಕೆ ಮಡಿಕೇರಿ ಚೆಸ್ಕಾಂ ಜಾಗೃತ ದಳದ ಇನ್ಸ್‌ಪೆಕ್ಟರ್ ಎಂ. ಮಹದೇವಸ್ವಾಮಿ ಅವರನ್ನು ವರ್ಗಾವಣೆ ಮಾಡಲಾಗಿದೆ. ಕರ್ನಾಟಕ ಗುಪ್ತವಾರ್ತೆ ವರ್ಗಾವಣೆ ಆದೇಶದಲ್ಲಿದ್ದ ವಿವೇಕಾನಂದ ಅವರನ್ನು ವಿವಿ ಪುರಂ ಠಾಣೆಗೆ ನಿಯೋಜಿಸಲಾಗಿದ್ದು, ಅಲ್ಲಿದ್ದ ಮೋಹನ್‌ಕುಮಾರ್ ಅವರನ್ನು ಲೋಕಾಯುಕ್ತಾಗೆ ವರ್ಗಾವಣೆ ಮಾಡಲಾಗಿದೆ. ಸ್ಥಳ ನಿರೀಕ್ಷೆಯಲ್ಲಿದ್ದ ಎನ್. ಮುನಿಯಪ್ಪ ಅವರನ್ನು ಹುಣಸೂರು ಗ್ರಾಮಾಂತರ ಠಾಣೆಗೆ ವರ್ಗಾಯಿಸಿದ್ದು, ಮೈಸೂರು ನಗರ ಸಿಟಿ ಎಸ್‌ಬಿ ವರ್ಗಾವಣೆ ಆದೇಶದಲ್ಲಿದ್ದ ಸಿ.ಶಿವನಂಜ ಶೆಟ್ಟಿ ಅವರನ್ನು ಮೈಸೂರು ಗ್ರಾಮಾಂತರ ಠಾಣೆಗೆ ವರ್ಗಾವಣೆ ಮಾಡಲಾಗಿದ್ದು, ಅಲ್ಲಿದ್ದ ಜಿ.ಎಸ್. ಸ್ವರ್ಣ ಅವರನ್ನು ಚಿಕ್ಕಮಗಳೂರು ಜಿಲ್ಲೆ ಬಸವನಹಳ್ಳಿ ವೃತ್ತಕ್ಕೆ ವರ್ಗಾಯಿಸಲಾಗಿದೆ.

ಕನಕದಾಸರ ಜಯಂತ್ಯೋತ್ಸವದ ಅಂಗವಾಗಿ ಇಂದು ಪೂರ್ವಭಾವಿ ಸಭೆ

ಮೈಸೂರು, ನ.17– ಸಂತ ಶ್ರೀ ಕನಕದಾಸರ 536ನೇ ಜಯಂತ್ಯುತ್ಸವದ ಪೂರ್ವಭಾವಿ ಸಭೆ ಮೈಸೂರಿನ ಸಿದ್ಧಾರ್ಥ ನಗರ ಕಾಗಿನೆಲೆ ಕನಕ ಗುರುಪೀಠದ ಶಾಖಾ ಮಠದಲ್ಲಿ ನ.18ರ ಸಂಜೆ ನಡೆಯಲಿದೆ.

ಸಂತ ಶ್ರೀ ಕನಕದಾಸರ ಜಯಂತ್ಯೋತ್ಸವ ಸಮಿತಿ ಅಧ್ಯಕ್ಷರೂ ಆದ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಅಧ್ಯಕ್ಷತೆಯಲ್ಲಿ ನಡೆಯಲಿರುವ ಸಭೆಯಲ್ಲಿ ಜಯಂತ್ಯುತ್ಸವ ಆಚರಣೆ, ಮೆರವಣಿಗೆ ಹಾಗೂ ಸಭಾ ಕಾರ್ಯಕ್ರಮ ಸಂಬಂಧ ಚರ್ಚಿಸಲಾಗುವುದು. ಸಮಾಜದ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಸಲಹೆ–ಸೂಚನೆ ನೀಡಬೇಕೆಂದು ಸಮಿತಿಯ ಪ್ರಧಾನ ಕಾರ್ಯದರ್ಶಿ ಬ್ಯಾಂಕ್ ಎಂ.ಪುಟ್ಟಸ್ವಾಮಿ ಪ್ರಕಟಣೆಯಲ್ಲಿ ಕೋರಿದ್ದಾರೆ.

ಅರ್ಜಿ ಆಹ್ವಾನ: ಶ್ರೀ ಭಕ್ತ ಕನಕದಾಸರ ಜಯಂತಿ ಹಿನ್ನೆಲೆಯಲ್ಲಿ 2022–23ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಶೇ.85ಕ್ಕಿಂತ ಹೆಚ್ಚು ಅಂಕ ಪಡೆದಿರುವ ಕುರುಬ ಜನಾಂಗದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಮೈಸೂರು ನಗರ ಹಾಗೂ ಜಿಲ್ಲೆಯ ಪ್ರತಿಭಾವಂತ ವಿದ್ಯಾರ್ಥಿಗಳು ಅಂಕಪಟ್ಟಿ ಮತ್ತು ಜಾತಿ ದೃಢೀಕರಣ ಪತ್ರದೊಂದಿಗೆ ನ.25 ರೊಳಗೆ 'ಶ್ರೀ ಮಹಾಲಕ್ಷ್ಮಿ ಕೊಲ್ಲಾಪುರದಮ್ಮ ದೇವಸ್ಥಾನ, ನಾರಾಯಣಶಾಸ್ತ್ರಿ ರಸ್ತೆ, ಮೈಸೂರು, ಈ ವಿಳಾಸಕ್ಕೆ ಅರ್ಜಿ ತಲುಪಿಸಬೇಕು.

ಹೆಚ್ಚಿನ ಮಾಹಿತಿಗೆ ಎಂ.ಪುಟ್ಟಸ್ವಾಮಿ (9845116664), ಎಂ.ನಾಗರಾಜು (8197967641) ಅಥವಾ ಸಿದ್ದನಾಗೇಂದ್ರ (9342115656) ಅವರನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ಕೋರಲಾಗಿದೆ.

ಮಕ್ಕಳ ಸ್ಪರ್ಧೆ

ಮೈಸೂರು, ನ.17(ಆರ್‌ಕೆ)– ರೋಟರಿ ಸೆಂಟ್ರಲ್ ಮೈಸೂರು ವತಿಯಿಂದ ಜೆ.ಪಿ. ನಗರದ ಡಿವಿಎ ಪಬ್ಲಿಕ್ ಶಾಲಾ ಸಭಾಂಗಣದಲ್ಲಿ ನ.19ರಂದು ಮಧ್ಯಾಹ್ನ 1 ಗಂಟೆಗೆ 'ಆರೋಗ್ಯವಂತ ಮಕ್ಕಳ ಸ್ಪರ್ಧೆ'ಯನ್ನು ಏರ್ಪಡಿಸಲಾಗಿದೆ ಭಾಗವಹಿಸಲಿಚ್ಛಿಸುವವರು ರೊ. ಸುಬ್ರಹ್ಮಣ್ಯ ತಂತ್ರಿ 9448271837 ಮತ್ತು ರೊ. ರಾಜೇಶ್ 9036019604 ಅವರನ್ನು ಸಂಪರ್ಕಿಸಬಹುದು.

ವಿಶ್ವದರ್ಜೆ ಮಟ್ಟಕ್ಕೆ ಮೈಸೂರು ರೈಲು ನಿಲ್ದಾಣ ಅಭಿವೃದ್ಧಿ ಕಾಮಗಾರಿ ತಿಂಗಳಲ್ಲಿ ಪ್ರಾರಂಭ ಸಾಧ್ಯತೆ

● ಡಿಆರ್‌ಎಂ ಶಿಲ್ಪಿ ಅಗರ್ವಾಲ್ ಮಾಹಿತಿ ● ಇದರೊಂದಿಗೆ ಮೈಸೂರು ವಿಭಾಗದ 15 ರೈಲು ನಿಲ್ದಾಣಗಳ ಸುಧಾರಣೆ ● ಈಗ ಆರು ಇರುವ ಪ್ಲಾಟ್‌ಫಾರ್ಮ್ ಒಂಬತ್ತಕ್ಕೆ ಏರಿಕೆ; ಮತ್ತೊಂದು ಪ್ರವೇಶ ದ್ವಾರ

ಮೈಸೂರು, ನ.17(ಎಸ್‌ಬಿಡಿ)– ಮೈಸೂರು ನಗರ ರೈಲ್ವೆ ನಿಲ್ದಾಣವನ್ನು ವಿಶ್ವದರ್ಜೆ ನಿಲ್ದಾಣವಾಗಿ ಅಭಿವೃದ್ಧಿಪಡಿಸುವ ಕಾಮಗಾರಿ ಮುಂದಿನ ತಿಂಗಳು ಆರಂಭವಾಗುವ ನಿರೀಕ್ಷೆ ಇದೆ ಎಂದು ನೈರುತ್ಯ ರೈಲ್ವೆ ಮೈಸೂರು ವಿಭಾಗೀಯ ವ್ಯವಸ್ಥಾಪಕಿ (ಡಿಆರ್‌ಎಂ) ಶಿಲ್ಪಿ ಅಗರ್ವಾಲ್ ತಿಳಿಸಿದರು.



ಮೈಸೂರು ವಿಭಾಗೀಯ ಕಚೇರಿ ಸಭಾಂಗಣದಲ್ಲಿ ಸುದ್ದಿಗೋಷ್ಠಿಯಲ್ಲಿ ದೀಪಾವಳಿ ಹಿನ್ನೆಲೆಯಲ್ಲಿ ಹಮ್ಮಿಕೊಂಡಿದ್ದ ವಿಶೇಷ ಸುರಕ್ಷತಾ ಕಾರ್ಯಾಚರಣೆ ಬಗ್ಗೆ ವಿವರಿಸಿ, ಮಾಧ್ಯಮದವರಿಗೆ ಪ್ರತಿಕ್ರಿಯಿಸಿದರು.

ಮೈಸೂರು ನಗರ ರೈಲು ನಿಲ್ದಾಣವನ್ನು ವಿಶ್ವ ದರ್ಜೆಗೇರಿಸುವುದು ಹಾಗೂ ರೈಲ್ವೆ ಯಾರ್ಡ್ ವಿಸ್ತರಣೆ ಸಂಬಂಧ ತಾಂತ್ರಿಕ ಪರಿಶೀಲನೆ ಮುಕ್ತಾಯಗೊಂಡ ನಂತರ ಟೆಂಡರ್ ಕರೆದು ಕಾಮಗಾರಿ ಆರಂಭಿಸಲಾಗುವುದು. ದೆಹಲಿ ಮೂಲದ ಇಂಟಿಗ್ರೇಟೆಡ್ ಮಲ್ಟಿ–ಮೋಡಲ್ ಟ್ರಾನ್ಸಿಟ್ ಸಿಸ್ಟಮ್ ಲಿಮಿಟೆಡ್ ಮೂಲಕ ಪರಿಶೀಲನೆ ಕಾರ್ಯ ನಡೆದಿದೆ. ಈಗಿರುವ ಆರು ಪ್ಲಾಟ್‌ಫಾರ್ಮ್ ಜತೆಗೆ ಇನ್ನೂ ಮೂರು ಸೇರ್ಪಡೆಗೊಳ್ಳಲಿವೆ. ಈ ಯೋಜನೆಯಡಿ ನಿಲ್ದಾಣಕ್ಕೆ 3ನೇ ಪ್ರವೇಶ ದ್ವಾರ ಸೇರಿದಂತೆ ಹಲವು ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದು ಎಂದು ತಿಳಿಸಿದರು.

ಅಮೃತ್ ಭಾರತ್ ಸ್ಟೇಷನ್ ಸ್ಕೀಮ್ ಅಡಿಯಲ್ಲಿ ಮೈಸೂರು ವಿಭಾಗದ ಸುಬ್ರಹ್ಮಣ್ಯ ರಸ್ತೆ, ಬಂಟ್ವಾಳ, ಹಾಸನ, ತಿಪಟೂರು, ಅರಸೀಕೆರೆ ಜಂಕ್ಷನ್, ಚಿಕ್ಕಮಗಳೂರು, ತಾಳಗುಪ್ಪ, ಸಾಗರ ಜಂಬಗಾರು, ಶಿವಮೊಗ್ಗ ಟೌನ್, ಚಿತ್ರದುರ್ಗ, ದಾವಣಗೆರೆ, ಹರಿಹರ, ಮತ್ತು ರಾಣೆಬೆನ್ನೂರು ನಿಲ್ದಾಣ ಸೇರಿ ಒಟ್ಟು 15 ರೈಲು ನಿಲ್ದಾಣಗಳ ಆಧುನೀಕರಣ ಕಾಮಗಾರಿ ಪ್ರಗತಿಯಲ್ಲಿದ್ದು, ಮುಂದಿನ ಜೂನ್‌ಗೆ ಕಾಮಗಾರಿ ಪೂರ್ಣಗೊಳ್ಳಬಹುದು. ನಾಗನಹಳ್ಳಿ ರೈಲ್ವೆ ಟರ್ಮಿನಲ್ ಯೋಜನೆಯನ್ನು ಪರಿಷ್ಕರಿಸಲಾಗಿದ್ದು, ಭೂಸ್ವಾಧೀನ ಸಂಬಂಧ ಜಿಲ್ಲಾಡಳಿತದೊಂದಿಗೆ ನಿರಂತರ ಸಂಪರ್ಕದಲ್ಲಿದ್ದೇವೆ. ಭೂಸ್ವಾಧೀನವಾದ ಕೂಡಲೇ ಟೆಂಡರ್ ಕರೆದು ಕಾಮಗಾರಿ ಆರಂಭಿಸಲಾಗುವುದು ಎಂದು ಇದೇ ವೇಳೆ ಹೇಳಿದರು.

ವಿಶೇಷ ಸುರಕ್ಷಾ ಕಾರ್ಯಾಚರಣೆ: ಪ್ರಯಾಣಿಕರ ಸುರಕ್ಷತೆ ನಿಟ್ಟಿನಲ್ಲಿ ತಪಾಸಣೆ ನಿರಂತರವಾಗಿರುತ್ತದೆ. ಆದರೆ ದೀಪಾವಳಿ ಹಿನ್ನೆಲೆಯಲ್ಲಿ ರೈಲುಗಳಲ್ಲಿ ಪಟಾಕಿ ಸೇರಿದಂತೆ ಇನ್ನಿತರ ದಹಿಸುವ ಯಾವುದೇ ವಸ್ತುಗಳ ಸಾಗಾಣಿಕೆಯನ್ನು ತಡೆಗಟ್ಟುವ ಉದ್ದೇಶದಿಂದ ವಿಶೇಷ ಸುರಕ್ಷತಾ ಕಾರ್ಯಾಚರಣೆ ಹಮ್ಮಿಕೊಳ್ಳಲಾಗಿತ್ತು. 21 ಟಿಕೆಟ್ ತಪಾಸಣೆ ಸಿಬ್ಬಂದಿ, 30 ಟಿಕೆಟ್ ತಪಾಸಣೆ ದಳ ಸಿಬ್ಬಂದಿ, 133 ಸ್ಲೀಪರ್ ಕೋಚ್ ಮ್ಯಾನಿಂಗ್ ಟಿಟಿಇಗಳು ಪ್ಲಾಟ್‌ಫಾರ್ಮ್ ಹಾಗೂ ರೈಲುಗಳಲ್ಲಿ ಅತ್ಯಂತ ಜಾಗರೂಕತೆಯಿಂದ ನಿರಂತರ ಕಾರ್ಯಾಚರಣೆ ನಡೆಸಿದ್ದಾರೆ. ಈ ವೇಳೆ ರೈಲಿನಲ್ಲಿ ಪಟಾಕಿ ಸಾಗಿಸಲು ಯತ್ನಿಸಿದ ಇಬ್ಬರು ಹಾಗೂ ಗ್ಯಾಸ್ ಸಿಲಿಂಡರ್ ಸಾಗಿಸಿದ ಓರ್ವನ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ಎಂದು ತಿಳಿಸಿದರು.

ತಪಾಸಣೆ ಜೊತೆಗೆ ಪ್ರಯಾಣಿಕರ ಸಲಹಾ ಕೇಂದ್ರದ ನಿರಂತರ ಪ್ರಕಟಣೆ ಮೂಲಕ ಪ್ರಯಾಣಿಕರಲ್ಲಿ ಜಾಗೃತಿ ಮೂಡಿಸಲಾಗಿದೆ. ಹಾಸನ, ಅರಸೀಕೆರೆ, ಬೀರೂರು, ಶಿವಮೊಗ್ಗ, ದಾವಣಗೆರೆ, ಹರಿಹರ, ರಾಣೆಬೆನ್ನೂರು, ಹಾವೇರಿ, ಚಿತ್ರದುರ್ಗ ಸೇರಿದಂತೆ ಪ್ರಮುಖ ನಿಲ್ದಾಣಗಳಲ್ಲಿ ಮುದ್ರಿತ ಜಾಗೃತ ಸಂದೇಶವನ್ನು ನಿರಂತರವಾಗಿ ಪ್ರಸಾರ ಮಾಡಲಾಗಿದೆ. ವಾಣಿಜ್ಯ ಅಧಿಕಾರಿಗಳು, ಮುಖ್ಯ ವಾಣಿಜ್ಯ ನಿರೀಕ್ಷಕರು ಮತ್ತು ಮುಖ್ಯ ಟಿಕೆಟ್ ಪರಿವೀಕ್ಷಕರನ್ನೊಳಗೊಂಡ ವಿಭಾಗೀಯ ದಳ ರಚಿಸಿ, ಆ ಮೂಲಕ ಮೈಸೂರು, ಹಾಸನ ಇನ್ನಿತರ ಪ್ರಮುಖ ನಿಲ್ದಾಣಗಳು ಸೇರಿದಂತೆ 44 ಸ್ಥಳಗಳಲ್ಲಿ ವಿಶೇಷ ತಪಾಸಣೆ ನಡೆಸಲಾಗಿದೆ. ಹಲವು ನಿಲ್ದಾಣಗಳಲ್ಲಿ ಎಲ್‌ಇಡಿ ಮೂಲಕ ಪ್ರಯಾಣಿಕರಲ್ಲಿ ಅರಿವು ಮೂಡಿಸಲಾಗಿದೆ. ಮೈಸೂರಿನ ಮುಖ್ಯ ಪಾರ್ಸೆಲ್ ಮೇಲ್ವಿಚಾರಕರ ನೇತೃತ್ವದಲ್ಲಿ ಪಾರ್ಸೆಲ್ ಮೇಲೂ ತೀವ್ರ ನಿಗಾ ವಹಿಸಲಾಗಿತ್ತು ಎಂದು ಹೇಳಿದರು.

ಮೂರು ಪ್ರಕರಣ: ಸಕಲೇಶಪುರ ರೈಲ್ವೆ ನಿಲ್ದಾಣದಲ್ಲಿ ಬ್ಯಾಗ್‌ನಲ್ಲಿ 5 ಕೆಜಿ ಗ್ಯಾಸ್ ಸಿಲಿಂಡರ್ ಸಾಗಿಸಲು ಯತ್ನಿಸಿದ್ದ 20 ವರ್ಷದ ಯುವಕ, ದಾವಣಗೆರೆ ರೈಲ್ವೆ ನಿಲ್ದಾಣದಲ್ಲಿ ಅಪಾರ ಪ್ರಮಾಣದ ಪಟಾಕಿ ಸಾಗಿಸಲು ಯತ್ನಿಸಿದ 22 ವರ್ಷದ ಯುವಕ ಹಾಗೂ ಮೈಸೂರು ನಿಲ್ದಾಣದಲ್ಲಿ ಒಂದು ಬಾಕ್ಸ್ ಪಟಾಕಿ ಸಾಗಿಸಲೆತ್ನಿಸಿದ ವ್ಯಕ್ತಿಯೊಬ್ಬರನ್ನು ರೈಲ್ವೆ ರಕ್ಷಣಾ ಪಡೆ(ಆರ್‌ಪಿಎಫ್) ಸಿಬ್ಬಂದಿ ಬಂಧಿಸಿ, ಭಾರತೀಯ ರೈಲ್ವೆ ಕಾಯ್ದೆ–1989ರ ಸೆಕ್ಷನ್ 164ರಡಿಯಲ್ಲಿ ಪ್ರಕರಣ ದಾಖಲಿಸಿದ್ದಾರೆ. ಜೊತೆಗೆ ಧೂಮಪಾನಕ್ಕೆ ಸಂಬಂಧಿಸಿದಂತೆ 44 ಪ್ರಕರಣಗಳನ್ನು ದಾಖಲಿಸಿ, ಕ್ರಮವಹಿಸಿದ್ದಾರೆ ಎಂದು ತಿಳಿಸಿದರು.

ಶಿಕ್ಷಾರ್ಹ ಅಪರಾಧ: ಪಟಾಕಿ ಸೇರಿದಂತೆ ದಹಿಸುವ ಯಾವುದೇ ವಸ್ತುಗಳನ್ನು ರೈಲುಗಳಲ್ಲಿ ಸಾಗಿಸುವುದು ಹಾಗೂ ನಿಲ್ದಾಣಗಳಿಗೆ ತರುವುದು ಶಿಕ್ಷಾರ್ಹ ಅಪರಾಧವಾಗಿದೆ. ಪ್ರಯಾಣಿಕರ ಸುರಕ್ಷತೆ ದೃಷ್ಟಿಯಿಂದ ನಿರಂತರವಾಗಿ ತಪಾಸಣೆ ನಡೆಸಲಾಗುತ್ತದೆ. ದಹಿಸುವ ವಸ್ತುಗಳಿಂದ ಅಗ್ನಿ ಅವಘಡ ಸಂಭವಿಸಿದರೆ ಸಾವು–ನೋವು ಸಂಭವಿಸುತ್ತದೆ. ಹಾಗಾಗಿ ಯಾರೂ ಕೂಡ ಇಂತಹ ವಸ್ತುಗಳನ್ನು ಸಾಗಿಸಬಾರದು ಎಂದು ಮನವಿ ಮಾಡಿದರು.

ಟಿಕೆಟ್ ರಹಿತ ಪ್ರಯಾಣ; ತಿಂಗಳಲ್ಲಿ 81 ಲಕ್ಷ ದಂಡ

ಟಿಕೆಟ್ ತಪಾಸಣೆ ನಿರಂತರವಾಗಿದ್ದು, ಕಳೆದ ಅಕ್ಟೋಬರ್‌ನಲ್ಲಿ ಟಿಕೆಟ್ ರಹಿತ ಪ್ರಯಾಣಿಕರಿಂದ 81 ಲಕ್ಷ ರೂ. ದಂಡ ವಸೂಲಿ ಮಾಡಿ, ಎಚ್ಚರಿಕೆ ನೀಡಲಾಗಿದೆ. ದಸರಾ ಹಾಗೂ ದೀಪಾವಳಿ ಸಂದರ್ಭದಲ್ಲಿ ದಿನದಲ್ಲಿ ನಾಲ್ಕೈದು ಲಕ್ಷ ರೂ. ದಂಡ ಸಂಗ್ರಹವಾಗಿದೆ. ನಿನ್ನೆ ಒಂದೇ ದಿನ 3.25 ಲಕ್ಷ ರೂ. ಆಗಿದೆ. ಮೈಸೂರು ನಿಲ್ದಾಣದಲ್ಲೇ ರಜಾ ದಿನ ಹಾಗೂ ವಿಶೇಷ ದಿನಗಳಲ್ಲಿ 60–80 ಸಾವಿರ ದಂಡ ವಸೂಲಿ ಆಗುತ್ತದೆ. ಶೇ.4–5ರಷ್ಟು ಪ್ರಯಾಣಿಕರು ಕಡೇ ಕ್ಷಣದಲ್ಲಿ ಟಿಕೆಟ್ ಕೊಳ್ಳಲಾಗದೆ ರೈಲು ಹತ್ತಬಹುದು. ಅಂತಹವರು ಟಿಕೆಟ್ ತಪಾಸಣೆ ವೇಳೆ ತಾವೇ ದಂಡ ಪಾವತಿಸುತ್ತಾರೆ. ಸದ್ಯ ಟಿಕೆಟ್ ರಹಿತವಾಗಿ ಪ್ರಯಾಣಿಸುವವರ ಸಂಖ್ಯೆ ಗಣನೀಯವಾಗಿ ಇಳಿಕೆಯಾಗಿದೆ ಎಂದು ಹಿರಿಯ ವಿಭಾಗೀಯ ವಾಣಿಜ್ಯ ವ್ಯವಸ್ಥಾಪಕ ಜೆ.ಲೋಹಿತೇಶ್ವರ ತಿಳಿಸಿದರು.

ಒರಿಸ್ಸಾ ಮೂಲದವರು...




ನಂಜನಗೂಡು–ಕಡಕೊಳ ಮಧ್ಯೆ ರೈಲ್ವೆ ಹಳಿ ಮೇಲೆ ಮರದ ದಿಮ್ಮಿ ಹಾಗೂ ಕಬ್ಬಿಣದ ಸ್ಲೀಪರ್ ಇಟ್ಟಿದ್ದ ಪ್ರಕರಣ ಸಂಬಂಧ ಮೂವರನ್ನು ಬಂಧಿಸಲಾಗಿದ್ದು, ಅವರನ್ನು ನ್ಯಾಯಾಧೀಶರ ಮುಂದೆ ಹಾಜರುಪಡಿಸಲಾಗಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಬಂಧಿತರು ಒರಿಸ್ಸಾ ಮೂಲದವಾಗಿದ್ದು ಕಡಕೊಳದ ಟೈಲ್ಸ್ ಫ್ಯಾಕ್ಟರಿಯಲ್ಲಿ ಕೆಲಸ ಮಾಡಿಕೊಂಡಿದ್ದರು. ಮದ್ಯದ ಅಮಲಿನಲ್ಲಿ ಆ ರೀತಿ ಮಾಡಿದ್ದು, ಮತ್ಯಾರೊಂದಿಗೂ ಸಂಪರ್ಕ ಇಲ್ಲ ಎಂದು ವಿಚಾರಣೆಯಲ್ಲಿ ತಿಳಿದುಬಂದಿದೆ. ಆದಾಗ್ಯೂ ತನಿಖೆ ಮುಂದುವರೆಸಲಾಗುತ್ತಿದೆ ಎಂದು ಡಿಆರ್‌ಎಂ ಶಿಲ್ಪಿ ಅಗರ್ವಾಲ್ ತಿಳಿಸಿದ್ದಾರೆ.

ಗೋವಾದ ಪ್ರವಾಸಿಗರ 10 ಲಕ್ಷ ಮೌಲ್ಯದ ಚಿನ್ನಾಭರಣವಿದ್ದ ಬ್ಯಾಗ್‌ನೊಂದಿಗೆ ಪರಾರಿಯಾದ ಆಟೋ ಚಾಲಕ

ಮೈಸೂರು, ನ.17–ಗೋವಾ ಪ್ರವಾಸಿಗ ದಂಪತಿಯ ಚಿನ್ನಾಭರಣವಿದ್ದ ವ್ಯಾನಿಟಿ ಬ್ಯಾಗ್‌ನೊಂದಿಗೆ ಆಟೋ ಚಾಲಕ ಪರಾರಿಯಾಗಿರುವುದಾಗಿ ದೇವರಾಜ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ವಿವರ: ಗೋವಾದಿಂದ ಎಂಜಿನಿಯರ್ ವಿಪಿನ್ ಪ್ರಕಾಶ್ ಕುನ್ರೆ (36) ಎಂಬುವರು ಪ್ರವಾಸಕ್ಕಾಗಿ ಪತ್ನಿ ಶ್ರೇಯಾ ಮತ್ತು ಮಗುವಿನೊಂದಿಗೆ ನ.13ರಂದು ಮೈಸೂರಿಗೆ ಆಗಮಿಸಿದ್ದರು. ನ.14ರಂದು ಮಧ್ಯಾಹ್ನ 12.30ರ ಸುಮಾರಿನಲ್ಲಿ ಮೈಸೂರು ಅರಮನೆಗೆ ಭೇಟಿ ನೀಡಲು ಹೋದಾಗ ಪಾರ್ಕಿಂಗ್ ಸ್ಥಳ ಭರ್ತಿಯಾಗಿದ್ದರಿಂದ ತಮ್ಮ ಕಾರನ್ನು ದೂರದಲ್ಲಿ ನಿಲ್ಲಿಸಿ ರಾಜು ಎಂಬುವರ ಆಟೋ ಹತ್ತಿ ಅರಮನೆಯ ವರಾಹ ಗೇಟ್‌ಗೆ ಬಂದಿದ್ದಾರೆ. ಆಟೋ ಇಳಿದು ಚಾಲಕನಿಗೆ ಹಣ ಪಾವತಿಸಿದ ನಂತರ ಅವರ ಪತ್ನಿ ಮಗುವನ್ನು ಎತ್ತಿಕೊಂಡು ಆಟೋ ಇಳಿದು ವ್ಯಾನಿಟಿ ಬ್ಯಾಗ್ ತೆಗೆದುಕೊಳ್ಳುವಷ್ಟರಲ್ಲಿ ವೇಗವಾಗಿ ಆಟೋ ಚಾಲನೆ ಮಾಡಿಕೊಂಡು ಹೋಗಿದ್ದಾನೆ. ಆಟೋದಲ್ಲಿ ಬ್ಯಾಗ್ ಇದೆ ಎಂದು ಜೋರಾಗಿ ಕೂಗಿಕೊಳ್ಳುತ್ತಿದ್ದರೂ ಅದನ್ನು ಲೆಕ್ಕಿಸದೇ ಚಾಲಕ ಹೊರಟು ಹೋಗಿದ್ದು, ಆಟೋವಿನ ಕೊನೆಯ ಸಂಖ್ಯೆ 0880 ಆಗಿದ್ದು, ಮುಂಭಾಗದಲ್ಲಿ ಶಿವನ ಚಿತ್ರವಿದೆ ಎಂದು ದೂರಿನಲ್ಲಿ ತಿಳಿಸಿರುವ ವಿಪಿನ್ ಪ್ರಕಾಶ್ ಕುನ್ರೆ ವ್ಯಾನಿಟಿ ಬ್ಯಾಗ್‌ನಲ್ಲಿ 180ರಿಂದ 190 ಗ್ರಾಂ ತೂಕದ ಸುಮಾರು 10 ಲಕ್ಷ ರೂ. ಮೌಲ್ಯದ ಚಿನ್ನಾಭರಣ ವಿತ್ತು. ಆಟೋ ಚಾಲಕ ಉದ್ದೇಶಪೂರ್ವಕವಾಗಿಯೇ ಚಿನ್ನಾಭರಣವಿರುವ ಬ್ಯಾಗ್ ಅನ್ನು ಕಳವು ಮಾಡಿಕೊಂಡು ಹೋಗಿದ್ದಾನೆ ಎಂದು ನೀಡಿದ ದೂರನ್ನು ಭಾರತೀಯ ದಂಡ ಸಂಹಿತೆ 379ರಡಿ ದಾಖಲಿಸಿಕೊಂಡಿರುವ ದೇವರಾಜ ಠಾಣೆ ಪೊಲೀಸರು ತನಿಖೆ ಮುಂದುವರೆಸಿದ್ದಾರೆ.

ನಿಧನ



ಸಿ.ಶಿವರುದ್ರಯ್ಯ

ಮೈಸೂರು, ನ.17–ಮೈಸೂರು ಜಯಲಕ್ಷ್ಮಿಪುರಂನ ಪ್ರೀಮಿಯರ್ ಮೆಟ್ರೋ ಅಪಾರ್ಟ್‌ಮೆಂಟ್ ನಿವಾಸಿ, ಶಾಗ್ಲೆ ಶಿವರುದ್ರಮ್ಮ ಟ್ರಸ್ಟ್ ಉಪಾಧ್ಯಕ್ಷರಾಗಿದ್ದ ಸಿ.ಶಿವರುದ್ರಯ್ಯ(90) ಅವರು ಈಚೆಗೆ ನಿಧನರಾದರು. ಅವರಿಗೆ ಪತ್ನಿ, ಮೂವರು ಸೋದರರು ಇದ್ದಾರೆ. ಮೂಲತಃ ಹಾಸನ ಜಿಲ್ಲೆಯ ಅರಕಲಗೂಡು ತಾಲೂಕು ಕೇರಳಾಪುರದವರಾದ ಅವರು, ವಿದ್ಯಾಭ್ಯಾಸಕ್ಕೆಂದು ನಗರಕ್ಕೆ ಬಂದು ಮೈಸೂರು ವಿಶ್ವವಿದ್ಯಾನಿಲಯದ ಸಮಾಜಶಾಸ್ತ್ರ ವಿಭಾಗದ ಮುಖ್ಯಸ್ಥರಾಗಿದ್ದ ಡಾ.ಸಿ.ಪಾರ್ವತಮ್ಮ ಅವರ ಮನೆಯಲ್ಲಿದ್ದು, ಓದಿದರು.

ನಂತರ ಭೂಗರ್ಭಶಾಸ್ತ್ರ ಅಧ್ಯಾಪಕರಾಗಿ, ಹುಣಸೂರಿನ ಡಿ.ದೇವರಾಜ ಅರಸು ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾಗಿ ನಿವೃತ್ತರಾದರು. ಗ್ರಾಮೀಣ ಭಾಗದಲ್ಲಿ ವಿದ್ಯಾಭ್ಯಾಸ ಪ್ರಸಾರ ಮಾಡಬೇಕೆಂದು ಗೆಳೆಯರೊಡನೆ ಪುಣ್ಯಭೂಮಿ ವಿದ್ಯಾಸಂಸ್ಥೆ ಆರಂಭಿಸಿ, ಹುಣಸೂರು ಹಾಗೂ ತಟ್ಟೆಕೆರೆಯಲ್ಲಿ ಪ್ರೌಢಶಾಲೆಗಳನ್ನು ಆರಂಭಿಸಿದ ಅವರು, ಸರಳ ಹಾಗೂ ಶಿಸ್ತಿನ ಜೀವನ ಅಳವಡಿಸಿಕೊಂಡಿದ್ದರು.

ನಕ್ಕರೆ ಅದೇ ಸ್ವರ್ಗ

ರೋಗಿ : "ನಗುತ್ತಿದ್ದರೆ ನಮ್ಮ ಟೆನ್ಷನ್ ಕಡಿಮೆಯಾಗುತ್ತದೆ ಎಂದು ನನ್ನ ಹೆಂಡತಿಗೆ ಯಾಕೆ ಹೇಳಿದಿರಿ ಡಾಕ್ಟ್ರೆ?"
ಡಾಕ್ಟರ್ : "ಯಾಕೆ? ಈಗ ಏನಾಯಿತು?"
ರೋಗಿ : "ನನಗೆ ಟೆನ್ಷನ್ ಆದಾಗಲೆಲ್ಲ ಅವಳು ನನ್ನ ಎದುರು ಕುಳಿತು ಗಹಗಹಿಸಿ ನಗ್ತಾಳೆ!!"

ಮೈಸೂರು ಮಿತ್ರ

ಶನಿವಾರ, 18 ನವೆಂಬರ್ 2023

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ..........

ಮನುಷ್ಯ ಎಷ್ಟೇ ಕೆಂಪಗಿದ್ದರೂ ಅವನ ನೆರಳು ಕಪ್ಪಗೇ ಇರುತ್ತದೆ. ನಾನು ಶ್ರೇಷ್ಠ ಎನ್ನುವುದು ಆತ್ಮವಿಶ್ವಾಸ, ನಾನೇ ಶ್ರೇಷ್ಠ ಎನ್ನುವುದು ಅಹಂಕಾರ. – ಬುದ್ಧ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಹೊಟ್ಟೆ ತುಂಬಿದ ಮೇಲೆ ಕಜ್ಜಾಯವೂ ವಿಷ

ನಿಮ್ಮ ಪತ್ರಗಳು

ಶೀಘ್ರ ಶ್ರೀ ಶಿವಕುಮಾರ ಸ್ವಾಮೀಜಿಯವರ ವೃತ್ತದ ಕಾಮಗಾರಿ ಪೂರ್ಣಗೊಳಿಸಿ



ಮಾನ್ಯರೆ,

ಮೈಸೂರಿನ ಕುವೆಂಪುನಗರ ಜೋಡಿ ರಸ್ತೆಯ ಜಗದಾಂಬ ಪೆಟ್ರೋಲ್ ಬಂಕ್‌ನ ಮುಂಭಾಗದ ಶ್ರೀ ಶಿವಕುಮಾರ ಸ್ವಾಮೀಜಿ ಅವರ ವೃತದಲ್ಲಿ ಶ್ರೀ ಶಿವಕುಮಾರ ಸ್ವಾಮೀಜಿಯವರ ಪ್ರತಿಮೆಯನ್ನು ಸ್ಥಾಪಿಸಲು ಕಳೆದ ಒಂದು ವರ್ಷದ ಹಿಂದೆಯೇ ಅಂದಿನ ಶಾಸಕರಾಗಿದ್ದ ರಾಮದಾಸ್ ಅವರು ಗುದ್ದಲಿ ಪೂಜೆ ಮಾಡಿ ಕಾಮಗಾರಿಗೆ ಚಾಲನೆ ನೀಡಿದ್ದರು.

ಆದರೆ ಈ ಕಾಮಗಾರಿ ಕಳೆದ ಆರು ತಿಂಗಳಿಂದ ನಿಂತು ಹೋಗಿದೆ. ಇದಕ್ಕೆ ಕಾರಣ ತಿಳಿಯದು. ಸಂಬಂಧಪಟ್ಟವರಿಗೆ ಇನ್ನು ಕಮೀಷನ್ ಹಣ ಸಂದಾಯ ವಾಗಿಲ್ಲವೇ ಎಂಬ ಅನುಮಾನ ಸಾರ್ವಜನಿಕರಲ್ಲಿದೆ.

ಕಾಮಗಾರಿ ನಡೆಯುತ್ತಿರುವ ವೃತ್ತ ಹಾಲಿ ಹಂಗಾಮಿ ಮೇಯರ್ ಶಿವಕುಮಾರ್ ಅವರು ಪ್ರತಿನಿಧಿಸುತ್ತಿರುವ ವಾರ್ಡ್ (ವಾರ್ಡ್ ನಂ.47)ನ ವ್ಯಾಪ್ತಿಗೆ ಒಳ ಪಟ್ಟಿದೆ. ಒಬ್ಬ ಮೇಯರ್ ಆಗಿ ಇಂತಹ ಒಂದು ಸಣ್ಣ ಕಾಮಗಾರಿಯನ್ನು ಪೂರ್ಣಗೊಳಿಸ ಲಾದರಷ್ಟು ದುರ್ಬಲ ಮೇಯರ್ ಆಗಿಬಿಟ್ಟರೇ? ಅಥವಾ ಕಾಮಗಾರಿ ಪೂರ್ಣ ಗೊಳಿಸಲು ಹಣಕಾಸಿನ ತೊಂದರೆ ಇದೆಯಾ? ಅರ್ಧಕ್ಕೆ ನಿಂತಿರುವ ಈ ಕಾಮಗಾರಿ ಯನ್ನು ತಕ್ಷಣವೇ ಪೂರ್ಣಗೊಳಿಸಿ ಮೈಸೂರು ನಗರದ ಅಂದವನ್ನು ಹೆಚ್ಚಿಸಲಿ. ಇಲ್ಲದಿದ್ದರೆ ಇದು ಶ್ರೀ ಶಿವಕುಮಾರ ಸ್ವಾಮೀಜಿ ಅವರಿಗೆ ಮಾಡಿದ ಅವಮಾನ ಅಲ್ಲವೆ?

–ಬೂಕನಕೆರೆ ವಿಜೇಂದ್ರ, ಕುವೆಂಪು ನಗರ, ಮೈಸೂರು

ಅಪಾಯದ ವಿಷಯವು ಪಠ್ಯ ಪುಸ್ತಕದಲ್ಲಿ ಪಾಠವಾಗಲಿ


ಮಾನ್ಯರೆ,

ಹಬ್ಬವೆಂದರೆ ಎಲ್ಲರೂ ಸಂಭ್ರಮದಿಂದ ಆಚರಿಸುತ್ತಾರೆ. ಕೆಲ ಹಬ್ಬಗಳ ಆಚರಣೆಯಲ್ಲಿ ಮುನ್ನೆಚ್ಚರಿಕೆ ಕ್ರಮವನ್ನು ಅನುಸರಿಸಬೇಕಾಗುತ್ತದೆ. ಅದರಲ್ಲಿ ದೀಪಾವಳಿ ಒಂದು. ಹಬ್ಬದ ಆಚರಣೆಯ ಸಂತೋಷದಲ್ಲಿ ಕಣ್ಣುಗಳನ್ನು ಕಳೆದುಕೊಂಡು ಅಪಾಯ ತಂದುಕೊಂಡಿದ್ದಾರೆ. ಹಸಿರು ಪಟಾಕಿ ಸಿಡಿಸಿ ಎಂದು ಮಾರ್ಗದರ್ಶನ ನೀಡಿದ್ದರೂ ಸಮಯದ ಮಿತಿ ಇಲ್ಲದೆ ಪಟಾಕಿ ಸದ್ದು ಜೋರಾಗೆ ಇದೆ. ಇದರ ಪರಿಣಾಮವಾಗಿ ಪ್ರಾಣಿಗಳ ಮೇಲೆ ಹಾಗೂ ಅನಾರೋಗ್ಯ ಪೀಡಿತರಿಗೆ ತೊಂದರೆ ಹೆಚ್ಚಾಗೆ ಇದೆ. ನಮ್ಮ ಜನರಿಗೆ ಯಾವುದೇ ಕಾನೂನು ತಂದರೂ ಕಾನೂನಿನ ಬಗ್ಗೆ ಭಯವಿಲ್ಲ ಕಾನೂನನ್ನು ಅನುಸರಿಸುವುದು ಇಲ್ಲ.ಸಂಘ ಸಂಸ್ಥೆಗಳು ಶಾಲಾ ಕಾಲೇಜುಗಳಿಗೆ ಹೋಗಿ ಹಬ್ಬದ ಆಚರಣೆಯಲ್ಲಿನ ಮೂಢನಂಬಿಕೆ, ಪ್ರಾಣಿ ಬಲಿ, ಹಾಗೂ ಪಟಾಕಿಯ ಅಪಾಯವನ್ನು ತಿಳಿಸಬೇಕು.ಪ್ರಾತ್ಯಕ್ಷಿಕ ಕಾರ್ಯಕ್ರಮವನ್ನು ಎಲ್ಲೆಡೆ ನೀಡುತ್ತಾ ಪಟಾಕಿಯ ದುರಂತದ ಬಗ್ಗೆ ಎಚ್ಚರಿಕೆ ನೀಡಬೇಕು.ಪಠ್ಯಪುಸ್ತಕದಲ್ಲಿ ಇಂತಹ ವಿಷಯಗಳ ಬಗ್ಗೆ ಗಮನ ನೀಡಿ ಪಠ್ಯಕ್ಕೆ ಸೇರಿಸಿದರೆ ಇದರಿಂದ ಎಲ್ಲರಿಗೂ ಅರಿವು ಮೂಡುತ್ತದೆ. ಇದರಿಂದ ಅಪಾಯಗಳು ತಪ್ಪಿದಂತಾಗುತ್ತದೆ. ಅಪಾಯಕರ ವಾದ ಪಟಾಕಿಗಳ ತಯಾರಿಕೆಗೆ ನಿಷೇಧ ಹೇರಬೇಕು.

–ಎಂ. ಎಸ್. ಉಷಾ ಪ್ರಕಾಶ್, ಲೇಖಕಿ ಹಾಗೂ ಕವಯಿತ್ರಿ, ಮೈಸೂರು.

ಕೆರೆಯಂತಾಗಿರುವ ಕುವೆಂಪುನಗರದ ರಸ್ತೆಗಳು

ಮಾನ್ಯರೆ,




ಮೈಸೂರಿನ ವಾರ್ಡ್ ನಂ 59 ಕುವೆಂಪು ನಗರದ ಹುಡ್ಕೋ ಬಡಾವಣೆಯ (ಕದಂಬ ವೈನ್ಸ್) ಅಕ್ಕ ಪಕ್ಕದ ರಸ್ತೆಗಳಲ್ಲಿ ಅನೇಕ ಮನೆ ಗಳಿದ್ದು, ಹೆಚ್ಚಿನ ಸಾರ್ವಜನಿಕರು ವಾಸಿಸುವ ಸ್ಥಳವಾಗಿದೆ. ಇಲ್ಲಿರುವ ರಸ್ತೆಗಳಿಗೆ ಮೋರಿ (ಡ್ರೈನೇಜ್) ವ್ಯವಸ್ಥೆ ಇಲ್ಲದೆ ಮಳೆ ಬಂದರೆ ಮತ್ತು ಅಕ್ಕಪಕ್ಕದ ಮನೆಯವರ ಗೇಟಿನ ಮುಂಭಾಗದಲ್ಲಿ ಮಳೆ ನೀರು ನಿಲ್ಲುತ್ತದೆ. ಸ್ವಚ್ಛತೆ ಮಾಡಿದರೂ ಸಹ ನೀರು ರಸ್ತೆಯಲ್ಲಿ ನಿಲ್ಲುವುದರಿಂದ ಸಾರ್ವಜನಿಕರಿಗೆ ವಿಪರೀತ ತೊಂದರೆಯಾಗುತ್ತಿದೆ. ಹಿಂದಿನ ಕಾರ್ಪೋರೇಟರ್ ಮತ್ತು ಮೇಯರ್ ಆಗಿದ್ದ ಸುನಂದ ಪಾಲನೇತ್ರ ಅವರ ಗಮನಕ್ಕೆ ತಂದರೂ ಯಾವುದೇ ಪ್ರಯೋಜನವಾಗಿಲ್ಲ. ಆದ್ದರಿಂದ ಕೊಡಲೇ ಈ ವಾರ್ಡಿಗೆ ಸಂಬಂಧಪಟ್ಟ ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ಶಾಸಕರು ಅಧಿಕಾರಿಗಳೊಡನೆ ಸಮಾಲೋಚನೆ ನಡೆಸಿ ಡ್ರೈನೇಜ್ ವ್ಯವಸ್ಥೆ ಕಲ್ಪಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ಮನವಿ.

–ನಾಗೇಶ್, ಮಾನಸಗಂಗೋತ್ರಿ, ಮೈಸೂರು.

ಇತಿಹಾಸ

ಮಾನ್ಯರೆ,
(ಇತ್ತೀಚೆಗೆ ಒಡಿಶಾದ ಕೋನಾರ್ಕ್ ದೇವಾಲಯವನ್ನು ನೋಡಿ)
ದಾರುಣ ಮಾರಣ ರಣೋನ್ಮಾದ,
ನೆತ್ತರ ನಿಡುಗಡಲು;
ನಡು ನಡುವೆ ಅಲ್ಲಲ್ಲಿ ದ್ವೀಪ,
ದೀಪದ ಹಾಗೆ ಅಮೋಘ ಕಲಾಕೃತಿಗಳ
ಅರಳು; ಮರುಳಲ್ಲ!
ಘೋರಾಟ್ಟಹಾಸದ ನಡುವೆ ಮಧುರ
ಬಂಧುರ ಮಂದಹಾಸ:
ಇದು ಇತಿಹಾಸ!!
(ಕಾಪಾಡು ಹೇ ಅರ್ಕನಾಥ– ಜಗದೀಶ!)

–ಸಿಪಿಕೆ, ಮೈಸೂರು,



ಡಾ. ವಿ. ರಂಗನಾಥ್
ಲೇಖಕರು ಹಾಗೂ ನಿವೃತ್ತ ತಹಸೀಲ್ದಾರರು
ಮೊ : 94482 08746 / 97421 79000

ಚಿಂತನೆ

ಪರಿಶ್ರಮಕ್ಕೆ ತಕ್ಕ ಪ್ರತಿಫಲವಿಲ್ಲ...!

ನಾವು ಜೀವನಕ್ಕಾಗಿ ವಿವಿಧ ರೀತಿಯ ದುಡಿಮೆ ಮಾಡುತ್ತೇವೆ. ಕೆಲವನ್ನು ನಾವು ಇಷ್ಟಪಟ್ಟು ಮಾಡಿದರೆ, ಮತ್ತೆ ಕೆಲವನ್ನು ಅನಿವಾರ್ಯ ತೆಯ ಕಾರಣಕ್ಕಾಗಿ ಮಾಡುತ್ತೇವೆ. ಆದರೆ ಎಲ್ಲರ ಮನಸ್ಸಿನಲ್ಲೂ ನನ್ನ ದುಡಿಮೆಗೆ ತಕ್ಕಂತಹ ಬೆಲೆ ದೊರಕಬೇಕು ಎಂಬ ಭಾವನೆ ಇದ್ದೇ ಇರುತ್ತದೆ. ಹಾಗೆ ನೋಡಿದರೆ ಅತೀ ಶ್ರಮದ ಕೆಲಸ ಮಾಡು ವವರಿಗೆ ದೊರಕುವ ಸಂಭಾವನೆ ಕಡಿಮೆಯೇ ಆಗಿರುತ್ತದೆ. ಇನ್ನು ಬುದ್ದಿವಂತರು, ಓದಿದವರಿಗೆ ಅವರು ಶ್ರಮದ ಕೆಲಸ ಮಾಡದಿದ್ದರೂ ಅಧಿಕ ವಾದ ಸಂಭಾವನೆ, ಸಂಪಾದನೆ ಪಡೆಯುತ್ತಾರೆ. ಅಲ್ಲಿ ಬುದ್ದಿವಂತಿಕೆಗೆ ಮನ್ನಣೆ ಇರುತ್ತದೆ. ಶ್ರಮ ಜೀವಿ ಮಾಡುವ ತಪ್ಪು ಅವನಿಗೆ ಮಾತ್ರ ಅನ್ವಯ ವಾಗಿ ದುಡಿಮೆಗೆ ತಕ್ಕ ಆದಾಯ ಬರದಿರ ಬಹುದು. ಆದರೆ ಬುದ್ಧಿವಂತಿಕೆಯಿಂದ ಮಾಡುವ ಕೆಲಸದವರು ಮಾಡುವ ತಪ್ಪು ಅವರಿಗೆ ಮಾತ್ರ ಅನ್ವಯವಾಗದೆ ಇತರರಿಗೂ ತೊಂದರೆ ಕೊಡ ಬಹುದು. ಹಾಗಾಗಿ ಬುದ್ಧಿವಂತಿಕೆಯ ಕೆಲಸ ದವರಿಗೆ ಶ್ರಮ ಜೀವಿಗಳಿಗಿಂತ ಅಧಿಕವಾದ ಸಂಭಾವನೆ ದೊರಕುತ್ತದೆ. ಆ ಕೆಲಸದಲ್ಲಿ ರಿಸ್ಕ್ ಇರುತ್ತದೆ.

ಇತ್ತೀಚೆಗೆ ಓದಿದ ಒಂದೆರಡು ಲೇಖನಗಳು ಈ ವಿಷಯದಲ್ಲಿ ಚಿಂತನೆಗೀಡು ಮಾಡಿತು. ನಮ್ಮ ದೇಶದಲ್ಲಿ ಬಿಡಿಗಾಸಿಗೂ ಕಷ್ಟಪಡುವವರಿದ್ದಂತೆಯೇ, ತಮ್ಮ ದುಡಿಮೆಗೆ ಮೀರಿದ ಆದಾಯ ಪಡೆಯುವವರೂ ಕಂಡುಬರುತ್ತಾರೆ. ಶ್ರಮಜೀವಿ ಸ್ವಲ್ಪ ಹೆಚ್ಚು ಹಣ ಅಪೇಕ್ಷಿಸಿದರೆ ಆಕ್ಷೇಪಿಸಲಾಗುತ್ತದೆ, ವಾದ ಮಾಡಿ, ಬಾಯಿ ಮುಚ್ಚಿಸಲಾಗುತ್ತದೆ. ಆದರೆ ಮತ್ತೊಂದಷ್ಟು ವರ್ಗದವರು ಅವರು ಅಪೇಕ್ಷಿಸಿದಷ್ಟು ಹಣ ನೀಡಿದರೆ ಮಾತ್ರ ಆ ಕೆಲಸ ಒಪ್ಪಿಕೊಳ್ಳುತ್ತಾರೆ. ಮೊದಲೇ ಅಂತಹ ನಿಬಂಧನೆ ಹಾಕುತ್ತಾರೆ. ಅವರಿಂದ ಕೆಲಸ ಮಾಡಿಸಿ ಕೊಳ್ಳಬಯಸುವವರು ಅನಿವಾರ್ಯವಾಗಿ ಅಷ್ಟು ಹಣ ನೀಡಿ ತಮ್ಮ ಕೆಲಸ ಮಾಡಿಸಿಕೊಳ್ಳುತ್ತಾರೆ. ಇದು ಇನ್ನೊಂದು ಬಗೆಯದ್ದಾದರೆ, ಮತ್ತೊಂದು ಆಶ್ಚರ್ಯ ತರಿಸುವ ವರ್ಗವೂ ನಮ್ಮಲ್ಲಿದೆ. ಅವರು ಯಾವುದೇ ಕೆಲಸ ಮಾಡುವುದಿಲ್ಲ, ಆದರೂ ಹೆಚ್ಚು ಆದಾಯ ಗಳಿಸುತ್ತಾರೆ.

ನಮ್ಮಲ್ಲಿ ಹೆಚ್ಚು ಹಣ ಗಳಿಸುವವರಲ್ಲಿ ಮೊದಲನೆಯದಾಗಿ ಚಲನಚಿತ್ರ ನಟರು ಹಾಗೂ ಕ್ರಿಕೆಟ್ ಆಟಗಾರರು ಬರುತ್ತಾರೆ. ಇತ್ತೀಚೆಗೆ ಓದಿದ ಸುದ್ದಿಯಂತೆ ಕೆಲವು ಚಿತ್ರನಟರು ಒಂದು ಚಿತ್ರದಲ್ಲಿ ನಟಿಸಲು 50 ರಿಂದ 100 ಕೋಟಿವರೆಗೆ ಸಂಭಾವನೆ ಪಡೆಯುತ್ತಾರೆ ಎಂದು. ಆ ಹಣವನ್ನು ಅವರು ಹೇಗೆ ವೆಚ್ಚ ಮಾಡುತ್ತಾರೋ ಗೊತ್ತಿಲ್ಲ. ಆದರೆ ನಮ್ಮ ದೇಶದಲ್ಲಿ ಅನೇಕ ಉನ್ನತ ವಿಜ್ಞಾನಿಗಳು, ವೈದ್ಯರು, ಇಂಜಿನಿಯರುಗಳು, ಪ್ರಾಧ್ಯಾಪಕರು, ಅಧಿಕಾರಿಗಳು ವರ್ಷಕ್ಕೆ 10 ರಿಂದ 20 ಲಕ್ಷದಷ್ಟು ಮಾತ್ರ ವೇತನ ಪಡೆಯುತ್ತಾರೆ. ಅದೇ ಒಬ್ಬ ಚಲನಚಿತ್ರ ನಟ ವರ್ಷಕ್ಕೆ 10 ರಿಂದ 100 ಕೋಟಿಯವರೆಗೆ ಸಂಭಾವನೆ ಪಡೆಯುತ್ತಾನೆ. ಕೆಲವೊಮ್ಮೆ ಅದಕ್ಕೂ ಹೆಚ್ಚು. ವಿಜ್ಞಾನಿಗಳು ಇತರರು ಇದೇ ತಮ್ಮ ವೃತ್ತಿ ಜೀವನದಲ್ಲಿ ಅಷ್ಟು ಹಣವನ್ನು ನೋಡಲು ಆಗುವುದೇ ಇಲ್ಲ. ಹಾಗಾದರೆ ಈ ವಿಜ್ಞಾನಿಗಳಿಗಿಂತ ಸೆಲೆಬ್ರಿಟಿಗಳು ದೇಶಕ್ಕಾಗಿ ಹೆಚ್ಚು ಕೆಲಸವನ್ನು ಮಾಡುತ್ತಾರೆ ಎಂದು ಭಾವಿಸಬಹುದೇ? ಹಾಗೆ ಹೆಚ್ಚು ಹಣ ಸಂಪಾದಿಸುವವರು ಈ ದೇಶದ ಅಭಿವೃದ್ಧಿಗೆ ಯಾವ ಕಾಣಿಕೆ ನೀಡುತ್ತಾರೆ? ಒಂದು ವರ್ಷದಲ್ಲಿ ಅಷ್ಟೊಂದು ಹಣ ಸಂಪಾದಿಸುವ ಅವರು ವಿಜ್ಞಾನಿಗಳಿಗಿಂತ ಬುದ್ದಿವಂತರು ಎಂದು ಹೇಳಬಹುದೇ? ಅದೇ ಮಾತು ಕ್ರಿಕೆಟ್ ಆಟಗಾರರಿಗೂ ಅನ್ವಯವಾಗುತ್ತದೆ. ಅವರೂ ಕೋಟಿ ಕೋಟಿಗಳನ್ನು ಸಂಪಾದಿಸುತ್ತಾರೆ.

ಇಂದು ನಮ್ಮ ದೇಶದ ಯುವ ಪೀಳಿಗೆಯನ್ನು ಆಕರ್ಷಿಸುತ್ತಿರುವ ಮೂರು ಕ್ಷೇತ್ರಗಳೆಂದರೆ ಸಿನಿಮಾ, ಕ್ರಿಕೆಟ್ ಹಾಗೂ ರಾಜಕೀಯ. ಈ ಮೂರೂ ಕ್ಷೇತ್ರದಲ್ಲಿರುವವರು ಗಳಿಸುವ ಹಣ ಹಾಗೂ ಪ್ರತಿಷ್ಠೆ ಎಲ್ಲ ಮಿತಿಗಳನ್ನೂ ಮೀರಿದಂತೆ ಕಂಡುಬರುತ್ತಿದೆ. ಹೀಗಾಗಿ ಈ ಕ್ಷೇತ್ರಗಳು ನಮ್ಮ ಯುವಜನರನ್ನು ಆಕರ್ಷಿಸುತ್ತಿವೆ. ಹೆಚ್ಚು ಕೆಲಸ ಮಾಡದೆ ಹೆಚ್ಚು ಹೆಚ್ಚು ಹಣ ಸಂಪಾದಿಸಬಹುದಾದ ಕ್ಷೇತ್ರ ಇವೆಂದು ಅವರು ಭಾವಿಸುವಂತಾಗಿದೆ. ಈ ಕ್ಷೇತ್ರದಲ್ಲಿ ತೊಡಗಿಸಿಕೊಂಡವರ ವಿಶ್ವಾಸಾರ್ಹತೆಯ ಬಗ್ಗೆ ಪ್ರಶ್ನಿಸದಿರುವುದೇ ಸೂಕ್ತ ಎಂಬಂತಾಗಿದೆ. ಆದರೆ ಎರಡು ಮೂರು ದಶಕಗಳ ಹಿಂದೆ ಹೀಗಿರಲಿಲ್ಲ. ಆಗ ನಟರೂ ತಮಗೆ ಅಗತ್ಯವಿದ್ದಷ್ಟು ಮಾತ್ರ ಸಂಭಾವನೆ ಪಡೆಯುತ್ತಿದ್ದರು. ಇದು ಕ್ರಿಕೆಟ್‌ಗೂ ಅನ್ವಯವಾಗುತ್ತಿತ್ತು. ಅದೇ ರೀತಿ ರಾಜಕೀಯದಲ್ಲಿದ್ದವರೂ ಸಾರ್ವಜನಿಕ ಹಣವನ್ನು ಅನಾವಶ್ಯಕವಾಗಿ ಗಳಿಸಲು ಬಯಸುತ್ತಿರಲಿಲ್ಲ. ಅವರಿಗೆ ಒಂದು ರೀತಿ, ನೀತಿ, ಸ್ವಯಂ ನಿಯಂತ್ರಣ ಎಂಬುದು ಇರುತ್ತಿತ್ತು. ಆದರೆ ಅದೇಕೋ ಈಗ ಹೇಳುವವರು ಕೇಳುವವರು ಯಾರೂ ಇಲ್ಲ ಎಂಬಂತೆ ರಾಜಕೀಯ ಕ್ಷೇತ್ರದಲ್ಲಿ ಹಣದ್ದೇ ಕಾರುಬಾರು.

ಈಗ್ಗೆ ಕೆಲವು ವರ್ಷಗಳ ಹಿಂದೆ ವಿಯೆಟ್ನಾಂನ ಅಧ್ಯಕ್ಷ ಹೋ–ಚಿ–ಮಿನ್ಹ್ ಭಾರತಕ್ಕೆ ಬಂದಿದ್ದರು. ಅವರು ಕೆಲವು ರಾಜಕಾರಣಿಗಳೊಡನೆ ಮಾತನಾಡುತ್ತಾ 'ನೀವು ಏನು ಮಾಡುತ್ತಿದ್ದೀರಿ?" ಎಂದು ಕೇಳಿದರಂತೆ. ಅದಕ್ಕೆ ಇವರು ರಾಜಕೀಯ ನಮ್ಮ ವೃತ್ತಿ ಎಂದರಂತೆ. ಆಗ ಅವರು ಸಿಟ್ಟಾಗಿ 'ಬಹುಶಃ ನಿಮಗೆ ನನ್ನ ಪ್ರಶ್ನೆ ಅರ್ಥವಾಗಲಿಲ್ಲ ಎಂದು ಕಾಣುತ್ತದೆ, ನಾನೂ ಕೂಡ ರಾಜಕೀಯ ಮಾಡುತ್ತೇನೆ. ಆದರೆ ವೃತ್ತಿಯಲ್ಲಿ ನಾನು ಕೃಷಿಕ. ಕೃಷಿಯಿಂದ ನನ್ನ ಜೀವನ. ಬೆಳಿಗ್ಗೆ ಮತ್ತು ಸಂಜೆ ನಾನು ಭೂಮಿಯಲ್ಲಿ ದುಡಿಯುತ್ತೇನೆ. ಜೊತೆಗೆ ರಾಜಕಾರಣಿಯಾಗಿ ನನ್ನ ದೇಶಕ್ಕಾಗಿ ಬೇಷರತ್, ಜವಾಬ್ದಾರಿಯುತವಾಗಿ ಕೆಲಸ ಮಾಡುತ್ತೇನೆ. ನಿಮ್ಮ ವೃತ್ತಿ ಯಾವುದು? ಎಂದು ನಾನು ಕೇಳಿದ್ದು' ಎಂದರಂತೆ. ಆಗ ಅಲ್ಲಿದ್ದ ಒಬ್ಬ ರಾಜಕಾರಿಣಿ ನಮ್ಮ ಉದ್ಯೋಗವೇ ರಾಜಕೀಯ, ಅದೇ ನಮ್ಮ ವೃತ್ತಿ ಎಂದರಂತೆ.

ಆ ಸಮಯದ ಒಂದು ಸಮೀಕ್ಷೆ ಭಾರತದಲ್ಲಿ 6 ಲಕ್ಷಕ್ಕೂ ಹೆಚ್ಚು ಜನ ತಮ್ಮ ಜೀವನೋಪಾಯಕ್ಕಾಗಿ ರಾಜಕೀಯವನ್ನೇ ಅವಲಂಬಿಸಿರುವುದಾಗಿ ತಿಳಿಸಿತ್ತು. ಈ ಸಂಖ್ಯೆ ಈಗ ಹತ್ತಾರು ಪಟ್ಟು ಹೆಚ್ಚಾಗಿರಬಹುದು. ಕೆಲಸವನ್ನೇ ಮಾಡದೇ ಹಣ ಸಂಪಾದಿಸಲು ರಾಜಕೀಯ ಸುಲಭ ಮಾರ್ಗ ಎಂದು ಅವರು ಕಂಡುಕೊಂಡಿದ್ದಾರೆ. ಇಂತಹವರಿಂದ ದೇಶದ ಪ್ರಗತಿ ಹೇಗೆ ಸಾಧ್ಯವಾಗುತ್ತದೆ? ಎಂಬುದು ಬಿಡಿಸಲಾಗದ ಒಗಟಂತೆ ಕಂಡುಬರುತ್ತದೆ. ಒಂದು ಸಮೀಕ್ಷೆಯಂತೆ ಯಾವ ದೇಶದಲ್ಲಿ ಅನಾವಶ್ಯಕ ಮತ್ತು ಅಪ್ರಸ್ತುತ ವಲಯದ ಪ್ರಾಬಲ್ಯ ಬೆಳೆಯುತ್ತಾ ಹೋಗುವುದೋ, ಆ ದೇಶ ದಿನದಿಂದ ದಿನಕ್ಕೆ ದುರ್ಬಲವಾಗುತ್ತಾ ಹೋಗುತ್ತದೆ ಎಂದು. ಅಂತಹ ದೇಶದಲ್ಲಿ ಭ್ರಷ್ಟರು ಮತ್ತು ದೇಶ ವಿರೋಧಿಗಳ ಸಂಖ್ಯೆ ಹೆಚ್ಚುತ್ತಲೇ ಇರುತ್ತದೆ ಎಂದು ಅದು ಹೇಳಿದೆ. ಇಂದು ದೇಶಕ್ಕೆ ಪ್ರತಿಭಾವಂತ, ಪ್ರಾಮಾಣಿಕ, ಆತ್ಮಸಾಕ್ಷಿಗೆ ಬೆಲೆಕೊಡುವವರ, ನಿಜವಾದ ಸಮಾಜ ಸೇವಕರ, ಪ್ರಜ್ಞಾವಂತರ ಅವಶ್ಯಕತೆ ಹೆಚ್ಚಾಗಿದೆ, ಅಂತಹವರನ್ನು ಬೆಳೆಸುವ, ಬೆಂಬಲಿಸುವ ಕೆಲಸವಾಗಬೇಕು.

> “ ನಮ್ಮಲ್ಲಿ ಹೆಚ್ಚು ಹಣ ಗಳಿಸುವವರಲ್ಲಿ ಮೊದಲನೆಯದಾಗಿ ಚಲನಚಿತ್ರ ನಟರು ಹಾಗೂ ಕ್ರಿಕೆಟ್ ಆಟಗಾರರು ಬರುತ್ತಾರೆ. ಇತ್ತೀಚೆಗೆ ಓದಿದ ಸುದ್ದಿಯಂತೆ ಕೆಲವು ಚಿತ್ರನಟರು ಒಂದು ಚಿತ್ರದಲ್ಲಿ ನಟಿಸಲು 50 ರಿಂದ 100 ಕೋಟಿವರೆಗೆ ಸಂಭಾವನೆ ಪಡೆಯುತ್ತಾರೆ ಎಂದು. ಆ ಹಣವನ್ನು ಅವರು ಹೇಗೆ ವೆಚ್ಚ ಮಾಡುತ್ತಾರೋ ಗೊತ್ತಿಲ್ಲ. ಆದರೆ ನಮ್ಮ ದೇಶದಲ್ಲಿ ಅನೇಕ ಉನ್ನತ ವಿಜ್ಞಾನಿಗಳು, ವೈದ್ಯರು, ಇಂಜಿನಿಯರುಗಳು, ಪ್ರಾಧ್ಯಾಪಕರು, ಅಧಿಕಾರಿಗಳು ವರ್ಷಕ್ಕೆ 10 ರಿಂದ 20 ಲಕ್ಷದಷ್ಟು ಮಾತ್ರ ವೇತನ ಪಡೆಯುತ್ತಾರೆ. ಅದೇ ಒಬ್ಬ ಚಲನಚಿತ್ರ ನಟ ವರ್ಷಕ್ಕೆ 10 ರಿಂದ 100 ಕೋಟಿಯವರೆಗೆ ಸಂಭಾವನೆ ಪಡೆಯುತ್ತಾನೆ. ಕೆಲವೊಮ್ಮೆ ಅದಕ್ಕೂ ಹೆಚ್ಚು. ವಿಜ್ಞಾನಿಗಳು ಇತರರು ಇದೇ ತಮ್ಮ ವೃತ್ತಿ ಜೀವನದಲ್ಲಿ ಅಷ್ಟು ಹಣವನ್ನು ನೋಡಲು ಆಗುವುದೇ ಇಲ್ಲ.



ಮತ್ತೊಬ್ಬ ಪ್ರವಾಸಿ ಬರೆದ ಮಾಹಿತಿಯನ್ನೂ ಗಮನಿಸಬೇಕು. ಅವರು ಲಡಾಕ್‌ಗೆ ಒಂದು ವಾರದ ಪ್ರವಾಸಕ್ಕೆ ಕುಟುಂಬದವರೊಡನೆ ಹೋಗಿದ್ದರು. ಅಲ್ಲಿ ಅವರು ಒಂದು ಸ್ಥಳೀಯ ಟ್ಯಾಕ್ಸಿ ಬಾಡಿಗೆಗೆ ಪಡೆದಿದ್ದರು. ಆ ಟ್ಯಾಕ್ಸಿ ಚಾಲಕ 28 ವರ್ಷದವನು. ಅವನಿಗೆ ಮದುವೆಯಾಗಿ ಪತ್ನಿ ಹಾಗೂ ಇಬ್ಬರು ಮಕ್ಕಳಿದ್ದಾರೆ. ಪ್ರವಾಸದ ಸಮಯದಲ್ಲಿ ಈ ಪ್ರವಾಸಿ ಅವನೊಡನೆ ಮಾತಿಗಿಳಿಯುತ್ತಾನೆ. ಇನ್ನೇನು ಚಳಿಗಾಲ ಆರಂಭವಾಗುವ ಸಮಯವದು. ಲಡಾಕ್‌ನಲ್ಲಿ ಆರು ತಿಂಗಳು ಚಳಿ ಹಾಗೂ ಹಿಮದಿಂದಾಗಿ ಪ್ರವಾಸಿಗರು ಬರುವುದಿಲ್ಲ. ಪ್ರವಾಸಿಗ ಟ್ಯಾಕ್ಸಿ ಚಾಲಕನನ್ನು ಪ್ರಶ್ನಿಸಿದ; 'ಮುಂದಿನ ವಾರದಿಂದ ಇಲ್ಲಿಗೆ ಪ್ರವಾಸಿಗರು ಬರುವುದಿಲ್ಲ ಹಾಗಾದರೆ ನೀನು ಗೋವಾಕ್ಕೇ ಹೋಗುತ್ತೀಯಾ, ಅಲ್ಲಿ ನೇಪಾಳಿ ಹೋಟೆಲ್‌ಗಳು ಹೆಚ್ಚಿವೆ, ನಿನಗೆ ಕೆಲಸ ಸಿಗಬಹುದು' ಎಂದು. ಆತ 'ಇಲ್ಲ, ನಾನು ಲಡಾಕಿ, ಆದ್ದರಿಂದ ನಾನು ಹಾಗೆ ಹೋಗುವುದಿಲ್ಲ' ಎಂದ. 'ಹಾಗಾದರೆ ಈ ಆರು ತಿಂಗಳು ಏನು ಮಾಡುವೆ?' ಎಂದಾಗ ಆತ 'ಇಲ್ಲ ನಾನು ಇಲ್ಲಿ ಕುಳಿತುಕೊಳ್ಳುವುದಿಲ್ಲ. ಆರು ತಿಂಗಳು ಸಿಯಾಚಿನ್‌ಗೆ ಹೋಗುತ್ತೇನೆ' ಎಂದ. ಅಲ್ಲಿ ಏನು ಮಾಡುವೆ ಎಂದಾಗ 'ನಾನು ಭಾರತೀಯ ಸೈನ್ಯದ ಸಹಾಯಕನಾಗಿ ಕೆಲಸ ಮಾಡುತ್ತೇನೆ ಎಂದ. ಅಂದರೆ ನೀನು ಭಾರತೀಯ ಸೇನೆಗೆ ಸೇರುವೆಯಾ? ಎಂದರೆ, 'ಇಲ್ಲ ನನಗೆ ವಯಸ್ಸು ಮೀರಿದೆ. ಹಾಗೆ ಮಾಡಲಾಗುವುದಿಲ್ಲ. ಸೇನೆಯವರು ನಮ್ಮಂತಹವರನ್ನು ಗುತ್ತಿಗೆ ಮೇರೆಗೆ ನೇಮಕ ಮಾಡಿಕೊಳ್ಳುತ್ತಾರೆ. ನಮಗೆ ಭಾರತೀಯ ಸಿಪಾಯಿಗಳ ಯೂನಿಫಾರಂ, ಬೂಟು, ಹೆಲ್ಮೆಟ್ ಇತ್ಯಾದಿ ಕೊಡುತ್ತಾರೆ. ನಾವು ಹಿಮಪರ್ವತದಲ್ಲಿ ಹದಿನೈದು ದಿನ ನಡೆದು ಸಿಯಾಚಿನ್ ತಲುಪುತ್ತೇವೆ. ಸಿಯಾಚಿನ್‌ಗೆ ಹೋಗಲು ಮೋಟಾರ್ ರಸ್ತೆಗಳಿಲ್ಲ. ನಾವು ಅಲ್ಲಿ ಮೂರು ತಿಂಗಳು ಕೆಲಸ ನಿರ್ವಹಿಸುತ್ತೇವೆ. ನಾವು ಅಲ್ಲಿ ಲೋಡರ್‌ಗಳಾಗಿ ಕೆಲಸ ಮಾಡುತ್ತೇವೆ. ನಮ್ಮ ಬೆನ್ನಿನ ಮೇಲೆ ಭಾರ ಹೊತ್ತು ಒಂದು ಚೌಕಿಯಿಂದ ಮತ್ತೊಂದು ಚೌಕಿಗೆ ಸಾಗುತ್ತೇವೆ. ಒಂದು ಪ್ರದೇಶಕ್ಕೆ ವಾಯುಮಾರ್ಗದ ಮೂಲಕ ವಸ್ತುಗಳನ್ನು ಇಳಿಸಲಾಗುತ್ತದೆ. ಅದನ್ನು ಹೊತ್ತು ನಾವು ಕಡಿದಾದ ಹಿಮಪ್ರದೇಶದಲ್ಲಿ ಸಾಗುತ್ತೇವೆ. ನಾವು ಸಾಮಾನ್ಯವಾಗಿ ಮಧ್ಯ ರಾತ್ರಿಯ ಸಮಯದಲ್ಲಿ ವಸ್ತುಗಳನ್ನು ಹೊತ್ತು ಸದ್ದಿಲ್ಲದೆ ಸಾಗುತ್ತೇವೆ. ಹತ್ತಿರದಲ್ಲೇ ವಿದೇಶಿ ಸೈನಿಕರಿರುತ್ತಾರೆ. ಅಲ್ಲಿ ಚಳಿಗಾಲದಲ್ಲಿ–50 ಡಿಗ್ರಿಯಷ್ಟು ಚಳಿ ಇರುತ್ತದೆ. ನಮ್ಮ ಈ ಕೆಲಸಕ್ಕಾಗಿ ನಮಗೆ ತಿಂಗಳಿಗೆ ಹದಿನೆಂಟು ಸಾವಿರ ರೂಪಾಯಿ ಕೊಡುತ್ತಾರೆ. ನಾವು ನಮ್ಮ ಖರ್ಚು ಕಳೆದು ಮೂರು ತಿಂಗಳಿಗೆ ಐವತ್ತು ಸಾವಿರ ಉಳಿಸುತ್ತೇವೆ. ಈ ಹಣ ನಮಗೆ ಅಮೂಲ್ಯವಾದುದು. ಅದರಲ್ಲಿ ನಮ್ಮ ಮಕ್ಕಳ ವಿದ್ಯಾಭ್ಯಾಸ ಇತ್ಯಾದಿ ವೆಚ್ಚ ಭರಿಸಬೇಕು. ನನಗೆ ಹೆಮ್ಮೆ ಎಂದರೆ ನಾನು ಭಾರತೀಯ ಸೈನ್ಯಕ್ಕಾಗಿ ಕೆಲಸ ನಿರ್ವಹಿಸಿದೆ ಎಂಬ ಸಮಾಧಾನ' ಎಂದು ತಿಳಿಸಿದನು ಎಂದು ಆ ಪ್ರವಾಸಿ ಬರೆಯುತ್ತಾರೆ.

ಅಂತಹ ಚಳಿ ಪ್ರದೇಶದಲ್ಲಿ ಬದುಕುವುದೇ ಕಷ್ಟ, ಆದರೆ ಜೀವನಕ್ಕಾಗಿ ಇಂತಹ ರಿಸ್ಕ್ ತೆಗೆದುಕೊಂಡು ದುಡಿಯುವವರು ಇದ್ದಾರೆ. ಅವರಿಗೆ ಆ ಹಣ ಅಮೂಲ್ಯವಾದುದು ಎಂದು ಅವರು ತಮ್ಮ ಬರಹದಲ್ಲಿ ನಮೂದಿಸಿದ್ದಾರೆ. ಇಷ್ಟು ಹಣಕ್ಕಾಗಿ ಎಂತಹ ಕಷ್ಟದ ಕೆಲಸ ಮಾಡಬೇಕಾಗುತ್ತದೆ ಎಂಬುದನ್ನು ಆಲೋಚಿಸಿದಾಗ, ಯಾವ ಶ್ರಮವೂ ಇಲ್ಲದೆ ಕೋಟಿಗಳನ್ನು ಸಂಪಾದಿಸುವವರನ್ನು ಕಂಡಾಗ ಏನನಿಸಬಹುದು ನೀವೇ ಹೇಳಿ?

ಮತ್ತೊಂದು ಪ್ರಸಂಗ ಪತ್ರಿಕೆಯಲ್ಲಿ ವರದಿಯಾಗಿತ್ತು. ಅಮೇರಿಕಾದ ನ್ಯಾಯಾಲಯದ ಒಂದು ವಿಶಿಷ್ಟ ತೀರ್ಪು ಅದು. ಆ ನ್ಯಾಯಾಲಯದಲ್ಲಿ 15 ವರ್ಷದ ಒಬ್ಬ ಹುಡುಗ ಕಳ್ಳತನ ಮಾಡಿದ ಬಗ್ಗೆ ವಿಚಾರಣೆ ನಡೆಯಿತು. ಹುಡುಗ ಹಸಿವೆಯಿಂದಾಗಿ ಬೇಕರಿಯೊಂದರಿಂದ ಬ್ರೆಡ್ ಹಾಗೂ ಬೆಣ್ಣೆಯನ್ನು ಕದ್ದಿರುತ್ತಾನೆ. ಅದನ್ನು ನೀನು ಹಣ ಕೊಟ್ಟು ಏಕೆ ಖರೀದಿಸಲಿಲ್ಲ? ಎಂದು ಜಡ್ಜ್ ಪ್ರಶ್ನಿಸಿದರೆ ಕೊಡಲು ನನ್ನ ಬಳಿ ಹಣವಿರಲಿಲ್ಲ. ನನ್ನ ಮನೆಯಯಲ್ಲಿ ಕೇವಲ ತಾಯಿ ಇದ್ದಾಳೆ, ಅವಳಿಗೆ ಅನಾರೋಗ್ಯ, ನಾನು ಕಳ್ಳತನ ಮಾಡಿದ್ದು ತಾಯಿಯ ಆಹಾರಕ್ಕಾಗಿ ಎನ್ನುತ್ತಾನೆ. ನೀನು ಯಾವುದೇ ಕೆಲಸ ಮಾಡುವುದಿಲ್ಲವೇ? ಎಂದು ನ್ಯಾಯಾಧೀಶರು ಪ್ರಶ್ನಿಸುತ್ತಾರೆ. ಅದಕ್ಕೆ ಆ ಬಾಲಕ 'ನಾನು ಈ ಹಿಂದೆ ಕಾರು ತೊಳೆಯುವ ಕೆಲಸ ಮಾಡುತ್ತಿದ್ದೆ. ನನ್ನ ತಾಯಿಯನ್ನು ನೋಡಿಕೊಳ್ಳಲು ಒಮ್ಮೆ ಒಂದು ದಿನದ ರಜೆ ಪಡೆದೆ. ಈ ಕಾರಣದಿಂದ ನನ್ನನ್ನು ಕೆಲಸದಿಂದ ತೆಗೆದುಹಾಕಿದರು. ನಾನು ಯಾರನ್ನು ಕೇಳಿದರೂ ನನಗೆ ಸಹಾಯ ಮಾಡಲಿಲ್ಲ. ಎಲ್ಲಾ ಭರವಸೆ ಕಳೆದುಹೋದಾಗ ಹೀಗೆ ಕಳ್ಳತನ ಮಾಡಿದೆ ಎನ್ನುತ್ತಾನೆ. ಇದನ್ನು ಆಲಿಸಿದ ನ್ಯಾಯಾಧೀಶರು ಇದು ಭಾವನಾತ್ಮಕ ಕಳ್ಳತನ. ಈ ಅಪರಾಧಕ್ಕೆ ನಾವೆಲ್ಲಾ ಕಾರಣ, ನಾವೇ ತಪ್ಪಿತಸ್ಥರು. ಈ ನ್ಯಾಯಾಲಯದಲ್ಲಿ ಹಾಜರಿರುವ ಪ್ರತಿಯೊಬ್ಬರಿಗೂ ಹತ್ತು ಡಾಲರ್ ದಂಡ ವಿಧಿಸಿದ್ದೇನೆ ಎಂದು ಹೇಳಿ, ತಮ್ಮ ಪಾಲಿನ ದಂಡ ಎಂದು ಹತ್ತು ಡಾಲರನ್ನು ತೆಗೆದು ಟೇಬಲ್ ಮೇಲಿಡುತ್ತಾರೆ. ಇಂತಹ ಪ್ರಕರಣವನ್ನು ನ್ಯಾಯಾಲಯಕ್ಕೆ ತಂದ ಅಂಗಡಿಯವನಿಗೆ ಸಾವಿರ ರೂಪಾಯಿ ದಂಡ ವಿಧಿಸಿದ್ದೇನೆ ಎಂದು ತೀರ್ಪು ನೀಡುತ್ತಾರೆ. ಇದು ಮಾನವೀಯತೆ ಮಾನದಂಡದ ತೀರ್ಪು.

ಇದನ್ನು ಮಾನವೀಯತೆ ದೃಷ್ಟಿಯಿಂದ ಪರಿಗಣಿಸಬೇಡವೇ? ತಿನ್ನಲು ಗತಿಯಿಲ್ಲದವರ ನಡುವೆ ಸುಲಭವಾಗಿ ಕೋಟ್ಯಾಂತರ ಹಣ ಸಂಪಾದಿಸುವವರ ಬಗ್ಗೆ ತಿರಸ್ಕಾರದ ಭಾವನೆ ಮೂಡದೇ ಇರಲು ಹೇಗೆ ಸಾಧ್ಯ?

ಶಾಸಕಾಂಗ ಪಕ್ಷದ ಸಭೆಯಿಂದ ಹೊರಗುಳಿದ ಯತ್ನಾಳ್, ರಮೇಶ್ ಜಾರಕಿಹೊಳಿ

ತಮ್ಮ ಮನೆಗೆ ಭೇಟಿ ನೀಡಿದ ಕೇಂದ್ರ ವೀಕ್ಷಕರ ಬಳಿ ಅಸಮಾಧಾನ ತೋಡಿಕೊಂಡ ಯತ್ನಾಳ್

ಬೆಂಗಳೂರು, ನ.17–ವಿಪಕ್ಷ ನಾಯಕರಾಗಿ ಆರ್.ಅಶೋಕ್ ಆಯ್ಕೆಯ ಸುಳಿವು ದೊರೆಯುತ್ತಿದ್ದಂತೆಯೇ ಬಿಜೆಪಿ ಶಾಸಕರಾದ ಬಸನಗೌಡ ಪಾಟೀಲ್ ಯತ್ನಾಳ್ ಮತ್ತು ರಮೇಶ್ ಜಾರಕಿಹೊಳಿ ಅವರು ಬಿಜೆಪಿ ಶಾಸಕಾಂಗ ಪಕ್ಷದ ಸಭೆ ನಡೆಯಲಿದ್ದ ಐಟಿಸಿ ಗಾರ್ಡೇನಿಯಾ ಹೋಟೆಲ್‌ನಿಂದ ಹೊರ ನಡೆದರು.

ಈ ವೇಳೆ ತಮ್ಮನ್ನು ಪ್ರಶ್ನಿಸಿದ ಸುದ್ದಿಗಾರರಿಗೆ ಪ್ರತಿಕ್ರಿಯಿಸಿದ ಯತ್ನಾಳ್, 'ಇದು ಬಡವರು ಟೀ ಕುಡಿಯುವ ಜಾಗವಲ್ಲ. ಟೀ ಕುಡಿದು ಬರುತ್ತೇವೆ' ಎಂದು ಹೇಳಿ ಹೊರಟರು. ಆದರೆ ಅವರು ಶಾಸಕಾಂಗ ಸಭೆಗೆ ಆಗಮಿಸದೇ ಗೈರು ಹಾಜರಾದರು. ಯತ್ನಾಳ್, ರಮೇಶ್ ಜಾರಕಿಹೊಳಿ ಮಾತ್ರವಲ್ಲದೆ, ಎಸ್.ಟಿ.ಸೋಮಶೇಖರ್ ಮತ್ತು ಶಿವರಾಂ ಹೆಬ್ಬಾರ್ ಕೂಡ ಸಭೆಗೆ ಗೈರಾಗಿದ್ದರು.

ಹೋಟೆಲ್‌ನಿಂದ ಹೊರ ನಡೆದ ನಂತರ ಯತ್ನಾಳ್, ಸಾಮಾಜಿಕ ಜಾಲತಾಣ X–ನಲ್ಲಿ 'ನ ದೈನಂ,ನ ಪಲಾಯನಂ. ಒಬ್ಬ ಯೋಧ ಯಾವುದರ ಬಗ್ಗೆಯೂ ವಿಷಾದಿಸಲು ಅಥವಾ ದೂರಲು ಸಾಧ್ಯವಿಲ್ಲ. ಅವನ ಜೀವನವು ಅಂತ್ಯವಿಲ್ಲದ ಸವಾಲುಗಳಿಂದ ಕೂಡಿರುತ್ತದೆ.



ಯತ್ನಾಳ್



ರಮೇಶ್

ಸವಾಲುಗಳು ಒಳ್ಳೆಯದು ಅಥವಾ ಕೆಟ್ಟದ್ದು ಎಂಬುದು ಇರುವುದಿಲ್ಲ. ಸವಾಲೆಂದರೆ ಸವಾಲು' ಎಂದು ಪೋಸ್ಟ್ ಮಾಡಿದ್ದರು.

ಇದಕ್ಕೂ ಮುನ್ನ ದೆಹಲಿಯಿಂದ ಆಗಮಿಸಿದ್ದ ವೀಕ್ಷಕರು ಯತ್ನಾಳ್ ಅವರ ನಿವಾಸಕ್ಕೆ ಭೇಟಿ ನೀಡಿ ಮಾತುಕತೆ ನಡೆಸಿದ್ದರು. ಈ ಭೇಟಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ್ದ ಯತ್ನಾಳ್, ಪ್ರತಿಪಕ್ಷ ಸ್ಥಾನವನ್ನು ಉತ್ತರ ಕರ್ನಾಟಕಕ್ಕೆ ಕೊಡಬೇಕು. ಬಿಜೆಪಿಗೆ ಅತೀ ಹೆಚ್ಚು ಸ್ಥಾನ ಗೆಲ್ಲಿಸಿಕೊಟ್ಟಿರುವ ಉತ್ತರ ಕರ್ನಾಟಕ. ಆದ್ದರಿಂದ ನಮ್ಮ ಭಾಗದವರಿಗೆ ಮತ್ತು ಹಿಂದುತ್ವದ ಪರವಾಗಿರುವವರಿಗೆ ಸ್ಥಾನಮಾನ ನೀಡಬೇಕು. ಎಲ್ಲಾ ಹುದ್ದೆಗಳನ್ನು ದಕ್ಷಿಣ ಕರ್ನಾಟಕ ಭಾಗಕ್ಕೆ ಯಾಕೆ ಕೊಡಬೇಕು ಎಂದು ಪ್ರಶ್ನಿಸಿದರಲ್ಲದೆ, ಉತ್ತರ ಕರ್ನಾಟಕ ಹೊರತುಪಡಿಸಿದರೆ, ದಕ್ಷಿಣ ಕರ್ನಾಟಕದಲ್ಲಿ ಎಷ್ಟು ಮಂದಿ ಶಾಸಕರು ಬಿಜೆಪಿಯಿಂದ ಗೆದ್ದು ಬಂದಿದ್ದಾರೆ ಎಂದು ಪ್ರಶ್ನಿಸಿದರು.

ನಮ್ಮ ಭಾಗದ ಬಹಳಷ್ಟು ಶಾಸಕರು ನಮ್ಮ ಜೊತೆ ಇದ್ದಾರೆ. ಆದರೆ ಅವರಿಗೆ ಮಾತನಾಡಲು ಧೈರ್ಯವಿಲ್ಲ. ಹಲವು ಶಾಸಕರು ತಮ್ಮ ಮಕ್ಕಳನ್ನು ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧೆಗಿಳಿಸಲು ಟಿಕೆಟ್ ನಿರೀಕ್ಷೆಯಲ್ಲಿದ್ದಾರೆ. ಹೀಗಾಗಿ ಅವರು ಮಾತನಾಡುತ್ತಿಲ್ಲ. ಉತ್ತರ ಕರ್ನಾಟಕ ಮತ್ತು ಹಿಂದುತ್ವ ಪ್ರತಿಪಾದಕರಿಗೆ ಅವಕಾಶ ನೀಡದಿದ್ದರೆ ಜನ ತೀರ್ಮಾನಿಸುತ್ತಾರೆ. ಆಗ ನಾವೂ ತೀರ್ಮಾನಿಸುತ್ತೇವೆ ಎಂದರು.

ದೇಶದಲ್ಲಿ ಹಿಂದುಗಳು ಉಳಿಯ ಬೇಕಾದರೆ ಮೋದಿ ಮತ್ತೆ ಪ್ರಧಾನಿಯಾಗಬೇಕು. ಪಕ್ಷದ ವರಿಷ್ಠರು ಕೇವಲ ಚೇಲಾಗಳ ಮಾತುಗಳನ್ನು ಕೇಳಿಕೊಂಡು ನಿರ್ಧಾರ ತೆಗೆದುಕೊಳ್ಳಬಾರದು. ಕೆಲವರು ಬ್ಲಾಕ್ ಮೇಲ್ ಮಾಡಲು ಪ್ರಯತ್ನಿಸುತ್ತಾರೆ ಎಂದ ಅವರು, ಈ ಎಲ್ಲಾ ಮಾತುಗಳನ್ನು ವೀಕ್ಷಕರಿಗೆ ಹೇಳಿದ್ದೇನೆ. ನನ್ನ ಮಾತುಗಳನ್ನು ಕೇಳಿ ಸಂತೋಷಪಟ್ಟರು. ಇದನ್ನು ಪ್ರಧಾನಿ ಮೋದಿ ಮತ್ತು ನಡ್ಡಾ ಅವರಿಗೆ ತಿಳಿಸುತ್ತೇವೆ ಎಂದಿದ್ದಾರೆ ಎಂದು ಯತ್ನಾಳ್ ಹೇಳಿದ್ದರು.



ಎನ್.ದಿಲೀಪ್‌ಗೆ ಪಿಹೆಚ್.ಡಿ ಪದವಿ

ಮೈಸೂರು, ನ.17– ಡಾ. ಜಿ. ಕೊಟ್ರೇಶ್ವರ್ ಅವರ ಮಾರ್ಗದರ್ಶನದಲ್ಲಿ ಎನ್. ದಿಲೀಪ್ ಅವರು ವಾಣಿಜ್ಯ ಶಾಸ್ತ್ರ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿಶ್ವವಿದ್ಯಾನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ನಾಳೆ ಮೈಸೂರಲ್ಲಿ ಮಹಿಳಾ ಸಮ್ಮೇಳನ

ಮೈಸೂರು, ನ.17– 'ನಾರಿಶಕ್ತಿ ಸಂಗಮ' ಮೈಸೂರು ವಿಭಾಗ, ಮಹಿಳಾ ಸಮನ್ವಯ ಕರ್ನಾಟಕ ದಕ್ಷಿಣ ಪ್ರಾಂತ ಹಾಗೂ ರಾಷ್ಟ್ರ ಭಾರತಿ ಚಾರಿಟಬಲ್ ಟ್ರಸ್ಟ್ ಸಹಯೋಗದೊಂದಿಗೆ ಮೈಸೂರಿನ ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮದಲ್ಲಿ ನ.19ರಂದು ಬೆಳಗ್ಗೆ 8ಕ್ಕೆ ಮಹಿಳಾ ಸಮ್ಮೇಳನವನ್ನು ಏರ್ಪಡಿಸಲಾಗಿದೆ.

ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಸಮ್ಮೇಳನವನ್ನು ಉದ್ಘಾಟಿಸಲಿದ್ದು, ರಾಷ್ಟ್ರೀಯ ಚಿಂತನೆ, ಸಾಮಾಜಿಕ ಸಾಮರಸ್ಯ, ಮಹಿಳಾ ಸುರಕ್ಷೆ, ಗ್ರಾಮೀಣ, ಕೃಷಿ ಇತ್ಯಾದಿ ವಿಚಾರಗಳ ಬಗ್ಗೆ ಈ ಸಮ್ಮೇಳನ ಬೆಳಕು ಚೆಲ್ಲಲಿದೆ. ಮೈಸೂರು ಗ್ರಾಮಾಂತರ, ಮಂಡ್ಯ, ಚಾಮರಾಜನಗರ ಜಿಲ್ಲೆಗಳ ಸುಮಾರು ಎರಡೂವರೆ ಸಾವಿರ ಮಹಿಳೆಯರು ಭಾಗವಹಿಸುವ ನಿರೀಕ್ಷೆಯಿದೆ.


ತಾಲೂಕು, ನಗರ, ಜಿಲ್ಲಾ ಮಟ್ಟಗಳಲ್ಲಿ ಪೂರ್ವಭಾವಿ ಸಭೆ ನಡೆಸಿ ಗುರುತಿಸಿರುವಂತೆ ವೈದ್ಯರು, ವಕೀಲರು, ಅಧ್ಯಾಪಕಿಯರು, ಸ್ವಯಂ ಸೇವಾ ಸಂಸ್ಥೆಗಳು, ಮಹಿಳಾ ಸಂಘಗಳು, ವೇದಿಕೆಗಳ ಪ್ರತಿನಿಧಿಗಳು, ಉದ್ಯೋಗಸ್ಥ ಮಹಿಳೆಯರು, ವಿದ್ಯಾರ್ಥಿನಿಯರು, ಹೋರಾಟಗಾರ್ತಿಯರು ಹೀಗೆ 11 ಶ್ರೇಣಿಯ ಮಹಿಳೆಯರು ಆಗಮಿಸಲಿದ್ದಾರೆ. ಸಮ್ಮೇಳನದಲ್ಲಿ 'ಭಾರತೀಯ ಚಿಂತನೆಯಲ್ಲಿ ಮಹಿಳೆ', 'ಭಾರತದ ವಿಕಾಸದಲ್ಲಿ ಮಹಿಳೆಯ ಪಾತ್ರ', 'ಮಹಿಳಾ ಸುರಕ್ಷೆ, ಸ್ವಾವಲಂಬನೆ, ಆರೋಗ್ಯ, ಶಿಕ್ಷಣ ಇನ್ನಿತರ ವಿಷಯಗಳ ಬಗ್ಗೆ ತಜ್ಞರು ಮಾರ್ಗದರ್ಶನ ನೀಡಲಿದ್ದಾರೆ.

ಸಮ್ಮೇಳನದ ಅಂಗವಾಗಿ ಸ್ವಾತಂತ್ರ್ಯ ಹೋರಾಟದಲ್ಲಿದ್ದ ವೀರ ಮಹಿಳೆಯರ ಹಾಗೂ ಸ್ವಾತಂತ್ರ್ಯ ನಂತರದ ವಿವಿಧ ಕ್ಷೇತ್ರಗಳ ಮಹಿಳಾ ಸಾಧಕಿಯರ ಚಿತ್ರಗಳನ್ನು ಪ್ರದರ್ಶಿಸಲಾಗುವುದು. ರಾಷ್ಟ್ರ ಜಾಗೃತಿಯ ಅನೇಕ ಪುಸ್ತಕಗಳ ಪ್ರದರ್ಶನ ಮತ್ತು ಮಾರಾಟವನ್ನೂ ಏರ್ಪಡಿಸಲಾಗಿದೆ ಎಂದು ಸಮ್ಮೇಳನದ ಸ್ವಾಗತ ಸಮಿತಿ ಅಧ್ಯಕ್ಷೆ ವಸುಂಧರ ದೊರೆಸ್ವಾಮಿ ಹಾಗೂ ವಿಭಾಗ ಸಂಯೋಜಕಿ ಮಮತಾ ಕಿಣಿ ತಿಳಿಸಿದ್ದಾರೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರು ಮಿತ್ರ ಶನಿವಾರ 18 ನವೆಂಬರ್ 2023

ಸಿಎಂರಿಂದ ಪ.ಮಲ್ಲೇಶ್ ಪುಸ್ತಕ ಬಿಡುಗಡೆ



ಮೈಸೂರು, ನ.17(ಜಿಎ)–ಅಭಿರುಚಿ ಪ್ರಕಾಶನ ವತಿಯಿಂದ ರಾಮಕೃಷ್ಣನಗರದ ರಮಾಗೋವಿಂದ ರಂಗಮಂದಿರದಲ್ಲಿ ನ.18ರಂದು ಆಯೋಜಿಸಿರುವ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ.ಮಲ್ಲೇಶ ಅವರ ರಚಿಸಿರುವ 'ಬುದ್ಧ ನಾಗಾರ್ಜುನರ ಶೂನ್ಯಯಾನ' ಪುಸ್ತಕ ಲೋಕಾರ್ಪಣೆಗೊಳಿಸಲಿದ್ದಾರೆ ಎಂದು ಸಂಶೋಧನಾ ವಿದ್ಯಾರ್ಥಿ ಡಾ.ಹರೀಶ್ ಕುಮಾರ್ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಗ್ಗೆ 10.30ಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪುಸ್ತಕ ಲೋಕಾರ್ಪಣೆ ಮಾಡಲಿದ್ದು, ಖ್ಯಾತ ಪತ್ರಕರ್ತ ಜಿ.ಪಿ.ಬಸವರಾಜು ಪುಸ್ತಕ ಕುರಿತು ಮಾತನಾಡಲಿದ್ದಾರೆ. ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ.ಮಹದೇವಪ್ಪ, ಮಾಜಿ ಶಾಸಕರೂ ಆದ ನೃಪತುಂಗ ಕನ್ನಡ ವಿಕಾಸ ವಿದ್ಯಾಸಂಸ್ಥೆ ಅಧ್ಯಕ್ಷ ಡಾ.ಯತೀಂದ್ರ ಸಿದ್ದರಾಮಯ್ಯ, ವಿಧಾನ ಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ, ಸವಿತ ಪ. ಮಲ್ಲೇಶ್ ಪಾಲ್ಗೊಳ್ಳಲಿದ್ದಾರೆ ಎಂದರು. ಸುದ್ದಿಗೋಷ್ಠಿಯಲ್ಲಿ ಸುಸ್ಮಿತ ಸುಬ್ರಹ್ಮಣ್ಯ, ಸಂಶೋಧನ ವಿದ್ಯಾರ್ಥಿಗಳಾದ ಶಿವಕುಮಾರ್, ರಾಜೇಶ್, ಪ್ರದೀಪ್, ರವಿಕುಮಾರ್, ಪುನೀತ್ ಉಪಸ್ಥಿತರಿದ್ದರು.

ಜೆಡಿಎಸ್‌ಗೆ ಮಾಜಿ ಉಪ ಮೇಯರ್ ಶಫಿ ಅಹಮ್ಮದ್ ರಾಜೀನಾಮೆ



ಮೈಸೂರು, ನ.17(ಜಿಎ)– ಜಾತ್ಯಾತೀತ ಸಿದ್ಧಾಂತ ಇಟ್ಟುಕೊಂಡಿದ್ದ ಜೆಡಿಎಸ್ ಪಕ್ಷ ಕೋಮುವಾದಿ ಪಕ್ಷ ಬಿಜೆಪಿ ಜೊತೆ ಕೈಜೋಡಿಸಿರುವುದನ್ನು ವಿರೋಧಿಸಿ ರಾಜೀನಾಮೆ ನೀಡುತ್ತಿದ್ದೇನೆ ಎಂದು ಮಾಜಿ ಉಪ ಮೇಯರ್ ಶಫಿ ಅಹಮ್ಮದ್ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾನು ಜೆಡಿಎಸ್ ಪಕ್ಷದಿಂದ ಗೆದ್ದು, ಪಾಲಿಕೆ ಸದಸ್ಯನಾಗಿ ನಂತರ ಉಪ ಮೇಯರ್ ಕೂಡ ಆಗಿದ್ದೆ. ನ16ಕ್ಕೆ ಅವಧಿ ಪೂರ್ಣಗೊಂಡಿದ್ದು, ಬಹಳ ದುಃಖದಿಂದ ರಾಜೀನಾಮೆ ನೀಡುತ್ತಿದ್ದೇನೆ. ಈ ಹಿಂದೆ ಮೇಯರ್ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಗೆ ಮತ ನೀಡಿದ್ದಕ್ಕೆ ಕ್ಷೇತ್ರದ ಜನರಿಗೆ ಬೇಸರವಾಗಿದೆ. ಆದ್ದರಿಂದ ಇಂದು ರಾಜ್ಯಾಧ್ಯಕ್ಷರಿಗೆ ರಾಜೀನಾಮೆ ಸಲ್ಲಿಸುತ್ತಿದ್ದೇನೆ ಎಂದರು.

ಈ ವೇಳೆ ಅಬ್ದುಲ್ ಖಾದರ್ ಶಾಹಿದ್ ಮಾತನಾಡಿ, ಜಾತ್ಯಾತೀತ ಸಿದ್ಧಾಂತವನ್ನು ಇಟ್ಟುಕೊಂಡಿರುವ ಜೆಡಿಎಸ್ ಉತ್ತಮ ಪಕ್ಷವಾಗಿದೆ. ಆದರೆ, ಇಂದು ಅವರೇ ಪಕ್ಷವನ್ನು ಹಾಳು ಮಾಡುತ್ತಿದ್ದಾರೆ. ಇವರ ಈ ತೀರ್ಮಾನದಿಂದ ಕೇರಳದಲ್ಲಿಯೂ ಬೇಸರ ವ್ಯಕ್ತವಾಗಿದ್ದು, ಅಲ್ಲಿನ ಮುಖಂಡರು ಸಾಕಷ್ಟು ಸಭೆಗಳನ್ನು ನಡೆಸಿ ಈಗಾಗಲೇ ದೇವೇಗೌಡರಿಗೆ ಪತ್ರ ಬರೆದಿದ್ದಾರೆ ಎಂದರು.

ಸುದ್ದಿಗೋಷ್ಠಿಯಲ್ಲಿ ಇಮ್ರಾನ್ ಷರೀಫ್, ತನ್ವೀರ್ ಅಹಮ್ಮದ್, ಫಘೂರ್, ಅಫ್ತಾಬ್ ಅಹಮ್ಮದ್, ತನ್ವೀರ್ ಅಹಮ್ಮದ್ (ತನ್ನು) ಉಪಸ್ಥಿತರಿದ್ದರು.

ಇಂದು ಲೈವ್ ಹಿಂದಿ ಮ್ಯೂಸಿಕಲ್ ನೈಟ್




ಮೈಸೂರು, ನ.17(ಜಿಎ)–ಮೈಸೂರಿನ ಕೃಷ್ಣಮೂರ್ತಿಪುರಂನಲ್ಲಿರುವ ಶಾರದ ವಿಲಾಸ ಶತಮಾನೋತ್ಸವ ಭವನದಲ್ಲಿ ನ.18ರಂದು ಸಂಜೆ 5 ಗಂಟೆಗೆ ಸಿಎಚ್‌ವೈಕೆ ವತಿಯಿಂದ ಲೈವ್ ಹಿಂದಿ ಮ್ಯೂಸಿಕಲ್ ನೈಟ್ ಗಾಯನ ರಸ ಸಂಜೆ ಆಯೋಜಿಸಲಾಗಿದೆ ಎಂದು ಸಂಸ್ಥೆಯ ಎಲ್. ಚಂದ್ರಶೇಖರ್ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಸಸಂಜೆ ಕಾರ್ಯಕ್ರಮದಲ್ಲಿ ಕಿಶೋರ್ ಕುಮಾರ್, ಮೊಹಮ್ಮದ್ ರಫಿ, ಮುಕೇಶ್, ಲತಾ ಮಂಗೇಷ್ಕರ್, ಆಶಾ ಬೋಸ್ಲೆ ಜೆ.ಜೇಸುದಾಸ್, ಮನರ್‌ಉದಾಸ್ ಹಾಡಿರುವಂತಹ ಹಳೆಯ ಹಿಂದಿ ಚಲನಚಿತ್ರಗೀತೆಗಳು ಹಾಡಲಾಗುತ್ತಿದ್ದು, ಕೀ–ಬೋರ್ಡ್ ವಾದಕರಾದ ದೀಪು ಮತ್ತು ಅಜಯ್ ಆಳ್ವ, ಗಿಟಾರ್ ವಾದಕರಾದ ಮಥಿಯಾಸ್, ರಿದಂ ವಿಭಾಗದಿಂದ ಪ್ರದೀಪ್, ಆಂಡ್ರೋ ವಿನ್ಸೆಂಟ್, ಧ್ವನಿವರ್ಧಕ ವಿಭಾಗದಿಂದ ಶ್ರೀನಾಥ್ ಮತ್ತು ಸಂಜೀವ್, ತಬಲ ವಾದಕರಾದ – ರಘು ಮತ್ತು ಕಿರಣ್ ರವರು ಭಾಗವಹಿಸಲಿದ್ದಾರೆ. ಕಾರ್ಯಕ್ರಮಕ್ಕೆ ಉಚಿತ ಪ್ರವೇಶವಿರುತ್ತದೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸ ಬೇಕೆಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಮೈಸೂರು ಮೋಹನ್, ವಿಜಯ್ ಕುಮಾರ್, ತುಲವಾದಕ ಕಿರಣ್, ಪ್ರದೀಪ್ ಆಂಡ್ರೂ, ವಿನ್ಸೆಂಟ್ ಉಪಸ್ಥಿತರಿದ್ದರು.

ಇಂದು ಎಸ್‌ವಿಇಐ ರಜತ ಮಹೋತ್ಸವ



ಮೈಸೂರು, ನ.17(ಜಿಎ)–ಎಸ್‌ವಿಇಐ ಸಂಸ್ಥೆ ರಜತ ಮಹೋತ್ಸವ ಮತ್ತು ನೂತನ ಕಟ್ಟಡದ ಉದ್ಘಾಟನಾ ಸಮಾರಂಭವನ್ನು ನ.18ರಂದು ಮಧ್ಯಾಹ್ನ 2.30ಕ್ಕೆ ಬೆಳವಾಡಿಯ ಶಾಲಾ ಆವರಣದಲ್ಲಿ ಆಯೋಜಿಸಲಾಗಿದೆ ಎಂದು ಸಂಸ್ಥೆಯ ಅಧ್ಯಕ್ಷ ಟಿ.ಪ್ರಭಾಕರ್ ಶೆಟ್ಟಿ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಸುತ್ತೂರು ಮಠದ ಶ್ರೀಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಲಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟಿಸಲಿದ್ದು, ಮುಖ್ಯ ಅತಿಥಿಗಳಾಗಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಶಿಕ್ಷಣ ಸಚಿವ ಮಧು ಬಂಗಾರಪ್ಪ, ಸಂಸದ ಪ್ರತಾಪ್ ಸಿಂಹ, ಶಾಸಕರಾದ ಜಿ.ಟಿ.ದೇವೇಗೌಡ, ಕೆ.ಹರೀಶ್‌ಗೌಡ, ಮಾಜಿ ಶಾಸಕ ಡಾ.ಯತೀಂದ್ರ ಸಿದ್ದರಾಮಯ್ಯ, ನಟ ಶಿವರಾಜ್ ಕುಮಾರ್, ಸಂಸ್ಥೆ ಅಧ್ಯಕ್ಷ ಪೋತರಾಜ್ ಹಾಗೂ ಜಿಲ್ಲಾಧಿಕಾರಿ ಕೆ.ವಿ.ರಾಜೇಂದ್ರ ಭಾಗವಹಿಸಲಿದ್ದಾರೆ ಎಂದರು. ಸುದ್ದಿಗೋಷ್ಠಿಯಲ್ಲಿ ಅಧ್ಯಕ್ಷ ಪೋತರಾಜ್, ಗೌರವ ಕಾರ್ಯದರ್ಶಿ ಬಿ.ಶಿವಲಿಂಗಪ್ಪ ಉಪಸ್ಥಿತರಿದ್ದರು.

ಗರಡಿಕೇರಿ ಮಲೆ ಮಹದೇಶ್ವರಸ್ವಾಮಿ ದೇವಾಲಯದಲ್ಲಿ ಕಾರ್ತಿಕ ಪೂಜೆ



ಮೈಸೂರು, ನ.17(ಜಿಎ)–ಮೈಸೂರಿನ ಲಷ್ಕರ್ ಮೊಹಲ್ಲಾದ ಗರಡಿಕೇರಿಯಲ್ಲಿರುವ ಮಲೆ ಮಹದೇಶ್ವರಸ್ವಾಮಿ ದೇವಸ್ಥಾನದಲ್ಲಿ ಕಾರ್ತಿಕ ಸೋಮವಾರಗಳ ಪೂಜಾ ಮಹೋತ್ಸವ ನ.20 ರಿಂದ ಆರಂಭವಾಗಲಿದೆ ಎಂದು ದೇವಸ್ಥಾನ ಟ್ರಸ್ಟ್ ಅಧ್ಯಕ್ಷ ಎಂ.ಎಸ್. ರವಿಕುಮಾರ್ ತಿಳಿಸಿದರು.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನ.20, 21, 22, 23 ರಂದು ಸಂಜೆ 6ಕ್ಕೆ ಭಕ್ತಿಗೀತೆ, ಭಜನೆ ಮೊದಲಾದ ಕಾರ್ಯ ಕ್ರಮ ನಡೆಯಲಿದೆ. ನ. 24 ರಂದು ಬೆಳಗ್ಗೆ 10ಕ್ಕೆ ಸಾರ್ವಜನಿಕರಿಗೆ ಉಚಿತ ಆರೋಗ್ಯ ತಪಾಸಣೆ ಹಾಗೂ ಅಂದು ಮಧ್ಯಾಹ್ನ 1 ಗಂಟೆಗೆ ಮಹಾ ಅನ್ನಸಂತರ್ಪಣೆ ನಡೆಯಲಿದೆ. ನ.27ರಂದು ಮಹಾ ಉತ್ಸವ ಆಯೋಜಿಸಲಾಗಿದೆ. ಹಾಗೇ ಡಿ.11 ರಂದು ಮಹದೇಶ್ವರರ ಸುವರ್ಣ ಕೊಳಗ ಮೆರವಣಿಗೆ ಮೊಹಲ್ಲಾ ದಲ್ಲಿ ನಡೆಯಲಿದೆ ಎಂದು ತಿಳಿಸಿದರು. ಚೆಲುವಯ್ಯ, ಜಗನ್ನಾಥ್, ಆರ್.ಮಹದೇವ್, ಸುರೇಶ್‌ಬಾಬು, ಉಮೇಶ್, ರವಿಚಂದ್ರ, ಕುಮಾರ್ ಉಪಸ್ಥಿತರಿದ್ದರು.

ಮೈಸೂರು ನಗರಕ್ಕೆ 100 ವಿದ್ಯುತ್ ಚಾಲಿತ ಬಸ್‌ಗಳು

ಶೀಘ್ರದಲ್ಲೇ ಮೈಸೂರಿಗೆ ಕೇಂದ್ರ ತಂಡ ಭೇಟಿ

ಮೈಸೂರಿನ ಕೆಎಸ್‌ಆರ್‌ಟಿಸಿ ಡಿಪೋಗಳಲ್ಲಿ ಎಲೆಕ್ಟ್ರಿಕ್ ಚಾರ್ಜಿಂಗ್ ಘಟಕ ಸ್ಥಾಪಿಸಲು ಚಿಂತನೆ

ಮೈಸೂರು, ನ 17(ಆರ್‌ಕೆ)– ಕೇಂದ್ರಸರ್ಕಾರ ಮೈಸೂರು ನಗರಕ್ಕೆ 100 ಎಲೆಕ್ಟ್ರಿಕ್ ಬಸ್ (E-Buses)ಗಳನ್ನು ಒದಗಿಸುತ್ತಿದೆ.

ಸಾರ್ವಜನಿಕ–ಖಾಸಗಿ ಸಹಭಾಗಿತ್ವ (ಪಿಪಿಪಿ) ಮಾದರಿಯಲ್ಲಿ 100 ಇ–ಬಸ್‌ಗಳ ಸೇವೆ ಒದಗಿಸುವ ಸಲುವಾಗಿ ಪ್ರಧಾನ ಮಂತ್ರಿಗಳ ಇ–ಸೇವಾ ಯೋಜನೆ ರೂಪಿಸಿರುವ ಕೇಂದ್ರ ಸರ್ಕಾರವು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ (ಕೆಎಸ್‌ಆರ್‌ಟಿಸಿ) ಮೂಲಕ ಅನುಷ್ಠಾನಗೊಳಿಸಲು ಸಿದ್ಧತೆ ಮಾಡಿಕೊಳ್ಳುತ್ತಿದೆ.



ಇಷ್ಟರಲ್ಲೇ ಕೇಂದ್ರ ಸಾರಿಗೆ ಇಲಾಖೆ ತಜ್ಞ ಅಧಿಕಾರಿಗಳ ತಂಡವು ಮೈಸೂರಿಗೆ ಆಗಮಿಸಲಿದ್ದು, ಇ–ಬಸ್‌ಗಳ ಸಂಚಾರ ಮಾರ್ಗ, ಚಾರ್ಜಿಂಗ್ ಸೌಲಭ್ಯ, ರಸ್ತೆಗಳ ಸ್ಥಿತಿ–ಗತಿ, ಬಸ್ ಬೇಗಳು, ಬಸ್ ನಿಲ್ದಾಣ, ಕೆಎಸ್‌ಆರ್‌ಟಿಸಿ ಡಿಪೋಗಳಲ್ಲಿ ಬಸ್ ನಿಲುಗಡೆಗೆ ಸ್ಥಳ ಲಭ್ಯತೆ, ರಿಪೇರಿಗೆ ಇರುವ ಸೌಲಭ್ಯಗಳ ಬಗ್ಗೆ ಸ್ಥಳ ಪರಿಶೀಲಿಸಲಿದೆ.

100 ಬಸ್ ಸಂಚರಿಸಿದರೆ ಪ್ರಯಾಣಿಕರು ಸೇವೆ ಬಳಸಿಕೊಳ್ಳುವ ಪ್ರಮಾಣ, ದರ ನಿಗದಿ, ಉದ್ದೇಶಿತ ಮಾರ್ಗಗಳಲ್ಲಿರುವ ಅಡೆ–ತಡೆಗಳು, ಈಗಾಗಲೇ ಓಡಾಡುತ್ತಿರುವ ಕೆಎಸ್‌ಆರ್‌ಟಿಸಿ ಸಾಮಾನ್ಯ ಬಸ್‌ಗಳು, ಹವಾನಿಯಂತ್ರಿತ ಬಸ್‌ಗಳಿಗೆ ಪ್ರಯಾಣಿಕರ ಪ್ರತಿಕ್ರಿಯೆ, ವಿದ್ಯಾರ್ಥಿಗಳು, ಹಿರಿಯ ನಾಗರಿಕರು, ಮಹಿಳೆಯರು ಬಸ್ ಅವಲಂಬಿಸಿದ್ದಾರೆಯೇ, ಖಾಸಗಿ ಸಾರಿಗೆ ವ್ಯವಸ್ಥೆಗಳೇನು, ಒಟ್ಟಾರೆ ಜನಸಂಖ್ಯೆ, ಸಾರ್ವಜನಿಕ ಸಾರಿಗೆಯನ್ನು ಬಳಸಿಕೊಳ್ಳುತ್ತಿರುವವರ ಸಂಖ್ಯೆ ಇತ್ಯಾದಿ ಮಾಹಿತಿಗಳನ್ನು ಕೇಂದ್ರದ ಅಧಿಕಾರಿಗಳು ಅಧ್ಯಯನ ನಡೆಸಿ ಇಲ್ಲಿನ ಕೆಎಸ್‌ಆರ್‌ಟಿಸಿ ಅಧಿಕಾರಿಗಳೊಂದಿಗೆ ಚರ್ಚಿಸಿ ಸಮಗ್ರ ವರದಿ ಸಿದ್ಧಪಡಿಸಲಿದ್ದಾರೆ.

ಕೇಂದ್ರ ಸರ್ಕಾರದ ಪುರಸ್ಕೃತ ಎಲೆಕ್ಟ್ರಿಕ್ ಸಿಟಿ ಬಸ್ ಯೋಜನೆ ಜಾರಿಗೊಳಿಸಲು ಖಾಸಗಿ ಮಾಲೀಕರಿಂದ ಸಾರಿಗೆ ಇಲಾಖೆ ವಿನ್ಯಾಸದಂತೆ ಸಿದ್ಧಪಡಿಸಿದ ಬಸ್‌ಗಳನ್ನು ಬಾಡಿಗೆಗೆ ಪಡೆದು ಕಿ.ಮೀ.ಗೆ ನಿಗದಿಪಡಿಸಿದಂತೆ ದರ ಪಾವತಿಸಲಾಗುವುದು. ಬಸ್ ಮಾಲೀಕರೇ ಚಾಲಕನನ್ನು ನಿಯೋಜಿಸಿ ಸೇವೆ ಕಲ್ಪಿಸಬೇಕು. ವಿದ್ಯುತ್ ಚಾರ್ಜಿಂಗ್ ಪಾಯಿಂಟ್‌ಗಳನ್ನು ಕೆಎಸ್‌ಆರ್‌ಟಿಸಿ ಒದಗಿಸುತ್ತದೆ. ಆದರೆ ವಿದ್ಯುತ್ ಬಿಲ್ ಅನ್ನು ಬಸ್ ಮಾಲೀಕರೇ ಪಾವತಿಸಬೇಕು.

ಬಸ್ ನಿರ್ವಹಣೆ ಜವಾಬ್ದಾರಿಯೂ ಮಾಲೀಕರದ್ದೇ ಆಗಿರುತ್ತದೆ. ಕೆಎಸ್‌ಆರ್‌ಟಿಸಿಯು ಕಂಡಕ್ಟರ್‌ಗಳನ್ನು ನೇಮಿಸಿ ಪ್ರಯಾಣಿಕರಿಗೆ ಟಿಕೆಟ್ ನೀಡಿ ದರ ವಸೂಲಿ ಮಾಡಲಿದ್ದು, ನಿಗದಿಪಡಿಸಿದಂತೆ ಕಿ.ಮೀ. ಆಧಾರದಲ್ಲಿ ಬಸ್ ಮಾಲೀಕರಿಗೆ ಹಣ ಪಾವತಿ ಮಾಡಲಿದೆ ಎಂದು ಕೆಎಸ್‌ಆರ್‌ಟಿಸಿ ಮೈಸೂರು ವಿಭಾಗದ ವಿಭಾಗೀಯ ನಿಯಂತ್ರಕ ಬಿ. ಶ್ರೀನಿವಾಸ 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ.

ಪ್ರಧಾನ ಮಂತ್ರಿಗಳ ಇ–ಬಸ್ ಸೇವಾ ಯೋಜನೆ ಅನುಷ್ಠಾನಗೊಳಿಸಲು ಕೇಂದ್ರದ ಅಧಿಕಾರಿಗಳು ಮೈಸೂರಿಗೆ ಭೇಟಿ ನೀಡಿ ಪರಿಶೀಲನೆ ನಡೆಸುವರು ಎಂದಷ್ಟೇ ಮಾಹಿತಿ ಇದೆಯೇ ಹೊರತು, ದಿನಾಂಕ ನಿಗದಿಯಾಗಿಲ್ಲ. ಅವರು ಬಂದು ಸಮೀಕ್ಷೆ ನಡೆಸಿ ಸಮಾಲೋಚನೆ ಮಾಡಿದ ನಂತರವಷ್ಟೇ ಯೋಜನೆಯ ಸಮಗ್ರ ಚಿತ್ರಣ ದೊರೆಯಲಿದೆ ಎಂದು ಅವರು ತಿಳಿಸಿದ್ದಾರೆ.

> ಉದ್ದೇಶಿತ ಪ್ರಧಾನಮಂತ್ರಿಗಳ ಇ–ಬಸ್ ಸೇವಾ ಯೋಜನೆ ಅನುಷ್ಠಾನ ಸಂಬಂಧ ಕೇಂದ್ರದ ತಜ್ಞ ಅಧಿಕಾರಿಗಳ ತಂಡವು ಮೈಸೂರಿಗೆ ಭೇಟಿ ನೀಡಲಿದ್ದು, ಇಲ್ಲಿನ ಸಂಚಾರ ಮಾರ್ಗ, ವಿದ್ಯುತ್ ಚಾರ್ಜಿಂಗ್ ಸ್ಟೇಷನ್ ಸೌಲಭ್ಯ, ಬಸ್‌ಗಳ ನಿಲುಗಡೆಗೆ ಸ್ಥಳಾವಕಾಶ, ಪ್ರಯಾಣಿಕರ ಸಂಖ್ಯೆ ಮತ್ತಿತರ ವಿಷಯಗಳ ಸಂಬಂಧ ಪರಿಶೀಲನೆ ನಡೆಸುವರೆಂಬ ಮಾಹಿತಿ ಇದೆ. ಭೇಟಿ ದಿನಾಂಕ ನಿಗದಿಯಾಗಿಲ್ಲ.
> – ಬಿ. ಶ್ರೀನಿವಾಸ, ಕೆಎಸ್‌ಆರ್‌ಟಿಸಿ ಮೈಸೂರು ವಿಭಾಗೀಯ ನಿಯಂತ್ರಕ

ಮೈಸೂರಿನ ನಗರ ಬಸ್ ನಿಲ್ದಾಣ, ಸಾತಗಳ್ಳಿ, ಕುವೆಂಪುನಗರ, ಬನ್ನಿಮಂಟಪ, ವಿಜಯನಗರ ಕೆಎಸ್‌ಆರ್‌ಟಿಸಿ ಬಸ್ ಡಿಪೋಗಳಲ್ಲಿ ವಿದ್ಯುತ್ ಚಾರ್ಜಿಂಗ್ ಸ್ಟೇಷನ್ ಮಾಡಲು ಅವಕಾಶವಿದ್ದು, ಬಸ್ ನಿಲುಗಡೆಗೂ ಸ್ಥಳಾವಕಾಶವಿದೆ. ಯೋಜನೆ ಜಾರಿಗೊಳಿಸುವ ಬಗ್ಗೆ ತಜ್ಞ ಅಧಿಕಾರಿಗಳು ಭೇಟಿ ನಂತರ ತ್ವರಿತ ಕ್ರಮ ಜರುಗಿಸಬೇಕಾಗುತ್ತದೆ ಎಂದು ಅವರು ತಿಳಿಸಿದರು.

ಮಿನಿಸ್ಟ್ರಿಆಫ್ ಹೌಸಿಂಗ್ ಅಂಡ್ ಅರ್ಬನ್ ಅಫೇರ್ಸ್ (MoHUA) ವತಿಯಿಂದ ಅನುಷ್ಠಾನಗೊಳಿಸಲುದ್ದೇಶಿಸಿರುವ ಇ–ಬಸ್ ಸೇವಾ ಯೋಜನೆಯು ಮೈಸೂರಿನಂತಹ ಬೆಳೆಯುತ್ತಿರುವ ನಗರಕ್ಕೆ ಅನುಕೂಲವಾಗಲಿದೆ ಎಂಬ ಅಭಿಪ್ರಾಯಗಳು ಪ್ರಯಾಣಿಕರ ವಲಯದಿಂದ ಕೇಳಿಬರುತ್ತಿದೆ.

5ರಿಂದ 10 ಲಕ್ಷ ಜನಸಂಖ್ಯೆ ಇರುವ ಮೈಸೂರು, ಬೆಳಗಾವಿ, ಕಲಬುರಗಿ, ಹುಬ್ಬಳ್ಳಿ–ಧಾರವಾಡ ಮತ್ತು ಮಂಗಳೂರು ನಗರಗಳಿಗೆ ತಲಾ 100 ಬಸ್ ಹಾಗೂ 5 ಲಕ್ಷಕ್ಕಿಂತ ಕಡಿಮೆ ಜನಸಂಖ್ಯೆ ಹೊಂದಿರುವ ಬಳ್ಳಾರಿ, ವಿಜಯಪುರ, ದಾವಣಗೆರೆ, ಶಿವಮೊಗ್ಗ ಮತ್ತು ತುಮಕೂರು ನಗರಗಳಿಗೆ ತಲಾ 50 ಇ–ಬಸ್‌ಗಳ ಸೇವೆ ಒದಗಿಸಲು ಪ್ರಧಾನಮಂತ್ರಿಗಳ ಇ–ಬಸ್ ಸೇವಾ ಯೋಜನೆಯಲ್ಲಿ ಉದ್ದೇಶಿಸಲಾಗಿದೆ.

ಸುತ್ತಲಿನ ಹಲವು ಗ್ರಾಮಗಳನ್ನೂ ಸೇರಿಸಿಕೊಂಡು ಬೃಹತ್ ಮೈಸೂರು ಮಾಡುವ ಉದ್ದೇಶ ಹೊಂದಿರುವುದರಿಂದ ಇ–ಬಸ್ ಸಂಚಾರ ಸೇವೆಯು ಸಾರ್ವಜನಿಕರಿಗೆ ಲಭ್ಯವಾಗಲೆಂದು ಕೇಂದ್ರಸರ್ಕಾರವು ಈ ಯೋಜನೆಯನ್ನು ಜಾರಿಗೊಳಿಸಲು ಮುಂದಾಗಿದೆ.

ಡಿ.2, ರಾಜ್ಯ ಗಾಣಿಗರ ಸಂಘದ ಸುವರ್ಣ ಮಹೋತ್ಸವ



ಮೈಸೂರು, ನ.17(ಜಿಎ)–ಅಖಿಲ ಕರ್ನಾಟಕ ಗಾಣಿಗರ ಸಂಘದ ಸುವರ್ಣ ಮಹೋತ್ಸವ ಸಮಾರಂಭ, ಮುಖ್ಯಮಂತ್ರಿಗಳಿಗೆ ಅಭಿನಂದನೆ ಹಾಗೂ ಗಾಣಿಗರ ಸಮಾವೇಶವನ್ನು ಡಿ.2ರಂದು ಬೆಂಗಳೂರಿನ ಸಂಘದ ಆವರಣದಲ್ಲಿ ಆಯೋಜಿಸಲಾಗಿದೆ ಎಂದು ರಾಜ್ಯಾಧ್ಯಕ್ಷ ಎಂ.ಆರ್.ರಾಜಶೇಖರ್ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದಿನ ಕಾರ್ಯಕ್ರಮದಲ್ಲಿ ಶ್ರೀ ಪೂರ್ಣನಂದಪುರಿ ಸ್ವಾಮೀಜಿ ಸಾನ್ನಿಧ್ಯ ವಹಿಸಲಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಎರಡು ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಿರುವ ಸಂಘದ ನೂತನ ಕಟ್ಟಡದ ಬ್ಲಾಕ್ 1ರ ಲೋಕಾರ್ಪಣೆಗೊಳಿಸಲಿದ್ದಾರೆ ಜೊತೆಗೆ ಬ್ಲಾಕ್ 2ಕ್ಕೆ ಶಂಕುಸ್ಥಾಪನೆ ನೆರವೇರಿಸಿ, ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ ಎಂದರು.

ಮುಖ್ಯ ಅತಿಥಿಗಳಾಗಿ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಶಿವರಾಜ ತಂಗಡಗಿ, ಸಂಸದ ಡಿ.ಕೆ.ಸುರೇಶ್, ಶಾಸಕರಾದ ಎಂ.ಕೃಷ್ಣಪ್ಪ, ದಿನಕರ್ ಕೇಶವ ಶೆಟ್ಟಿ, ವಿಧಾನ ಪರಿಷತ್ ಮಾಜಿ ಸಭಾಪತಿ ವಿ.ಆರ್.ಸುದರ್ಶನ್ ಹಾಗೂ ಮಾಜಿ ಶಾಸಕಿ ಶಾರದ ಮೋಹನ್ ಭಾಗವಹಿಸಲಿದ್ದಾರೆ. ಈ ವೇಳೆ ಕಟ್ಟಡ ನಿರ್ಮಿಸಲು ಒಂದು ಕೋಟಿ ರೂ. ದೇಣಿಗೆ ನೀಡಿದ ಎಂ.ಎಸ್.ಶ್ರೀನಿವಾಸಮೂರ್ತಿ ಅವರನ್ನು ಅಭಿನಂದಿಸಲಾಗುತ್ತದೆ. ಆದ್ದರಿಂದ ಮೈಸೂರು ಚಾಮರಾಜನಗರದ ಭಾಗದಲ್ಲಿರುವ ಗಾಣಿಗ ಸಮುದಾಯದವರು ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು.

ಸರ್ಕಾರ ಈವರೆಗೂ ವಿವಿಧ ಸಮುದಾಯಗಳ ನಿಗಮ ಮಂಡಳಿಗಳನ್ನು ಸ್ಥಾಪನೆ ಮಾಡಿದೆ. ಅದರಂತೆ ಗಾಣಿಗ ಸಮುದಾಯದ ನಿಗಮ ಸ್ಥಾಪಿಸಿ ಸಮುದಾಯದ ಅಭಿವೃದ್ಧಿಗೆ ಅನುದಾನ ನೀಡಬೇಕು. ಸಮುದಾಯ ಭವನದ ಮತ್ತು ಸ್ಮಶಾನಕ್ಕೆ ಸ್ಥಳ ನೀಡಬೇಕೆಂದು ಸಮಾವೇಶದಲ್ಲಿ ಮನವಿ ಮಾಡಲಾಗುತ್ತದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಉಪಾಧ್ಯಕ್ಷ ಎನ್.ಸಿ.ಉಮೇಶ್, ರವಿ, ವಿಜಯ್ ಕುಮಾರ್, ಮರಿಸ್ವಾಮಿ, ವೆಂಕಟೇಶ್, ರಾಜು, ಮೋಹನ್, ನವೀನ್, ಭಾಸ್ಕರ್, ಶ್ರೀನಿವಾಸ್ ಉಪಸ್ಥಿತರಿದ್ದರು.

ಮೈಸೂರಲ್ಲಿ ದಾಖಲೆಗಳ ಪರಿಶೀಲನೆ



ಮೈಸೂರು, ನ. 17(ಆರ್‌ಕೆ)– ವಿಧಾನಸಭೆಗೆ ಮಂಡಿಸಲಾಗುವ ಕಾಗದ ಪತ್ರಗಳ ಸಮಿತಿ ಸದಸ್ಯರು ಇಂದು ಮೈಸೂರಿನ ಜಿಲ್ಲಾ ಪಂಚಾಯ್ತಿ ಕಚೇರಿ ಸಭಾಂಗಣದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

ಸಮಿತಿ ಅಧ್ಯಕ್ಷರಾದ ಮಾಜಿ ಸಚಿವ ಹೆಚ್.ಡಿ.ರೇವಣ್ಣ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಮುಡಾ, ಮೈಸೂರು ಮಹಾನಗರ ಪಾಲಿಕೆ, ಜಿಲ್ಲಾ ಪಂಚಾಯ್ತಿ, ಕಂದಾಯ, ಆರೋಗ್ಯ ಇಲಾಖೆಗಳ ಲೆಕ್ಕಪತ್ರ ಪರಿಶೀಲಿಸಿದ ಅವರು, ದಾಖಲೆ ಪತ್ರ ನಿರ್ವಹಣೆ, ಲೆಕ್ಕ ಪರಿಶೋಧನಾ ವರದಿ ಬಗ್ಗೆ ಪ್ರಗತಿ ಪರಿಶೀಲಿಸಿದರು.

ಸರ್ಕಾರದಿಂದ ಬಿಡುಗಡೆಯಾದ ಅನುದಾನದ ಬಳಕೆ, ಉಪಯೋಗಿಸದೇ ಹಿಂದಿರುಗಿಸಿದ ಹಣ, ದಾಖಲೆ ಪತ್ರಗಳ ಸಂಬಂಧ ಅಧಿಕಾರಿಗಳಿಂದ ಮಾಹಿತಿ ಸಂಗ್ರಹಿಸಿದ ಸಮಿತಿ ಸದಸ್ಯರು, ಕಂಡುಬಂದ ಲೋಪ–ದೋಷಗಳನ್ನು ಸರಿಪಡಿಸಿಕೊಳ್ಳುವಂತೆ ಸೂಚಿಸಿದರು.

ನಾಳೆ (ನ. 18) ಮೈಸೂರು ವಿಶ್ವವಿದ್ಯಾನಿಲಯ, ಮುಕ್ತ ವಿಶ್ವವಿದ್ಯಾನಿಲಯಗಳಲ್ಲೂ ಸಮಿತಿಯು ದಾಖಲೆಪತ್ರ ಪರಿಶೀಲಿಸಲಿದೆ.

ಕಾಂತರಾಜು ಆಯೋಗದ ವರದಿ ಜಾರಿಯಾಗದಿದ್ದರೆ ಹೋರಾಟ



ಮೈಸೂರು, ನ.17(ಜಿಎ)– ನ್ಯಾಯಮೂರ್ತಿ ಹೆಚ್.ಕಾಂತರಾಜು ಅವರ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಸ್ಥಿತಿಗಳ ವರದಿಯನ್ನು ರಾಜ್ಯ ಸರ್ಕಾರ ಜಾರಿಗೊಳಿಸಬೇಕು. ಇಲ್ಲದಿದ್ದರೆ ಹೋರಾಟ ನಡೆಸುವುದಾಗಿ ದಲಿತ ಸಂಘರ್ಷ ಸಮಿತಿ ಎಚ್ಚರಿಕೆ ನೀಡಿದೆ.

ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ದಸಂಸ ರಾಜ್ಯ ಸಂಚಾಲಕ ಚೋರನಹಳ್ಳಿ ಶಿವಣ್ಣ ಮಾತನಾಡಿ, ಹಿಂದಿನಿಂದಲೂ ಕಾಲಕಾಲಕ್ಕೆ ಹಲವಾರು ಆಯೋಗಗಳು ಶೋಷಿತ ಸಮುದಾಯಗಳ, ಸಾಮಾಜಿಕ ಆರ್ಥಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಬಗ್ಗೆ ವೈಜ್ಞಾನಿಕವಾಗಿ ಮತ್ತು ವಸ್ತುನಿಷ್ಠ ವರದಿಗಳನ್ನು ನೀಡುತ್ತಾ ಬಂದಿವೆ. ಈ ವರದಿಗಳ ಆಧಾರದ ಮೇಲೆ ಸರ್ಕಾರಗಳು ಯೋಜನೆಗಳನ್ನು ರೂಪಿಸಿ ವಂಚಿತ ಸಮುದಾಯಗಳನ್ನು ಸಮಾಜದ ಮುಖ್ಯವಾಹಿನಿಗೆ ತರಲು ಸಾಧ್ಯವಾಗುತ್ತಿದೆ.

ಅದರಂತೆ ರಾಜ್ಯ ಹಿಂದುಳಿದ ವರ್ಗಗಳ ಶಾಶ್ವತ ಆಯೋಗದ ಹಿಂದಿನ ಅಧ್ಯಕ್ಷ ನ್ಯಾಯಮೂರ್ತಿ ಹೆಚ್.ಕಾಂತರಾಜು ನೇತೃತ್ವದ ಆಯೋಗವು ಜಾತಿಯನ್ನು ಒಂದು ಅಂಶವಾಗಿಟ್ಟುಕೊಂಡು ಸಂವಿಧಾನಿಕ ಮಾನದಂಡಗಳು ಅನ್ವಯಿಸುವಂತೆ ಸಾಮಾಜಿಕ ನ್ಯಾಯದ ಸೂತ್ರದಡಿ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಸ್ಥಿತಿಗತಿಗಳ ಸಮೀಕ್ಷೆ ವರದಿಯನ್ನು ಸಿದ್ಧಪಡಿಸಿದ್ದಾರೆ. ಸದರಿ ವರದಿ ಜಾರಿ ಮಾಡಬಾರದೆಂದು ಈ ಮದಿ ಬಹಿರಂಗೊಳ್ಳುವ ಮೊದಲೇ ಅನಗತ್ಯ ಆಕ್ಷೇಪಣೆ ಮಾಡುತ್ತಿರುವ ಕೆಲ ಮಠಾಧೀಶರು ಮತ್ತು ರಾಜಕೀಯ ಪಕ್ಷಗಳು ಹಾಗೂ ಸಮಾಜ ವಿರೋಧಿ ಶಕ್ತಿಗಳಿಗೆ ಮಣೆ ಹಾಕದೆ ಸರ್ಕಾರವು ಕಾಂತರಾಜು, ವರದಿಯನ್ನು ಚರ್ಚೆಗೊಳಪಡಿಸಿ ಜಾರಿಗೊಳಿಸಿ ಹಿಂದುಳಿದ ವರ್ಗದಲ್ಲೇ ಅತೀ ಹಿಂದುಳಿದ ಸಮುದಾಯಗಳ ಸರ್ವತೋಮುಖ ಅಭಿವೃದ್ಧಿಗೆ ಪೂರಕವಾದ ಯೋಜನೆ ಮತ್ತು ಕಾನೂನುಗಳನ್ನು ರೂಪಿಸಬೇಕೆಂದು ಒತ್ತಾಯಿಸಿದರು.

ಒಂದು ವೇಳೆ ವರದಿ ಜಾರಿಗೊಳಿಸದಿದ್ದರೆ ಅಹಿಂದ ಸಮುದಾಯಗಳನ್ನು ಸಂಘಟಿಸಿ ಹೋರಾಟ ನಡೆಸುವ ಎಚ್ಚರಿಕೆ ನೀಡಿದರು. ಸುದ್ದಿಗೋಷ್ಠಿಯಲ್ಲಿ ಸಂಘಟನಾ ಸಂಚಾಲಕ ಕೆ.ವಿ.ದೇವೇಂದ್ರ, ಕಿರಂಗೂರು ಸ್ವಾಮಿ, ಹಾರೋಹಳ್ಳಿ ನಟರಾಜ್, ಶಿವಮೂರ್ತಿ ಶಂಕರಪ್ಪ, ಕಾರ್ಯಕಾರಿ ಸಮಿತಿ ಸದಸ್ಯ ಸಣ್ಣಯ್ಯ ಲಕ್ಕೂರು ಉಪಸ್ಥಿತರಿದ್ದರು.

ಇಂದು ವಿವಿಧ ಸಾಧಕರಿಗೆ ಕಲ್ಪತರು ಪ್ರಶಸ್ತಿ ಪ್ರದಾನ

ಮೈಸೂರು, ನ. 17– ಮೈಸೂರಿನ ಎಸ್‌ಕೆ ಫೌಂಡೇಶನ್ ಟ್ರಸ್ಟ್ ವತಿಯಿಂದ ಕನ್ನಡ ರಾಜ್ಯೋತ್ಸವದ ಅಂಗವಾಗಿ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಸಾಧಕರಿಗೆ ಕನ್ನಡ ಅಭಿಮಾನಿ ಕಲ್ಪತರು ಪ್ರಶಸ್ತಿ ಪ್ರದಾನ ಕಾರ್ಯಕ್ರಮವನ್ನು ಎಂಜಿ ರಸ್ತೆಯಲ್ಲಿರುವ ಸಿಪಾಯಿ ಗ್ರ್ಯಾಂಡ್ ಹೋಟೆಲ್‌ನಲ್ಲಿ ನಾಳೆ (ನ.18) ಬೆಳಗ್ಗೆ 10:30ಕ್ಕೆ ಆಯೋಜಿಸಲಾಗಿದೆ ಎಂದು ಎಸ್‌ಕೆ ಫೌಂಡೇಶನ್ ಟ್ರಸ್ಟ್ ಅಧ್ಯಕ್ಷ ಸಂತೋಷ್ ಕಿರಾಳು ತಿಳಿಸಿದ್ದಾರೆ

ಕಾರ್ಯಕ್ರಮದ ಉದ್ಘಾಟನೆಯನ್ನು ವರನಟ ಡಾ. ರಾಜಕುಮಾರ್ ಅವರ ಪುತ್ರಿ ಲಕ್ಷ್ಮಿ ಗೋವಿಂದರಾಜು ನೆರವೇರಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಶಾಸಕರಾದ ದರ್ಶನ್ ಧ್ರುವನಾರಾಯಣ್, ಗಣೇಶ್ ಪ್ರಸಾದ್, ವಿಶ್ರಾಂತ ಮುಖ್ಯ ಅಭಿಯಂತರ ಶಂಕರ್ ದೇವನೂರು, ಮೈಸೂರು ವಿಶ್ವವಿದ್ಯಾನಿಲಯದ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ ಪ್ರಾಧ್ಯಾಪಕರಾದ ಡಾ. ಎನ್ ಕೆ ಲೋಲಾಕ್ಷಿ, ಉದ್ಯಮಿ ಚೇತನ್ ಕುಮಾರ್, ಅಂತರರಾಷ್ಟ್ರೀಯ ಜಾನಪದ ಗಾಯಕರಾದ ಅಮ್ಮ ರಾಮಚಂದ್ರ ಇನ್ನಿತರರು ಆಗಮಿಸಲಿದ್ದಾರೆ ಎಂದು ತಿಳಿಸಿದರು.

ಮನೆಗೆ ದೀಪಾವಳಿ 'ದೀಪಾಲಂಕಾರ'ದ ದಂಡ 68,526ರೂ. ಪಾವತಿಸಿದ ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ

ತಪ್ಪು ಲೆಕ್ಕಾಚಾರಕ್ಕೆ ವಿವರಣೆ ಕೇಳಿ ಬೆಸ್ಕಾಂಗೆ ಪತ್ರ



ಬೆಂಗಳೂರು, ನ.17(ಕೆಎಂಶಿ)– ದೀಪಾವಳಿ ಸಂದರ್ಭದಲ್ಲಿ ಕಂಬದಿಂದ ಅಕ್ರಮ ವಿದ್ಯುತ್ ಸಂಪರ್ಕ ಪಡೆದ ಆರೋಪದ ಹಿನ್ನೆಲೆಯಲ್ಲಿ ಬೆಸ್ಕಾಂ ವಿಚಕ್ಷಣಾ ದಳ ತಮಗೆ ವಿಧಿಸಿದ್ದ 68,526 ರೂ. ದಂಡವನ್ನು ಪಾವತಿ ಮಾಡಿದ್ದೇನೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಜೆಡಿಎಸ್ ರಾಜ್ಯಾಧ್ಯಕ್ಷ ಹೆಚ್.ಡಿ. ಕುಮಾರಸ್ವಾಮಿ ಇಂದಿಲ್ಲಿ ತಿಳಿಸಿದ್ದಾರೆ.

ಬೆಸ್ಕಾಂ ವಿಧಿಸಿರುವ ದಂಡದ ಮೊತ್ತಲೋಪದಿಂದ ಕೂಡಿದ್ದು ಈ ಬಗ್ಗೆ ತಮಗೆ ಸ್ಪಷ್ಟನೆ ಕೊಡಬೇಕು ಎಂದು ಅವರು ಇಂಧನ ಇಲಾಖೆಯನ್ನು ಒತ್ತಾಯಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜೆ.ಪಿ.ನಗರದ ತಮ್ಮ ಮನೆಗೆ ಕಂಬದಿಂದ ಅಕ್ರಮ ವಿದ್ಯುತ್ ಪಡೆದಿರುವುದಕ್ಕೆ ಬೆಸ್ಕಾಂ ವಿಚಕ್ಷಣಾ ದಳ ವಿಧಿಸಿರುವ ದಂಡವೇ ಅಕ್ರಮ ಎಂದು ಆರೋಪ ಮಾಡಿದ್ದಾರೆ.

ನನ್ನ ಮನೆಗೆ ನಾನು 33 ಕೆವಿ ಅನುಮತಿ ಪಡೆದಿದ್ದೇನೆ, ವಿದ್ಯುತ್ ಕಳವು ಆರೋಪದಲ್ಲಿ 2.5 ಕೆವಿ ವಿದ್ಯುತ್ ಪಡೆಯಲಾಗಿದೆ ಎಂದು ಬೆಸ್ಕಾಂ ಹೇಳಿದೆ. ಅಸಲಿಗೆ ಒಂದು ಕೆವಿ ವಿದ್ಯುತ್ ಮಾತ್ರ ನಮ್ಮ ಮನೆಯ ಲೈಟಿಂಗ್‌ಗೆ ಬಳಕೆ ಮಾಡಲಾಗಿತ್ತು ಆದರೂ ಬೆಸ್ಕಾಂ ಅಧಿಕಾರಿಗಳು 2.5 ಕೆವಿ ಅಂತ ಸುಳ್ಳು ಲೆಕ್ಕ ತೋರಿಸಿದ್ದಾರೆ. ಯಾರದ್ದೋ ಒತ್ತಡಕ್ಕೆ ಮಣಿದು ಹೀಗೆ ಮಾಡಿದ್ದಾರೆ ಎಂದು ಗಂಭೀರ ಆರೋಪ ಮಾಡಿದರು.

ನಾನು ಬಳಕೆ ಮಾಡಿರುವುದು 71 ಯುನಿಟ್, ಅದಕ್ಕೆ 3 ಪಟ್ಟು ಫೈನ್ ಅಂದರೂ 2,526 ರೂ. ದಂಡ ಆಗುತ್ತದೆ. ಆದರೆ ಬೆಸ್ಕಾಂ 68,000 ರೂ. ದಂಡ ಪಾವತಿ ಮಾಡಲು ಹೇಳಿದೆ. ನನ್ನ ಮನೆಗೆ ಅನುಮತಿ ಪಡೆದಿರೋ 33 ಕೆವಿಗೂ 66 ಸಾವಿರ ಬಿಲ್ ಹಾಕಿ, ಒಟ್ಟಾರೆ 68,526 ಬಿಲ್ ನೀಡಲಾಗಿದೆ.

ನಿಯಮದ ಪ್ರಕಾರ ಬಿಲ್ ಹಾಕದೇ ಹೆಚ್ಚುವರಿ ಬಿಲ್ ಹಾಕಿದೆ, ಮಾಜಿ ಮುಖ್ಯಮಂತ್ರಿಗೇ ಹೀಗಾದರೆ ಸಾಮಾನ್ಯ ಜನರ ಕಥೆ ಏನು ಎಂದು ಅವರು ಪ್ರಶ್ನಿಸಿದರು.

ಈ ಬಗ್ಗೆ ಬೆಸ್ಕಾಂಗೆ ಮರು ಪರಿಶೀಲನಾ ಪತ್ರ ಬರೆದಿದ್ದೇನೆ ಹಾಗೂ ದಂಡವನ್ನೂ ಕಟ್ಟಿದ್ದೇನೆ. ಆದರೆ ಇಷ್ಟು ಬಿಲ್ ಯಾಕೆ ಅಂತ ವಿವರಣೆ ಕೊಡಿ ಎಂದು ಆಕ್ಷೇಪಣೆ ವ್ಯಕ್ತಪಡಿಸಿ ಪತ್ರ ಬರೆದಿದ್ದೇನೆ. ಬೆಸ್ಕಾಂ ವಿಜಿಲೆನ್ಸ್ ಹೇಗೆ ಕೆಲಸ ಮಾಡುತ್ತಿದೆ ಎನ್ನುವುದು ನನಗೆ ಗೊತ್ತಿದೆ ಎಂದು ಬೆಸ್ಕಾಂ ಅಧಿಕಾರಿಗಳ ವಿರುದ್ಧವೂ ಕುಮಾರಸ್ವಾಮಿ ಕಿಡಿಕಾರಿದರು.

ದೀಪಾವಳಿ ಹಬ್ಬದ ವೇಳೆ ನಮ್ಮನೆ ಹುಡುಗರು ದೀಪಾಲಂಕಾರ ಮಾಡುವಾಗ ಅಚಾತುರ್ಯ ಆಗಿತ್ತು. ಇದಕ್ಕೆ ನಾನೇ ವಿಷಾದ ವ್ಯಕ್ತಪಡಿಸಿ ದಂಡ ಪಾವತಿ ಮಾಡುವುದಾಗಿ ಹೇಳಿದ್ದೆ. ಅದರಂತೆ ದಂಡ ಪಾವತಿ ಮಾಡಿದ್ದೇನೆ ಎಂದರು.

ಹುಡುಗರು ಮಾಡಿದ ತಪ್ಪಿಗೆ ವಿಷಾದ ವ್ಯಕ್ತಪಡಿಸಿ, ಅದರ ಜವಾಬ್ದಾರಿ ನಾನೇ ಹೊತ್ತೆ. ಈಗ ವಿದ್ಯುತ್ ಕಳ್ಳ ಅಂತ ಪಟ್ಟ ಬೇರೆ ಕೊಟ್ಟಿದ್ದಾರೆ. ಇದರ ಬಗ್ಗೆ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಆದಿಯಾಗಿ ಎಲ್ಲರೂ ಹೇಳಿಕೆ ಕೊಟ್ಟಿದ್ದರು. ದಂಡದ ಬಿಲ್ ಕೊಟ್ಟರು, ಕಟ್ಟಿದ್ದೇನೆ.

ಲುಲು ಮಾಲ್‌ನ 6 ತಿಂಗಳ ವಿದ್ಯುತ್ ಬಳಕೆ ಮಾಹಿತಿ ನೀಡಲಿ!

ಬೆಂಗಳೂರಿನ ಸುಜಾತ ಬಸ್ ನಿಲ್ದಾಣದ ಬಳಿ ಆಕಾಶದ ಎತ್ತರಕ್ಕೆ ಕಟ್ಟಿರುವ ಲುಲು ಮಾಲ್ ಪ್ರಾರಂಭಕ್ಕೂ ಮುನ್ನ 6 ತಿಂಗಳು ಬಳಕೆ ಮಾಡಿದ ವಿದ್ಯುತ್ ಬಿಲ್ ಬಗ್ಗೆ ಬೆಸ್ಕಾಂ ವಿಚಕ್ಷಣ ದಳ ಮಾಹಿತಿ ನೀಡುತ್ತಾ! ಅದರ ಬಗ್ಗೆ ಇರುವ ಮಾಹಿತಿಯನ್ನು ಅವರು ಬಹಿರಂಗ ಮಾಡುತ್ತಾರಾ! ಎಂದು ಮಾಜಿ ಸಿಎಂ ಕುಮಾರಸ್ವಾಮಿ ಪ್ರಶ್ನಿಸಿದರು.

ಲುಲು ಮಾಲ್ ಆರಂಭಕ್ಕೆ ಮೊದಲು 6 ತಿಂಗಳು ವಿದ್ಯುತ್ ಬಿಲ್ ಕಟ್ಟಲು ಬಿಟ್ಟಿಲ್ಲ ಹಾಗಾದರೆ, ಅವರು ಎಲ್ಲಿಂದ ವಿದ್ಯುತ್ ಬಳಸಿದರು. ಆಕಾಶದಿಂದ ವಿದ್ಯುತ್ ಉತ್ಪಾದನೆ ಮಾಡಿದ್ರಾ

ಕುಮಾರಸ್ವಾಮಿ ಅವರನ್ನು ಕರೆಂಟ್ ಕಳ್ಳ ಎನ್ನುತ್ತಿರುವ ಕಾಂಗ್ರೆಸ್ ನಾಯಕರು, ತಮ್ಮ ಪಕ್ಕದಲ್ಲೇ ಕೂರುವ ಮಹಾನ್ ಕಳ್ಳನ ಕಡೆಯೂ ನೋಡಬೇಕು. ಲುಲು ಮಾಲ್ ಕೆಳಗಡೆ ಹೈಟೆನ್ಷನ್ ವೈರ್ ಅಂಡರ್‌ಗ್ರೌಂಡ್‌ನಲ್ಲಿ ತೆಗೆದುಕೊಂಡು ಹೋಗಿದ್ದಾರೆ. ಅದಕ್ಕೆ ಅವರು ಎಷ್ಟು ಹಣ ಕಟ್ಟಿದ್ದಾರೆ. ಸುಜಾತ ಟಾಕೀಸ್ ಮುಂದೆ ಇದ್ದ ಹೈಟೆನ್ಷನ್ ವೈರ್ ಹೇಗೆ ಒಳಕ್ಕೆ ಹೋಯಿತು, ಇದನ್ನು ಜನರಿಗಾಗಿ ಮಾಡಿದ್ದೀರಾ ಅಥವಾ ತಮ್ಮ ಸ್ವಾರ್ಥಕ್ಕಾಗಿ ಮಾಡಿದ್ದಾರಾ ತಿಳಿಸಲಿ.

ಮೇಕೆದಾಟು ಪಾದಯಾತ್ರೆ ಮಾಡಿದಾಗ ಎಲ್ಲಿಂದ ಇವರು ವಿದ್ಯುತ್ ತೆಗೆದುಕೊಂಡಿದ್ದರು. ಕನಕಪುರದಲ್ಲಿ ನಡೆದ ಕನಕೋತ್ಸವಕ್ಕೆ ಕರೆಂಟ್ ಯಾವ ಮೀಟರ್‌ನಿಂದ ಪಡೆದುಕೊಂಡಿದ್ದು, ಇದಕ್ಕೆಲ್ಲಾ ವಿಡಿಯೋ ಇದೆ.ನೀವು ಮೊದಲು ನನ್ನನ್ನು ಕಳ್ಳಾ ಎನ್ನುವುದನ್ನು ಬಿಡಿ ನೀವೇ ಮಹಾನ್ ಕಳ್ಳ ಎಂದರು.

ಮೈಸೂರು ಮಿತ್ರ

ಮಂಡ್ಯ, ಮೇಲುಕೋಟೆಯಲ್ಲಿ ಜೆಡಿಎಸ್ ಬರ ಅಧ್ಯಯನ



ಮಂಡ್ಯ, ನ.17– ಜಾತ್ಯಾತೀತ ಜನತಾ ದಳ ಜಿಲ್ಲಾ ಘಟಕದಿಂದ ಬರ ಅಧ್ಯಯನ ಮುಂದುವರೆದಿದ್ದು, ಶುಕ್ರವಾರ ಮಂಡ್ಯ ಹಾಗೂ ಮೇಲುಕೋಟೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಮಾಜಿ ಸಚಿವರಾದ ಸಿ.ಎಸ್.ಪುಟ್ಟರಾಜು ಹಾಗೂ ಡಿ.ಸಿ.ತಮ್ಮಣ್ಣ ನೇತೃತ್ವದ ತಂಡ ಅಧ್ಯಯನ ನಡೆಸಿತು.

ಮಂಡ್ಯ ಕ್ಷೇತ್ರದ ಬಸರಾಳು ಹೋಬಳಿ ಹನಗನಹಳ್ಳಿ ಹಾಗೂ ನಂದಹಳ್ಳಿ, ಮೇಲುಕೋಟೆ ಕ್ಷೇತ್ರದ ದುದ್ದ ಹೋಬಳಿ ಪುರದಕೊಪ್ಪಲು ಗ್ರಾಮಗಳಲ್ಲಿ ಬರ ಪರಿಸ್ಥಿತಿ ಅಧ್ಯಯನ ನಡೆಸಲಾಯಿತು.

ಹನಗನಹಳ್ಳಿಯ ರಾಮೇಗೌಡರ ಜಮೀನಿಗೆ ಭೇಟಿ ನೀಡಿದ ಮುಖಂಡರು ಟೊಮೊಟೋ ಬೆಳೆ, ನಂದಹಳ್ಳಿ ರೈತರ ಜಮೀನಿನಲ್ಲಿ ಬೆಳೆದಿರುವ ಜೋಳ, ಪುರದಕೊಪ್ಪಲು ಶಂಕರೇಗೌಡರ ಜಮೀನಿನಲ್ಲಿ ಬೆಳೆದಿರುವ ಬಾಳೆ ಬೆಳೆ ಹಾಳಾಗಿರುವುದನ್ನು ವೀಕ್ಷಿಸಿದರು.

ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಮಾತನಾಡಿ, ಬರಗಾಲದ ವಸ್ತುಸ್ಥಿತಿ ಅಧ್ಯಯನ ನಡೆಸಿ ಸರ್ಕಾರಕ್ಕೆ ವರದಿ ಸಲ್ಲಿಸಲಾಗುವುದು. ಜೆಡಿಎಸ್ ವರಿಷ್ಠ ಹೆಚ್.ಡಿ.ದೇವೇಗೌಡ ಮತ್ತು ಪಕ್ಷದ ರಾಜ್ಯಾಧ್ಯಕ್ಷ ಹೆಚ್.ಡಿ.ಕುಮಾರಸ್ವಾಮಿ ಬರ ಪರಿಸ್ಥಿತಿ ಬಗ್ಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದ ಗಮನ ಸೆಳೆದು ರೈತರ ಸಂಕಷ್ಟಕ್ಕೆ ಸ್ಪಂದಿಸಲಿದ್ದಾರೆ ಎಂದರು.

ಕೇಂದ್ರ ಪರಿಹಾರ ಕೊಟ್ಟಿಲ್ಲ ಎಂದು ಬೊಬ್ಬೆ ಹಾಕುತ್ತಿರುವ ರಾಜ್ಯ ಸರ್ಕಾರಕ್ಕೆ ಜವಾಬ್ದಾರಿ ಇದ್ದರೆ ಇಷ್ಟೊತ್ತಿಗೆ ರೈತರ ಸಂಕಷ್ಟಕ್ಕೆ ಸ್ಪಂದಿಸುತ್ತಿತ್ತು. ಬದಲಿಗೆ ಹವಾ ನಿಯಂತ್ರಿತ ಕೊಠಡಿಯಲ್ಲಿ ಸಿದ್ಧಪಡಿಸಿದ ವರದಿಯನ್ನು ತರಿಸಿಕೊಂಡಿದೆ. ಆದರೆ ವಾಸ್ತವ ಪರಿಸ್ಥಿತಿ ಬೇರೆ ಇದ್ದು, ರೈತರನ್ನು ಭೇಟಿಯಾದಾಗ ವಿದ್ಯುತ್ ಸಮಸ್ಯೆ, ಕೆರೆ ಕಟ್ಟೆಗಳಲ್ಲಿ ನೀರಿಲ್ಲದಿರುವುದು, ಬೆಳೆಗಳೆಲ್ಲ ಒಣಗಿರುವುದು, ಹೇಮಾವತಿ ನದಿ ಪಾತ್ರದಲ್ಲಿ ನೀರಿಲ್ಲದೆ ಬೆಳೆ ಹಾಕದಿರುವುದು ಕಂಡು ಬಂದಿದೆ. ಅಧಿಕಾರಿಗಳ ತಂಡ ರೈತರನ್ನು ಖುದ್ದು ಭೇಟಿಯಾಗಿಲ್ಲ, ಜಮೀನುಗಳಲ್ಲಿನ ಪರಿಸ್ಥಿತಿ ನೋಡಿಲ್ಲ, ಒಣಗಿರುವ ಬೆಳೆಗಳನ್ನು ಕಂಡಿಲ್ಲ ಆದರೂ ಸಹ ವರದಿ ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸಿದ್ದಾರೆ. ಬರ ಪರಿಸ್ಥಿತಿ ಬಗ್ಗೆ ಚಳಿಗಾಲದ ಅಧಿವೇಶನದಲ್ಲಿ ಪಕ್ಷದ ಶಾಸಕರು ಧ್ವನಿ ಎತ್ತಲಿದ್ದಾರೆ ಎಂದರು.

ಮಾಜಿ ಸಚಿವ ಡಿ.ಸಿ.ತಮ್ಮಣ್ಣ ಮಾತನಾಡಿ, ಬರ ಪರಿಹಾರ ನೀಡುವಲ್ಲಿ ರಾಜ್ಯ ಸರ್ಕಾರ ಮೊದಲು ತನ್ನ ಜವಾಬ್ದಾರಿ ನಿರ್ವಹಿಸಲಿ. ಕೇವಲ ಕೇಂದ್ರ ಸರ್ಕಾರದತ್ತ ಬೊಟ್ಟು ಮಾಡುವುದಲ್ಲ. ಮೊದಲು ತಮ್ಮ ಪಾಲಿನ ಬರ ಪರಿಹಾರ ಕೊಡಲಿ. ಆ ಮೂಲಕ ಜವಾಬ್ದಾರಿಯುತ ಸರ್ಕಾರ ಅನ್ನುವುದನ್ನು ಸಾಬೀತು ಮಾಡಲಿ ಎಂದರು.

ಮಾಜಿ ಶಾಸಕ ಕೆ.ಸುರೇಶ್‌ಗೌಡ ಮಾತನಾಡಿ, ರಾಜ್ಯ ಸರ್ಕಾರ ಆರ್ಥಿಕವಾಗಿ ದಿವಾಳಿಯಾಗಿದೆ. ಬರ ಪರಿಹಾರಕ್ಕೆ ದುಡ್ಡಿಲ್ಲ ಎಂದು ಕೇಂದ್ರ ಸರ್ಕಾರದ ಕಡೆ ಬೊಟ್ಟು ಮಾಡುತ್ತಿದೆ. ವಸ್ತು ಸ್ಥಿತಿ ಅಧ್ಯಯನ ಮಾಡಿ ನೈಜ ವರದಿ ಸಲ್ಲಿಕೆ ಮಾಡದೆ ಅವೈಜ್ಞಾನಿಕವಾಗಿ ವರದಿ ಸಿದ್ಧಪಡಿಸಿ ಕೇಂದ್ರಕ್ಕೆ ನೀಡಿದೆ. ನೈಜ ವರದಿ ನೀಡಿದ್ದರೆ ಇಷ್ಟೊತ್ತಿಗೆ ಕೇಂದ್ರದ ಅನುದಾನ ಬರುತ್ತಿತ್ತು. ಅಧಿಕಾರಿಗಳ ತಂಡ ರೈತರ ಜಮೀನುಗಳಿಗೆ ಹೋಗಿ ಸಮೀಕ್ಷೆ ಮಾಡಿದ್ದಾರಾ? ಶಾಸಕರು, ಸಚಿವರು ಖುದ್ದಾಗಿ ಭೇಟಿಯಾಗಿ ವರದಿ ಸಿದ್ಧಪಡಿಸಿದ್ದಾರೆಯೇ? ಸಚಿವ ಚಲುವರಾಯಸ್ವಾಮಿ ಎಲ್ಲಿಗೆ ಹೋಗಿ ಸಮೀಕ್ಷೆ ಮಾಡಿದ್ದಾರೆ. ಅವರ ಸ್ವಗ್ರಾಮದ ಪಕ್ಕದ ಊರಿಗೂ ಹೋಗಿಲ್ಲ ಎಂದು ಕಿಡಿಕಾರಿದರು.

ಶಾಸಕ ಹೆಚ್.ಟಿ.ಮಂಜು ಮಾತನಾಡಿ, ವಿದ್ಯುತ್ ಕಳ್ಳತನ ಮಾಡಿದ್ದಾರೆ ಎಂದು ಆರೋಪಿಸುವ ಕಾಂಗ್ರೆಸ್ ಪಕ್ಷಕ್ಕೆ ಕುಮಾರ ಸ್ವಾಮಿ ಬಗ್ಗೆ ಮಾತನಾಡುವ ನೈತಿಕತೆ ಇಲ್ಲ. ವಿಕೃತ ಮನಸ್ಸಿನ ಕಾಂಗ್ರೆಸ್ಸಿಗರು ರಾಜಕೀಯದ ತೆವಲಿಗಾಗಿ ಮಾತನಾಡುತ್ತಿದ್ದು, ಇವರ ಕಳ್ಳತನ ಗೊತ್ತಿಲ್ಲವೇ, ಇಡೀ ಸರ್ಕಾರವೇ ಹಣದ ದಂಧೆಯಲ್ಲಿ ನಿರತವಾಗಿದೆ ಎಂದರು.

ಈ ವೇಳೆ ವಿಧಾನ ಪರಿಷತ್ ಮಾಜಿ ಸದಸ್ಯ ಕೆ.ಟಿ.ಶ್ರೀಕಂಠೇಗೌಡ, ಮನ್‌ಮುಲ್ ಮಾಜಿ ಅಧ್ಯಕ್ಷ ಬಿ.ಆರ್.ರಾಮಚಂದ್ರ, ಉಪಾಧ್ಯಕ್ಷ ಎಂ.ಎಸ್.ರಘುನಂದನ್, ಜೆಡಿಎಸ್ ಜಿಲ್ಲಾಧ್ಯಕ್ಷ ಡಿ.ರಮೇಶ್, ಯುವ ಘಟಕದ ಜಿಲ್ಲಾಧ್ಯಕ್ಷ ಕಂಸಾಗರ ರವಿ, ಜೆಡಿಎಸ್ ಪರಿಶಿಷ್ಟ ಜಾತಿ ವಿಭಾಗದ ಜಿಲ್ಲಾಧ್ಯಕ್ಷ ಜಯರಾಮ್, ಮುಖಂಡರಾದ ಜಯರಾಮ್, ಪುಟ್ಟಸ್ವಾಮಿ, ಆನಂದ್, ಶಿವಶಂಕರ್, ಅಶ್ವಥ್‌ಕುಮಾರೇಗೌಡ ಮತ್ತಿತರಿದ್ದರು.

ಸರ್ಕಾರಕ್ಕೆ ರೈತರ ಸಮಸ್ಯೆ ತಿಳಿಸಲು ಬರ ಅಧ್ಯಯನ

ಪಾಂಡವಪುರ, ನ.17– ರೈತರ ಸಮಸ್ಯೆಯನ್ನು ಸರ್ಕಾರಕ್ಕೆ ಮನದಟ್ಟು ಮಾಡಿಕೊಡುವ ಉದ್ದೇಶದಿಂದ ಜೆಡಿಎಸ್ ಪಕ್ಷದಿಂದ ಬರ ಅಧ್ಯಯನ ನಡೆಸಲಾಗುತ್ತಿದೆ ಎಂದು ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ತಿಳಿಸಿದರು.

ತಾಲೂಕಿನ ಗಿಡದ ಶಂಭೂವಿನಹಳ್ಳಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯ ಜೆಡಿಎಸ್ ಶಾಸಕರು, ಮಾಜಿ ಶಾಸಕರು, ಜಿಲ್ಲಾಧ್ಯಕ್ಷರು ಈಗಾಗಲೇ ಜಿಲ್ಲೆಯ ವಿವಿಧೆಡೆ ಬರ ಅಧ್ಯಯನ ನಡೆಸಿ ಮಾಹಿತಿ ಸಂಗ್ರಹಿಸಿದ್ದೇವೆ. ಈ ವರದಿಯನ್ನು ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ, ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರಿಗೆ ಹಾಗೂ ಜಿಲ್ಲಾಧಿಕಾರಿಗಳಿಗೆ ಸಲ್ಲಿಸಲಾಗುವುದು. ಡಿ.4ರಿಂದ ಆರಂಭಗೊಳ್ಳುವ ವಿಧಾನಸಭೆ ಅಧಿವೇಶನದಲ್ಲಿ ನಮ್ಮ ನಾಯಕರಾದ ಕುಮಾರಸ್ವಾಮಿ ಮತ್ತು ಪಕ್ಷದ ಎಲ್ಲಾ ಶಾಸಕರು ಸರ್ಕಾರದ ಕಿವಿ ಹಿಂಡುವ ಕೆಲಸ ಮಾಡುತ್ತೇವೆ, ರೈತರು ಆತಂಕಕ್ಕೆ ಒಳಗಾಗುವುದು ಬೇಡ ಎಂದರು.

ಜಿಲ್ಲೆಯಲ್ಲಿ ಬರ ಎದುರಾಗಿದೆ. ಮಳೆ, ನೀರಿಲ್ಲದೆ ರೈತರ ಬೆಳೆಗಳು ಒಣಗಿ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಆಳುವ ಸರ್ಕಾರಗಳು ಮಾತ್ರ ರೈತರ ಸಂಕಷ್ಟಗಳಿಗೆ ಸ್ಪಂದಿಸದೆ ಕಣ್ಣೊರೆಸುವ ನಾಟಕ ಆಡುತ್ತಿವೆ ಎಂದು ಹರಿಹಾಯ್ದರು. ಇದೇ ವೇಳೆ ಮಾಜಿ ಸಚಿವ ಡಿ.ಸಿ.ತಮ್ಮಣ್ಣ ಹಾಗೂ ಮಾಜಿ ಶಾಸಕ ಸುರೇಶ್‌ಗೌಡ ಮಾತನಾಡಿದರು.

ನ.29, ಜಿಲ್ಲಾ ಮಟ್ಟದ ಯುವ ಜನೋತ್ಸವ

ಮಂಡ್ಯ, ನ.17– ಜಿಲ್ಲಾಡಳಿತ, ಜಿಪಂ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೆಹರು ಯುವ ಕೇಂದ್ರ ಹಾಗೂ ಎನ್‌ಎಸ್‌ಎಸ್ ಘಟಕದ ಸಂಯುಕ್ತಾಶ್ರಯದಲ್ಲಿ ಜಿಲ್ಲಾ ಮಟ್ಟದ ಯುವ ಜನೋತ್ಸವದ ಸ್ಪರ್ಧೆಗಳನ್ನು ನ.29ರಂದು ಬೆಳಗ್ಗೆ 10 ಗಂಟೆಗೆ ಶ್ರೀನಾಲ್ವಡಿ ಕೃಷ್ಣರಾಜ ಒಡೆಯರ್ ಕಲಾಮಂದಿರದಲ್ಲಿ ಏರ್ಪಡಿಸಲಾಗಿದೆ.

ಆಸಕ್ತ 15 ರಿಂದ 29 ವರ್ಷ ವಯೋಮಿತಿಯೊಳಗಿನ ಯುವಕ–ಯುವತಿಯರು, ಯುವಕ ಯುವತಿ ಮಂಡಳಿಗಳು, ಸಂಘ–ಸಂಸ್ಥೆಗಳು ಸದರಿ ಕಾರ್ಯಕ್ರಮದಲ್ಲಿ ಭಾಗವಹಿಸಬಹುದಾಗಿದೆ. ಆಸಕ್ತರು ನ.27 ಮತ್ತು 28ರಂದು ಯುವ ಸಬಲೀಕರಣ ಮತ್ತು ಕ್ರೀಡೆ ಇಲಾಖೆ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ತಮ್ಮ ಹೆಸರು ನೋಂದಾಯಿಸಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗೆ ದೂ: 08232–224725 ಅನ್ನು ಸಂಪರ್ಕಿಸಿ.



ನಾಗಮಂಗಲ ತಾಲೂಕಿನ ಕಾಂತಪುರ ಗ್ರಾಮದ ಶ್ರೀಬೋರೆದೇವರ ದೇವಸ್ಥಾನ ಜೀರ್ಣೋದ್ಧಾರ ಸಮಿತಿ ಅಧ್ಯಕ್ಷರಿಗೆ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ 5 ಲಕ್ಷ ರೂಗಳ ಸಹಾಯಧನದ ಚೆಕ್ ಅನ್ನು ತಾಲೂಕು ಯೋಜನಾಧಿಕಾರಿ ಕೆ.ದಿವಾಕರ್ ವಿತರಿಸಿದರು. ಈ ವೇಳೆ ಮೇಲ್ವಿಚಾರಕ ಶರತ್, ಸೇವಾ ಪ್ರತಿನಿಧಿ ರಾಣಿ, ದೇವಸ್ಥಾನ ಟ್ರಸ್ಟ್ ಕಮಿಟಿ ಅಧ್ಯಕ್ಷ ರಾಮದಾಸ್, ಖಜಾಂಚಿ ತಮ್ಮಯ್ಯ ಕಾರ್ಯದರ್ಶಿ ಬಿ.ಎನ್.ರಾಮೇಗೌಡ, ಬೋರೇಗೌಡ ಇನ್ನಿತರರಿದ್ದರು.

ಅರ್ಜಿ ಆಹ್ವಾನ

ಮಂಡ್ಯ, ನ.17– ಪರಿಶಿಷ್ಟ ಪಂಗಡದ ರೈತರಿಗೆ ಪಾಲಿ/ನೆರಳು ಮನೆ ನಿರ್ಮಾಣ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಸಂಬಂಧಪಟ್ಟ ತಾಲೂಕಿನ ಸಹಾಯಕ ನಿರ್ದೇಶಕರ ಕಚೇರಿಯಿಂದ ಪಡೆದು ಭರ್ತಿ ಮಾಡಿ ಸೂಕ್ತ ದಾಖಲಾತಿಗಳೊಂದಿಗೆ ನ.24ರೊಳಗಾಗಿ ಸಲ್ಲಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ. ಮಾಹಿತಿಗೆ ದೂ: 08232–220772 ಅನ್ನು ಸಂಪರ್ಕಿಸಬಹುದಾಗಿದೆ.

ಇಂದು ಜನತಾ ದರ್ಶನ

ಮಂಡ್ಯ, ನ.17– ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಅಧ್ಯಕ್ಷತೆ ಯಲ್ಲಿ ನ.18 ರಂದು ಮದ್ದೂರು ತಾಲೂಕಿನ ಕೊಪ್ಪದಲ್ಲಿ ಜನತಾ ದರ್ಶನ ಹಾಗೂ ಪೌತಿ ಖಾತಾ ಆಂದೋಲನ ಹಮ್ಮಿಕೊಳ್ಳ ಲಾಗಿದೆ. ಸಾರ್ವಜನಿಕರು ಕಾರ್ಯಕ್ರಮದ ಸದುಪಯೋಗ ಪಡಿಸಿಕೊಳ್ಳುವಂತೆ ಮಂಡ್ಯ ಉಪ ವಿಭಾಗಾಧಿಕಾರಿ ಎಂ.ಶಿವಮೂರ್ತಿ ಪ್ರಕಟಣೆಯಲ್ಲಿ ಕೋರಿದ್ದಾರೆ.

ನಾಳೆ ಕೆ.ಆರ್.ಪೇಟೆಗೆ ಬಿ.ವೈ.ವಿಜಯೇಂದ್ರ

ಕೆ.ಆರ್.ಪೇಟೆ, ನ.17– ಬಿಜೆಪಿ ರಾಜ್ಯಾಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ಬಳಿಕ ಇದೇ ಮೊದಲ ಬಾರಿಗೆ ನ.19ರಂದು ಕೆ.ಆರ್.ಪೇಟೆಗೆ ಆಗಮಿಸುತ್ತಿರುವ ಬಿ.ವೈ.ವಿಜಯೇಂದ್ರ ಅವರನ್ನು ತಾಲೂಕು ಬಿಜೆಪಿ ವತಿಯಿಂದ ಅದ್ಧೂರಿಯಾಗಿ ಸ್ವಾಗತಿಸಲಾಗುವುದು ಎಂದು ತಾಲೂಕು ಬಿಜೆಪಿ ಅಧ್ಯಕ್ಷ ಪರಮೇಶ್ ಅರವಿಂದ್ ತಿಳಿಸಿದರು.



ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತವರೂರಿಗೆ ಮೊದಲ ಬಾರಿಗೆ ಆಗಮಿಸುತ್ತಿರುವ ವಿಜಯೇಂದ್ರ ಅವರನ್ನು ಅದ್ಧೂರಿಯಾಗಿ ಬರ ಮಾಡಿಕೊಳ್ಳಲು ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ. ತಾಲೂಕಿನ ಬಿಜೆಪಿ ಮುಖಂಡರು, ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವಂತೆ ಅವರು ಮನವಿ ಮಾಡಿದರು. ಇದೇ ವೇಳೆ ವಿಜಯೇಂದ್ರ ತಮ್ಮ ಮನೆ ದೇವರಾದ ಬೂಕನಕೆರೆಯಲ್ಲಿರುವ ಗೋಗಾಲಮ್ಮ ದೇವಾಲಯಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸುವರು. ಬಳಿಕ ಅವರು ಗವಿಮಠದ ಸ್ವತಂತ್ರ ಸಿದ್ದಲಿಂಗೇಶ್ವರ ಗದ್ದುಗೆಗೆ ವಿಶೇಷ ಪೂಜೆ ಸಲ್ಲಿಸುವರು ಎಂದರು.

ತಾಲೂಕು ಬಿಜೆಪಿ ಪ್ರಧಾನ ಕಾರ್ಯದರ್ಶಿ ಪ್ರಕಾಶ್ ಮಾತನಾಡಿ, ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ಸುಪುತ್ರ, ಯುವ ನಾಯಕ, ಶಾಸಕ ಬಿ.ವೈ. ವಿಜಯೇಂದ್ರ ಅವರು ಕ್ಷೇತ್ರಕ್ಕೆ ಆಗಮಿಸುತ್ತಿರುವುದು ಸಂತಸದ ವಿಚಾರ. ಹೀಗಾಗಿ ಅವರನ್ನು ಅದ್ಧೂರಿಯಾಗಿ ಬರಮಾಡಿಕೊಳ್ಳೋಣ ಎಂದರು.

ಈ ವೇಳೆ ತಾಲೂಕು ಭಾಜಪ ಉಪಾಧ್ಯಕ್ಷ ಪುಟ್ಟಣ್ಣ, ಜಿಲ್ಲಾ ಬಿಜೆಪಿ ಕಾರ್ಯಕಾರಿಣಿ ಸದಸ್ಯ ಭರತ್, ಎಸ್ಸಿ ಎಸ್ಟಿ ಬಿಜೆಪಿ ಅಧ್ಯಕ್ಷ ರವಿ ಶಿವಕುಮಾರ್, ಯಡಿಯೂರಪ್ಪ ಅಭಿಮಾನಿಗಳ ಬಳಗದ ಅಧ್ಯಕ್ಷ ಮಧುಸೂದನ್, ಬಿಜೆಪಿ ಕಾರ್ಯದರ್ಶಿ ಶ್ರೀನಿವಾಸ್, ಪಾರ್ಥ, ಜೇತುಸಿಂಗ್, ತಾಲೂಕು ಓಬಿಸಿ ಘಟಕದ ಅಧ್ಯಕ್ಷ ನಾಗಣ್ಣ, ಪುರಸಭಾ ಮಾಜಿ ಅಧ್ಯಕ್ಷ ನಟರಾಜು, ಉಪಾಧ್ಯಕ್ಷ ಕುಮಾರ್, ಮಾಜಿ ಪ್ರಧಾನ ಕಾರ್ಯದರ್ಶಿ ಯತೀಶ್, ಗ್ರಾಪಂ ಮಾಜಿ ಅಧ್ಯಕ್ಷ ಅಪ್ಪಾಜಿ, ಜಿಲ್ಲಾ ರೈತ ಮೋರ್ಚಾ ಉಪಾಧ್ಯಕ್ಷ ಭರತ್, ಮಹದೇವ್, ಸೋಮಶೇಖರ್, ಉಪಾಧ್ಯಕ್ಷ ಪರಮೇಶ್, ಕೃಷ್ಣಮೂರ್ತಿ, ಓಬಿಸಿ ಪ್ರಧಾನ ಕಾರ್ಯದರ್ಶಿ ವಿಜಯಕುಮಾರ್, ಮುಖಂಡರಾದ ಅಪ್ಪಾಜಪ್ಪ, ಸೋಮಪ್ಪ, ಚಿಕ್ಕಜವರಪ್ಪ, ಶಿವಕುಮಾರ್, ಯುವ ಮೋರ್ಚಾ ಮಹೇಶ್, ರಾಜಣ್ಣ ಸೇರಿದಂತೆ ಇತರರಿದ್ದರು.

ಸರ್ಕಾರ ಶಿಕ್ಷಕರ ಸಮಸ್ಯೆ ಬಗೆಹರಿಸಲು ಮುಂದಾಗಬೇಕು

ವಿಧಾನ ಪರಿಷತ್ ಸದಸ್ಯ ಮರಿತಿಬ್ಬೇಗೌಡ ಒತ್ತಾಯ



ಮಳವಳ್ಳಿ, ನ.17– ಸದನದಲ್ಲಿ ಶಿಕ್ಷಕರ ಸಮಸ್ಯೆ ಬಗ್ಗೆ ಚರ್ಚೆ ನಡೆಸಿ ಸಮಸ್ಯೆ ಬಗೆಹರಿಸಲು ಶಾಸಕರು ಮುಂದಾಗಬೇಕು. ಶಿಕ್ಷಕರ ಸಮಸ್ಯೆಗಳು ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಸರ್ಕಾರ ಶಿಕ್ಷಕರ ಸಮಸ್ಯೆ ಬಗೆಹರಿಸಬೇಕೆಂದು ವಿಧಾನ ಪರಿಷತ್ ಸದಸ್ಯ ಮರಿತಿಬ್ಬೇಗೌಡ ಒತ್ತಾಯಿಸಿದರು.

ಶುಕ್ರವಾರ ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿ, ತಾಲೂಕು ಆಡಳಿತ ಹಾಗೂ ತಾಲೂಕಿನ ಶಿಕ್ಷಣ ಇಲಾಖೆ ಎಲ್ಲಾ ಸಂಘ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ನಡೆದ 'ಗುಣಾತ್ಮಕ ಶಿಕ್ಷಣದ ಕಡೆ ನಮ್ಮೆಲ್ಲರ ನಡೆ' ವಿಷಯದ ಕುರಿತು ಶಿಕ್ಷಕರೊಂದಿಗೆ ಸಂವಾದ ಹಾಗೂ ನಿವೃತ್ತ ಶಿಕ್ಷಕರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಶಿಕ್ಷಕ ವರ್ಗವನ್ನು ಚುನಾವಣೆ ಸಂದರ್ಭ ಹಾಗೂ ಇನ್ನಿತರೆ ಸರ್ಕಾರಿ ಕಾರ್ಯಕ್ರಮಗಳಿಗೆ ಬಳಸಿಕೊಳ್ಳಲಾಗುತ್ತದೆ. ಅದೇ ರೀತಿ ಅವರಿಗೆ ಎಲ್ಲಾ ರೀತಿಯ ಸೌಲಭ್ಯ ಹಾಗೂ ವೇತನ ಹೆಚ್ಚಳ ಮಾಡಬೇಕೆಂದು ಒತ್ತಾಯಿಸಿದರು.

ಶಾಸಕ ಪಿ.ಎಂ.ನರೇಂದ್ರಸ್ವಾಮಿ ಮಾತನಾಡಿ, ತಾಲೂಕಿನ ಸರ್ಕಾರಿ ಶಾಲೆಗಳನ್ನು ಅಭಿವೃದ್ಧಿ ಪಡಿಸುವ ನಿಟ್ಟಿನಲ್ಲಿ ಸರ್ಕಾರದ ಜೊತೆಗೆ ಸಾರ್ವಜನಿಕ ಸಹಯೋಗದೊಂದಿಗೆ ಶ್ರಮಿಸಿ ಗ್ರಾಮೀಣ ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣ ಸಿಗುವಂತೆ ಕ್ರಮ ಕೈಗೊಳ್ಳಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಬಿಇಓ ಚಂದ್ರಪಾಟೀಲ್, ತಾಪಂ ಇಓ ಮಮತಾ, ಪುರಸಭೆ ಸದಸ್ಯ ಶಿವಸ್ವಾಮಿ, ಕ್ಷೇತ್ರ ಸಮನ್ವಯಾಧಿಕಾರಿ ಶ್ರೀನಿವಾಸ್, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಮಹದೇವು, ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಮಲ್ಲಿಕಾರ್ಜುನಯ್ಯ, ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ನಾಗೇಶ್, ಪ್ರೌಢಶಾಲಾ ಮುಖ್ಯ ಶಿಕ್ಷಕರ ಸಂಘದ ಅಧ್ಯಕ್ಷ ಗುರುಸ್ವಾಮಿ, ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಅಧ್ಯಕ್ಷ ಪುಟ್ಟಸ್ವಾಮಿಗೌಡ ಸೇರಿದಂತೆ ಹಲವರಿದ್ದರು.

ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ: ಆಕ್ಷೇಪಣೆ ಆಹ್ವಾನ

ಮೈಸೂರು, ನ.17– ಟಿ.ನರಸೀಪುರ ತಾಲೂಕಿನಲ್ಲಿ ಶಿಶು ಅಭಿವೃದ್ಧಿ ಯೋಜನೆಯಲ್ಲಿ ಖಾಲಿ ಇದ್ದ 6 ಅಂಗನವಾಡಿ ಕಾರ್ಯಕರ್ತೆ, 15 ಅಂಗನವಾಡಿ ಸಹಾಯಕಿಯರು ಹಾಗೂ ನಂಜನಗೂಡು ತಾಲೂಕಿನಲ್ಲಿ 12 ಅಂಗನವಾಡಿ ಕಾರ್ಯಕರ್ತರು, 12 ಅಂಗನವಾಡಿ ಸಹಾಯಕಿಯರ ಹುದ್ದೆಗೆ ನಿಯಮಾನುಸಾರ ಆಯ್ಕೆಯಾದ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದೆ.

ತಾತ್ಕಾಲಿಕ ಆಯ್ಕೆಗೆ ಸಂಬಂಧಿಸಿದಂತೆ ಆಕ್ಷೇಪಣೆಗಳಿದ್ದಲ್ಲಿ ನ.22ರ ಸಂಜೆ 5.30 ರೊಳಗೆ ಕಚೇರಿಗೆ ಸಲ್ಲಿಸಬಹುದಾಗಿದೆ. ನಂತರ ಬರುವ ಯಾವುದೇ ಆಕ್ಷೇಪಣೆಗಳನ್ನು ಸ್ವೀಕರಿಸಲಾಗುವುದಿಲ್ಲ ಎಂದು ತಿ.ನರಸೀಪುರ ಹಾಗೂ ನಂಜನಗೂಡು ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಶ್ರೀ ಕಡೇ ಮಾಲಮ್ಮ ದೇವಸ್ಥಾನ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಶ್ರೀ ಕಡೇ ಮಾಲಮ್ಮ ದೇವಸ್ಥಾನ ಸೇವಾ ಸಮಿತಿ ಟ್ರಸ್ಟ್ ವತಿಯಿಂದ ಸನ್ಮಾನಿಸಲಾಯಿತು. ಈ ವೇಳೆ ಟ್ರಸ್ಟ್ ಅಧ್ಯಕ್ಷ ಪಿ. ಬಸವರಾಜು, ಗೌರವಾಧ್ಯಕ್ಷ ಸಣ್ಣೇಗೌಡ, ಕೆಎಸ್‌ಆರ್‌ಟಿಸಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಜವರೇಗೌಡ, ತಾಪಂ ಮಾಜಿ ಅಧ್ಯಕ್ಷ ತಮ್ಮಣ್ಣೇಗೌಡ, ಡಾ. ಪಿ.ಮಾಲೇಗೌಡ, ಗ್ರಾಪಂ ಮಾಜಿ ಅಧ್ಯಕ್ಷರುಗಳಾದ ದೊಡ್ಡಹುಂಡಿ ಸೋಮಣ್ಣ, ಮೊತ್ತ ಶಿವಮಲ್ಲು, ಖಜಾಂಚಿ ಸಿ. ಚಿಕ್ಕಣ್ಣ, ಶಂಕರ್, ರಾಮಲಿಂಗು, ಪಿ. ಬಸವರಾಜು, ರವಿ, ಶಿವಲಿಂಗು ಇನ್ನಿತರರಿದ್ದರು.

ಒಂದನೇ ಪುಟದಿಂದ

ಆರ್.ಅಶೋಕ್ ವಿಧಾನಸಭೆ ವಿಪಕ್ಷ ನಾಯಕ

ಹಿರಿಯ ನಾಯಕ ಅಶೋಕ್ ಅವರನ್ನು ಶಾಸಕಾಂಗ ಪಕ್ಷದ ನಾಯಕರನ್ನಾಗಿ ಆಯ್ಕೆ ಮಾಡುವ ಕುರಿತು ತಮ್ಮ ಅಭಿಪ್ರಾಯ–ಸಲಹೆ ನೀಡಿದರು. ನಂತರ ಶಾಸಕಾಂಗ ಸಭೆಯಲ್ಲಿ ದುಷ್ಯಂತ್ ಕುಮಾರ್ ಗೌತಮ್, ವರಿಷ್ಠರ ಸೂಚನೆಯಂತೆ ನಾಯಕನ ಆಯ್ಕೆಗೆ ಅಭಿಪ್ರಾಯ ಪಡೆದಿದ್ದೇವೆ. ಮಾಜಿ ಉಪಮುಖ್ಯಮಂತ್ರಿ ಅಶೋಕ್ ಅವರನ್ನು ಪ್ರತಿಪಕ್ಷದ ನಾಯಕರಾಗಿ ಆಯ್ಕೆ ಮಾಡಲು ಒಮ್ಮತಾಭಿಪ್ರಾಯ ವ್ಯಕ್ತವಾಗಿದೆ ಎಂದು ತಿಳಿಸಿದರು.

ಕಳೆದ ಆರು ತಿಂಗಳಿಂದ ಬಿಜೆಪಿ ಶಾಸಕಾಂಗ ಪಕ್ಷದ ನಾಯಕನ ಆಯ್ಕೆ ಮಾಡದೆ, ಟೀಕೆಗೆ ಒಳಗಾಗಿದ್ದ ಪಕ್ಷದ ವರಿಷ್ಠರು, ಇದೀಗ ರಾಜ್ಯಾಧ್ಯಕ್ಷರನ್ನಾಗಿ ಬಿ.ವೈ.ವಿಜಯೇಂದ್ರ ಅವರನ್ನು ನೇಮಕ ಮಾಡಿದ ಒಂದು ವಾರದಲ್ಲೇ ಬಿಜೆಎಲ್‌ಪಿ ನಾಯಕನನ್ನೂ ಆಯ್ಕೆ ಮಾಡಿದೆ. ಅಶೋಕ್ ನೇಮಕದಿಂದ ಯಡಿಯೂರಪ್ಪ ಪಕ್ಷದಲ್ಲಿ ಮತ್ತೆ ಮೇಲುಗೈ ಸಾಧಿಸಿದ್ದಾರೆ. ಸದಾ ಅವರ ಬಣದಲ್ಲೇ ಗುರುತಿಸಿಕೊಂಡಿದ್ದ ಅಶೋಕ್‌ಗೆ ರಾಷ್ಟ್ರಮಟ್ಟದಲ್ಲಿ ಕೆಲವರ ವಿರೋಧ ಇದ್ದರೂ ಜೆಡಿಎಸ್ ಜೊತೆಗಿನ ಮೈತ್ರಿಗೆ ಬಲ ಕೊಡಲು ಅಂತಿಮವಾಗಿ ಇವರನ್ನೇ ಆಯ್ಕೆ ಮಾಡಲಾಗಿದೆ ಎನ್ನಲಾಗಿದೆ. ಎಚ್.ಡಿ.ಕುಮಾರಸ್ವಾಮಿ, ಬಿ.ಎಸ್. ಯಡಿಯೂರಪ್ಪ, ಸದಾನಂದ ಗೌಡ, ಜಗದೀಶ್ ಶೆಟ್ಟರ್ ಹಾಗೂ ಬಸವರಾಜ ಬೊಮ್ಮಾಯಿ ಅವರ ಸಂಪುಟದಲ್ಲಿ ಉಪ ಮುಖ್ಯಮಂತ್ರಿಯಾಗಿ, ಮಂತ್ರಿಯಾಗಿ ಅಶೋಕ್ ಸೇವೆ ಸಲ್ಲಿಸಿದ್ದಾರೆ. ವಿಧಾನಸಭಾ ಕ್ಷೇತ್ರಗಳ ಪುನರ್ ವಿಂಗಡಣೆಗೂ ಮುನ್ನ ಉತ್ತರಹಳ್ಳಿ ಕ್ಷೇತ್ರದಿಂದಲೂ ನಂತರ ಪದ್ಮನಾಭನಗರ ಕ್ಷೇತ್ರದಿಂದ ಅಶೋಕ್ ಅವರು ಸತತವಾಗಿ ಏಳು ಬಾರಿ ವಿಧಾನಸಭೆ ಪ್ರವೇಶಿಸಿದ್ದಾರೆ.

ಕಳೆದ ವಿಧಾನಸಭಾ ಚುನಾವಣೆಯಲ್ಲಿ ಕೆಪಿಸಿಸಿ ಅಧ್ಯಕ್ಷರಾಗಿದ್ದ ಡಿ.ಕೆ.ಶಿವಕುಮಾರ್ ವಿರುದ್ಧ ಕನಕಪುರ ಹಾಗೂ ಪದ್ಮನಾಭನಗರ ದಿಂದ ಕಣಕ್ಕಿಳಿದು ಶಿವಕುಮಾರ್ ವಿರುದ್ಧ ಸೋತು, ತಮ್ಮ ಹಳೆಯ ಕ್ಷೇತ್ರವನ್ನು ಉಳಿಸಿಕೊಂಡಿದ್ದರು. ಬಸವರಾಜ ಬೊಮ್ಮಾಯಿ ಅವರನ್ನೇ ಈ ಸ್ಥಾನಕ್ಕೆ ತರಬೇಕೆಂಬ ಚರ್ಚೆ ನಡೆದಿತ್ತು, ವಿಜಯೇಂದ್ರ ರಾಜ್ಯಾಧ್ಯಕ್ಷರಾದ್ದರಿಂದ ಒಂದೇ ಸಮುದಾಯಕ್ಕೆ ಎರಡು ಸ್ಥಾನಗಳನ್ನು ನೀಡಬಾರದೆಂದು ಒಕ್ಕಲಿಗ ಸಮುದಾಯಕ್ಕೆ ಸೇರಿದ ಅಶೋಕ್ ಅವರಿಗೆ ವರಿಷ್ಠರು ಅವಕಾಶ ಮಾಡಿಕೊಟ್ಟಿದ್ದಾರೆ. ವಿಧಾನ ಪರಿಷತ್ತಿನ ಪ್ರತಿಪಕ್ಷದ ನಾಯಕರಾಗಿರುವ ಕೋಟ ಶ್ರೀನಿವಾಸ ಪೂಜಾರಿ ಹಿಂದುಳಿದ ವರ್ಗದವರಾಗಿದ್ದು, ಪಕ್ಷ ಮೂರೂ ಸಮುದಾಯಕ್ಕೆ ಪ್ರಮುಖ ಸ್ಥಾನಗಳನ್ನು ನೀಡಿದಂತಾಗಿದೆ.

ಜೋಡೆತ್ತುಗಳಾಗಿ ಕೆಲಸ ಮಾಡ್ತೇವೆ...

ವಿರುದ್ಧ ಹೋರಾಟ ಮಾಡುತ್ತೇವೆ. ಸಮರ್ಥ ವಿರೋಧ ಪಕ್ಷವಾಗಿ ನಾವು ಕೆಲಸ ಮಾಡುತ್ತೇವೆ. ಬಿಜೆಪಿಯ 66, ಜೆಡಿಎಸ್ 19 ಶಾಸಕರು ಸೇರಿ ಹೋರಾಟ ಮಾಡುತ್ತೇವೆ. ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಕಿತ್ತೊಗೆಯುವುದೇ ನಮ್ಮ ಆದ್ಯತೆ ಎಂದು ಹೇಳಿದರು. ನನ್ನನ್ನು ವಿಪಕ್ಷ ನಾಯಕನಾಗಿ ಆಯ್ಕೆ ಮಾಡಿದ ಪ್ರಧಾನಿ ನರೇಂದ್ರ ಮೋದಿ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾಗೆ ಧನ್ಯವಾದ ಹೇಳುತ್ತೇನೆ. ರಾಜ್ಯಾಧ್ಯಕ್ಷ ವಿಜಯೇಂದ್ರ, ನಮ್ಮ ಶಾಸಕರಿಗೂ ಧನ್ಯವಾದ ಹೇಳುತ್ತೇನೆ. ತುರ್ತುಪರಿಸ್ಥಿತಿ ವೇಳೆ ಹೋರಾಟ ಮಾಡಿ 1 ತಿಂಗಳು ಜೈಲಿಗೆ ಹೋಗಿದ್ದೆ. 20 ವರ್ಷಗಳ ಕಾಲ ಪಕ್ಷ ಸಂಘಟನೆಯಲ್ಲಿ ಕೆಲಸ ಮಾಡಿದ್ದೇನೆ. ಎಲ್ಲವನ್ನೂ ಪರಿಗಣನೆ ಮಾಡಿ ನನಗೆ ವಿಪಕ್ಷ ನಾಯಕ ಸ್ಥಾನ ನೀಡಿದ್ದಾರೆ. ಉತ್ತರಹಳ್ಳಿ, ಪದ್ಮನಾಭನಗರ ಕ್ಷೇತ್ರದ ಜನ 7 ಬಾರಿ ಆಯ್ಕೆ ಮಾಡಿದ್ದಾರೆ. ಒಂದೇ ಪಕ್ಷ, ಒಂದೇ ಚಿಹ್ನೆ, ಒಂದೇ ಸಿದ್ಧಾಂತದಡಿ 7 ಬಾರಿ ಗೆದ್ದಿದ್ದೇನೆ. ಆರಂಭದಿಂದಲೂ ಸಂಘ ಪರಿವಾರದಲ್ಲಿ ಕೆಲಸ ಮಾಡಿದ್ದೇವೆ ಎಂದು ಹೇಳಿದರು.

ಭ್ರಷ್ಟಾಚಾರ ಪ್ರಕರಣಗಳ ಬಗ್ಗೆಯೂ ತನಿಖೆ

ಈ ಸಂಬಂಧ ನಾಲ್ಕು ಸಮಿತಿಯನ್ನು ಕೂಡ ರಚಿಸಲಾಗಿದೆ ಎಂದು ತಿಳಿಸಿದರು. ಅಗತ್ಯ ಬಿದ್ದರೆ ಹೆಚ್.ಡಿ.ಕುಮಾರಸ್ವಾಮಿ ಅವರ ಭ್ರಷ್ಟಾಚಾರ ಪ್ರಕರಣಗಳ ಬಗ್ಗೆಯೂ ತನಿಖೆ ನಡೆಸಲು ನಾವು ಹಿಂದೆ ಬೀಳುವುದಿಲ್ಲ. ಕುಮಾರಸ್ವಾಮಿ ನಮ್ಮ ಸರ್ಕಾರದ ಭ್ರಷ್ಟಾಚಾರದ ಬಗ್ಗೆ ಆರೋಪ ಮಾಡುತ್ತಾರೆ. ಅವರು ಆರೋಪ ಮಾಡಿ ರುವುದನ್ನೆಲ್ಲಾ ತನಿಖೆ ಮಾಡಲು ಸಾಧ್ಯವೇ ಎಂದು ಪ್ರಶ್ನಿಸಿದ ಸಿದ್ದರಾಮಯ್ಯ, ಆರೋಪ ಮಾಡಿದವರು ಪುರಾವೆ, ದಾಖಲೆ ಕೊಡಬೇಕು. ಸೂಕ್ತ ದಾಖಲೆ ನೀಡಿದರೆ ಈಗಲೂ ತನಿಖೆ ಮಾಡುತ್ತೇವೆ ಎಂದು ಸವಾಲು ಹಾಕಿದರು.

ನನ್ನ ಮಗನ ವಿಚಾರದಲ್ಲಿ ನಿನ್ನೆ ಸುಮ್ಮನೆ ಸುಳ್ಳು ಸುದ್ದಿ ಹಬ್ಬಿಸಿದರು. ನನ್ನ ಮಗ ನನಗಾಗಿ ವರುಣಾ ಕ್ಷೇತ್ರ ಬಿಟ್ಟುಕೊಟ್ಟಿದ್ದಾನೆ. ಈಗ ನನ್ನ ಪರವಾಗಿ ಕ್ಷೇತ್ರದಲ್ಲಿ ಜನರ ಕೆಲಸ ಮಾಡುತ್ತಿದ್ದಾನೆ. ಹಾಗಾದರೆ ಜನರ ಕೆಲಸ ಮಾಡುವುದು ತಪ್ಪೆ? ಎಂದು ಪ್ರಶ್ನಿಸಿದ ಸಿದ್ದರಾಮಯ್ಯ, ಕೆಡಿಪಿ ಸದಸ್ಯನಾಗಿರುವ ಕಾರಣ ಕೆಲವು ವಿಷಯದ ಬಗ್ಗೆ ನನ್ನ ಜೊತೆ ಚರ್ಚೆ ಮಾಡಿದ್ದಾನೆ. ಆದರೆ ಇದಕ್ಕೆ ಬೇರೆ ಅರ್ಥ ಕಲ್ಪಿಸಿದ್ದಾರೆ ಎಂದು ಕಿಡಿಕಾರಿದರು. ಡಾ.ಯತೀಂದ್ರ ನಿರ್ಮೋಡನೆ ವರ್ಗಾವಣೆ ವಿಚಾರವಾಗಿ ಮಾತನಾಡಿರುವುದು ಜಿಎಸ್‌ಟಿ ಮಾದರಿಯ ವೈಎಸ್‌ಟಿ ವಸೂಲಿ ಎಂಬ ವಿಪಕ್ಷಗಳ ಆರೋಪಕ್ಕೆ ಆಕ್ರೋಶ ವ್ಯಕ್ತಪಡಿಸಿದ ಸಿದ್ದರಾಮಯ್ಯ, ವೈಎಸ್‌ಟಿ ಎಂದರೇನು ಎಂದು ಮರು ಪ್ರಶ್ನಿಸಿದರು. ಕುಮಾರಸ್ವಾಮಿ ಎಂದೂ ಸತ್ಯ ಹೇಳಿಲ್ಲ. ಯಾವಾಗಲೂ ಈಟ್ ಅಂಡ್ ರನ್ ಮಾಡುತ್ತಾರಷ್ಟೆ ಹೊಟ್ಟೆಕಿಚ್ಚಿನಿಂದ, ದ್ವೇಷದಿಂದ ಸುಳ್ಳು ಆರೋಪ ಮಾಡು ತ್ತಾರೆ. ಸುಳ್ಳೆ ಕುಮಾರಸ್ವಾಮಿ ಅವರ ಮನೆದೇವರು ಎಂದು ಸಿದ್ದರಾಮಯ್ಯ ತಿರುಗೇಟು ನೀಡಿದರು. ಮಾಜಿ ಸಚಿವ ಸೋಮಣ್ಣ ಕಾಂಗ್ರೆಸ್‌ಗೆ ಬರುವುದಾದರೆ ನಮ್ಮ ಸ್ವಾಗತವಿದೆ. ಕಾಂಗ್ರೆಸ್ ತತ್ವ ಸಿದ್ಧಾಂತ ಒಪ್ಪಿ ಯಾರೇ ಬಂದರೂ ಅವರಿಗೆ ನಮ್ಮ ಸ್ವಾಗತವಿದೆ. ಆದರೆ ಜಿ.ಟಿ.ದೇವೇಗೌಡರನ್ನು ಕಾಂಗ್ರೆಸ್‌ಗೆ ಆಹ್ವಾನಿಸಿರುವ ವಿಚಾರ ನನಗೆ ಗೊತ್ತಿಲ್ಲ ಎಂದು ಸಿದ್ದರಾಮಯ್ಯ ಸ್ಪಷ್ಟಪಡಿಸಿದರು.

ವಿಶ್ವಕಪ್ ಕ್ರಿಕೆಟ್‌ನಲ್ಲಿ ಭಾರತ ಗೆದ್ದೆ ಗೆಲ್ಲುತ್ತದೆ

ವಿಶ್ವಕಪ್ ಕ್ರಿಕೆಟ್ ಫೈನಲ್ ಪಂದ್ಯದಲ್ಲಿ ಆಸ್ಟ್ರೇಲಿಯಾ ವಿರುದ್ಧ ಭಾರತ ಗೆಲುವು ಸಾಧಿಸಲಿದ್ದು, ಅಂದಿನ ಮ್ಯಾಚ್ ಅನ್ನು ನಾನು ಕೂಡ ವೀಕ್ಷಣೆ ಮಾಡುತ್ತೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಭಾರತ ತಂಡದ ಎಲ್ಲಾ ಆಟಗಾರರು ತುಂಬಾ ಚೆನ್ನಾಗಿ ಆಟವಾಡುತ್ತಿದ್ದಾರೆ. ಇದೇ ರೀತಿ ಫೈನಲ್ ಪಂದ್ಯದಲ್ಲಿ ಆಡಿದರೆ ಗೆಲುವು ಖಚಿತ. ನಮ್ಮ ತಂಡ ಈ ಬಾರಿಯ ವಿಶ್ವಕಪ್ ಗೆದ್ದೆ ಗೆಲ್ಲುತ್ತದೆ ಎಂದರು. ಬೆಂಗಳೂರಿನಲ್ಲಿ ನಡೆದ ಒಂದು ಪಂದ್ಯವನ್ನು ಕ್ರೀಡಾಂಗಣಕ್ಕೆ ಹೋಗಿ ನಾನು ವೀಕ್ಷಣೆ ಮಾಡಿದ್ದೆ. ನಾನು ರಾತ್ರಿ 9.30 ಗಂಟೆ ನಂತರ ಮನೆಗೆ ಹೋಗುತ್ತೇನೆ. ಸಮಯ ಸಿಕ್ಕಾಗ ಮನೆಯಲ್ಲಿ ಕ್ರಿಕೆಟ್ ನೋಡುತ್ತೇನೆ ಎಂದು ಸಿದ್ದರಾಮಯ್ಯ ತಿಳಿಸಿದರು.

ನರೇಂದ್ರ ಮೋದಿಗೆ ನನ್ನ ಕಂಡರೆ ಭಯ

ಕೇಂದ್ರ ಸರ್ಕಾರಕ್ಕೆ ಬಹಳಷ್ಟು ಬಾರಿ ಮನವಿ ಮಾಡಿ ಕೊಂಡಿದ್ದೆ. ಹಣ ನೀಡದೆ ಇದೇ ರೀತಿ ನಿರ್ಲಕ್ಷ್ಯ ತೋರಿದರೆ ಈ ಹಿಂದೆ ಹೇಳಿದಂತೆ ಪಾರ್ಲಿಮೆಂಟ್ ಮುಂದೆಯೇ ಧರಣಿ ಮಾಡುತ್ತೇನೆ ಎಂದು ಎಚ್ಚರಿಸಿದರು. ಉತ್ತರ ಭಾರತದ ಪಂಚರಾಜ್ಯಗಳ ಚುನಾವಣೆಯಲ್ಲಿ ಕಾಂಗ್ರೆಸ್ ಭರ್ಜರಿ ಜಯ ಗಳಿಸುತ್ತದೆ. ಆದರೆ ಈ ಚುನಾವಣೆ ಫಲಿತಾಂಶ ಲೋಕಸಭಾ ಚುನಾವಣೆಯ ದಿಕ್ಸೂಚಿಯಾಗದು ಎಂದು ಸ್ಪಷ್ಟಪಡಿಸಿದರು. ರಾಮಮಂದಿರವನ್ನು ನರೇಂದ್ರ ಮೋದಿ ಉದ್ಘಾಟನೆ ಮಾಡುತ್ತಿರುವುದು ಕಾಂಗ್ರೆಸ್ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ. ರಾಮಮಂದಿರದಿಂದ ಮತದಾರರು ಬದಲಾವಣೆ ಆಗುತ್ತಾರೆ ಎಂಬುದು ತಪ್ಪು ಅಭಿಪ್ರಾಯ. ಸುಪ್ರೀಂಕೋರ್ಟ್‌ನಲ್ಲಿ ಆದ ತೀರ್ಮಾನದಂತೆ ರಾಮಮಂದಿರ ನಿರ್ಮಾಣವಾಗುತ್ತಿದೆ ಎಂದು ಸಿದ್ದರಾಮಯ್ಯ ತಿಳಿಸಿದರು.

ಮಧ್ಯಪ್ರದೇಶದಲ್ಲಿ ಶೇ.71.16, ಛತ್ತೀಸ್‌ಗಢದಲ್ಲಿ ಶೇ.68.15 ಮತದಾನ

ನವದೆಹಲಿ: ಮಧ್ಯ ಪ್ರದೇಶ ಹಾಗೂ ಛತ್ತೀಸ್‌ಗಢ ವಿಧಾನಸಭೆ ಚುನಾವಣೆಗೆ ಶುಕ್ರವಾರ ಮತದಾನ ನಡೆಯಿತು. ಸಂಜೆ 5ರ ಹೊತ್ತಿಗೆ ಮಧ್ಯ ಪ್ರದೇಶದಲ್ಲಿ ಶೇ.71.16 ಹಾಗ ಛತ್ತೀಸ್‌ಗಢದ 70 ಕ್ಷೇತ್ರಗಳಿಗೆ ನಡೆದ ಎರಡನೇ ಹಂತದ ಚುನಾವಣೆಗೆ ಶೇ.68.15ರಷ್ಟು ಮತದಾನವಾಗಿದೆ. ಈ ಎರಡು ರಾಜ್ಯಗಳಲ್ಲಿ ಕಾಂಗ್ರೆಸ್ ಮತ್ತು ಬಿಜೆಪಿ ಮಧ್ಯೆ ತೀವ್ರ ಹಣಾಹಣಿ ಇದೆ. ಸದ್ಯ, ಛತ್ತೀಸ್‌ಗಢದಲ್ಲಿ ಕಾಂಗ್ರೆಸ್ ಆಡಳಿತದಲ್ಲಿದ್ದರೆ, ಮಧ್ಯ ಪ್ರದೇಶದಲ್ಲಿ ಬಿಜೆಪಿ ಪಕ್ಷದ ಸರ್ಕಾರವಿದೆ. ಡಿಸೆಂಬರ್ 3ರಂದು ಫಲಿತಾಂಶ ಪ್ರಕಟವಾಗಲಿದೆ.

ಛತ್ತೀಸ್‌ಗಢದಲ್ಲಿ ಎರಡನೇ ಹಂತದ ಮತದಾನ: ಛತ್ತೀಸ್‌ಗಢದಲ್ಲಿ ಎರಡನೇ ಹಂತದಲ್ಲಿ 70 ಕ್ಷೇತ್ರಗಳಿಗೆ ಶೇ.68.15ರಷ್ಟು ಮತದಾನವಾಗಿದೆ. ನವೆಂಬರ್ 7ರಂದು ನಡೆದ ಮೊದಲ ಹಂತದ ಚುನಾವಣೆಯಲ್ಲಿ ಛತ್ತೀಸ್‌ಗಢನ 20 ಕ್ಷೇತ್ರಗಳಿಗೆ ಮತದಾನ ನಡೆದಿತ್ತು. ಛತ್ತೀಸ್‌ಗಢ ಒಟ್ಟು 90 ಕ್ಷೇತ್ರಗಳನ್ನು ಹೊಂದಿವೆ ಛತ್ತೀಸ್‌ಗಢದಲ್ಲಿ ಎರಡನೇ ಹಂತದ ಮತದಾನಕ್ಕಾಗಿ 18,800ಕ್ಕೂ ಹೆಚ್ಚು ಮತಗಟ್ಟೆಗಳನ್ನು ಸ್ಥಾಪಿಸಲಾಗಿತ್ತು. ಪ್ರಸ್ತುತ ಮತದಾನ ನಡೆಯುತ್ತಿರುವ 70 ಕ್ಷೇತ್ರಗಳಲ್ಲಿ ಒಟ್ಟು 958 ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಛತ್ತೀಸ್‌ಗಢ ಮತ್ತು ಮಧ್ಯಪ್ರದೇಶ ಎರಡರಲ್ಲೂ ಕಾಂಗ್ರೆಸ್ ಮತ್ತು ಬಿಜೆಪಿ ನಡುವೆ ಪ್ರಮುಖ ಹಣಾಹಣಿ ಇದೆ ಲೋಕಸಭೆ ಚುನಾವಣೆಗೆ ಸುಮಾರು ಆರು ತಿಂಗಳ ಮುಂಚಿತವಾಗಿ ನಡೆಯುತ್ತಿರುವ ಐದು ರಾಜ್ಯಗಳ ಚುನಾವಣೆ ಗಳು ವಿವಿಧ ಕಾರಣಗಳಿಗಾಗಿ ಬಿಜೆಪಿ ಮತ್ತು ಕಾಂಗ್ರೆಸ್ ಎರಡಕ್ಕೂ ನಿರ್ಣಾಯಕವಾಗಿವೆ. ಮಧ್ಯಪ್ರದೇಶ ಮತ್ತು ಛತ್ತೀಸ್‌ಗಢದ ಮತ ಎಣಿಕೆ ಜೊತೆಗೆ ರಾಜಸ್ಥಾನ, ತೆಲಂಗಾಣ, ಮಿಜೋರಾಂನ ಮತ ಎಣಿಕೆ ಡಿಸೆಂಬರ್ 3 ರಂದು ನಡೆಯಲಿದೆ.

'ನಂದಿನಿ' ಮಾದರಿ ಕುರಿ–ಮೇಕೆ ಮಾಂಸ ಮಾರಾಟ ಮಳಿಗೆಗಳ ಸ್ಥಾಪನೆ


ಬೆಂಗಳೂರು: ಕರ್ನಾಟಕ ಸರ್ಕಾರವು ಕರ್ನಾಟಕ ಹಾಲು ಒಕ್ಕೂಟದ (ಕೆಎಂಎಫ್) ನಂದಿನಿ ಹಾಲಿನ ಉತ್ಪನ್ನಗಳ ಮಳಿಗೆ ಮಾದರಿಯಲ್ಲಿಯೇ ರಾಜ್ಯದಾದ್ಯಂತ ತನ್ನ ಮಳಿಗೆಗಳ ಮೂಲಕ ಪ್ಯಾಕ್ ಮಾಡಿದ ಕುರಿ ಮತ್ತು ಮೇಕೆ ಮಾಂಸವನ್ನು ಸಮಂಜಸವಾದ ಬೆಲೆಯಲ್ಲಿ ಮಾರಾಟ ಮಾಡಲು ಯೋಜಿಸುತ್ತಿದೆ.

ಪಶುಸಂಗೋಪನಾ ಇಲಾಖೆಯಡಿ ಈ ಕ್ರಮವು ಗ್ರಾಮೀಣ ಪ್ರದೇಶಗಳಲ್ಲಿ ಉದ್ಯೋಗವನ್ನು ಸೃಷ್ಟಿಸುವ ನಿರೀಕ್ಷೆಯನ್ನು ಹೊಂದಿದೆ. ದೆಹಲಿಯಲ್ಲಿ ರಾಜ್ಯ ಸರ್ಕಾರದ ವಿಶೇಷ ಪ್ರತಿನಿಧಿಯೂ ಆಗಿರುವ ಕಾಂಗ್ರೆಸ್ ಎಂಎಲ್‌ಸಿ ಟಿಬಿ ಜಯಚಂದ್ರ ನೀಡಿರುವ ಹೇಳಿಕೆಯಲ್ಲಿ, ತುಮಕೂರು ಜಿಲ್ಲೆಯ ಶಿರಾ ತಾಲೂಕಿನ ಚೀಲನಹಳ್ಳಿಯಲ್ಲಿ ಹೈಟೆಕ್ ಕಸಾಯಿಖಾನೆ ಕಾಮಗಾರಿ ಮುಕ್ತಾಯದ ಹಂತದಲ್ಲಿದೆ. ಖಾಸಗಿ ಏಜೆನ್ಸಿ ಸಹಯೋಗದಲ್ಲಿ ನಿರ್ಮಾಣವಾಗುತ್ತಿರುವ ಕಸಾಯಿಖಾನೆ ಜನವರಿ ವೇಳೆಗೆ ಉದ್ಘಾಟನೆಗೊಳ್ಳುವ ನಿರೀಕ್ಷೆ ಇದೆ ಎಂದಿದ್ದಾರೆ.

ರೈತರು ತಮ್ಮ ಕುರಿ ಮತ್ತು ಮೇಕೆಗಳಿಗೆ ಉತ್ತಮ ಬೆಲೆಯನ್ನು ಪಡೆಯಲು ಮತ್ತು ಜನರಿಗೆ ಗುಣಮಟ್ಟದ ಮಾಂಸವನ್ನು ಒದಗಿಸಲು ಸಹಾಯ ಮಾಡುವ ಉದ್ದೇಶದಿಂದ ಈ ಉಪಕ್ರಮವನ್ನು ರೂಪಿಸಲಾಗಿದೆ. ಈ ಯೋಜನೆಯಡಿ, ರೈತರಿಂದ ನೇರವಾಗಿ ಪ್ರಾಣಿಗಳನ್ನು ಖರೀದಿಸಲಾಗುತ್ತದೆ. ಇದು ಅವರ ಆದಾಯವನ್ನು ಸುಧಾರಿಸಲು ಸಹಾಯ ಮಾಡುತ್ತದೆ. ಕೆಎಂಎಫ್‌ನ ನಂದಿನಿ ಯಂತಹ ಮಾಂಸದ ಬ್ರಾಂಡ್ ರಚಿಸಲು ಇಲಾಖೆ ಶ್ರಮಿಸಲಿದೆ ಎಂದರು. ಕುರಿ ಮತ್ತು ಮೇಕೆಗಳನ್ನು ಸಾಕುವ ರೈತರು ತಮ್ಮ ಪ್ರಾಣಿಗಳಿಗೆ ಲಾಭದಾಯಕ ಬೆಲೆಗಳನ್ನು ಪಡೆಯಬೇಕೆಂದು ನಾವು ಬಯಸುತ್ತೇವೆ. ಈ ಮೂಲಕ ರೈತರ ಆರ್ಥಿಕ ಸ್ಥಿತಿಯನ್ನು ಸುಧಾರಿಸಲಾಗುವುದು. ಈ ಸಂಪೂರ್ಣ ಕ್ರಮದಿಂದಾಗಿ ಗ್ರಾಮೀಣ ಪ್ರದೇಶಗಳಲ್ಲಿ ಹೆಚ್ಚಿನ ಉದ್ಯೋಗ ಸೃಷ್ಟಿಯಾಗಲಿದೆ. ಕುರಿ ಮತ್ತು ಮೇಕೆ ಚರ್ಮದಿಂದ ಉತ್ಪನ್ನ ಗಳನ್ನು ತಯಾರಿಸುವ ಯೋಜನೆಯನ್ನೂ ಸರ್ಕಾರ ಹೊಂದಿದೆ ಎಂದು ಅವರು ಹೇಳಿದರು.

ಮಹಿಳಾ, ಮಕ್ಕಳ ಕಲ್ಯಾಣ ಇಲಾಖೆಯಲ್ಲಿ ಭ್ರಷ್ಟಾಚಾರ

ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ ಲೋಕಾಯುಕ್ತಕ್ಕೆ ದೂರು



ಬೆಂಗಳೂರು, ನ. 17: ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಲ್ಲಿ ಭ್ರಷ್ಟಾಚಾರ ನಡೆದಿದೆ ಎಂಬ ಆರೋಪ ವ್ಯಕ್ತವಾಗಿದ್ದು, ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ ಲೋಕಾಯುಕ್ತ ಸಂಸ್ಥೆಗೆ ದೂರು ನೀಡಲಾಗಿದೆ. ಮಕ್ಕಳ ಪೌಷ್ಟಿಕ ಆಹಾರ ಸರಬರಾಜಿನಲ್ಲಿ ಅಕ್ರಮ ನಡೆದಿದೆ. 600 ಕೋಟಿ ರೂಪಾಯಿಗೂ ಹೆಚ್ಚು ಮೊತ್ತದ ಭ್ರಷ್ಟಾಚಾರವಾಗಿದೆ ಎಂದು ವಕೀಲ ನಟರಾಜ ಶರ್ಮಾ ಲೋಕಾಯಕ್ತಕ್ಕೆ ನೀಡಿದ ದೂರಿನಲ್ಲಿ ಉಲ್ಲೇಖಿಸಿದ್ದಾರೆ.

ಕಪ್ಪು ಪಟ್ಟಿಯಲ್ಲಿರುವ ಕ್ರಿಸ್ಟಿ ಫ್ರೈಡ್ ಗ್ರಾಂ ಕಂಪನಿಗೆ ಟೆಂಡರ್ ನೀಡಲಾಗಿದೆ ಎಂದು ಆರೋಪಿಸಿರುವ ನಟರಾಜ ಶರ್ಮಾ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಪ್ರ. ಕಾರ್ಯದರ್ಶಿ ಜೆ.ಸಿ.ಪ್ರಕಾಶ್, ಇಲಾಖೆಯ ನಿರ್ದೇಶಕರ ವಿರುದ್ಧವೂ ಲೋಕಾಯುಕ್ತ ಸಂಸ್ಥೆಗೆ ದೂರು ನೀಡಿದ್ದಾರೆ. ಗುತ್ತಿಗೆದಾರರಿಂದ ಅಂಗನವಾಡಿಗಳಿಗೆ ಪೂರೈಕೆಯಾಗುವ ಆಹಾರ ಗುಣಮಟ್ಟ ಇರುವುದಿಲ್ಲ. ಹೀಗಾಗಿ ಸ್ಥಳೀಯ ಸೇವಾ ಸಂಘಗಳೇ ಆಹಾರ ಪೂರೈಕೆ ಮಾಡುವಂತೆ ಹೈ ಕೋರ್ಟ್ ಆದೇಶ ನೀಡಿತ್ತು. ಆದರೆ, ಆದೇಶ ಉಲ್ಲಂಘನೆ ಮಾಡಿ ಕಪ್ಪು ಪಟ್ಟಿಯಲ್ಲಿರುವ ಪೂರೈಕೆ ಕಂಪನಿಗೆ ಟೆಂಡರ್ ನೀಡಿರುವುದಾಗಿ ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಹಿಂದಿನ ಬಿಜೆಪಿ ಸರ್ಕಾರದ ವಿರುದ್ಧ 40 ಪರ್ಸೆಂಟ್ ಕಮಿಷನ್ ಹಾಗೂ ಭ್ರಷ್ಟಾಚಾರ ಆರೋಪ ಮಾಡಿದ್ದ ಕಾಂಗ್ರೆಸ್,? ಅಧಿಕಾರಕ್ಕೆ ಬಂದ ಬಳಿಕ ಭ್ರಷ್ಟಾಚಾರ ಮಿತಿ ಮೀರಿದೆ ಎಂದು ಪ್ರತಿಪಕ್ಷಗಳು ಕಳೆದ ಕೆಲವು ದಿನಗಳಿಂದ ಆರೋಪಿಸುತ್ತಲೇ ಬಂದಿವೆ. ಇದೀಗ ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ ಲೋಕಾಯುಕ್ತಕ್ಕೆ ದೂರು ದಾಖಲಾಗಿರುವುದು ಪ್ರತಿಪಕ್ಷಗಳಿಗೆ ಹೊಸ ಅಸ್ತ್ರ ಸಿಕ್ಕಂತಾಗಲಿದೆ.

ಸುಳ್ಳು ಹೇಳಿಕೆ ಶೋಭೆ ತರಲ್ಲ

ಮೈಸೂರು, ನ. 17–ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದಲ್ಲಿ ವರ್ಗಾವಣೆಯಲ್ಲಿ ದಂಧೆ ನಡೆಸಲಾಗುತ್ತಿದೆ ಎಂಬುದು ಸುಳ್ಳು ಆರೋಪ ಎಂದು ಕೆಆರ್ ಬ್ಯಾಂಕ್ ಉಪಾಧ್ಯಕ್ಷ ಬಸವರಾಜ್ ಬಸಪ್ಪ ತಿಳಿಸಿದ್ದಾರೆ

ಈ ಹಿಂದೆ ಇದೇ ವಿಷಯವಾಗಿ ಪೆನ್ ಡ್ರೈವ್ ಬಿಡುಗಡೆ ಮಾಡುವುದಾಗಿ ಹೇಳಿದ್ದ ಮಾಜಿ ಮುಖ್ಯಮಂತ್ರಿ ಎಚ್ ಡಿ ಕುಮಾರಸ್ವಾಮಿ ಏನೂ ಮಾಡಲಿಲ್ಲ. ವಾಸ್ತವವಾಗಿ ಅವರ ಹೇಳಿದ್ದ ಆಡಳಿತ ಅವಧಿಯಲ್ಲೇ ಸಾಕಷ್ಟು ಅವ್ಯವಹಾರಗಳು ನಡೆದಿವೆ. ಇದೀಗ ಬಿಜೆಪಿಯೊಂದಿಗೆ ಮಾಡಿಕೊಂಡಿರುವ ಮೈತ್ರಿಯನ್ನು ವಿರೋಧಿಸಿ ಹಲವು ಹಾಲಿ, ಮಾಜಿ ಶಾಸಕರು, ಮುಖಂಡರು, ಕಾರ್ಯಕರ್ತರು ಪಕ್ಷ ಬಿಟ್ಟು ಕಾಂಗ್ರೆಸ್‌ನತ್ತ ಮುಖ ಮಾಡಿದ್ದಾರೆ. ಇದರಿಂದ ಕಂಗಾಲಾಗಿರುವ ಕುಮಾರಸ್ವಾಮಿ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಸುಳ್ಳು ಆರೋಪಗಳನ್ನು ಮಾಡುತ್ತಿದ್ದಾರೆ. ಇಂತಹ ಸುಳ್ಳು ಆರೋಪಗಳು ಒಬ್ಬ ಮಾಜಿ ಮುಖ್ಯಮಂತ್ರಿ ಅವರಿಗೆ ಶೋಭೆ ತರುವಂತಹದ್ದಲ್ಲ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ

ರುಡ್‌ಸೆಟ್ ಸಂಸ್ಥೆಯಲ್ಲಿ ಮಹಿಳೆಯರಿಗೆ ಟೈಲರಿಂಗ್ ತರಬೇತಿ



ಮೈಸೂರು, ನ. 17– ಮೈಸೂರಿನ ರುಡ್‌ಸೆಟ್ ಸಂಸ್ಥೆಯ ವತಿಯಿಂದ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ, ಮೈಸೂರು ಜಿಲ್ಲಾ ಪಂಚಾಯತ್ ಪ್ರಾಯೋಜಕತ್ವದಲ್ಲಿ 30 ದಿನಗಳ ಮಹಿಳೆಯರ ಟೈಲರಿಂಗ್ ತರಬೇತಿ ಉದ್ಘಾಟನಾ ಸಮಾರಂಭವನ್ನು ಸಂಸ್ಥೆಯ ಆವರಣದಲ್ಲಿ ನಡೆಸಲಾಯಿತು.

ಹೂಟಗಳ್ಳಿ ಶ್ರೀದೇವಿ ಲೇಡಿಸ್ ಫ್ಯಾಷನ್ಸ್ ಮಾಲೀಕರಾದ ಮಣಿ ಕಾರ್ಯಕ್ರಮ ಉದ್ಘಾಟಿಸಿದರು. ಬಳಿಕ ಮಾತನಾ ಡಿದ ಅವರು, ಮಹಿಳೆಯರು ಕೇವಲ ಕುಟುಂಬಕ್ಕೆ ಸೀಮಿತವಾಗಿರದೆ ತಮ್ಮ ಕೌಶಲ್ಯಗಳನ್ನು ಉಪಯೋಗಿಸಿ, ಸ್ವಉದ್ಯೋಗ ವನ್ನು ಮಾಡಿ ತಮ್ಮ ಕುಟುಂಬದ ಆದಾಯ ವನ್ನು ಹೆಚ್ಚಿಸಲು ಗಮನ ಹರಿಸಬೇಕು. ಯಾರೊಬ್ಬರ ಮೇಲೂ ಅವಲಂಬಿಗಳಾಗದೆ, ಸ್ವಾವಲಂಬಿಗಳಾಗಬೇಕು. ಪ್ರತಿ ಯಶಸ್ವಿ ವ್ಯಕ್ತಿಯ ಹಿಂದೆ ಒಬ್ಬ ಹೆಣ್ಣು ಇರುತ್ತಾಳೆ ಎನ್ನುವುದು ರೂಢಿಮಾತು, ಆದರೆ ಒಬ್ಬ ಯಶಸ್ವಿ ಮಹಿಳೆಯಾಗಲು ಮನೆಯ ಎಲ್ಲರ ಸಹಕಾರ ಬೇಕು. ಈ ಟೈಲರಿಂಗ್ ಉದ್ಯೋಗ ಒಂದು ಸಾರ್ವತ್ರಿಕ ಉದ್ಯಮ ಮತ್ತು ಎಲ್ಲರಿಗೂ ಅವಶ್ಯಕ ವಿರುವ ಉತ್ಪನ್ನವನ್ನು ಒದಗಿಸುವ ಉದ್ಯಮ, ಮನೆಯಲ್ಲಿ ಒಂದು ಚಿಕ್ಕದಾಗಿ ಉದ್ಯಮ ವನ್ನು ಆರಂಭ ಮಾಡಿದರೂ ಮನೆಯನ್ನು ನಡೆಸುವಷ್ಟು ಆದಾಯ ಗಳಿಸಬಹುದು ಎಂದು ಕಿವಿಮಾತು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ರುಡ್‌ಸೆಟ್ ಸಂಸ್ಥೆ ನಿರ್ದೇಶಕರಾದ ಶ್ರೀಮತಿ ಸರಿತಾ ಮಾತನಾಡಿ, ಉಡುಪು ಮನುಷ್ಯನಿಗೆ ಮೂಲಭೂತ ಅವಶ್ಯಕತೆಗಳಲ್ಲಿ ಒಂದು, ವೈವಿಧ್ಯಮಯ ವಾಗಿ ಹೊಸ ವಿನ್ಯಾಸದ ಉಡುಪು ಧರಿಸಬೇಕೆಂಬ ಬಯಕೆ ಪ್ರತಿಯೊಬ್ಬರಿಗೂ ಇರುತ್ತದೆ. ಹಾಗಾಗಿ ವಸ್ತ್ರ ವಿನ್ಯಾಸ ಮಾಡುವ ವೃತ್ತಿಯವರಿಗೆ ಯಾವಾಗಲೂ ಬೇಡಿಕೆ ಇದ್ದೇ ಇರುತ್ತದೆ. ಅದನ್ನು ಸದುಪಯೋಗಪಡಿಸಿಕೊಂಡಾಗ ಉತ್ತಮ ಆದಾಯ ಗಳಿಸಿ ಏಳ್ಗೆ ಹೊಂದಬಹುದು. ಟೈಲರಿಂಗ್ ವೃತ್ತಿ ತುಂಬಾ ಪ್ರಶಸ್ತ ಉತ್ತಮವಾದುದು, ಅದನ್ನು ಆರಿಸಿಕೊಂಡಿರುವುದು ಜೀವನ ನಿರ್ವಹಣೆಗೆ ಅನುಕೂಲಕಾರಿ ಎಂದರು.


ಸಂಸ್ಥೆಯ ಉಪನ್ಯಾಸಕರಾದ ಪಾಲ್ ರಾಜ್ ರವರು ಕಾರ್ಯಕ್ರಮದಲ್ಲಿ ಅತಿಥಿಗಳನ್ನು ಸ್ವಾಗತಿಸಿದರು. ಉಪನ್ಯಾಸಕರಾದ ಶ್ರೀಮತಿ ಲತಾಮಣಿ ಕಾರ್ಯಕ್ರಮ ನಿರೂಪಿಸಿದರು. ಕಾರ್ಯಕ್ರಮದಲ್ಲಿ 35 ಮಂದಿ ಶಿಬಿರಾರ್ಥಿಗಳು ಹಾಜರಿದ್ದರು.



ಪೇರೆಂಟ್ಸ್ ಅಸೋಸಿಯೇಷನ್ ಆಫ್ ಡೆಫ್ ಚಿಲ್ಡ್ರನ್ ಅವರು ನಡೆಸುತ್ತಿರುವ ಇನ್ಸ್ಟಿಟ್ಯೂಟ್ ಆಫ್ ಮದರ್ ಅಂಡ್ ಡೆಫ್ ಚೈಲ್ಡ್ ಸಂಸ್ಥೆಯಲ್ಲಿ ಮಕ್ಕಳ ದಿನಾಚರಣೆ ಕಾರ್ಯಕ್ರಮದಲ್ಲಿ ವಿವಿಧ ಆಟೋಟ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು. ಈ ವೇಳೆ ಗ್ರೂಪ್ ಕ್ಯಾಪ್ಟನ್ ಚಂದ್ರಶೇಖರ್, ವರ್ಷ ಚಂದ್ರಶೇಖರ್, ಸಂಸ್ಥೆಯ ಭಾಸ್ಕರ್ ಶೆಟ್ಟಿ, ದಿನಕರ್ ಶೆಟ್ಟಿ, ರತ್ನ ಶೆಟ್ಟಿ, ಜಲಜಾ ಗೋವಿಂದಪ್ಪ ಹಾಗೂ ಶಾಲೆಯ ಶಿಕ್ಷಕಿಯರು ಪಾಲ್ಗೊಂಡಿದ್ದರು.



ರಾಜ್ಯ ಸರ್ಕಾರಿ ನೌಕರರ ರಾಜ್ಯ ಮಟ್ಟದ ಕ್ರೀಡಾಕೂಟದ ಬಾಲ್ ಬ್ಯಾಡ್ಮಿಂಟನ್ ವಿಭಾಗದಲ್ಲಿ ಸತತ ಆರನೇ ಬಾರಿಗೆ ಮೈಸೂರು ಬಾಲ್ ಬ್ಯಾಡ್ಮಿಂಟನ್ ತಂಡ ಪ್ರಥಮ ಸ್ಥಾನ ಪಡೆಯಿತು. ಮುಸ್ತಾಕ್(ನಾಯಕ) ಜಗದೀಶ್ (ಅಧೀಕ್ಷಕ ಅಭಿಯಂತರರು), ಕುಮಾರ್ ಬಿ., ಸತೀಶ ವರ್ಮಾ. ವಿಶ್ವಾಸ್, ಸಂದೀಪ್ ಡಿ., ಎಂ.ಧನು. ಎಂ.ಎನ್.ರವಿಕುಮಾರ್. ವಿಜಯರಾಮ ಕೆ.ವಿಶ್ವನಾಥ್ ಇದ್ದಾರೆ.



ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಪ್ರೊ.ಸಿ.ನಾಗಣ್ಣ ಅವರನ್ನು ಮೈಸೂರು ವಿವಿ ಹಿರಿಯ ವಿದ್ಯಾರ್ಥಿ ಸಂಘದ ಸದಸ್ಯರಾದ ಡಾ ವಸಂತ ಕುಮಾರ್ ತಿಮಕಾಪೂರ, ಡಾ. ಕೃಷ್ಣಮೂರ್ತಿ ಚಮರಂ, ಪ್ರೊ.ಕೆ.ಟಿ.ವೀರಪ್ಪ ಪ್ರೊ.ವಸಂತಮ್ಮ, ಪ್ರೊ ಪದ್ಮನಾಭ ಸನ್ಮಾನಿಸಿದರು.



ಮೈಸೂರಿನ ಟಿ.ಕೆ. ಲೇಔಟ್‌ನಲ್ಲಿರುವ ಮಿತ್ರ ಹಿಂದಿ ವಿದ್ಯಾಲಯದ ಶಿಕ್ಷಕಿ ರಮಾ ರಘುವೀರ್ ಅವರ ಅಕಾಲಿಕ ನಿಧನದ ನಂತರ, ಹಳೆ ವಿದ್ಯಾರ್ಥಿ ಅನನ್ಯ ಅವರ ಮಾರ್ಗದರ್ಶನದಲ್ಲಿ ಹಿಂದಿ ಪ್ರವೀಣ್ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಾದ ಮನೋಜ್, ಯಶಸ್ವಿನಿ, ರಚನೆ, ನಮಿತಾ ಅವರನ್ನು ಸನ್ಮಾನಿಸಲಾಯಿತು. ಸನ್ಮಾನಿತರೊಂದಿಗೆ ಶಾಂತಿ, ನಳಿನಿ, ವಂಶಿ ಖಿಲೇದಾರ್, ಅನನ್ಯ, ಸ್ವಾತಿ, ಅನಂತರಾಮ್, ಶ್ರೀನಿವಾಸ, ಹರೀಶ್ ಹಾಗೂ ವಿದ್ಯಾಲಯದ ರಘುವೀರ್ ಇದ್ದಾರೆ.

ಗ್ಯಾರಂಟಿಯಿಂದ ರಾಜ್ಯ ದಿವಾಳಿಯಾಗುತ್ತದೆ ಎಂದು ಬೊಬ್ಬೆ ಹೊಡೆದವರೇ ಬೇರೆ ರಾಜ್ಯದಲ್ಲಿ ನಮ್ಮ ಗ್ಯಾರಂಟಿ ಯೋಜನೆ ಜಾರಿಗೆ ಮುಂದಾಗಿದ್ದಾರೆ

ಬಿಜೆಪಿ ವಿರುದ್ಧ ಮುಖ್ಯಮಂತ್ರಿ ಸಿದ್ದರಾಮಯ್ಯ ವಾಗ್ದಾಳಿ



2013ರಲ್ಲಿ ನಾನು ಮುಖ್ಯಮಂತ್ರಿಯಾಗಿದ್ದಾಗ ನಂಜನಗೂಡು ಕ್ಷೇತ್ರಕ್ಕೆ 600 ಕೋಟಿ ಅನುದಾನ ನೀಡಿದ್ದೆವು. ಈ ಬಾರಿಯೂ ಕೂಡ ಶಾಸಕ ದರ್ಶನ್ ಧ್ರುವ ನಾರಾಯಣ್ ಅನುದಾನಕ್ಕೆ ಬೇಡಿಕೆಯಿಟ್ಟಿದ್ದಾರೆ. ಕಳಲೆ ಗ್ರಾಮಕ್ಕೆ ಮೂಲಸೌಕರ್ಯ ಒದಗಿಸುವಂತೆ ಮಾಜಿ ಶಾಸಕ ಕಳಲೆ ಕೇಶವಮೂರ್ತಿ ಮನವಿ ಮಾಡಿದ್ದಾರೆ. ಕಳಲೆ ಐತಿಹಾಸಿಕ ಗ್ರಾಮವಾಗಿರುವ ಕಾರಣ ಕೇಳಿದ ಎಲ್ಲಾ ಬೇಡಿಕೆಗಳನ್ನು ಈಡೇರಿಸಲಾಗುವುದು.

-ಸಿದ್ದರಾಮಯ್ಯ, ಸಿಎಂ

ನಂಜನಗೂಡು, ನ.17– ಪ್ರಧಾನಿ ಮೋದಿ ಹಾಗೂ ಇನ್ನಿತರ ಬಿಜೆಪಿ ನಾಯಕರು ಗ್ಯಾರಂಟಿಗಳನ್ನು ಜಾರಿ ಮಾಡಿದರೆ ರಾಜ್ಯ ಆರ್ಥಿಕವಾಗಿ ದಿವಾಳಿಯಾಗುತ್ತದೆ ಎಂದು ಬೊಬ್ಬೆ ಹೊಡೆದಿದ್ದರು. ಆದರೆ ಈಗ ಅವರೇ ಬೇರೆ ರಾಜ್ಯಗಳಲ್ಲಿ ನಮ್ಮ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಲು ಹೊರಟಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ತಾಲೂಕಿನ ಕಳಲೆ ಗ್ರಾಮದಲ್ಲಿ ಶ್ರೀ ಕಡೆ ಮಾಲಮ್ಮರ ದೇವಾಲಯವನ್ನು ಉದ್ಘಾಟಿಸಿ ಮಾತನಾಡಿದ ಅವರು, ಪ್ರಧಾನಿ ಮೋದಿ ನಂಜನಗೂಡಿಗೂ ಬಂದು ಚುನಾವಣಾ ಪ್ರಚಾರ ನಡೆಸಿದ್ದರು. ಅವರು ಬಂದು ಹೋದ ನಂತರ ನಾನು, ದರ್ಶನ್ ಧ್ರುವನಾರಾಯಣ್, ಗಣೇಶ್‌ಪ್ರಸಾದ್, ಅನಿಲ್ ಚಿಕ್ಕಮಾದು, ಕೆ.ಹರೀಶ್‌ಗೌಡ ಸೇರಿದಂತೆ ಎಲ್ಲರೂ ಅತ್ಯಧಿಕ ಮತಗಳಿಂದ ಗೆದ್ದೆವು ಎಂದ ಅವರು, ಮೋದಿ ಬಂದು ಕೈಬೀಸಿ ಹೋದರೆ ಜನ ಓಟ್ ಹಾಕುತ್ತಾರೆಯೇ ಎಂದು ಪ್ರಶ್ನಿಸಿದರು.

ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿಗೆ ನಾವು ಅಧಿಕಾರಕ್ಕೆ ಬಂದಿರುವುದರಿಂದ ಹೊಟ್ಟೆಕಿಚ್ಚು ಎಂದು ಮೂದಲಿಸಿದ ಸಿದ್ದರಾಮಯ್ಯ, ಆದ್ದರಿಂದಲೇ ದಿನನಿತ್ಯ ಹೊಟ್ಟೆ ಕಿವುಚುತ್ತಿದ್ದಾರೆ. ಅವರು ಎಷ್ಟೇ ಹೊಟ್ಟೆ ಹಿಚಿಕಿಕೊಂಡರೂ ಜನರ ಆಶೀರ್ವಾದಿಂದ ಇನ್ನೂ 5 ವರ್ಷ ನಾವೇ ಅಧಿಕಾರದಲ್ಲಿರುತ್ತೇವೆ. ನಾವು ಈ ಹಿಂದೆ 2013ರಲ್ಲಿ ನುಡಿದಂತೆ ನಡೆದುಕೊಂಡಿದ್ದೆವು. ಈ ಬಾರಿಯೂ ಜನರಿಗೆ ಕೊಟ್ಟ ಮಾತಿನಂತೆ ನಡೆದೇ ತೀರುತ್ತೇವೆ ಎಂದರು.

ಬಸವಾದಿ ಶರಣರು 'ಮನುಷ್ಯನಲ್ಲಿ ದೇವರಿದ್ದಾನೆ' ಎಂದು ಸಾರಿದರು. ನಾವು ಶುದ್ಧ ಮನಸ್ಸಿನಿಂದ ದೇವರ ಪೂಜೆ ಮಾಡಬೇಕು, ಸ್ವಾರ್ಥ ಭಾವನೆ ಇರಬಾರದು, ದೇವರು, ಧರ್ಮ, ಜಾತಿ ಹೆಸರಲ್ಲಿ ಮನುಷ್ಯರ ನಡುವೆ ಗೋಡೆ ಕಟ್ಟಬಾರದು. ಮನುಷ್ಯ, ಮನುಷ್ಯನನ್ನು ಪ್ರೀತಿಸುವಂತಾಗಬೇಕು, ಜಾತಿ ವ್ಯವಸ್ಥೆ ಹೋಗಲಾಡಿಸಿ ಸಮ ಸಮಾಜ ನಿರ್ಮಾಣವಾಗಬೇಕೆಂದು ಬುದ್ಧ, ಬಸವ, ಅಂಬೇಡ್ಕರ್ ಪ್ರತಿಪಾದಿಸಿದ್ದಾರೆ. ಜನರಿಗೆ ಆರ್ಥಿಕ, ಸಾಮಾಜಿಕ ಸಮಾನತೆ ದೊರಕಿದಲ್ಲಿ ಸಮ ಸಮಾಜ ನಿರ್ಮಾಣವಾಗಲಿದೆ. 'ರಾಜಕೀಯ ಸಮಾನತೆ ಸಾಮಾಜಿಕ ತಳಹದಿ ಮೇಲೆ ನಿಲ್ಲಬೇಕು ಇಲ್ಲವಾದಲ್ಲಿ ಜನರೇ ರಾಜಕೀಯ ಸೌಧವನ್ನು ಧ್ವಂಸ ಮಾಡಲಿದ್ದಾರೆ' ಎಂದು ಅಂಬೇಡ್ಕರ್ ಹೇಳಿದ್ದಾರೆ. ಆದ್ದರಿಂದಲೇ ನಮ್ಮ ಸರ್ಕಾರ 5 ಗ್ಯಾರಂಟಿಗಳನ್ನು ಜಾರಿಗೊಳಿಸುವ ಮೂಲಕ ಜನರಿಗೆ ಆರ್ಥಿಕ, ಸಾಮಾಜಿಕ ಶಕ್ತಿ ನೀಡುತ್ತಿದೆ ಎಂದರು.

ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಸಿ. ಮಹದೇವಪ್ಪ ಮಾತನಾಡಿ, ಜನರಿಗೆ ತಮ್ಮ ಧರ್ಮದ ಆಚಾರ ವಿಚಾರಗಳನ್ನು ಆಚರಿಸಲು ಮುಕ್ತ ಅವಕಾಶವಿದೆ ಯಾವುದೇ ರಾಜಕೀಯ ಪಕ್ಷಕ್ಕೆ ಧಾರ್ಮಿಕವಾಗಿ ಮಾತನಾಡುವ ಹಕ್ಕಿಲ್ಲ. ಕಳಲೆ ಗ್ರಾಮದ ಗ್ರಾಮಸ್ಥರು ಧಾರ್ಮಿಕ ಕಾರ್ಯದ ಮೂಲಕ ಎಲ್ಲಾ ಜನಾಂಗವನ್ನು ಒಟ್ಟಾಗಿ ಸಂಘಟಿಸಿ ಸಾಮಾಜಿಕ ಸಾಮರಸ್ಯ ಮೂಡಿಸುವ ಕೆಲಸ ಮಾಡುತ್ತಿದ್ದಾರೆ ಎಂದರು.

ನಾನು ಹಿಂದೆ ಲೋಕೋಪಯೋಗಿ ಮಂತ್ರಿಯಾಗಿದ್ದಾಗ ನಂಜನಗೂಡಿನಲ್ಲಿ ಕೈಗೊಂಡ 600 ಕೋಟಿಗಳಷ್ಟು ಅಭಿವೃದ್ಧಿ ಕೆಲಸಗಳಿಂದಾಗಿ ಕ್ಷೇತ್ರದ ಅಭಿವೃದ್ಧಿ ಪಥವೇ ಬದಲಾಗಿತ್ತು ಆದರೆ, ಇದನ್ನು ಸಹಿಸಲು ಆಗದೆ ಕೆಲವರು ಮಹದೇವಪ್ಪಗೂ ನಂಜನಗೂಡು ಕ್ಷೇತ್ರಕ್ಕೂ ಸಂಬಂದವಿಲ್ಲ ಎಂದಿದ್ದರು ಎಂದು ಬೇಸರ ವ್ಯಕ್ತಪಡಿಸಿದರು.

ಶಾಸಕ ದರ್ಶನ್ ಧ್ರುವನಾರಾಯಣ್ ಮಾತನಾಡಿ, ಸಿದ್ದರಾಮಯ್ಯ ಸರ್ಕಾರ ರಾಜ್ಯವನ್ನು ಕಲ್ಯಾಣ ರಾಜ್ಯವನ್ನಾಗಿ ನಿರ್ಮಿಸುವ ಸಲುವಾಗಿ 5 ಗ್ಯಾರಂಟಿಗಳನ್ನು ಜಾರಿಗೊಳಿಸಿ ಜನರಿಗೆ ಸಾಮಾಜಿಕ ನ್ಯಾಯದ ಜೊತೆಗೆ ಜೀವನ ಭದ್ರತೆ ಒದಗಿಸಿದ್ದಾರೆ. ಕಳಲೆ ಗ್ರಾಮದ ಮೂಲಸೌಕರ್ಯಕ್ಕೆ 2 ಕೋಟಿ ಅನುದಾನ ನೀಡಲು ಮುಖ್ಯಮಂತ್ರಿ ಗಳು ಅನುಮೋದನೆ ನೀಡಿದ್ದಾರೆ. ಈ ಭಾಗದಲ್ಲಿ ಕಾಡುಪ್ರಾಣಿಗಳ ಹಾವಳಿ ತಡೆಗೆ ರೈಲ್ವೆ ಬ್ಯಾರಿಕೇಡ್ ನಿರ್ಮಿಸಲು ಅನುದಾನ ನೀಡ ಬೇಕು, ಜೊತೆಗೆ ಬಸ್‌ಗಳ ಸಂಖ್ಯೆ ಕಡಿಮೆ ಇರುವುದರಿಂದ ಸಮಸ್ಯೆ ಹೆಚ್ಚಾಗಿದ್ದು ಬಸ್ ಸಂಖ್ಯೆಯನ್ನು ಹೆಚ್ಚಿಸಬೇಕು ಎಂದು ಮನವಿ ಮಾಡಿದರು.

ಸಮಾರಂಭದಲ್ಲಿ ಶಾಸಕರಾದ ಅನಿಲ್ ಚಿಕ್ಕಮಾದು, ರವಿಶಂಕರ್, ಗಣೇಶ್ ಪ್ರಸಾದ್, ಡಾ. ಡಿ.ತಿಮ್ಮಯ್ಯ, ಮಾಜಿ ಶಾಸಕರಾದ ಕಳಲೆ ಕೇಶವಮೂರ್ತಿ, ಡಾ. ಯತೀಂದ್ರ ಸಿದ್ದರಾಮಯ್ಯ, ಎಂ.ಕೆ.ಸೋಮಶೇಖರ್, ಮುಖಂಡರಾದ ಸುನೀಲ್ ಬೋಸ್, ಪುಷ್ಪಾ ಅಮರನಾಥ್, ಮಾಜಿ ಸಂಸದ ಕಾಗಲವಾಡಿ ಶಿವಣ್ಣ, ಜಿಪಂ ಮಾಜಿ ಸದಸ್ಯ ಕೆ.ಮಾರುತಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಕುರಹಟ್ಟಿ ಮಹೇಶ್, ಸಿಎಂ. ಶಂಕರ್, ಶ್ರೀಕಂಠ ನಾಯಕ, ವಾಲ್ಮೀಕಿ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಎಚ್.ಸಿ.ಬಸವರಾಜು, ಜಿಪಂ ಮಾಜಿ ಅಧ್ಯಕ್ಷರಾದ ಬಿ.ಎಂ.ರಾಮು, ಕೆಮರೀಗೌಡ, ಕಳಲೆ ಗ್ರಾಪಂ ಅಧ್ಯಕ್ಷ ಮಹೇಶ್, ಮುಖಂಡರಾದ ತಮ್ಮಣ್ಣೇಗೌಡ, ಕಳಲೆ ರಾಜೇಶ್, ಚಿನ್ನಂಬಳ್ಳಿ ರಾಜು, ಎಚ್.ಎಸ್. ಮೂಗಶೆಟ್ಟಿ, ದೇವಾಲಯ ಟ್ರಸ್ಟ್ ಗೌರವಾಧ್ಯಕ್ಷ ಮಾಲೇಗೌಡ ಸೇರಿದಂತೆ ಹಲವಾರು ಪ್ರಮುಖರು ಉಪಸ್ಥಿತರಿದ್ದರು.

ಡಿ.12 ರಿಂದ ಅಂತರರಾಷ್ಟ್ರೀಯ ಎಕ್ಸಾನ್–2023; 1200ಕ್ಕೂ ಅಧಿಕ ವಿದೇಶಿ ಉದ್ಯಮಿಗಳು ಭಾಗಿ



ಮೈಸೂರು, ನ.17(ಎಂಕೆ)– ಭಾರತೀಯ ಕೈಗಾರಿಕೆಗಳ ಒಕ್ಕೂಟ(ಸಿಐಐ)ದ ವತಿಯಿಂದ ಡಿ.12 ರಿಂದ 16ರವರೆಗೆ ಭವಿಷ್ಯದ ಭಾರತ ನಿರ್ಮಾಣ (building india's tomorrow) ಪರಿಕಲ್ಪನೆಯಲ್ಲಿ ಅಂತರರಾಷ್ಟ್ರೀಯ ಎಕ್ಸಾನ್–2023(ದಕ್ಷಿಣ ಏಷ್ಯಾದ ಅತಿದೊಡ್ಡ ನಿರ್ಮಾಣ ಸಲಕರಣೆಗಳ ಪ್ರದರ್ಶನ) ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಶ್ವಿಂಗ್ ಸ್ಟೆಟರ್(ಇಂಡಿಯಾ) ಪ್ರೈ. ಲಿಮಿಟೆಡ್ ಉಪಾಧ್ಯಕ್ಷ(ಮಾರ್ಕೆಟಿಂಗ್) ಇ.ಎಲ್.ಕಿರಣ್ ಬಾಬು ತಿಳಿಸಿದರು.

ಮೈಸೂರಿನ ಸದರನ್ ಸ್ಟಾರ್ ಹೋಟೆಲ್‌ನಲ್ಲಿ ಶುಕ್ರವಾರ ನಡೆದ 'ಎಕ್ಸಾನ್–2023 ರೋಡ್ ಶೋ' ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಬೆಂಗಳೂರಿನ ಬಿಐಸಿಇ ಬೃಹತ್ ವೇದಿಕೆಯಲ್ಲಿ 12ನೇ ಆವೃತ್ತಿಯ ಅಂತರರಾಷ್ಟ್ರೀಯ ಎಕ್ಸಾನ್–2023 ವಸ್ತುಪ್ರದರ್ಶನ ಕಾರ್ಯಕ್ರಮ ನಡೆಯಲಿದ್ದು, ಆಸಿಯಾ, ಚೀನಾ, ಜೆಕ್ ರಿಪಬ್ಲಿಕ್, ಫ್ರಾನ್ಸ್, ಜರ್ಮನಿ, ಇಟಲಿ, ರೊಮೇನಿಯಾ, ರಷ್ಯಾ, ದಕ್ಷಿಣ ಕೊರಿಯಾ, ಸ್ಪೇನ್, ಶ್ರೀಲಂಕಾ, ಟರ್ಕಿ, ಯುನೈಟೆಡ್ ಅರಬ್ ಎಮಿರೇಟ್ಸ್, ಯುನೈಟೆಡ್ ಕಿಂಗ್ಡಮ್, ಯುನೈಟೆಡ್ ಸ್ಟೇಟ್ಸ್ ಆಫ್ ಅಮೇರಿಕಾದಿಂದ 1,200 ಅಧಿಕ ಉದ್ಯಮಿಗಳು ಭಾಗವಹಿಸಲಿದ್ದಾರೆ ಎಂದರು.

ವಸ್ತುಪ್ರದರ್ಶನವು ದೇಶದ ಕೈಗಾರಿಕಾ ವಲಯದ ತಂತ್ರಜ್ಞಾನ, ಜಾಗತೀಕರಣ, ಸುಸ್ಥಿರತೆಗೆ ಸಹಾಯಕವಾಗಲಿದೆ. ಆರ್ಥಿಕ ಪ್ರಗತಿಯ ಕಾರಣಕ್ಕಾಗಿ ಸರ್ಕಾರವೂ ಈ ಕಾರ್ಯಕ್ರಮಕ್ಕೆ ಹೆಚ್ಚಿನ ಪ್ರಾಮುಖ್ಯತೆ ನೀಡುತ್ತಿದೆ. ಪರ್ಯಾಯ ಇಂಧನಗಳು, ಕೃತಕ ಬುದ್ಧಿಮತ್ತೆ, ಆತ್ಮ ನಿರ್ಭರ ಭಾರತ, ನಿರ್ಮಾಣ ಉಪಕರಣಗಳು, ಮಹಿಳೆಯರು ಉಪಯೋಗಿಸಬಹುದಾದ ಯಂತ್ರೋಪಕರಣಗಳು, ರಕ್ಷಣಾ ಮತ್ತು ಅರೆಸೈನಿಕರ ಬಳಕೆಯ ಉಪಕರಣ, ಆಟೋಮೇಷನ್ ಕುರಿತ ಉಪಕರಣಗಳ ಪ್ರದರ್ಶನವಿರಲಿದೆ ಎಂದು ಹೇಳಿದರು.

ಭಾರತೀಯ ಕೈಗಾರಿಕೆಗಳ ಒಕ್ಕೂಟದ ಮೈಸೂರು ವಿಭಾಗದ ಅಧ್ಯಕ್ಷ ಸ್ಯಾಮ್ ಚೆರಿಯನ್ ಮಾತನಾಡಿ, ಮೈಸೂರು ತನ್ನ ಶ್ರೀಮಂತ ಪರಂಪರೆ, ಗೌರವಾನ್ವಿತ ಶಿಕ್ಷಣ ಸಂಸ್ಥೆಗಳು ಮತ್ತು ಅಭಿವೃದ್ಧಿ ಹೊಂದುತ್ತಿರುವ ಐಟಿ ಕ್ಷೇತ್ರದಲ್ಲಿನ ಪ್ರಬಲ ಸಂಕೇತವಾಗಿದೆ. ಎಕ್ಸಾನ್ ಬ್ಯಾನರ್ ಅಡಿಯಲ್ಲಿ ಭವಿಷ್ಯವನ್ನು ರೂಪಿಸುವಲ್ಲಿ ಮೂಲಸೌಕರ್ಯದ ಪ್ರಮುಖ ಪಾತ್ರವನ್ನು ನಾವು ಪರಿಚಯಿಸಲಾಗುತ್ತಿದೆ. ಉದ್ಯಮದ ಪ್ರಮುಖರನ್ನು ಪ್ರೀತಿಯಿಂದ ಆಹ್ವಾನಿಸುತ್ತಿದ್ದು, ಅತ್ಯಾಧುನಿಕ ತಂತ್ರಜ್ಞಾನಗಳನ್ನು ಅನಾವರಣಗೊಳಿಸಲಾಗುವುದು ಎಂದು ತಿಳಿಸಿದರು. ಸಿಐಐನ ರಾಧಿಕಾ ಮತ್ತಿತರರಿದ್ದರು.

ವಿಪಕ್ಷ ನಾಯಕರಾಗಿ ಆರ್.ಅಶೋಕ್ ಆಯ್ಕೆಗೆ ಮಾಜಿ ಶಾಸಕ ನಾಗೇಂದ್ರ ಹರ್ಷ



ಮೈಸೂರು, ನ.17– ವಿಧಾನಸಭೆ ವಿರೋಧ ಪಕ್ಷದ ನಾಯಕರಾಗಿ ಆರ್. ಅಶೋಕ್ ಆಯ್ಕೆಯಾಗಿರುವುದಕ್ಕೆ ಚಾಮರಾಜ ಕ್ಷೇತ್ರದ ಮಾಜಿ ಶಾಸಕ ಎಲ್. ನಾಗೇಂದ್ರ ಹರ್ಷ ವ್ಯಕ್ತಪಡಿಸಿದ್ದಾರೆ.

ರಾಜಕೀಯ ಅನುಭವಿ ಆರ್. ಅಶೋಕ್ ಅವರು ಸಂಘಟನಾ ಚತುರ. ಇದನ್ನು ಪರಿಗಣಿಸಿಯೇ ಕೇಂದ್ರದ ವೀಕ್ಷಕರು ಇವರನ್ನು ವಿಪಕ್ಷ ನಾಯಕರನ್ನಾಗಿ ಆಯ್ಕೆ ಮಾಡಿದ್ದಾರೆ. ಇದು ಪಕ್ಷಕ್ಕೆ ಮುಂದಿನ ದಿನಗಳಲ್ಲಿ ವರದಾನವಾಗಲಿದೆ. ಸುಮಾರು ನಲವತ್ತು ವರ್ಷಗಳಿಂದ ಬಿಜೆಪಿಯಲ್ಲಿ ಸುದೀರ್ಘ ಸೇವೆ ಸಲ್ಲಿಸಿರುವ ಅಶೋಕ್ ಅವರ ನಾಯಕತ್ವವನ್ನು ಎಲ್ಲರೂ ಒಪ್ಪಿಕೊಳ್ಳುತ್ತಾರೆ ಎಂದು ಅಭಿಪ್ರಾಯಿಸಿದ್ದಾರೆ.

ರಾಜಕೀಯ ಪಟ್ಟುಗಳನ್ನು ಚೆನ್ನಾಗಿ ಬಲ್ಲ ಅಶೋಕ್ ಅವರು ಆಡಳಿತ ಪಕ್ಷದ ತಪ್ಪುಗಳನ್ನು ಗಟ್ಟಿಯಾಗಿ ಪ್ರಶ್ನಿಸಲು ಸಮರ್ಥರಿದ್ದಾರೆ. ಯಾರೊಂದಿಗೂ ಎಲ್ಲೂ ಕೂಡ ಹೊಂದಾಣಿಕೆ ರಾಜಕೀಯ ಮಾಡಿಕೊಳ್ಳದೆ, ಪಕ್ಷಕ್ಕಾಗಿ ನಿಷ್ಠೆಯಿಂದ ದುಡಿದಿದ್ದಾರೆ. ಮುಂಬರುವ ಲೋಕಸಭಾ, ಸ್ಥಳೀಯ ಸಂಸ್ಥೆಗಳ ಚುನಾವಣೆ ಮೇಲೆ ಈ ಆಯ್ಕೆ ದೊಡ್ಡ ಮಟ್ಟದಲ್ಲಿ ಪರಿಣಾಮ ಬೀರಲಿದೆ. ಅಲ್ಲದೆ ಪಕ್ಷದ ಕಾರ್ಯಕರ್ತರು ಹಾಗೂ ಮುಖಂಡರಲ್ಲಿ ಹೊಸ ಉತ್ಸಾಹ ಬಂದಿದ್ದು, ಮೈಚಳಿ ಬಿಟ್ಟು ಕೆಲಸ ಮಾಡಲಿದ್ದಾರೆ. ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮತ್ತು ಆರ್.ಅಶೋಕ್ ಜೋಡೆತ್ತಿನಂತೆ ದುಡಿಯಲಿದ್ದಾರೆ. ಇವರಿಬ್ಬರ ನೇಮಕದಿಂದ ರಾಜ್ಯ ರಾಜಕೀಯದಲ್ಲಿ ಸಂಚಲನ ಉಂಟಾಗಿದ್ದು, ಮತ್ತೆ ರಾಜ್ಯದಲ್ಲಿ ಬಿಜೆಪಿ ಅಧಿಕಾರ ಹಿಡಿಯುವುದು ನಿಶ್ಚಿತ ಎಂದು ಪ್ರಕಟಣೆಯಲ್ಲಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ನಾಳೆ 'ಗ್ರಂಥಾಲಯ' ನಾಟಕ ಪ್ರದರ್ಶನ

ಮೈಸೂರು, ನ. 17– ಮೈಸೂರಿನ 'ಚಂದಮಾಮ' ಮಕ್ಕಳ ವಾರಾಂತ್ಯ ಅಭಿನಯ ಮತ್ತು ರಂಗ ತರಬೇತಿ ಶಿಬಿರದ ಮಕ್ಕಳು ಅಭಿನಯಿಸುವ 'ಗ್ರಂಥಾಲಯ' ನಾಟಕ ನ. 19ರಂದು ಸಂಜೆ 6.30ಕ್ಕೆ ಕಲಾಮಂದಿರದ ಆವರಣದಲ್ಲಿರುವ ಕಿರುರಂಗಮಂದಿರದಲ್ಲಿ ಪ್ರದರ್ಶನವಾಗಲಿದೆ.

ಬದಲಾದ ಭಾರತ ಸುರಕ್ಷಿತವಾಗಿರಲು ಮೋದಿ ಮುಂದುವರೆಯಬೇಕು...

● ನಮೋ ಬ್ರಿಗೇಡ್ ಸಂಸ್ಥಾಪಕ ಚಕ್ರವರ್ತಿ ಸೂಲಿಬೆಲೆ ಬಲವಾದ ಪ್ರತಿಪಾದನೆ ● ಭಾರತದಲ್ಲಿ ಎಲ್ಲಾ ಕ್ಷೇತ್ರದಲ್ಲೂ ಪ್ರಧಾನಿ ಮೋದಿ ನೇತೃತ್ವದಲ್ಲಿ ಪ್ರಗತಿ





ಮೈಸೂರು, ನ.17(ಎಸ್‌ಪಿಎನ್)– ಬದಲಾದ ಭಾರತವನ್ನು ಮುಂದೆಯು ಸುರಕ್ಷಿತವಾಗಿಡಬೇಕಾದರೆ, ಮತ್ತೊಮ್ಮೆ ನರೇಂದ್ರ ದಾಮೋದರ್ ಮೋದಿ ಪ್ರಧಾನ ಮಂತ್ರಿಗಳಾಗಿ (2024ರ ಚುನಾವಣೆ ಯಲ್ಲಿ) ಮುಂದುವರೆಯುವಂತೆ ನೋಡಿಕೊಳ್ಳುವುದು ನಮ್ಮ–ನಿಮ್ಮೆಲ್ಲರ ಜವಾಬ್ದಾರಿ ಎಂದು ನಮೋ ಬ್ರಿಗೇಡ್ ಸಂಸ್ಥಾಪಕ ಚಕ್ರವರ್ತಿ ಸೂಲಿಬೆಲೆ ಅಭಿಪ್ರಾಯಪಟ್ಟರು.

ಮೈಸೂರಿನ ಜಗನ್ಮೋಹನ ಅರಮನೆಯಲ್ಲಿ ನಮೋ ಬ್ರಿಗೇಡ್ ಮೈಸೂರು ವತಿಯಿಂದ 'ಇನ್ನೂ ಮಲಗಿದರೆ, ಏಳುವಾಗ ಭಾರತವಿರುವುದಿಲ್ಲ' ಶೀರ್ಷಿಕೆಯಡಿ ಹಮ್ಮಿಕೊಂಡಿರುವ ಎರಡನೇ ದಿನದ ಉಪನ್ಯಾಸ ಕಾರ್ಯಕ್ರಮದಲ್ಲಿ ಶುಕ್ರವಾರ ಅವರು ಮಾತನಾಡಿದರು.

ಡಿಜಿಟಲ್ ವಹಿವಾಟು ಶೇ.50 ರಷ್ಟು ಭಾರತದಲ್ಲೇ: ಜಮ್ಮು–ಕಾಶ್ಮೀರಕ್ಕೆ ಕಲಂ 370 ತೆಗೆದು ಹಾಕಿದ್ದು, ರಕ್ಷಣಾ ಉಪಕರಣ ಮತ್ತು ಇನ್ನಿತರೆ ಪರಿಕರಗಳ ರಫ್ತು ಮಾರಾಟದಲ್ಲಿ ಯುಪಿಎ ಸರ್ಕಾರ ಅಧಿಕಾರದಲ್ಲಿದ್ದಾಗ 2013–14ರವರಗೆ 1,940 ಕೋಟಿ ವಹಿವಾಟು ಇತ್ತು. ಮೋದಿ ಅಧಿಕಾರ ವಹಿಸಿಕೊಂಡ ನಂತರ 15,920 ಕೋಟಿ ತಲುಪುವಂತೆ ನೋಡಿಕೊಂಡಿದ್ದು, 2013–14ರವರೆಗೆ ಇಸ್ರೋದಲ್ಲಿ ಬರೀ 35 ಉಪಗ್ರಹಗಳು ಉಡಾವಣೆಗೊಂಡಿದ್ದವು. ಮೋದಿ ಅಧಿಕಾರವಹಿಸಿಕೊಂಡ ನಂತರ 389 ಉಪಗ್ರಹಗಳು ಉಡಾವಣೆಗೆ ಸಹಕಾರ ನೀಡಿದ್ದು, ಸೌರಶಕ್ತಿ ಉತ್ಪಾದನೆ ಪ್ರಮಾಣ ಯುಪಿಎ ಸರ್ಕಾರದ ಅವಧಿಯಲ್ಲಿ 3.5 ಮೇ.ವ್ಯಾ ಉತ್ಪಾದನೆ ಇತ್ತು. ಮೋದಿ ಅಧಿಕಾರಕ್ಕೆ ಬಂದ ನಂತರ ಇದು 64.1 ಮೇ.ವ್ಯಾಗೆ ಏರಿತು. ಅಲ್ಲದೆ, ಜಗತ್ತಿನಲ್ಲಿ ಶೇ.50 ರಷ್ಟು ಡಿಜಿಟಲ್ ವಹಿವಾಟು ಇದ್ದರೆ, ಭಾರತದಲ್ಲಿ ಇನ್ನುಳಿದ ಶೇ.50ರಷ್ಟು ವಹಿವಾಟು ನಡೆದಿದೆ ಎಂದು ಅಂಕಿ–ಅಂಶಗಳ ಸಮೇತ ಮೋದಿ ಸರ್ಕಾರದ ಸಾಧನೆ ವಿವರಿಸಿದರು.

ಭಾರತದ ಗಡಿರಸ್ತೆಗಳ ಅಭಿವೃದ್ಧಿಗೆ ಒತ್ತು: ಬೋಗಿಬೀಲ್ ಸೇತುವೆಗೆ ಹೆಚ್.ಡಿ.ದೇವೇಗೌಡರು ಪ್ರಧಾನಮಂತ್ರಿಗಳಾಗಿದ್ದಾಗ 1997ರಲ್ಲಿ ಅಡಿಗಲ್ಲು ಹಾಕಿದ್ದರು. ಅದನ್ನು 2002ರಲ್ಲಿ ಅಟಲ್ ಬಿಹಾರಿ ವಾಜಪೇಯಿ ಅವರ ಅವಧಿಯಲ್ಲಿ ಕಾಮಗಾರಿ ಆರಂಭಿಸಲಾಯಿತು. ನಂತರ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಈ ಕಾಮಗಾರಿಯನ್ನು ನಿಲ್ಲಿಸಿತ್ತು. ಆದರೆ 2018ರಲ್ಲಿ ಮೋದಿ ಅವರು, ಈ ಸೇತುವೆಯನ್ನು ಲೋಕಾರ್ಪಣೆಗೊಳಿಸಿದ್ದು, ಒಂದು ಮೈಲಿಗಲ್ಲು. ಈ ಯೋಜನೆಗೆ ಸುಮಾರು 5,900 ಕೋಟಿ ವೆಚ್ಚವಾಗಿದ್ದು, 80,000 ಸ್ಟೀಲ್ ಪ್ಲೇಟ್ಸ್‌ಗಳು ಅಳವಡಿಕೆಯಾಗಿವೆ. ಈ ಸೇತುವೆ ನಿರ್ಮಾಣದಿಂದ ಅರುಣಾಚಲ ಪ್ರದೇಶ–ಅಸ್ಸಾಂ ನಡುವಿನ ಪ್ರಯಾಣ 170 ಕಿ.ಮೀ ಕಡಿತವಾಗಿದೆ. ಇದರಿಂದ ಪ್ರತಿನಿತ್ಯ 10 ಲಕ್ಷ ಮೌಲ್ಯದ ಇಂಧನ ಉಳಿತಾಯವಾಗಿದೆ ಎಂದು ಮಾಹಿತಿ ನೀಡಿದರು.

ಹೆದ್ದಾರಿ ನಿರ್ಮಾಣದಲ್ಲಿ ದಾಖಲೆ: ಈಶಾನ್ಯ ರಾಜ್ಯಗಳ ಪೆರಿಫೆರಲ್ ಹೆದ್ದಾರಿಗಳನ್ನು ಅಭಿವೃದ್ಧಿಪಡಿಸಲು ಮೋದಿ ಸರ್ಕಾರ 910 ದಿನಗಳನ್ನು ನಿಗದಿಪಡಿಸಿತ್ತು. ಆದರೆ, ಹೆದ್ದಾರಿ ಪ್ರಾಧಿಕಾರ 500 ದಿನಗಳಲ್ಲಿ ಕಾಮಗಾರಿ ಮುಗಿಸಿ, ಲೋಕಾರ್ಪಣೆ ಗೊಳಿಸಿದೆ. ದೆಹಲಿ–ಮುಂಬೈ 1350 ಕಿ.ಮೀ ಎಕ್ಸ್‌ಪ್ರೆಸ್ ಹೈವೇ ಅನ್ನು ಲಕ್ಷ ಕೋಟಿ ರೂಪಾಯಿ ವೆಚ್ಚದಲ್ಲಿ 8 ಲೈನ್ ರಸ್ತೆಯನ್ನು ಅಭಿವೃದ್ಧಿಪಡಿಸಲಾಗಿದೆ ಈ ಕಾಮಗಾರಿಗೆ 80 ಲಕ್ಷ ಸಿಮೆಂಟ್ ಉಪಯೋಗಿಸಲಾಗಿದ್ದು, ಲಕ್ಷಾಂತರ ಕಾರ್ಮಿಕರಿಗೆ ಉದ್ಯೋಗ ಸೃಷ್ಟಿಸಲಾಗಿದೆ. ಈ ಹೈವೇಯಲ್ಲಿ 2 ಸಾವಿರ ನೀರು ಪೂರೈಕೆ ಮಳಿಗೆಗಳು, 20 ಲಕ್ಷ ಗಿಡ, ಮಳೆ ಇಂಗುವ ಗುಂಡಿಗಳು, ಸೋಲಾರ್ ಬೀದಿ ದೀಪಗಳು, ಕಾಡು ಪ್ರಾಣಿಗಳ ಸುರಕ್ಷಿತ ಓಡಾಟಕ್ಕೆ ಕಾರಿಡಾರ್ ನಿರ್ಮಿಸಿ, ಐತಿಹಾಸಿಕ ದಾಖಲೆ ನಿರ್ಮಿಸಿದೆ ಎಂದರಲ್ಲದೆ ದೆಹಲಿ–ಮಿರತ್ ಎಕ್ಸ್‌ಪ್ರೆಸ್ 14 ಲೈನ್ ಹೆದ್ದಾರಿ ನಿರ್ಮಿಸಿರುವುದು ಐತಿಹಾಸಿಕ ದಾಖಲೆ ಎಂದರು.

ಮುಂಬೈ–ನಾಗ್ಪುರದ 701 ಕಿ.ಮೀ ಎಕ್ಸ್‌ಪ್ರೆಸ್ ಹೈವೇ, ನೀತಿ ಆಯೋಗ ರಚನೆ ಸೇರಿದಂತೆ ಅನೇಕ ಅಭಿವೃದ್ಧಿ ಯೋಜನೆಗಳು ದೇಶದ ವಿವಿಧ ಭಾಗದಲ್ಲಿ ಶರವೇಗದಲ್ಲಿ ಸಾಗುತ್ತಿವೆ. ಅಲ್ಲದೆ, ರಸ್ತೆ ನಿರ್ಮಾಣದಲ್ಲಿ ಸೋಲ್ಲಾಪುರ– ವಿಜಯಪುರ ಹೆದ್ದಾರಿ, ಅಮರಾವತಿ– ಅಂಕೋಲ 75 ಕಿ.ಮೀ ಹೆದ್ದಾರಿ ನಿರ್ಮಾಣ ವರ್ಲ್ಡ್ ರೇಕಾರ್ಡ್ ಆಗಿದೆ. ಅಲ್ಲದೆ ಮೋದಿ ಅಧಿಕಾರಕ್ಕೆ ಬಂದ ನಂತರ ಭಾರತ ಮಾಲಾ ಯೋಜನೆಯಡಿ 50 ಸಾವಿರ ಕಿ.ಮೀ ಹೆದ್ದಾರಿಗಳು, 35 ಸಾವಿರ ರಾಷ್ಟ್ರೀಯ ಹೆದ್ದಾರಿಗಳು, 7,500 ಕಿ.ಮೀ ಫೋರ್ಟ್ ರೋಡ್, 7,500 ಕಿ.ಮೀ ಎಕ್ಸ್‌ಪ್ರೆಸ್ ಹೈವೆ, ಎಕನಾಮಿಕ್ ಕಾರಿಡಾರ್, ಕೈಗಾರಿಕಾ ಕಾರಿಡಾರ್ ಹಾಗೂ ಇತರೆ ರಸ್ತೆಗಳ ನಿರ್ಮಿಸಿ ಐತಿಹಾಸಿಕ ದಾಖಲೆ ಬರೆದಿದೆ. ಸ್ವಾತಂತ್ರ್ಯ ಬಂದ ನಂತರ ಯುಪಿಎ ಸರ್ಕಾರದ ಅವಧಿಯಲ್ಲಿ ಒಟ್ಟಾರೆ 96 ಸಾವಿರ ಕಿ.ಮೀ ರಸ್ತೆ ನಿರ್ಮಾಣವಾಗಿತ್ತು ಎಂದು ಮಾಹಿತಿ ನೀಡಿದರು.

ವಿದೇಶಾಂಗ ನೀತಿಯಲ್ಲಿ ಅಮೂಲಾಗ್ರ ಬದಲಾವಣೆ: ಮಲ್ಲಿಕಾರ್ಜುನ ಖರ್ಗೆಯವರು ಕೇಂದ್ರದಲ್ಲಿ ಕಾರ್ಮಿಕ ಇಲಾಖೆ ಸಚಿವರಾಗಿದ್ದಾಗ ಕಲಬುರಗಿಯಲ್ಲಿ ನಿರ್ಮಿಸಿದ್ದ ಇಎಸ್‌ಐ ಆಸ್ಪತ್ರೆಯನ್ನು ಖರ್ಗೆ ಹೆಸರಿನ ರೀತಿ ಡಿಸೈನ್ ಮಾಡಿ ಕಟ್ಟಲಾಗಿದೆ. ಇಂತಹ ಸ್ವಾರ್ಥ ಸಾಧನೆ ಕಾಂಗ್ರೆಸ್‌ನಲ್ಲಿ ಸಾಧ್ಯ. ಅಂತೆಯೇ ಯುಪಿಎ ಸರ್ಕಾರದ ಅವಧಿಯಲ್ಲಿ ಹೆದ್ದಾರಿ ಅಕ್ಕ-ಪಕ್ಕ 25 ಕಿ.ಮೀಗೆ ಸೋನಿ ಯಾಗಾಂಧಿ ಮತ್ತು ಮನಮೋಹನ್ ಸಿಂಗ್ ಭಾವಚಿತ್ರವನ್ನು ಆಯಾಯ ಗುತ್ತಿಗೆದಾರರೇ ನಿರ್ಮಿಸುವಂತೆ ಆದೇಶಿಸಿದ್ದ ಪ್ರಸಂಗವನ್ನು ಪ್ರಸ್ತಾಪಿಸಿದ ಅವರು, ವಿದೇಶದಲ್ಲಿ ಭಾರತೀಯರು ಸಂಕಷ್ಟದಲ್ಲಿ ಸಿಲುಕಿದಾಗ ಯೆಮನ್ ಕದನದಲ್ಲಿ 'ಅಪರೇಷನ್ ರಾಹತ್' ಹೆಸರಿಡಿ ಜನರ ರಕ್ಷಣೆ, ಕೋವಿಡ್ ಕಾಲದಲ್ಲಿ 'ಅಪರೇಷನ್ ವಂದೇ ಭಾರತ್' ಹೆಸರಿನಡಿ ರಕ್ಷಣೆ, ರಷ್ಯಾ–ಯುಕ್ರೇನ್ ಯುದ್ಧ ಸಂದರ್ಭದಲ್ಲಿ ಭಾರತೀಯರನ್ನು ರಕ್ಷಿಸಿದ ಕೀರ್ತಿ ಮೋದಿ ಅವರಿಗೆ ಸಲ್ಲುತ್ತದೆ ಎಂದರು.

ಸ್ವದೇಶಿ ವ್ಯಾಕ್ಸಿನ್‌ಗೆ ಹೆಚ್ಚಿನ ಒತ್ತು: ಕೊರೊನಾ ಸಂದರ್ಭದಲ್ಲಿ ಮುಂದುವರೆದ ರಾಷ್ಟ್ರಗಳಿಗೆ ಸರಿಸಮಾನಾಗಿ ವ್ಯಾಕ್ಸಿನ್ ಕಂಡು ಹಿಡಿಯಲು ಭಾರತೀಯ ವಿಜ್ಞಾನಿಗಳಿಗೆ ಸಹಕರಿಸಿದ್ದು, ಕ್ವಾಡ್ ಹೆಸರಿನಡಿ ಭಾರತ, ಅಮೆರಿಕ, ಜಪಾನ್, ಆಸ್ಟ್ರೇಲಿಯಾ ದೇಶಗಳನ್ನು ಒಗ್ಗೂಡಿಸಿದ್ದು, ನಾರ್ಡಿಕ್ ಶೀರ್ಷಿಕೆಯಡಿ ಸ್ವೀಡನ್, ನಾರ್ವೆ, ಡೆನ್ಮಾರ್ಕ್, ಫಿನ್‌ಲ್ಯಾಂಡ್, ಐಲ್ಯಾಂಡ್ ದೇಶಗಳ ಮುಖ್ಯಸ್ಥರೊಂದಿಗೆ ಸಭೆ ಹಾಗೂ ಇತ್ತೀಚೆಗೆ ಜಿ.20 ಶೃಂಗಸಭೆ ಯಶಸ್ವಿಗೊಂಡಿದ್ದು, ವಿದೇಶಾಂಗ ನೀತಿಗಳಲ್ಲಿ ಅಮೂಲಾಗ್ರ ಬದಲಾವಣೆಗೆ ಸಾಕ್ಷಿ ಎಂದು ಮಾಹಿತಿ ನೀಡಿದರು.

ಮೋದಿ ಮುಂದುವರೆಯಬೇಕು: ಹಾಗಾಗಿ ಬದಲಾದ ಭಾರತವನ್ನು ಮುಂದೆಯೂ ಸುರಕ್ಷಿತವಾಗಿಡಬೇಕಾದರೆ ಭಾರತೀಯ ಮತದಾರರು 2024ರಲ್ಲಿ ನಡೆಯುವ ಲೋಕಾಸಭಾ ಚುನಾವಣೆಯಲ್ಲಿ ಮೋದಿ ಪ್ರಧಾನಿ ಹುದ್ದೆಯಲ್ಲಿ ಮುಂದುವರೆಯುವಂತೆ ಮಾಡುವುದು ನಮ್ಮ–ನಿಮ್ಮೆಲ್ಲರ ಜವಾಬ್ದಾರಿ. ಅಲ್ಲದೆ, ಭಾರತದ ವಿರೋಧಿ ನೀತಿಗಳು ವಿದೇಶಿ ವಿವಿಗಳಿಂದ ಹೊರಬೀಳುತ್ತಿದ್ದು, ಇದನ್ನೇ ಪ್ರತಿಪಕ್ಷಗಳು ಮುಂದಿನ ಚುನಾವಣಾ ಕಣದಲ್ಲಿ ಮೋದಿ ಸೋಲಿಸಲು ಪ್ರಯೋಗಿಸುತ್ತಿವೆ ಎಂದು ಆರೋಪಿಸಿದರು.

ಬ್ಯಾಂಕಾಕ್‌ನಲ್ಲಿ ಸೆಸ್ಟೋ ಬಾಲ್ ಪಂದ್ಯಾವಳಿ

ಕೊಡಗಿನ ಯುವಕರಿಬ್ಬರು ಪ್ರತಿನಿಧಿಸಿದ್ದ ಭಾರತ ತಂಡಕ್ಕೆ ಚಾಂಪಿಯನ್ ಪಟ್ಟ



ಸುಂಟಿಕೊಪ್ಪ,ನ.17– ಬ್ಯಾಂಕಾಕ್‌ನಲ್ಲಿ ನಡೆದ ಅಂತಾರಾಷ್ಟ್ರೀಯ ಸೆಪ್ಟೋ ಬಾಲ್ ಪಂದ್ಯಾವಳಿಯಲ್ಲಿ ಭಾರತ ತಂಡವನ್ನು ಪ್ರತಿನಿಧಿಸಿದ್ದ ಸುಂಟಿಕೊಪ್ಪದ ಶಾಹಿಲ್ ಉಸ್ಮಾನ್ ಹಾಗೂ ಇರ್ಷಾದ್ ಮುಸ್ತಫಾ ಅವರುಗಳಿದ್ದ ತಂಡ ಚಾಂಪಿಯನ್ಸ್ ಪಟ್ಟ ಅಲಂಕರಿಸಿದೆ.

ಶ್ರೀಲಂಕಾದ ರತ್ನಪುರದಲ್ಲಿ ನ.9ರಿಂದ 13ರವರೆಗೆ ನಡೆದ ಅಂತಾರಾಷ್ಟ್ರೀಯ ಸೆಪ್ಟೋ ಬಾಲ್ ಚಾಂಪಿಯನ್ ಶಿಪ್‌ನ ಭಾರತ ಪುರುಷರ ತಂಡದ ಥೈಲ್ಯಾಂಡ್ ಹಾಗೂ ಶ್ರೀಲಂಕಾ ತಂಡಗಳ ವಿರುದ್ಧ ಸೆಸ್ಟೋ ಬಾಲ್‌ನಲ್ಲಿ ತಮ್ಮ ಚಾಕಚಕ್ಯತೆಯನ್ನು ಪ್ರದರ್ಶಿಸಿ ದೇಶಕ್ಕೆ ಚಿನ್ನದ ಪದಕ ತಂದುಕೊಡುವಲ್ಲಿ ಯಶಸ್ವಿಯಾಗಿ ಕ್ರೀಡಾ ಜಿಲ್ಲೆ ಎನಿಸಿರುವ ಕೊಡಗಿಗೆ ಕೀರ್ತಿ ತಂದಿದ್ದಾರೆ.

ಈ ಪಂದ್ಯಾವಳಿಯಲ್ಲಿ ಶಾಹಿಲ್ ಉಸ್ಮಾನ್ ಅವರು ಭಾರತ ತಂಡದ ಕ್ಯಾಪ್ಟನ್ ಆಗಿಯೂ ಕೂಡ ಕಾರ್ಯ ನಿರ್ವಹಿಸಿದ್ದು, ಸುಂಟಿಕೊಪ್ಪ ಗ್ರಾಮ ಪಂಚಾಯಿತಿಯ ಮಾಜಿ ಸದಸ್ಯ ಕೆ.ಎ.ಉಸ್ಮಾನ್ ಅವರ ಪುತ್ರರಾಗಿದ್ದಾರೆ. ಇರ್ಷಾದ್ ಮುಸ್ತಾಫ ಅವರು ಅಂತಾರಾಷ್ಟ್ರೀಯ ಚಾಂಪಿಯನ್ ಶಿಪ್‌ನಲ್ಲಿ ಬೆಸ್ಟ್ ಪ್ಲೇಯರ್ ಆಫ್ ದಿ ಟೂರ್ನಮೆಂಟ್‌ಗೆ ಪಾತ್ರರಾಗಿದ್ದು ಇವರು ಸುಂಟಿಕೊಪ್ಪದ ದಿವಂಗತ ಜಾವ ಮನೆ ಮುಸ್ತಾಫ ಅವರ ಪುತ್ರರಾಗಿದ್ದಾರೆ. ಇವರಿಬ್ಬರ ಸಾಧನೆ ಕುರಿತು ಕೊಡಗು ಜಿಲ್ಲೆಯಲ್ಲಿ ಹರ್ಷ ವ್ಯಕ್ತವಾಗಿದ್ದು, ಅವರ ಕುಟುಂಬದವರನ್ನು ಭೇಟಿ ಮಾಡಿ ಅಭಿನಂದನೆ ಸಲ್ಲಿಸುತ್ತಿರುವ ಬಗ್ಗೆ ವರದಿಗಳು ಬಂದಿವೆ.

ಮಡಿಕೇರಿಯಲ್ಲಿ ಆದಿವಾಸಿ ಕಾರ್ಮಿಕರ ಪ್ರತಿಭಟನೆ

ತೋಟದ ಲೈನ್ ಮನೆಗಳಲ್ಲಿ ವಾಸಿಸುವ ಕಾರ್ಮಿಕರಿಗೆ ಸೌಲಭ್ಯಕ್ಕಾಗಿ ಆಗ್ರಹ



ಮಡಿಕೇರಿ,ನ.17– ತೋಟದ ಲೈನ್ ಮನೆಗಳಲ್ಲಿ ವಾಸವಿರುವ ಕಾರ್ಮಿಕರಿಗೆ ಸ್ವಂತ ಭೂಮಿ ಮತ್ತು ಮನೆ ನೀಡಬೇಕು ಎಂಬ ಬೇಡಿಕೆ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಒತ್ತಾಯಿಸಿ ಆದಿವಾಸಿ ಕಾರ್ಮಿಕರು ನಗರದಲ್ಲಿ ಪ್ರತಿಭಟನೆ ನಡೆಸಿದರು.

ದಲಿತ ಆದಿವಾಸಿ ಕೃಷಿ ಕಾರ್ಮಿಕರ ಸಂಘ, ಕರ್ನಾಟಕ ರೈತ ಸಂಘ (ಎಐಕೆಎಸ್) ಮತ್ತು ಅಖಿಲ ಭಾರತ ಕ್ರಾಂತಿಕಾರಿ ಮಹಿಳಾ ಸಂಘಟನೆ ನೇತೃತ್ವದಲ್ಲಿ ನಗರದ ಫೀ.ಮಾ. ಕಾರ್ಯಪ್ಪ ವೃತ್ತದಿಂದ ಜಿಲ್ಲಾಧಿಕಾರಿಗಳ ಕಚೇರಿವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿ ಹಕ್ಕೊತ್ತಾಯಗಳನ್ನು ಮಂಡಿಸಿದರು.

ದಲಿತ ಆದಿವಾಸಿ ಕೃಷಿ ಕಾರ್ಮಿಕರ ಸಂಘದ ರಾಜ್ಯ ಕಾರ್ಯದರ್ಶಿ ಡಿ.ಎಸ್. ನಿರ್ವಾಣಪ್ಪ ಮಾತನಾಡಿ, ಮೂಲ ನಿವಾಸಿ ಆದಿವಾಸಿಗಳು, ದಲಿತರು, ಕೃಷಿ ಕಾರ್ಮಿಕರು ಸ್ವಂತ ಸೂರಿಲ್ಲದೆ, ಆರ್ಥಿಕ, ಸಾಮಾಜಿಕ ಮತ್ತು ಶೈಕ್ಷಣಿಕವಾಗಿ ಶತ–ಶತಮಾನಗಳಿಂದ ಉಳ್ಳವರ ದೌರ್ಜನ್ಯಕ್ಕೆ ಒಳಗಾಗಿ ಸರ್ಕಾರದ ಸೌಲಭ್ಯಗಳಿಂದ ವಂಚಿತರಾಗಿದ್ದಾರೆ. ಇಂದು ನಿಜವಾದ ಆದಿವಾಸಿಗಳು ಯಾವುದೇ ಸೌಲಭ್ಯಗಳಿಲ್ಲದೆ ಸಂಕಷ್ಟ ಎದುರಿಸುತ್ತಿದ್ದಾರೆ. ಗುರುತಿನ ದಾಖಲೆಗಳನ್ನು ಮಾಲೀಕರು ಕಸಿದುಕೊಂಡು ಸರ್ಕಾರದ ದಾಖಲೆಗಳಲ್ಲಿ ಆದಿವಾಸಿಗಳು ಇಲ್ಲದಂತೆ ಮಾಡುವ ಹುನ್ನಾರ ನಡೆದಿದೆ ಎಂದು ಆರೋಪಿಸಿದರು. ಕೊಡಗಿನ ಭೂ ಮಾಲೀಕ ವರ್ಗಕ್ಕೆ ಪರಿಶಿಷ್ಟ ಪಂಗಡದ ದೃಢೀಕರಣ ನೀಡಬಾರದೆಂದು ಒತ್ತಾಯಿಸಿದರು.

ಅರಣ್ಯದ ಮಧ್ಯೆ ಇರುವ ಆದಿವಾಸಿಗಳನ್ನು ಅದೇ ಅರಣ್ಯದಂಚಿಗೆ ತಂದು ಭೂಮಿ ನೀಡಬೇಕು, ಎಲ್ಲಾ ಮೂಲಭೂತ ಸೌಕರ್ಯ ಒದಗಿಸಬೇಕು, ಜಿಲ್ಲೆಯ ವಿವಿಧ ಲೈನ್‌ಮನೆಗಳಲ್ಲಿರುವ ಜೀತದಾಳುಗಳನ್ನು ಹೊರತಂದು ಸೂರು, ಭೂಮಿ ನೀಡಿ ಸ್ವತಂತ್ರ್ಯವಾಗಿ ಬದುಕಲು ಅವಕಾಶ ಕಲ್ಪಿಸಬೇಕು, ಕೊಡಗಿನ ತೋಟ ಕಾರ್ಮಿಕರಿಗೆ ಶಾಸನಬದ್ಧ ಸಂಬಳ, ಸೌಲಭ್ಯಗಳನ್ನು ನೀಡಬೇಕು, ಬ್ಯಾಡಗೊಟ್ಟ, ಬಸವನಹಳ್ಳಿ ಆದಿವಾಸಿಗಳಿಗೆ ಪುನರ್ ವಸತಿ ಯೋಜನೆಯಡಿ ಸೌಲಭ್ಯ ಮಂಜೂರು ಮಾಡಬೇಕು, ತಾಲೂಕುವಾರು ಗುರುತಿಸಿ ಕಾಯ್ದಿರಿಸಿರುವ ಜಾಗಗಳನ್ನು ಅಭಿವೃದ್ಧಿಪಡಿಸಿ ವಸತಿಹೀನರಿಗೆ ನೀಡಬೇಕೆಂದು ಆಗ್ರಹಿಸಿದರು.

ಕರ್ನಾಟಕ ರೈತ ಸಂಘದ ರಾಜ್ಯಾಧ್ಯಕ್ಷ ಡಿ.ಹೆಚ್.ಪೂಜಾರ್ ಮಾತನಾಡಿ, ಆದಿವಾಸಿ ಜನರನ್ನು ನಾಗರಿಕ ಸಮಾಜಕ್ಕೆ ತರಲು ಹೋರಾಟ ನಡೆಯುತ್ತಿದೆ. ಆದರೆ ಸರ್ಕಾರ ಆದಿವಾಸಿಗಳಿಗೆ ಹಕ್ಕುಪತ್ರ, ಮನೆ ಹಾಗೂ ಮೂಲಭೂತ ಸೌಲಭ್ಯ ನೀಡದೆ ನಿರ್ಲಕ್ಷಿಸುತ್ತಿದೆ ಎಂದು ಆರೋಪಿಸಿದರು. ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ದಲಿತರು, ಆದಿವಾಸಿಗಳಿಗೆ ಭೂಮಿ ನೀಡುವುದಾಗಿ ಭರವಸೆ ನೀಡಿತ್ತು. ಆದರೆ ಇಂದು ಭರವಸೆಗಳೆಲ್ಲ ಹುಸಿಯಾಗಿದೆ ಎಂದು ಟೀಕಿಸಿದರು.

ದಲಿತ ಆದಿವಾಸಿ ಕೃಷಿ ಕಾರ್ಮಿಕರ ಸಂಘದ ಜಿಲ್ಲಾ ಸಮಿತಿ ಸದಸ್ಯರಾದ ವೈ.ಎಂ.ಸುರೇಶ್, ವೈ.ಸಿ.ಮೋಹನ್, ಸೌಂದರ್ಯ, ಅನಿತ, ದಾಸಪ್ಪ, ಮುತ್ತಣ್ಣ, ಎಐಟಿಯುಸಿ ಜಿಲ್ಲಾಧ್ಯಕ್ಷ ಹೆಚ್.ಎಂ. ಸೋಮಪ್ಪ, ಕರ್ನಾಟಕ ರೈತ ಸಂಘ (ಎಐಕೆಎಸ್), ಅಖಿಲ ಭಾರತ ಕ್ರಾಂತಿಕಾರಿ ಮಹಿಳಾ ಸಂಘಟನೆ ಪದಾಧಿಕಾರಿಗಳು ಸೇರಿದಂತೆ ಆದಿವಾಸಿ ಕಾರ್ಮಿಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ನ.26 ರಂದು ಜಿಲ್ಲಾ ಮಟ್ಟದ ಚೆಸ್ ಟೂರ್ನಿ

ಗೋಣಿಕೊಪ್ಪ, ನ.17– ಸರ್ವ ದೈವತಾ ಇನ್‌ಸ್ಟಿಟ್ಯೂಟ್, ಗೋಣಿಕೊಪ್ಪ ರೋಟರಿ ಕ್ಲಬ್, ಸರ್ವ ದೈವತಾ ಇಂಟ್ರಾಕ್ಟ್ ಕ್ಲಬ್ ಸಹಯೋಗದಲ್ಲಿ ಜಿಲ್ಲಾ ಮಟ್ಟದ ಚೆಸ್ ಟೂರ್ನಿಯನ್ನು ನ.26 ರಂದು ಅರ್ವತೊಕ್ಲು ಸರ್ವ ದೈವತಾ ಶಾಲೆಯಲ್ಲಿ ಆಯೋಜಿಸಲಾಗಿದೆ ಎಂದು ಸರ್ವ ದೈವತಾ ಪ್ರೌಢಶಾಲೆ ಮುಖ್ಯಶಿಕ್ಷಕ ಪೊನ್ನಿಮಾಡ ಪ್ರದೀಪ್ ತಿಳಿಸಿದ್ದಾರೆ.

5 ರಿಂದ 7 ನೇ ತರಗತಿ, 8–10, ಪದವಿಪೂರ್ವ ವಿಭಾಗಗಳ ಬಾಲಕ, ಬಾಲಕಿಯರಿಗೆ ಪ್ರತ್ಯೇಕವಾಗಿ ನಡೆಯಲಿದೆ. ನ.23 ರೊಳಗೆ ಹೆಸರು ನೋಂದಾಯಿಸಿಕೊಳ್ಳಬೇಕಿದೆ. ವಿಜೇತರಿಗೆ ನಗದು, ಟ್ರೋಫಿ ನೀಡಲಾಗುವುದು. ಜಿಲ್ಲೆಯಲ್ಲಿ ಚೆಸ್ ಅಸಕ್ತಿ ಹೆಚ್ಚಿದ್ದು, ಪೂರಕವಾಗಿ ಟೂರ್ನಿ ಆಯೋಜಿಸಲಾಗಿದೆ ಎಂದು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು. ಹೆಚ್ಚಿನ ಮಾಹಿತಿಗೆ 9900927095, 8861411875 ಸಂಪರ್ಕಿಸಬಹುದಾಗಿದೆ.

ಗೋಷ್ಠಿಯಲ್ಲಿ ಶಾಲೆಯ ದೈಹಿಕ ಶಿಕ್ಷಣ ಶಿಕ್ಷಕ ಪ್ರಮೋದ್ ಇದ್ದರು.

ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸಿ, ಪ್ರತಿಭೆ ತೋರಿಸಿ



ವಿರಾಜಪೇಟೆ, ನ.17– ಗ್ರಾಮೀಣ ವಿದ್ಯಾರ್ಥಿಗಳು ಪಾಠದೊಂದಿಗೆ ಪಠ್ಯೇತರ ಚಟುವಟಿಕೆಗಳಲ್ಲಿ ತೊಡಗುವ ಮೂಲಕ ಪ್ರತಿಭಾ ಕಾರಂಜಿಯಂತಹ ಕಲೋತ್ಸವದಲ್ಲಿ ತಮ್ಮ ಪ್ರತಿಭೆಯನ್ನು ತೋರುವಂತಾಗಬೇಕು ಎಂದು ವಿರಾಜಪೇಟೆ ತಹಶೀಲ್ದಾರ್ ಹೆಚ್.ಎನ್.ರಾಮಚಂದ್ರ ಕರೆ ನೀಡಿದರು.

ಕೊಡಗು ಜಿಲ್ಲಾ ಪಂಚಾಯತ್, ಶಿಕ್ಷಣ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಸಂತ ಅನ್ನಮ್ಮ ವಿದ್ಯಾಸಂಸ್ಥೆಯ ಸಭಾಂಗಣದಲ್ಲಿ ನಡೆದ ವಿರಾಜಪೇಟೆ ತಾಲೂಕು ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ತಾಲೂಕು ಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಸ್ಪರ್ಧಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಪ್ರತಿಯೊಂದು ಮಗುವು ಸಂಗೀತ, ಕಲೆ, ಚಿತ್ರಕಲೆ ಸೇರಿದಂತೆ ವಿಭಿನ್ನ ಕಲೆಗಳನ್ನು ಹೊಂದಿರುತ್ತಾರೆ ಅದನ್ನು ಹೊರಹೊಮ್ಮಲು ಪೋಷಕರು ತಮ್ಮ ಮಕ್ಕಳನ್ನು ಪ್ರೋತ್ಸಾಹಿಸಬೇಕು ಎಂದರು.

ಮುಖ್ಯ ಅತಿಥಿ ಸಂತ ಅನ್ನಮ್ಮ ವಿದ್ಯಾಸಂಸ್ಥೆ ವ್ಯವಸ್ಥಾಪಕರಾದ ರೆ.ಫಾ. ಐಸಾಕ್ ರತ್ನಾಕರ್ ಮಾತನಾಡಿ, ದೇವರು ಯಾರನ್ನು ಕೂಡ ಬರಿಗೈಯಲ್ಲಿ ಕಳುಹಿಸುವುದಿಲ್ಲ. ಪ್ರತಿಯೊಬ್ಬರಿಗೂ ಪ್ರತಿಭೆಗಳನ್ನು ತುಂಬಿ ಕಳುಹಿಸಿರುತ್ತಾರೆ. ಅಂತಹ ಪ್ರತಿಭೆಗಳನ್ನು ಗುರುತಿಸಿ ಪ್ರೋತ್ಸಾಹಿಸುವುದು ನಮ್ಮ ಕರ್ತವ್ಯವಾಗಿದೆ. ಶಾಲೆಗಳಲ್ಲಿ ಕಾರ್ಯಕ್ರಮದ ಮೂಲಕ ಮಕ್ಕಳ ಪ್ರತಿಭೆಯನ್ನು ಗುರುತಿಸುವ ಮೂಲಕ ಪ್ರತಿಭೆಗಳಿಗೆ ವೇದಿಕೆ ಒದಗಿಸಿ ಅವರಲ್ಲಿರುವ ಪ್ರತಿಭೆಯನ್ನು ಹೊರಹಾಕುವುದರಲ್ಲಿ ಪೋಷಕರು, ಶಿಕ್ಷಕರು ಮಹತ್ವವಾದ ಪಾತ್ರವನ್ನು ನಿರ್ವಹಿಸುತ್ತಾರೆ ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಪ್ರಕಾಶ್ ಪ್ರಾಸ್ತಾವಿಕವಾಗಿ ಮಾತನಾಡಿ, ಗ್ರಾಮೀಣ ಪ್ರದೇಶದ ಮಕ್ಕಳು ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಪ್ರತಿಭಾ ಕಾರಂಜಿ ಕಾರ್ಯಕ್ರಮ ಉತ್ತಮ ವೇದಿಕೆಯಾಗಿದ್ದು, ಇಂತಹ ಕಾರ್ಯಕ್ರಮಗಳ ಮೂಲಕ ಮಕ್ಕಳಲ್ಲಿರುವ ಪ್ರತಿಭೆಯನ್ನು ಗುರುತಿಸಬಹುದಾಗಿದೆ ಎರಡು ದಿನಗಳ ಕಾಲ ನಡೆಯುವ ಈ ಕಾರ್ಯಕ್ರಮದಲ್ಲಿ ಸುಮಾರು ಮೂರು ಸಾವಿರ ಕ್ಕೂ ಹೆಚ್ಚು ವಿದ್ಯಾರ್ಥಿಗಳು ತಮ್ಮ ಪ್ರತಿಭಾ ಪ್ರದರ್ಶನ ನೀಡಲಿದ್ದು ತಮ್ಮ ಪ್ರತಿಭೆಯನ್ನು ಕಾರಂಜಿ ರೂಪದಲ್ಲಿ ಹೊರಹೊಮ್ಮಿಸಲಿದ್ದಾರೆ ಎಂದರು.

ವೇದಿಕೆಯಲ್ಲಿ ಸಂತ ಅನ್ನಮ್ಮ ಪ್ರೌಢಶಾಲಾ ಮುಖ್ಯ ಶಿಕ್ಷಕ ಬೆನ್ನಿ, ಜಿಲ್ಲಾ ಅನುದಾನಿತ ನೌಕರರ ಸಂಘದ ಅಧ್ಯಕ್ಷ ಪಿ.ಎ. ಪ್ರಭುಕುಮಾರ್, ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಸಂಘಟನಾ ಕಾರ್ಯದರ್ಶಿ ಎ.ವಿ. ಮಂಜುನಾಥ್, ಸರಕಾರಿ ಪ್ರೌಢಶಾಲೆಗಳ ಮುಖ್ಯ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ಎಸ್.ಲಾಲ್ ಕುಮಾರ್, ದೈಹಿಕ ಶಿಕ್ಷಕರ ಸಂಘದ ಅಧ್ಯಕ್ಷ ತಮ್ಮಯ್ಯ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಸಹ ಕಾರ್ಯದರ್ಶಿ ಪಿ.ಎ. ಪ್ರವೀಣ್, ಅನುದಾನಿತ ನೌಕರರ ಸಂಘದ ಅಧ್ಯಕ್ಷ ಜಿ. ಗಿಡ್ಡಯ್ಯ, ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ಪಿ. ಉತ್ತಪ್ಪ ಸರಕಾರಿ ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕರ ಸಂಘದ ಅಧ್ಯಕ್ಷ ಎಂ.ಎಸ್. ತಮ್ಮಯ್ಯ, ಎಸ್‌ಸಿ ಎಸ್‌ಟಿ ನೌಕರರ ಸಮನ್ವಯ ಸಮಿತಿಯ ಅಧ್ಯಕ್ಷ ಟಿ.ಎಸ್ ಮಹೇಶ್, ಬಿಆರ್‌ಪಿ ಕೆ.ಸಿ.ಗೀತಾಂಜಲಿ, ಮತ್ತಿತರರು ಉಪಸ್ಥಿತರಿದ್ದರು.

ತಾಲೂಕಿನ 14 ಕ್ಲಸ್ಟರ್‌ಗಳ ಪದಾಧಿಕಾರಿಗಳು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು, ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಬಿಇಓ ವನಜಾಕ್ಷಿ ಸ್ವಾಗತಿಸಿದರು, ಶಿಕ್ಷಣ ಇಲಾಖೆಯ ಸಿಆರ್‌ಪಿ ಅನಿತಾ ಕುಮಾರಿ, ಕರುಂಬಯ್ಯ, ಜೀವನ್ ನಿರೂಪಿಸಿದರೆ ತಾಲೂಕು ದೈಹಿಕ ಶಿಕ್ಷಣ ಪರಿವೀಕ್ಷಕಿ ಗಾಯತ್ರಿ ವಂದಿಸಿದರು.

ಇಂಡಿಯನ್ ನ್ಯಾಷನಲ್ ಚಾಂಪಿಯನ್ ಶಿಪ್ ರ‍್ಯಾಲಿಗೆ ಚಾಲನೆ



ಸಿದ್ದಾಪುರ, ನ.17– ಬ್ಲೂ ಬ್ಯಾಂಡ್ ಎಫ್‌ಎಂ ಎಸ್ಸಿಐ ಇಂಡಿಯನ್ ನ್ಯಾಷನಲ್ ರ‍್ಯಾಲಿ ಚಾಂಪಿಯನ್ ಶಿಪ್ ನೇತೃತ್ವದಲ್ಲಿ ರೋಬಸ್ಟಾ ಸ್ಪೋರ್ಟ್ಸ್ ಅಂಡ್ ಅಡ್ವೆಂಚರ್ ಅಕಾಡೆಮಿ ಸಹಕಾರದೊಂದಿಗೆ ರೋಬಸ್ಟಾ 2023 ರ‍್ಯಾಲಿಗೆ ಅಮ್ಮತಿ ಯಲ್ಲಿ ಪ್ರೌಢಶಾಲೆ ಮೈದಾನದಲ್ಲಿ ಕೊಡಗಿನ ಸಂಪ್ರದಾಯದ ಬೊಳಕಾಟ್ ಪ್ರದರ್ಶನದೊಂದಿಗೆ ಗಾಳಿಯಲ್ಲಿ ಗುಂಡು ಹಾರಿಸುವ ಮೂಲಕ ಗಣ್ಯರು ಚಾಲನೆ ನೀಡಿದರು.

ಟಾಟಾ ಸಂಸ್ಥೆಯ ಸೀನಿಯರ್ ಜನರಲ್ ಮ್ಯಾನೇಜರ್ ಪೆಮ್ಮಂಡ ಮಂದಣ್ಣ, ಬ್ರಿಗೇಡಿಯರ್ ಚೇಪ್ಪುಡಿರ ಪೊನ್ನಪ್ಪ, ಕರ್ನಲ್ ಕೆ.ಸಿ. ಸುಬ್ಬಯ್ಯ ರ‍್ಯಾಲಿ ಧ್ವಜವನ್ನು ಮೇಲೆತ್ತುವ ಮೂಲಕ ಚಾಲನೆ ನೀಡಿದರು.

ಕರ್ನಾಟಕ, ತಮಿಳುನಾಡು, ಆಂಧ್ರ, ಕೇರಳ, ಮಹಾರಾಷ್ಟ್ರ, ಪಾಂಡಿ, ಗೋವಾ, ಪೂನಾ, ಚಂಡಿಗಡ್, ಕಲ್ಕತ್ತಾ, ದೆಹಲಿ ಸೇರಿದಂತೆ ವಿವಿಧ ರಾಜ್ಯಗಳ ಸುಮಾರು 60ಕ್ಕೂ ಹೆಚ್ಚು ಸ್ಪರ್ಧಾಳಿಗಳು ಕಾರು ರ‍್ಯಾಲಿಯಲ್ಲಿ ಭಾಗವಹಿಸಿದ್ದರು.

ಅಮ್ಮತ್ತಿ ಪ್ರೌಢಶಾಲಾ ಮೈದಾನದಲ್ಲಿ ರ‍್ಯಾಲಿ ಕಾರುಗಳನ್ನು ನೋಡಲು ಜಿಲ್ಲೆಯ ನಾನಾ ಭಾಗಗಳಿಂದ ಸಾವಿರಾರು ಮಂದಿ ಮೈದಾನದಲ್ಲಿ ಜಮಾಯಿಸಿ ಕಾರುಗಳನ್ನು ನೋಡಿ ಖುಷಿಪಟ್ಟರಲ್ಲದೆ ಸ್ಪರ್ಧಾಳುಗಳಿಗೆ ಶುಭ ಕೋರಿದರು. ಪಾಲಿಬೆಟ್ಟ ಸುತ್ತಮುತ್ತಲ ಕಾಫಿ ತೋಟಗಳಾದ ಪಾಲಿಬೆಟ್ಟ ಎಸ್ಟೇಟ್, ಆನಂದಪುರ, ಹೊಸಳ್ಳಿ, ಮಾರ್ಗೊಳ್ಳಿ ಕಾಫಿ ತೋಟದ ಕಡಿದಾದ ರಸ್ತೆಗಳಲ್ಲಿ 2 ದಿನಗಳ ಕಾಲ ರ‍್ಯಾಲಿ ಕಾರುಗಳು ಸಂಚರಿಸಲಿವೆ. ಈ ಸಂದರ್ಭ ಬ್ಲೂ ಬ್ಯಾಂಡ್‌ನ ಪ್ರಮುಖರಾದ ಪ್ರೇಮ್ ನಾಥ್, ಮೂಸ, ರೋಬಸ್ಟಾ ಸ್ಪೋರ್ಟ್ಸ್ ಅಂಡ್ ಅಡ್ವೆಂಚರ್ ಅಕಾಡೆಮಿಯ ಉದ್ಧಪಂಡ ತಿಮ್ಮಣ್ಣ,ಅಪ್ಪಣ್ಣ, ಜಮ್ಮಂಡ ಸೋಮಣ್ಣ, ಮಹೇಶ್ ಅಪ್ಪಯ್ಯ ಸೇರಿದಂತೆ ಮತ್ತಿತರರು ಹಾಜರಿದ್ದರು.

ಮುಖ್ಯಮಂತ್ರಿಗಳ ಯುವ ಸಂಸತ್ ಸಂವಾದಕ್ಕೆ ಇಬ್ಬರು ವಿದ್ಯಾರ್ಥಿಗಳ ಆಯ್ಕೆ, ಹೆಮ್ಮೆಯ ವಿಚಾರ

ಪ್ರತಿಭೆಗಳ ಪ್ರೋತ್ಸಾಹಕ್ಕೆ ಕಾರಂಜಿ ಉತ್ತಮ ವೇದಿಕೆ– ಎ.ಆರ್.ಕೃಷ್ಣಮೂರ್ತಿ



ಕೊಳ್ಳೇಗಾಲ, ನ.17– ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಯುವ ಸಂಸತ್ ಸಂವಾದ ಕಾರ್ಯಕ್ರಮಕ್ಕೆ ಕೊಳ್ಳೇಗಾಲ ಶೈಕ್ಷಣಿಕ ವಲಯದ ಇಬ್ಬರು ವಿದ್ಯಾರ್ಥಿಗಳು ಆಯ್ಕೆಯಾಗಿರುವುದು ಹೆಮ್ಮೆಯ ವಿಚಾರ ಎಂದು ಶಾಸಕ ಎ.ಆರ್. ಕೃಷ್ಣಮೂರ್ತಿ ತಿಳಿಸಿದ್ದಾರೆ.

ತಾಲೂಕು ಹಂತದ ಕಲಿಕೋತ್ಸವ (ಪ್ರತಿಭಾ ಕಾರಂಜಿ) ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ನಮ್ಮ ತಾಲೂಕಿನ ಮಾಲಂಗಿ ಪ್ರೌಢಶಾಲೆಯ ಪವನ್ ಕುಮಾರ್, ಮುಳ್ಳೂರು ಸರ್ಕಾರಿ ಪ್ರೌಢಶಾಲೆಯ ಕುಮಾರಿ ಮಾನ್ಯ ಎಂಬ ವಿದ್ಯಾರ್ಥಿಗಳು ಸಿದ್ದರಾಮಯ್ಯ ಅವರ ಸಮ್ಮುಖದಲ್ಲಿ ನಡೆಯುವ ಯುವ ಸಂಸತ್ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಇಬ್ಬರು ಸರ್ಕಾರಿ ಶಾಲೆ ವಿದ್ಯಾರ್ಥಿಗಳು ಪಾಲ್ಗೊಳ್ಳುವ ಸೌಭಾಗ್ಯ ದೊರೆತಿರುವುದು ನಿಜಕ್ಕೂ ಹೆಮ್ಮೆ ಮತ್ತು ಸಂತಸ ಪಡುವ ವಿಚಾರ. ಆಯ್ಕೆಯಾದ ಇಬ್ಬರು ವಿದ್ಯಾರ್ಥಿಗಳಿಗೆ ನಾನು ಅಭಿನಂದನೆ ಸಲ್ಲಿಸುವೆ, ಭಾರತದ ಭವಿಷ್ಯದ ವಜ್ರಗಳೇ ಶಾಲಾ ಮಕ್ಕಳು. ಇಂತಹ ಉತ್ತಮ ಮಕ್ಕಳನ್ನು ಬೆಳೆಸುವುದು ನಮ್ಮೆಲ್ಲದ ಆದ್ಯ ಕರ್ತವ್ಯವೂ ಹೌದು ಎಂದರು.

ಈ ವೇಳೆ ತಹಸೀಲ್ದಾರ್ ಮಂಜುಳಾ, ಕ್ಷೇತ್ರ ಶಿಕ್ಷಣಾಧಿಕಾರಿ ಮಂಜುಳಾ, ಬಿಆರ್‌ಸಿ ಮಹದೇವ ಕುಮಾರ್, ಆರ್‌ಸಿಎಂ ಶಾಲೆಯ ಸಿಸ್ಟರ್ ಗೆಲ್ಸಿ, ಸಂತ ಫ್ರಾನ್ಸಿಸ್ ಚರ್ಚ್ ಫಾದರ್ ಪೌಲ್ ಎಬಿನೇಜರ್, ನಗರಸಭೆ ಸದಸ್ಯರಾದ ಶಾಂತರಾಜು, ಮಂಜುನಾಥ್, ಜಯಮೇರಿ, ನಾಗೇಂದ್ರ, ಶಂಕರ್ ನಾರಾಯಣ ಗುಪ್ತ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಿ.ತೋಟೇಶ್, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಅಲೆಗ್ಸಾಂಡರ್, ಪ್ರಾಥಮಿಕ ಶಾಲಾ ಶಿಕ್ಷಣ ಸಂಘದ ಅಧ್ಯಕ್ಷ ಶ್ರೀಧರ್, ಪ್ರೌಢಶಾಲಾ ಶಿಕ್ಷಣ ಸಂಘದ ಅಧ್ಯಕ್ಷ ಶಿವರಾಜು, ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಅಧ್ಯಕ್ಷ ಅಕ್ಬರ್, ಚಿಕ್ಕರಾಜು, ವಾಸು, ಬುಕಾನಿ ಇನ್ನಿತರಿದ್ದರು.

ಅಂಬೇಡ್ಕರ್ ನಾಮಫಲಕಕ್ಕೆ ಕಿಡಿಗೇಡಿಗಳಿಂದ ಅಪಮಾನ

ಸ್ಥಳಕ್ಕೆ ಹಿರಿಯ ಪೊಲೀಸ್ ಅಧಿಕಾರಿಗಳು ಭೇಟಿ, ಆರೋಪಿಗಳ ಬಂಧನಕ್ಕೆ ಕಾರ್ಯಾಚರಣೆ



ಚಾಮರಾಜನಗರ, ನ.17– ಅಂಬೇಡ್ಕರ್ ನಾಮಫಲಕಕ್ಕೆ ಕಿಡಿಗೇಡಿ ಗಳು ಅಪಮಾನ ಎಸಗಿರುವ ಘಟನೆ ತಾಲೂಕಿನ ಸಂತೇಮರಳ್ಳಿ ಸಮೀಪದ ಕುದೇರು ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಅಂಬೇಡ್ಕರ್ ಬೀದಿಯಲ್ಲಿ ಅಳವಡಿಸಿರುವ ಡಾ.ಬಿ.ಆರ್.ಅಂಬೇಡ್ಕರ್ ಭಾವಚಿತ್ರ ಸಹಿತವಿರುವ ಅಂಬೇಡ್ಕರ್ ಬಡಾವಣೆ ಎಂದು ಬರೆದಿದ್ದ ನಾಮಫಲಕಕ್ಕೆ ಕಿಡಿಗೇಡಿಗಳು ಚಪ್ಪಲಿ ಹಾರ ಹಾಕುವ ಮೂಲಕ ಕೃತ್ಯವೆಸಗಿದ್ದಾರೆ. ಇದನ್ನು ಶುಕ್ರವಾರ ಬೆಳಗ್ಗೆ ನೋಡಿದ ಗ್ರಾಮದ ಅಂಬೇಡ್ಕರ್ ಬಡಾವಣೆ ನಿವಾಸಿಗಳು ಸ್ಥಳದಲ್ಲಿ ಜಮಾಯಿಸಿದರು. ಈ ವೇಳೆ ಬಿಗುವಿನ ವಾತಾವರಣ ನಿರ್ಮಾಣವಾಯಿತು. ಕೃತ್ಯವೆಸಗಿದ್ದ ಕಿಡಿಗೇಡಿಗಳನ್ನು ಬಂಧಿಸಿ, ಅವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಬಡಾವಣೆ ನಿವಾಸಿಗಳು ಆಗ್ರಹಿಸಿದರು.

ಈ ವಿಷಯ ತಿಳಿದ ಕೂಡಲೇ ಸ್ಥಳಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು, ಡಿವೈಎಸ್‌ಪಿ ಲಕ್ಷ್ಮಣಯ್ಯ, ಕುದೇರು ಠಾಣೆಯ ಇನ್‌ಸ್ಪೆಕ್ಟರ್ ಚಿಕ್ಕರಾಜಶೆಟ್ಟಿ, ಸಬ್ ಇನ್‌ಸ್ಪೆಕ್ಟರ್ ತಾಜುದ್ದೀನ್ ಸೇರಿದಂತೆ ಇತರೆ ಅಧಿಕಾರಿಗಳು ಹಾಗೂ ಸಂತೇಮರಳ್ಳಿ ಹಾಗೂ ಕುದೇರು ಪೊಲೀಸ್ ಠಾಣೆಯ ಪೊಲೀಸರು ಭೇಟಿ ನೀಡಿ ಪರಿಶೀಲಿಸಿದರು.

ಘಟನೆಯ ಸಂಬಂಧ ಬಾಬಾ ಸಾಹೇಬ್ ಡಾ.ಬಿ.ಆರ್. ಅಂಬೇಡ್ಕರ್ ಸೇವಾ ಸಂಘದ ಅಧ್ಯಕ್ಷ ಕೆ.ಎನ್. ಶಿವಕುಮಾರ್ ಅವರು ಕುದೇರು ಠಾಣೆಯಲ್ಲಿ ದೂರು ನೀಡಿದ್ದು, ಕೃತ್ಯ ಎಸಗಿದ್ದ ಕಿಡಿಗೇಡಿಗಳನ್ನು ಬಂಧಿಸಿ, ಅವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ.

ದೂರು ದಾಖಲಿಸಿಕೊಂಡಿರುವ ಕುದೇರು ಠಾಣೆಯ ಪೊಲೀಸರು ಕಿಡಿಗೇಡಿಗಳ ಪತ್ತೆಗಾಗಿ ಕ್ರಮ ಕೈಗೊಂಡಿದ್ದಾರೆ. ಈ ಸಂಬಂಧ ಸ್ಥಳದಲ್ಲಿ ಪರಿಶೀಲನೆ ನಡೆಸಿ, ತನಿಖೆ ಆರಂಭಿಸಿದ್ದಾರೆ. ಗ್ರಾಮದಲ್ಲಿ ಶಾಂತಿ, ಸುವ್ಯವಸ್ಥೆಯನ್ನು ಕಾಪಾಡುವ ನಿಟ್ಟಿನಲ್ಲಿ ಬೆಳಗ್ಗೆಯಿಂದಲೇ ಪೊಲೀಸರು ಗ್ರಾಮದಲ್ಲಿ ಮೊಕ್ಕಾಂ ಹೂಡಿದ್ದು, ಘಟನೆ ನಡೆದ ಸ್ಥಳದಲ್ಲಿ ಬಂದೋಬಸ್ತ್ ಕೈಗೊಂಡಿದ್ದಾರೆ.

ಸ್ಥಳಕ್ಕೆ ಭೇಟಿ ನೀಡಿದ ಎಸ್‌ಪಿ ಪದ್ಮಿನಿ ಸಾಹು ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡು ಆರೋಪಿಗಳ ಪತ್ತೆಗೆ ಮಾರ್ಗದರ್ಶನ ನೀಡಿದ್ದು, ಯಾವುದೇ ಅಹಿತಕರ ಘಟನೆ ನಡೆಯದಂತೆ ಮುಂಜಾಗ್ರತೆ ವಹಿಸುವಂತೆ ನಿರ್ದೇಶನ ನೀಡಿದರು. ಘಟನೆ ಸಂಬಂಧ 'ಮೈಸೂರು ಮಿತ್ರ'ಕ್ಕೆ ಕುದೇರು ಠಾಣೆ ಎಸ್‌ಐ ತಾಜುದ್ದೀನ್ ಮಾತನಾಡಿ, ಘಟನೆಯನ್ನು ಗಂಭೀರವಾಗಿ ಪರಿಗಣಿಸಲಾಗಿದ್ದು, ಈ ಸಂಬಂಧ ಅನುಮಾನಾಸ್ಪದ ವ್ಯಕ್ತಿಗಳನ್ನು ಕರೆದು ವಿಚಾರಣೆ ನಡೆಸಲಾಗುತ್ತಿದ್ದು, ಶೀಘ್ರವೇ ಕೃತ್ಯ ಎಸಗಿದ್ದ ಆರೋಪಿಗಳನ್ನು ಬಂಧಿಸಲಾಗುವುದು. ಸದ್ಯ ಗ್ರಾಮದಲ್ಲಿ ಯಾವುದೇ ಅಹಿತಕರ ಘಟನೆ ನಡೆದಿಲ್ಲ. ಶಾಂತಿಯುತವಾಗಿದ್ದು, ತನಿಖೆಯನ್ನು ಮುಂದುವರಿಸಲಾಗಿದೆ ಎಂದು ತಿಳಿಸಿದರು.

ನಾಳೆ ಬಸವಪುರ, ನ.21ರಂದು ಕುಡ್ಲೂರು ಗ್ರಾಮಗಳಲ್ಲಿ ಬೀದಿನಾಟಕ, ಜಾಗೃತಿ ಹಾಡು ಮೂಲಕ ಕಾನೂನು ಅರಿವು

ಚಾಮರಾಜನಗರ, ನ.17– ಬಾಲ್ಯ ವಿವಾಹ ನಿಷೇಧ ಕಾಯ್ದೆ, ಮಾದಕ ವ್ಯಸನ ತಡೆ, ಆರ್ಥಿಕ ವ್ಯವಹಾರ ಪಾರದರ್ಶಕತೆ, ಮಹಿಳಾ ಸಬಲೀಕರಣ, ಮಹಿಳೆಯರ ಮೇಲೆ ಆಗುತ್ತಿರುವ ದೌರ್ಜನ್ಯಗಳು ಹಾಗೂ ಆರೋಗ್ಯದ ನಿರ್ವಹಣೆ ಬಗ್ಗೆ ಬೀದಿ ನಾಟಕ ಮತ್ತು ಜಾಗೃತಿ ಹಾಡುಗಳನ್ನು ಹಾಡುವ ಮೂಲಕ ಕಾನೂನು ಅರಿವು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ತಾಲೂಕಿನ ಬಸವಪುರ ಗ್ರಾಮದಲ್ಲಿ ನ.19 ರಂದು ಹಾಗೂ ಕೂಡ್ಲೂರು ಗ್ರಾಮದಲ್ಲಿ ನ.21 ರಂದು ಕಾರ್ಯಕ್ರಮ ನಡೆಯಲಿದೆ. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮೀಣ ಯೋಜನಾಭಿವೃದ್ಧಿ ಟ್ರಸ್ಟ್ ಸಹಭಾಗಿತ್ವದಲ್ಲಿ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ಶ್ರೀಧರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಡಿ.3, ವಿಕಲಚೇತನರ ದಿನ ಆಚರಣೆ ಅಗತ್ಯ ಸಿದ್ಧತೆಗೆ ಡಿಸಿ ಶಿಲ್ಪಾನಾಗ್ ಸೂಚನೆ



ಚಾಮರಾಜನಗರ, ನ.17– ಜಿಲ್ಲಾಮಟ್ಟದ ವಿಕಲಚೇತನರ ದಿನಾಚರಣೆ ಕಾರ್ಯಕ್ರಮವನ್ನು ಡಿ.3ರಂದು ನಗರದಲ್ಲಿ ಹಮ್ಮಿಕೊಳ್ಳಲಾಗುತ್ತಿದ್ದು, ಈ ಸಂಬಂಧ ಅಗತ್ಯ ಸಿದ್ಧತೆಗಳನ್ನು ವ್ಯವಸ್ಥಿತವಾಗಿ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಶಿಲ್ಪಾನಾಗ್ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾಮಟ್ಟದ ವಿಕಲಚೇತನರ ದಿನ ಆಚರಣೆ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಭೆಯ ಆರಂಭದಲ್ಲಿ ಜಿಲ್ಲಾಮಟ್ಟದ ವಿಕಲಚೇತನರ ದಿನಾಚರಣೆ ಕಾರ್ಯಕ್ರಮಕ್ಕಾಗಿ ಜಿಲ್ಲಾಮಟ್ಟದ ವಿವಿಧ ಇಲಾಖೆ ಅಧಿಕಾರಿಗಳ ಸಮಿತಿ ರಚಿಸಲಾಗಿದ್ದು, ಸಮಿತಿ ಅಧಿಕಾರಿಗಳು ಸಂಘ ಸಂಸ್ಥೆಗಳೊಂದಿಗೆ ಸಮನ್ವಯ ಸಾಧಿಸಿ ವಹಿಸಿರುವ ಸಿದ್ಧತಾ ಕೆಲಸ ಕಾರ್ಯಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಕಾರ್ಯಕ್ರಮ ನಿರ್ವಹಣೆಯಲ್ಲಿ ಯಾವುದೇ ಲೋಪಗಳಾಗದಂತೆ ವ್ಯವಸ್ಥಿತವಾಗಿ ಆಯೋಜಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಯವರು ಸೂಚಿಸಿದರು. ಕ್ರೀಡಾಕೂಟ ನಡೆಯುವ ಜಿಲ್ಲಾ ಕ್ರೀಡಾಂಗಣದಲ್ಲಿ ಸಾಂಸ್ಕೃತಿಕ ಸ್ಪರ್ಧೆಗಳು ನಡೆಯಲಿರುವುದರಿಂದ ಕ್ರೀಡಾಂಗಣದ ಸ್ವಚ್ಛತೆ, ಕುಡಿಯುವ ನೀರು, ಮಣ್ಣಿಗೆ ನೀರು ಹಾಕಿ ಹದಗೊಳಿಸುವುದು ಹಾಗೂ ಶೌಚಾಲಯಗಳು ಸುಸ್ಥಿತಿಯಲ್ಲಿರಬೇಕು. ಕ್ರೀಡಾಂಗಣದಲ್ಲಿರುವ ಶೌಚಾಲಯದೊಂದಿಗೆ ಕ್ರೀಡಾಕೂಟದಲ್ಲಿ ಬಾಗವಹಿಸುವ ವಿಕಲಚೇತನರಿಗೆ ಇತರೆ 5 ಮೊಬೈಲ್ ಶೌಚಾಲಯಗಳ ವ್ಯವಸ್ಥೆ ಮಾಡುವಂತೆ ಜಿಲ್ಲಾಧಿಕಾರಿಯವರು ನಗರಸಭಾ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ದಿನಾಚರಣೆಯಂದು ಯುಡಿಐಡಿ ಕಾರ್ಡ್ ಆಗಿಲ್ಲದ ವಿಕಲಚೇತನರಿಗೆ ಕಾರ್ಡ್ ಮಾಡಿಕೊಡುವ ವ್ಯವಸ್ಥೆಯು ಸಹ ಇರಲಿದೆ. ಅಲ್ಲದೆ ಜಿಪಂನಿಂದ ಕಡ್ಡಾಯ ಮತದಾನದ ಬಗ್ಗೆ ಸ್ವೀಪ್ ಜಾಗೃತಿ ನಡೆಯಲಿದೆ. ಕಾರ್ಯಕ್ರಮ ಯಶಸ್ಸಿಗೆ ಸಹಕಾರ ಹಾಗೂ ಸಮನ್ವಯ ಅಗತ್ಯ ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಎಡಿಸಿ ಗೀತಾ ಹುಡೇದ, ಜಿಪಂ ಉಪ ಕಾರ್ಯದರ್ಶಿ ಲಕ್ಷ್ಮೀ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಸುರೇಶ್, ಜಿಲ್ಲಾಮಟ್ಟ ಅಧಿಕಾರಿಗಳು, ವಿವಿಧ ಸಂಘಸಂಸ್ಥೆಗಳ ಪದಾಧಿಕಾರಿಗಳು ಇತರರು ಸಭೆಯಲ್ಲಿದ್ದರು.

ಆಟೋಗೆ ಟ್ರಾಕ್ಟರ್ ಡಿಕ್ಕಿ: ಯುವಕ ಸಾವು

ಬೇಗೂರು, ನ.17– ಆಟೋಗೆ ಟ್ರಾಕ್ಟರ್ ಡಿಕ್ಕಿ ಹೊಡೆದ ಪರಿಣಾಮ ಓರ್ವ ಯುವಕ ಸಾವನ್ನಪ್ಪಿ, ಮತ್ತೋರ್ವ ಗಾಯಗೊಂಡಿರುವ ಘಟನೆ ಇಲ್ಲಿಗೆ ಸಮೀಪದ ನಿಟ್ರೆ ಗ್ರಾಮದ ಬಳಿ ಸಂಭವಿಸಿದೆ.

ನಿಟ್ರೆ ಗ್ರಾಮದ ನಿವಾಸಿ ಮಂಜು (18) ಎಂಬುವವರೇ ಅಪಘಾತದಲ್ಲಿ ಸಾವನ್ನಪ್ಪಿದ ಯುವಕ. ಗಾಯಗೊಂಡಿರುವ ಮತ್ತೋರ್ವನನ್ನು ಬೇಗೂರು ಆಸ್ಪತ್ರೆಗೆ ದಾಖಲಿಸಲಾಗಿದೆ.

ಮಂಜು ಸೇರಿದಂತೆ 6 ಮಂದಿ ಆಟೋರಿಕ್ಷಾದಲ್ಲಿ ಬೇಗೂರು ಗ್ರಾಮದಿಂದ ನಿಟ್ರೆಗೆ ತೆರಳುತ್ತಿದ್ದ ವೇಳೆ ಟ್ರಾಕ್ಟರ್‌ವೊಂದರ ಟ್ರಾಲಿ ತಾಗಿ ಆಟೋ ಪಲ್ಟಿಯಾಗಿ ಅನಾಹುತ ಸಂಭವಿಸಿದೆ. ಅಪಘಾತದ ನಂತರ ಟ್ರಾಕ್ಟರ್ ಮತ್ತು ಚಾಲಕನನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಡಿವೈಎಸ್ಪಿ ಲಕ್ಷ್ಮಯ್ಯ ಮತ್ತು ಸರ್ಕಲ್ ಇನ್ಸ್‌ಪೆಕ್ಟರ್ ವನರಾಜ್ ಅವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಬೇಗೂರು ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.

ಕಬ್ಬು ಬೆಳೆಗಾರರ ಸಂಘದಿಂದ ರಸ್ತೆ ತಡೆ, ಪ್ರತಿಭಟನೆ



ಚಾಮರಾಜನಗರ, ನ.17– ರಾಜ್ಯ ಕಬ್ಬು ಬೆಳೆಗಾರರ ಸಂಘದ ತಾಲೂಕು ಅಧ್ಯಕ್ಷ ಹಾಲಿನ ನಾಗರಾಜು ಅವರನ್ನು ಬಂಧಿಸಿರುವುದನ್ನು ಖಂಡಿಸಿ ತಾಲೂಕಿನ ಉಡಿಗಾಲ ಗ್ರಾಮ ಘಟಕದ ಪದಾಧಿಕಾರಿಗಳು ರಸ್ತೆ ನಡೆಸಿ ಪ್ರತಿಭಟನೆ ನಡೆಸಿದರು.

ತಾಲೂಕಿನ ಉಡಿಗಾಲ ಗ್ರಾಮದಲ್ಲಿ ಚಾಮರಾಜನಗರ– ಗುಂಡ್ಲುಪೇಟೆ ಮುಖ್ಯ ರಸ್ತೆಯನ್ನು ತಡೆದು ಕೆಲಕಾಲ ಧರಣಿ ನಡೆಸಿದ ರೈತ ಮುಖಂಡರು ರಾಜ್ಯ ಸರ್ಕಾರ, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಪೊಲೀಸರ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಗ್ರಾಮ ಘಟಕದ ಅಧ್ಯಕ್ಷ ಮಂಜುನಾಥ್ ಮಾತನಾಡಿ, ನಗರಕ್ಕೆ ಸಿಎಂ ಸಿದ್ದರಾಮಯ್ಯ ಆಗಮನದ ಹಿನ್ನೆಲೆಯಲ್ಲಿ, ಸಿಎಂ ವಿರುದ್ಧ ಯಾವುದೇ ಪ್ರತಿಭಟನೆ ನಡೆಸಬಾರದು ಎಂದು ಮುನ್ನೆಚ್ಚರಿಕಾ ಕ್ರಮವಾಗಿ ನಮ್ಮ ಸಂಘದ ತಾಲೂಕು ಅಧ್ಯಕ್ಷರಾದ ಹಾಲಿನ ನಾಗರಾಜು ಅವರನ್ನು, ಮುಂಜಾನೆ ನಾಲ್ಕು ಗಂಟೆಯ ವೇಳೆಯಲ್ಲಿ ಪೊಲೀಸರು ಬಂಧಿಸಿರುವುದು ಖಂಡನೀಯ ಎಂದು ಅಸಮಾಧಾನ ಹೊರಹಾಕಿದರು.

ಸಿಎಂ ಅವರು ಬರ ಪರಿಹಾರ ಕೊಟ್ಟಿಲ್ಲ. 10 ಗಂಟೆ ವಿದ್ಯುತ್ ನೀಡುತ್ತೇವೆ ಎಂದು ಹೇಳಿ ಈಗ ಸರಿಯಾಗಿ ವಿದ್ಯುತ್ ನೀಡುತ್ತಿಲ್ಲ. ಕಬ್ಬಿನ ಬಾಕಿ ಹಣವನ್ನು ನೀಡಿಲ್ಲ. ಅದರ ಹಣ ಜಿಲ್ಲೆಗೆ 9.5ಕೋಟಿ ರೂ. ಬರಬೇಕು. ಅದನ್ನು ಕೇಳಲು ಹೋದರೆ ರೈತರನ್ನು ಬಂಧಿಸುವುದು ಎಷ್ಟರ ಮಟ್ಟಿಗೆ ಸರಿ. ಇದೇ ರೀತಿ ಹೋದರೆ, ಮುಂದಿನ ದಿನಗಳಲ್ಲಿ ಜನಪ್ರತಿನಿಧಿಗಳು ಎಲ್ಲೇ ಬಂದರೂ ಅವರ ವಿರುದ್ಧ ಹೋರಾಟ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಸಿದ್ದೇಶ್, ರಾಜು, ಅಭಿಷೇಕ್, ಲೋಕೇಶ್, ಕೀರ್ತಿ, ಶ್ರೀಕಂಠಸ್ವಾಮಿ, ಪ್ರದೀಪ್, ಚೇತನ್, ನವೀನ್, ಶಿವು ಸೇರಿದಂತೆ ಇತರರಿದ್ದರು.

ರಾಷ್ಟ್ರೀಯ ಹೆದ್ದಾರಿಯಲ್ಲಿ ಕಡ್ಲೆಪುರಿ, ಕಾಸು ಎರಚಿ ಪ್ರತಿಭಟನೆ



ಚಾಮರಾಜನಗರ, ನ.17– ತಮಿಳುನಾಡಿಗೆ ಕಾವೇರಿ ನೀರು ಹರಿಸುತ್ತಿರುವ ಕ್ರಮ ಖಂಡಿಸಿ ಕರ್ನಾಟಕ ಸೇನಾಪಡೆ ವತಿಯಿಂದ ನಗರದಲ್ಲಿ ಕಳೆದ 68 ದಿನಗಳಿಂದ ನಿರಂತರವಾಗಿ ಪ್ರತಿಭಟನೆ ನಡೆಸುತ್ತಿದ್ದು, ಇಂದು ಕೂಡ ರಾಷ್ಟ್ರೀಯ ಹೆದ್ದಾರಿಯಲ್ಲಿ ಕಡ್ಲೆಪುರಿ, ಕಾಸು ಎರಚಿ ವಿನೂತನ ಪ್ರತಿಭಟನೆ ನಡೆಸಲಾಯಿತು.

ನಗರದ ಚಾಮರಾಜೇಶ್ವರ ಉದ್ಯಾನವನದ ಮುಂಭಾಗದಲ್ಲಿ ಕರ್ನಾಟಕ ಸೇನಾಪಡೆ ಅಧ್ಯಕ್ಷ ಚಾ.ರಂ.ಶ್ರೀನಿವಾಸಗೌಡರ ನೇತೃತ್ವದಲ್ಲಿ ಜಮಾಯಿಸಿದ ಪ್ರತಿಭಟನಾನಿತರು, ಅಲ್ಲಿಂದ ಮೆರವಣಿಗೆ ಹೊರಟು ಭುವನೇಶ್ವರಿ ವೃತ್ತಕ್ಕೆ ತೆರಳಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಕಡ್ಲೆಪುರಿ, ಕಾಸು ಎರಚಿ ಕೇಂದ್ರ ಮತ್ತು ರಾಜ್ಯ ಸರ್ಕಾರ, ತಮಿಳುನಾಡು ಸರ್ಕಾರ, ಕಾವೇರಿ ನೀರು ನಿರ್ವಹಣಾ ಮಂಡಳಿ ವಿರುದ್ಧ ಧಿಕ್ಕಾರ ಕೂಗಿ ಅಕ್ರೋಶ ವ್ಯಕ್ತಪಡಿಸಿದರು. ಪ್ರತಿಭಟನೆಯಲ್ಲಿ ಶಾ.ಮುರಳಿ, ಪಣ್ಯದಹುಂಡಿ ರಾಜು, ಚಾ.ವೆಂ. ರಾಜ್ ಗೋಪಾಲ್, ಗು.ಪುರುಷೋತ್ತಮ್, ತಾಂಡವಮೂರ್ತಿ, ಲಿಂಗರಾಜು, ವೀರಭದ್ರ, ಮಂಜು, ಪ್ರಕಾಶ್ ಇತರರಿದ್ದರು.

ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ

ರೂ. 600 + 30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ 0821–2496522/23

ತಕ್ಷಣ ಬೇಕಾಗಿದ್ದಾರೆ
ಹೊಗೆ ಪರೀಕ್ಷೆ ಕೇಂದ್ರದಲ್ಲಿ ಕೆಲಸ ಮಾಡಲು ಪುರುಷರು/ಮಹಿಳೆಯರು. ಶ್ರೀ ಸರ್ವೀಸ್ ಸ್ಟೇಷನ್ ಸರಸ್ವತಿಪುರಂ ಮೈಸೂರು
7353592364

ತಕ್ಷಣ ಬೇಕಾಗಿದ್ದಾರೆ
ಪೆಟ್ರೋಲ್ ಬಂಕ್‌ನಲ್ಲಿ ಪಂಪ್–ಕ್ಯಾಷಿಯರ್ ಹುದ್ದೆಗೆ ಪುರುಷರು/ಮಹಿಳೆಯರು ಅನುಭವಿಗಳಿಗೆ ಮೊದಲ ಆದ್ಯತೆ ಖುದ್ದಾಗಿ ಸಂಪರ್ಕಿಸಿ
ಶ್ರೀ ಸರ್ವೀಸ್ ಸ್ಟೇಷನ್ ಸರಸ್ವತಿಪುರಂ ಮೈಸೂರು

WANTED
ಟೆಕ್ನಿಷಿಯನ್ ಹುಡುಗರು
ಐಟಿಐ ಎಲೆಕ್ಟ್ರಿಕಲ್ಸ್ ಆದವರಿಗೆ ಆದ್ಯತೆ
ದ್ವಿಚಕ್ರ ವಾಹನ ಹೊಂದಿರಬೇಕು
ವಯಸ್ಸು 18–25 ವರ್ಷ
ಸರಸ್ವತಿಪುರಂ, ಮೈಸೂರು
98808 28999

HOUSE FOR SALE
20x30
3 Floor building, near Marimallappa School, Vijayanagar 4th Stage, 2nd Phase, Mysore.
Mob: 9686078319

30x50 KHB
ಸೈಟು ಮಾರಾಟಕ್ಕಿದೆ
25 ಲಕ್ಷಗಳು. ಇಲವಾಲ ಹತ್ತಿರ, E/F, ಮೈಸೂರು.
Mob: 9742198093

ಬೇಕಾಗಿದ್ದಾರೆ (Wanted)
ಮೈಸೂರಿನ ಕಾಳಿದಾಸ ರೋಡ್‌ನಲ್ಲಿ ಇರುವ ಶುದ್ಧ ಸಸ್ಯಾಹಾರಿ ರೆಸ್ಟೋರೆಂಟ್‌ಗೆ ಅನುಭವವುಳ್ಳ (1) ಜೋಳದ ರೊಟ್ಟಿ, ಚಪಾತಿ ಮಾಡಲು ಬರುವ, (2) Cutting, Grinding (2) ಮತ್ತು ದೋಸಾ ಭಟ್ರು (Dosa Chef) ಬೇಕಾಗಿದ್ದಾರೆ. ಆಕರ್ಷಕ ಸಂಬಳ, ವಸತಿ ಹಾಗೂ ಉತ್ತಮ ಸೌಲಭ್ಯಗಳನ್ನು ನೀಡಲಾಗುತ್ತದೆ. ಸಂಪರ್ಕಿಸಿ:
Mob: 88840 66266

ಬೇಕಾಗಿದ್ದಾರೆ
Finance ಕಂಪನಿಯಲ್ಲಿ ಕೆಲಸ ಮಾಡಿ ಅನುಭವವುಳ್ಳ ಯುವಕ ಮತ್ತು ಯುವತಿಯರು ಕೆಲಸಕ್ಕೆ ಬೇಕಾಗಿದ್ದಾರೆ(T&C).
98450 28614

FOR RENT
3BHK
Duplex House Near Kautilya School Dattagalli
9632020620

100% TEAK WOOD FACTORY FINISH DOORS @ DEPOT RATES

10 YEARS WARRANTY
www.ssbuildmart.com
9901291267
9845426862

ಉತ್ತಮ ಅವಕಾಶ
ಮನೆಯಲ್ಲಿ ಬಟ್ಟೆ ವ್ಯಾಪಾರ ಮಾಡಲು ನಮ್ಮಲ್ಲಿ ಹೋಲ್ ಸೇಲ್ ದರದಲ್ಲಿ ಎಲ್ಲಾ ರೀತಿಯ ಸೀರೆಗಳು ಮತ್ತು ಎಲ್ಲಾ ರೀತಿಯ ಬಟ್ಟೆಗಳು ಸಿಗುತ್ತದೆ ಒಮ್ಮೆ ಭೇಟಿ ನೀಡಿ
Call After 10.30 AM
9986731199

ಬೇಕಾಗಿದ್ದಾರೆ
ಬಟ್ಟೆ ಅಂಗಡಿಯಲ್ಲಿ ಸೇಲ್ ಮ್ಯಾನ್ ಕೆಲಸ ಮಾಡಲು ಅನುಭವವುಳ್ಳ ಹುಡುಗ, ಹುಡುಗಿಯರು ಬೇಕಾಗಿದ್ದಾರೆ. ಆಕರ್ಷಕ ಸಂಬಳ ESI+PF ಮತ್ತು ಇನ್ಸೆಂಟೀವ್ ಸೌಲಭ್ಯದೊಂದಿಗೆ ಗಾಂಧಿಸರ್ಕಲ್, ಮೈಸೂರು
Call After 10.30 AM
9980620678

SITE FOR SALE
1. Kesare II nd Stage 40x60 East Face
2. Kesare III rd Stage 40x60 West Face
3. 59x70 West Face Fully Commercial Opp. KSRTC Bus Stand
Call After 10.30 AM
9986731199

ಉಚಿತ ತರಬೇತಿ
ಮನೆಯಿಂದಲೇ ಬಟ್ಟಲು ಸಾಂಬ್ರಾಣಿ ಮತ್ತು ಅಣಬೆ ತಯಾರಿಸಿ ನಮಗೆ ಮರಳಿಸಿ ಪ್ರತಿದಿನ 500 ರಿಂದ 800 ರೂ. ವರೆಗೆ ಗಳಿಸಿ.
ತರಬೇತಿಗಾಗಿ:
7406375196, 9880548596

Aquaguard & Kent Sales and Service
Service Charge : 300/-
9901200444

ಬೇಕಾಗಿದ್ದಾರೆ
ಅನುಭವವುಳ್ಳ ಫೀಲ್ಡ್ ಆಫೀಸರ್ (ದ್ವಿಚಕ್ರ ವಾಹನ ಹೊಂದಿರಬೇಕು & ಸಿದ್ಧಾರ್ಥನಗರ ಸುತ್ತಮುತ್ತಲಿನವರಿಗೆ ಆದ್ಯತೆ) ಮತ್ತು ಸಾತಗಳ್ಳಿ ಬಳಿ ಇರುವ ಆಸ್ಪತ್ರೆಗೆ ಹೌಸ್ ಕೀಪಿಂಗ್ ಕೆಲಸಗಾರರು (8 ಗಂಟೆ ಕೆಲಸ)
7259389106

ಬೇಕಾಗಿದ್ದಾರೆ
ಕುಶಾಲನಗರದ ಟೈರ್ ಶಾಪ್‌ನಲ್ಲಿ ಕೆಲಸ ಮಾಡಲು ಹುಡುಗ ಹುಡುಗಿಯರು ಬೇಕಾಗಿದ್ದಾರೆ. ಮೈಸೂರು ಯದವಗಿರಿಯಲ್ಲಿ ಟಾಟಾ ಏಸ್ ಚಲಾಯಿಸಲು ಡ್ರೈವರ್ ಬೇಕಾಗಿದ್ದಾರೆ. ಸಂಪರ್ಕಿಸಿ:
7019647578

ವಿಕೇರ್ ಹೋಮ್ ನರ್ಸಿಂಗ್ ಮೈಸೂರು
ಮೈಸೂರಿನಲ್ಲಿ ರೋಗಿಯ ಆರೈಕೆಯ ಕೆಲಸಕ್ಕೆ ಮಹಿಳಾ ಹೋಮ್ ನರ್ಸ್ ಬೇಕಾಗಿದ್ದಾರೆ.
ವೇತನ 16,000 – 23,000/–
ಸಂಪರ್ಕಿಸಿ:
+91 9380 04 3696
+91 6364 48 1333

ಬೋಳು ತಲೆಯ ಸಮಸ್ಯೆಯೇ?

ಕಿಮೊತೆರಪಿ ಚಿಕಿತ್ಸೆಗೆ ಒಳಪಡುತ್ತಿರುವ ರೋಗಿಗಳಿಗೆ ಸ್ಪರ್ಧಾತ್ಮಕ ಬೆಲೆಯಲ್ಲಿ ಹೇರ್ ವಿಗ್‌ಗಳು ದೊರೆಯುತ್ತವೆ.
SMART HAIR FIXING
574, 9th Cross, Anikethana Road, kuvempunagar, Mysuru
MYSURU 9611028523 MANGALORE 9343142258

HOUSE FOR LEASE
2 BHK House, Ground Floor East Face Semi Furnished with Solar & UPS @ J P Nagar, Near Ring Road
9880290857

HOUSE FOR LEASE
Newly Built 2BHK Independent House, Fully Furnished with Solar @ Lalithadri Nagar, Near Ring Road, Behind Indian Oil Petrol Bunk
9964414484

DTCP SITES FOR SALE
DTCP Sites
Rs. 699 per sq.ft., Near Jayapura, H.D. Kote Road, Mysore.
9590491194,9606783264

HOUSE FOR RENT
at E&F Block Kuvempunagar, Behind Shanthi Sagar Complex, Ist Floor, Independent Entrance, 3BHK, 3 Bath Rooms, Living Room, Dining Hall, Park Facing and Traffic Free Residential area
9343289398

ಕಾರ್ನರ್ ಸೈಟ್ ಸೇಲ್
30x40 ಈಸ್ಟ್, ಫೇಸಿಂಗ್ ಏರ್‌ಪೋರ್ಟ್ ಹಿಂಭಾಗದ ರಸ್ತೆ ಮುಡಾ ಖಾತೆ, 32 ಲಕ್ಷ
ಡೈರೆಕ್ಟ್ ಓನರ್
9342123373

ತಕ್ಷಣ ಬೇಕಾಗಿದ್ದಾರೆ
RTO ಸರ್ಕಲ್ ಮತ್ತು ಬಲ್ಲಾಳ್ ಸರ್ಕಲ್ ಏರಿಯಾದಲ್ಲಿ ಕೆಲಸ ಮಾಡಲು ಸೆಕ್ಯೂರಿಟಿ ಗಾರ್ಡ್‌ಗಳು ಬೇಕಾಗಿದ್ದಾರೆ.
ವಿದ್ಯಾರ್ಹತೆ: SSLC ಮೇಲ್ಪಟ್ಟು
ಸಂಬಳ: 17500+W/o
9620667819
9880727819

ಬೇಕಾಗಿದ್ದಾರೆ
ದಿನಸಿ ಅಂಗಡಿಯಲ್ಲಿ ಕೆಲಸ ಮಾಡಲು ಅನುಭವವುಳ್ಳ ಹುಡುಗರು/ಕಂಪ್ಯೂಟರ್ ಬಿಲ್ಲಿಂಗ್ ಕ್ಯಾಷಿಯರ್ ಬೇಕಾಗಿದ್ದಾರೆ. ಇಚ್ಛೆಯುಳ್ಳವರು ಸಂಪರ್ಕಿಸಿ: ಬಾಲಕೃಷ್ಣ ಪ್ರಾವಿಷನ್ ಸ್ಟೋರ್ಸ್, ನಜರ್‌ಬಾದ್, ಮೈಸೂರು
1) ಕರ್ನಾಟಕ ಬ್ಯಾಂಕ್ ಹತ್ತಿರ, ನಜರ್‌ಬಾದ್, ಮೈಸೂರು. 2)ಶಿಷ್ಯರಣಿ ಸ್ಕೂಲ್ ಹತ್ತಿರ, ಹೆಬ್ಬಾಳ್, ಮೈಸೂರು

ಮನೆ ಮಾರಾಟಕ್ಕಿದೆ
20x30 (ಪೂರ್ವ) ನಿವೇಶನದಲ್ಲಿ GF - ಕಾರ್ ಪಾರ್ಕಿಂಗ್ + 2 ವ್ಹೀಲರ್ ಪಾರ್ಕಿಂಗ್ + 1 ರೂಂ + ಅಟ್ಯಾಚ್ ಬಾತ್‌ರೂಂ. FF + SF - 3 ರೂಂನೊಂದಿಗೆ ಡೂಪ್ಲೆಕ್ಸ್ + 2 ಅಟ್ಯಾಚ್ ಹಾಗೂ 1 ಜನರಲ್ ಬಾತ್ ರೂಂ + ಹಾಲ್ + ಕಿಚನ್. Location: ಮಾತೃಶ್ರೀ ಬಡಾವಣೆ, ಲಿಂಗಾಂಬುದಿ ಪಾಳ್ಯದ ಹತ್ತಿರ, ಮಾರಮ್ಮ ದೇವಸ್ಥಾನದ ಹತ್ತಿರ, ರಿಂಗ್ ರಸ್ತೆ ಪಕ್ಕ, ಬೆಲೆ: ರೂ. 70 ಲಕ್ಷ.
9845310014, 9844689577

40×60 SITE for SALE
MUDA APPROVED
East Facing
Rajeev Nagar 2nd Stage Near Gupta Store, MYSORE
Rs. 1 Crore
Call : 9845286583

JOB OPPORTUNITY SEMINAR
India's most trusted leading corporates invites for Job Seminar exclusively Retired Officials, VRS, Ex-Bankers, Teachers, Enterpreneurs, to earn, fixed salary + PF + ESI + other income incentives. SSLC and above. Bring documents (1) Marks card (2) Photo (3) Aadhar card (4) Pan card (5) Bank Passbook 1st page.
Call: 94490 68132 / 70220 34200

S.K.CONSTRUCTION
ಕನಸು ನಿಮ್ಮದು ನನಸು ನಮ್ಮದು ಹೊಸ ಮನೆ ಕಟ್ಟಬೇಕೆ ಚಿಂತೆ ಬೇಡ Loan ಮಾಡಿಸಿ ಪ್ರಾರಂಭ 25% ನಾವೇ ಹಾಕಿ 3D Plan ಸಹಿತ ಉತ್ತಮ ಗುಣಮಟ್ಟದ ಮನೆ ಮಾಡಿಕೊಡುತ್ತೇವೆ.
9620528490

ಕೆಲಸಕ್ಕೆ ಬೇಕಾಗಿದ್ದಾರೆ
ಹುಡುಗಿಯರು ವಿದ್ಯಾರ್ಹತೆ : Any Degree, ಕಂಪ್ಯೂಟರ್ ಜ್ಞಾನವುಳ್ಳ Tally ಯಲ್ಲಿ ಕಾರ್ಯನಿರ್ವಹಿಸಿ ಅನುಭವವಿರುವವರಿಗೆ ಮೊದಲ ಆದ್ಯತೆ ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ:
8867880881
8494800881

ನಿರ್ಮಲ ಸರ್ವೀಸ್
ಸಂಪು
ಕ್ಲೀನಿಂಗ್‌ಗಾಗಿ ಸಂಪರ್ಕಿಸಿ:
6364079244

ಸರ್ಕಾರದ ಯೋಜನೆಗೆ ತುರ್ತು ನೇಮಕಾತಿ
50 ಪುರುಷ ಅಭ್ಯರ್ಥಿಗಳು ಬೇಕಾಗಿದ್ದಾರೆ
1 ವರ್ಷದ ಮಾರ್ಕೆಟಿಂಗ್ ಅನುಭವವಿರಬೇಕು
ಸ್ಥಳ: ಮೈಸೂರು ಜಿಲ್ಲೆ
ಸಂಪರ್ಕಿಸಿ:
86181 14728

WANTED
GRAPHIC DESIGNER
CorelDraw / Photoshop
DIGITAL MACHINE OPERATOR
90088 13700 / 99454 62338

ಫ್ರಿಡ್ಜ್, ವಾಷಿಂಗ್ ಮಷಿನ್, ಮೈಕ್ರೋ ಓವನ್, LCD, LED TVs Doorstep Service
Mob: 9886226672

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್
Mob: 9108566022

ಅನುಬಂಧ ಮ್ಯಾರೇಜಸ್
ಎಲ್ಲಾ ಜಾತಿಯ ಸುಂದರ ಶ್ರೀಮಂತ ವಿದ್ಯಾವಂತ ವಧುವರರಿಗೆ ನೇರ ಸಂಪರ್ಕಿಸಿ: ಶೀಘ್ರ ವಿವಾಹಕ್ಕಾಗಿ ಕೂಡಲೇ ಕರೆಮಾಡಿ
9448229184
7899625268

ಕಾಫಿ ತೋಟ ಮಾರಾಟಕ್ಕಿದೆ
ಕೊಡಗಿನ ಗೋಣಿಕೊಪ್ಪದಿಂದ 7 ಕಿ.ಮೀ ದೂರ ಮತ್ತು ವಿರಾಜಪೇಟೆಯಿಂದ 11 ಕಿ.ಮೀ ದೂರವಿರುವ ಒಂದು ಎಕರೆ ಕಾಫಿ ತೋಟ ಮಾರಾಟಕ್ಕಿದ್ದು ವಿಶಾಲವಾದ ತೋಟಕ್ಕೆ ಹೊಂದಿಕೊಂಡಂತೆ ಥಾರ್ (ಡಾಂಬರ್) ರಸ್ತೆ ಇರುತ್ತದೆ ಮನೆ ಕಟ್ಟಲು ಅನುಕೂಲವಾದ ಸ್ಥಳವಾಗಿರುತ್ತದೆ. ಆಸಕ್ತರು ಸಂಪರ್ಕಿಸಿ
8088661698

WANTED
For an injection Moulding, Unit in Mysuru requires Line Quality and Final Quality for an above industry in a similar position.
Experience : 2-3 years
Qualification:- ITI fitter, Diploma mechanical and BE mechanical
aerospacemys@gmail.com

ಆಫೀಸ್ ಜಾಗ ಬಾಡಿಗೆಗೆ ಇದೆ
9x39 ಅಡಿ ಅಳತೆಯ ಮೊದಲನೆಯ ಅಂತಸ್ತಿನಲ್ಲಿ SBI ATM ಎದುರು, ಶಿವರಾಮಪೇಟೆ, ಮೈಸೂರು.
Mob: 9663822506

SITE FOR SALE
30x50
KBL Gardenia, Opp. to Rashtrothana School, Next to Vijayanagar 4th Stage, Mysuru.
Mob: 9448069975

Mysore Diagnostic Centre Pvt. Ltd.
#1869, SS Complex, 1st Floor, Opp. Sathya Narayana Temple, New Sayyaji Rao Road, Mysuru-570 021
1) Receptionist - Male (Night Shift)
2) Lab Technician - Male
9243781906, 9845272844

ಸಾಲ / Loans
* House / Site Purchase
* Construction Loan
* Mortgage Loan
MUDA, Corporation & Revenue
77605-98705

ಹೊಸ ಮನೆ ಮಾರಾಟಕ್ಕೆ ಇದೆ
30x40 ದಕ್ಷಿಣಾ ದಿಕ್ಕು ಪೂರ್ವ ಬಾಗಿಲು G ಫ್ಲೋರ್ I ಫ್ಲೋರ್ II ಫ್ಲೋರ್ 1BHK ರಾಧಕೃಷ್ಣ ಬಡಾವಣೆ ಟೀಚರ್ಸ್ ಲೇಔಟ್ ವಿವೇಕಾನಂದ ಬ್ಲಾಕ್ ಯರಗನಹಳ್ಳಿ ಬಡಾವಣೆ ಡಾ|| ರಾಜ್ ಕುಮಾರ್ ರಸ್ತೆ, ಮೈಸೂರು
7892376550,8618048877
8722301336

ಬೇಕಾಗಿದ್ದಾರೆ
ಮೈಸೂರಿನ ವಿದ್ಯಾರಣ್ಯಪುರಂನ ಮೊಬೈಲ್ & ಹೋಮ್ ಅಪ್ಲೈಯನ್ಸ್ ಇಲ್ಲಿ ಕೆಲಸ ಮಾಡಲು ಅನುಭವ ಇರುವ 30 ವರ್ಷದ ಒಳಗಿನ accountant ಮತ್ತು Sales Girl ಬೇಕಾಗಿದ್ದಾರೆ. (ಅರ್ಹತೆಯ ಮೇಲೆ ರೂ.9000 ಯಿಂದ 15000) ಸಂಪರ್ಕಿಸಿ
9606059123

SITE FOR SALE
60x40, East face, near Christ Public School, Dattagalli and 60x40 site Ring Road, near New R.T. Nagar.
MUDA approved. Contact:
Mob: 9341624462

ಸುವರ್ಣ ಯಾತ್ರ
1) 30–11–23 ನೇಪಾಳ ಪ್ರವಾಸ 9 ದಿನಗಳು (ಮುಕ್ತಿನಾಥ, ಪಶುಪತಿನಾಥ, ಕಠ್ಮಂಡು, ಮನೋಕಾಮನ, ಲುಂಬಿನಿ, ಪೊಕ್ರ, ಜನಕಪುರ).
2) ಭೂತಾನ್ ಪ್ರವಾಸ 7 ದಿನಗಳು 23–12–23 (ಬಾಗ್ಡೋಗ್ರಾ, ಸಿಲಿಗುರಿ, ಥಿಂಪು, ಡೋಚುಲಾ ಪಾಸ್, ಪುನಖಾ, ಪರೋ). ಸಂಪರ್ಕಿಸಿ:
8660233673, 9008381022

SITES FOR SALE
60x40 feet, East facing at Ahad City, Mysuru, 6 kms from Satellite Bus Stand, towards Mahadevapura Road. Beautiful Layout, gated community, UGD, electricity, water multiple gardens, tar road.
Mob: 9901231117

3 Shops For Rent
(10x20) E/F @ J.P. Nagar Police Booth, Main Road, towards Brigade Sparkle Apartment Road, Mysore.
Mob: 93421-25252

30x50 MUDA Approved SITE FOR SALE
W/F at Roopa Nagar, clear documents. Direct owners.
9845836946, 7975719180

ಮನೆ ಬಾಡಿಗೆಗೆ
30x40 ಅಳತೆಯ 2 ರೂಂವುಳ್ಳ ಮನೆ ಮೊದಲ ಅಂತಸ್ತಿನಲ್ಲಿ ಬಾಡಿಗೆಗೆ ಇದೆ. ಮನೆ ನಂ. 23, 6ನೇ ಮುಖ್ಯ ರಸ್ತೆ, 1ನೇ ಅಡ್ಡ ರಸ್ತೆ, ರಾಮಕೃಷ್ಣನಗರ, ವಾಸು ಬಡಾವಣೆ, ಐ.ಬ್ಲಾಕ್, ಮೈಸೂರು
9663300653

ಸಂಪೂರ್ಣ ಆರೋಗ್ಯ ಹಾಗೂ ಮನಃಶಾಂತಿ ಪಡೆಯಲು
ಸಿದ್ಧಸಿಮಾಧಿ ಯೋಗ ಶಿಬಿರ
ಧ್ಯಾನ, ಪ್ರಾಣಯಾಮ, ಆಹಾರಕ್ರಮ ಮತ್ತು ವ್ಯಕ್ತಿತ್ವ ವಿಕಾಸ ತರಗತಿಗಳು ಪ್ರಾರಂಭ ದಿನಾಂಕ: 20–11–23 ಸೋಮವಾರ ಸಂಜೆ 6.00ಕ್ಕೆ ಸ್ಥಳ: ಋಷಿ ಸಂಸ್ಕೃತಿ ವಿದ್ಯಾಕೇಂದ್ರ ಮೈಸೂರು.
9448458050,8618762110

WANTED
Lady Customer Care Executives, age 27-42 years, any PUC / Degree / Diploma with computer knowledge must.
Vanajarao Matrimony, Saraswathipuram
Mob: 9343175000

30x40 2 SITES FOR SALE
OLIVE ENCLAVE
MUDA Approved
Mys-B'lore Highway, 4 kms from Columbia Hospital.
Rs. 26 Lakhs.
Mob: 95388-39926

Poornima Medical Systems
#G3, 5th Cross, Veerashaiva Anathalaya, Allamaprabhu Complex, Ramanuja Road, Mysuru-570 004
WANTED
1) Marketing Executive - Male (1-2 years experience)
2) Supply Boy - Male
Mob: 9845033351

ಶ್ರೀ ಮಹಾಲಕ್ಷ್ಮೀ ಟ್ರಾವೆಲ್ಸ್
21–12–23: ಗುಜರಾತ್, ನಾಗನಾಥ್, ಸೋಮ್‌ನಾಥ್, ಸರ್ದಾರ್ ವಲ್ಲಭಭಾಯ್ ಪಟೇಲ್ ಸ್ಟ್ಯಾಚ್ಯು. 4–12–2023: ಪುರಿ ಜಗನ್ನಾಥ್, ಭುವನೇಶ್ವರ್, ಕೋಣಾರ್ಕ್, ಚಂದ್ರಭಾಗ್ ಬೀಚ್. 7–12–2023: ರಾಮೇಶ್ವರಂ, ಕನ್ಯಾಕುಮಾರಿ, ಮಧುರೈ.
9591017782, 9964527782

MUDA Approved 30x40 & 40x60 Sites for sale,
Opp. Wipro, KRS Road, Mysore.
Call: 7026901111

ಸೈಟು ಮಾರಾಟಕ್ಕಿದೆ
30x50 W/F
ಗುರುನಾರಾಯಣನಗರ (ದೀಪ ಸೊಸೈಟಿ) ಕುಮಾರ ಬೀಡು ಗದ್ದಿಗೆ ರಸ್ತೆ
9742421313
9945779947

SITE FOR SALE
Size 24x50 west Face
ಸಿದ್ದಲಿಂಗೇಶ್ವರ ಬಡಾವಣೆ ಮುಡಾಖಾತೆ ಬೋಗಾದಿ 2ನೇ ಹಂತ, ನಿರ್ಮಿತಿಕೇಂದ್ರ ಹತ್ತಿರ, ಬೆಲೆ 62 ಲಕ್ಷ, ನೆಗೋಷಿಯಬಲ್
9964958335
9632329036

Wanted Immediately
We are looking for the CHEF & HELPER for our hotel who should be specialised in both Veg and Non-Veg. Our hotel is located in Sunkadakatte, Bangalore. Land mark: Opposite to Gurukrupa Clinic, Hebbal Road.
For more details contact the owner:
Bharathi: 7975620268



Solar Water Heater SALES & SERVICE
BAJAJ FINSERV
SUNZONE SOLAR SYSTEM
VM Double Road, Kuvempunagar, Mysuru
9845175443

Wanted for new hotel
Dosa Master, Waiter (male / Female), Counter Boys / Girls, Tandoor Roti maker.
Mob: 8971768648
Kuvempunagar, Mysore

ವಧು–ವರರ ಮಾಹಿತಿ ಕೇಂದ್ರ
ಒಕ್ಕಲಿಗ / ಲಿಂಗಾಯತ / ಕುರುಬ / ನಾಯಕ / SC & ಎಲ್ಲಾ ಜಾತಿಯ ವಧು–ವರರಿಗಾಗಿ ಸಂಪರ್ಕಿಸಿ:
(Second Marriage also)
Mob: 9343175000

Prime Office / Commercial Space available for rent
Approx. 5000 Sq.ft. (G/F 1000, F/F 2000 & SF - 2000 sq.ft. #70/A, Shankar Mutt Road, 4th Cross, Fort Mohalla, Mysore-4, near JSS Hospital.
9845329866 / 9481708013

ಮನೆ ಮಾರಾಟಕ್ಕಿದೆ
30x40 G+3 S/E
ದಟ್ಟಗಳ್ಳಿ ಸೋಮನಾಥ ನಗರ ಆದಿತ್ಯ ಸರ್ಕಲ್ ಹತ್ತಿರ ಮೈಸೂರು ಬೋರ್ ವೆಲ್ ಇದೆ ಲಿಫ್ಟ್ ಇದೆ.
6361577723

ಸೈಟು ಬೇಕಾಗಿದೆ
ಲಾಲ್ ಬಹದ್ದೂರ್ ಶಾಸ್ತ್ರಿನಗರ ವಸಂತನಗರ, ಶಾಂತವೇರಿ ಗೋಪಾಲಗೌಡ ನಗರ, ಸಪ್ತ ಮಾತೃಕ ಲೇಔಟ್ ಪೊಲೀಸ್ ಲೇಔಟ್ ಜೆ.ಎಸ್.ಎಸ್.ಲೇಔಟ್
9844436672

Change of Name
I, B.J. Arun Kumar, residing at No. 113, Kaala Bhaireveshwara Nilaya, Vokkaliga Samudaya Bhavana Road, Jattihundi (V), Ilwala (H), Mysore (T), have changed my son's name from Samarth A. Gowda to Aryan A. Gowda on my own free will, hereafter my son shall be called, recognised & known as Aryan A. Gowda & sworn before Notary R. Ramachandra.
Sd/- B.J. Arun Kumar

For Rent / ಬಾಡಿಗೆಗೆ ಇದೆ
Commercial space (1500 sq.ft) shops & godown for Bank, Office & stockists available in Bogadi / Roopanagar.
ವಾಣಿಜ್ಯ ಮಳಿಗೆ / ಮಳಿಗೆಗಳು ಬಾಡಿಗೆಗೆ ಲಭ್ಯವಿದೆ. ಬೋಗಾದಿ / ರೂಪನಗರ.
9148152792, 7353171785

WANTED
TOUR CO-ORDINATOR -1 NO. Above P.U.C. should be interested in Tourism/Able to a company Tourist.
ಅಡುಗೆ ಭಟ್ಟರು
ಬಸ್ ಪ್ರವಾಸದಲ್ಲಿ ಸಸ್ಯಹಾರಿ ಅಡುಗೆಗಾಗಿ
Call - 9886697052

ಬರವಣಿಗೆಯ ಕೆಲಸ
ಮನೆಯಿಂದಲೇ ಫಾರಂ ಭರ್ತಿ ಮಾಡುವ ಉದ್ಯೋಗ ಮಾಡಿ ಪ್ರತಿ 1 ಶೀಟ್‌ಗೆ 40 ರೂ.ಗಳನ್ನು ಪಡೆಯಿರಿ.
9731891409
ಮೈಸೂರು ಅಗ್ರಹಾರ.
9449774835
ಚಾಮರಾಜನಗರ

ಉದ್ಯೋಗ ಅವಕಾಶ
ಬಂದ ದಿನವೇ ಕೆಲಸ (ಮಾರ್ಕೆಟಿಂಗ್ ಅಲ್ಲ) ಮೈಸೂರಿನ ಪ್ರತಿಷ್ಠಿತ MNC ಹಾಗೂ IT ಕಂಪನಿಗಳಿಗೆ 4th SSLC, PUC, ITI, Any Degree ಪಾಸ್ / ಫೇಲ್ ಆದ ಯುವಕ/ಯುವತಿಯರು ಇಂದೇ ಬೇಕಾಗಿದ್ದಾರೆ. ESI/PF ನೊಂದಿಗೆ ಊಟ ವಸತಿಯಿರುತ್ತದೆ.
ಸಂಬಳ+ಓಟಿ 15,200/- to 86,000/-
9740733021, 9535028750

ಬೇಕಾಗಿದ್ದಾರೆ
ಟೆಲಿಕಾಲಿಂಗ್ ಮಾಡಲು ಹುಡುಗಿಯರು ಮತ್ತು ಮಹಿಳೆಯರು ಬೇಕಾಗಿದ್ದಾರೆ. SSLC ಪಾಸ್ ಅಥವಾ ಫೇಲ್ ಕುವೆಂಪುನಗರ ಬಸ್ ಡಿಪೋ ಹತ್ತಿರ ಮೈಸೂರು
8861732326
8277512141

ಸೈಟು ಬೇಕಾಗಿದೆ
ಲಾಲ್ ಬಹದ್ದೂರ್ ಶಾಸ್ತ್ರಿನಗರ ಗೋಪಾಲಗೌಡ ನಗರ, ಲಲಿತಾದ್ರಿನಗರಗಳಲ್ಲಿ ಸೈಟುಗಳು ಬೇಕಾಗಿದೆ.
20x30, 30x40
9731204530

ತೇಜಸ್ವಿನಿ ಟೂರಿಸ್ಟ್
5–12–23 ರಿಂದ 8 ದಿನ ಮಂತ್ರಾಲಯ, ಅಹೋಬಲ, ಶ್ರೀಶೈಲ, ವಿಜಯವಾಡ, ಅನ್ನಾವರಂ, ದ್ವಾರಕ ತಿರುಮಲ, ಹೈದ್ರಾಬಾದ್, ಇತ್ಯಾದಿ ಒಟ್ಟು 12 ಸ್ಥಳಗಳು 2x2 ಬಸ್ಸಿನಲ್ಲಿ ಪ್ರವಾಸ ತಿಂಡಿ 2 ಊಟ, 4 ಜನರಿಗೆ 1 ರೂಂ ಸೇರಿ ಸೀಟು ಒಂದಕ್ಕೆ 12500/– 2–2–24 10 ದಿನ ಕಾಶಿ, ಆಯೋಧ್ಯ, ಅಲಹಾಬಾದ್, ಗಯಾ, ಬುದ್ಧಗಯ ಇತ್ಯಾದಿ ರೈಲಿನಲ್ಲಿ ಮತ್ತು 2x2 ಬಸ್ಸಿನಲ್ಲಿ 4 ಜನರಿಗೆ ಒಂದು ರೂಂ ಊಟ, ತಿಂಡಿ ಪ್ರವಾಸಕ್ಕೆ ಸೇರಿದೆ ಸೀಟು ಒಂದಕ್ಕೆ 10500 ರೂಗಳು
9379792644

ಬೇಕಾಗಿದ್ದಾರೆ
ಡೆಲಿವರಿ ಬಾಯ್ ಕೆಲಸಕ್ಕೆ ಹುಡುಗರು ಬೇಕಾಗಿದ್ದಾರೆ
ಸಂಬಳ 15000/-
Ph.9380142144

ಮೊಬೈಲ್‌ನಲ್ಲಿ ಕೆಲಸ ವಾರದ ಸಂಬಳ
NO TARGET, TYPING WORK
ತಿಂಗಳಿಗೆ ರೂ.10,000 ರಿಂದ ರೂ.25,000 ಗಳಿಸಬಹುದು.
8884439666

ಮೈಸೂರು ಮಿತ್ರ
ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಮತ್ತಷ್ಟು ವರ್ಗೀಕೃತ ಜಾಹೀರಾತು ಪುಟ 10 ರಲ್ಲಿ

ಮಾಜಿ ಸಿಎಂ ಕುಮಾರಸ್ವಾಮಿ ಅವಕಾಶವಾದಿ ರಾಜಕಾರಣಿ ವರ್ತನೆ

ಕಾಂಗ್ರೆಸ್ ವಕ್ತಾರ ಹೆಚ್.ಎ.ವೆಂಕಟೇಶ್ ಟೀಕೆ

ಮೈಸೂರು, ನ.17– ಹೆಚ್.ಡಿ.ಕುಮಾರಸ್ವಾಮಿ ಅವರು ಎರಡು ಬಾರಿ ಮುಖ್ಯಮಂತ್ರಿಯಾಗಿದ್ದರೂ ಅವಕಾಶವಾದಿ ರಾಜಕಾರಣದ ಮುಖವಾಣಿಯಂತೆ ನಡೆದುಕೊಳ್ಳುತ್ತಿರುವುದು ವಿಷಾದದ ಸಂಗತಿ ಎಂದು ಕಾಂಗ್ರೆಸ್ ರಾಜ್ಯ ವಕ್ತಾರ ಹೆಚ್.ಎ.ವೆಂಕಟೇಶ್ ಹೇಳಿದ್ದಾರೆ.



ಮುಖ್ಯಮಂತ್ರಿ ಹುದ್ದೆಗೊಂದು ಗತ್ತು, ಘನತೆಯಿದೆ. ಇದನ್ನು ನಿರ್ವಹಿಸಿದ್ದವರು ಕೀಳು ಮಟ್ಟದ ವೈಯಕ್ತಿಕ ದಾಳಿಗಿಳಿಯುವುದು ಸಲ್ಲದ ಬೆಳವಣಿಗೆ. ಜನಹಿತಕ್ಕಾಗಿ ಕೆಲಸ ಮಾಡುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತು ವರುಣಾ ಮಾಜಿ ಶಾಸಕ ಡಾ.ಯತೀಂದ್ರ ಅವರ ಬಗ್ಗೆ ಆಧಾರ ರಹಿತವಾಗಿ ಆರೋಪ ಮಾಡುವ ಮೂಲಕ ಕುಮಾರಸ್ವಾಮಿಯವರು ತಮ್ಮ ವ್ಯಕ್ತಿತ್ವವನ್ನು ಮತ್ತಷ್ಟು ಹಗುರಗೊಳಿಸಿಕೊಳ್ಳುತ್ತಿದ್ದಾರೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ಟೀಕಿಸಿದ್ದಾರೆ.

ಇನ್ನು ಜೆಡಿಎಸ್‌ನಂತೆಯೇ ರಾಜ್ಯ ಬಿಜೆಪಿಯೂ ಕುಟುಂಬಕ್ಕಷ್ಟೇ ಸೀಮಿತವಾಗಿ ಹೀನಾಯ ಸ್ಥಿತಿ ತಲುಪಿದೆ. ಬಿಎಸ್‌ವೈ ಹಿಡಿತದಿಂದ ಜಗದೀಶ ಶೆಟ್ಟರ್, ಲಕ್ಷ್ಮಣ ಸವದಿ ಮುಂತಾದ ನಾಯಕರು ಪಾರಾಗಿ ಸುರಕ್ಷಿತ ಪರ್ಯಾಯ ಕಂಡುಕೊಂಡರೆ, ಯತ್ನಾಳ್ ಸೇರಿ ಇನ್ನೂ ಹಲವು ನಾಯಕರು ಅಲ್ಲಿಯೇ ಸಿಲುಕಿ ಒದ್ದಾಡುವಂತಾಗಿದೆ. ಜನಪರ ಆಡಳಿತವಿರುವ ರಾಜ್ಯದಲ್ಲಿ ಅನನುಭವಿಗೆ ರಾಜ್ಯಾಧ್ಯಕ್ಷರ ಹುದ್ದೆ ನೀಡಿ, ಬಿಜೆಪಿ ಹೆಚ್ಚು ಲೋಕಸಭೆ ಸೀಟುಗಳನ್ನು ಗೆಲ್ಲುತ್ತದೆ ಎಂದು ಬಿಂಬಿಸುತ್ತಿರುವ ಬಿಜೆಪಿ ನಾಯಕರ ಹೇಳಿಕೆಗಳು ನಗು ತರಿಸುತ್ತಿದೆ ಎಂದು ವ್ಯಂಗ್ಯವಾಡಿದ್ದಾರೆ.

ಹೆಚ್ಚಿನ ವರ್ಗೀಕೃತ ಜಾಹೀರಾತು ಪುಟ 9ರಲ್ಲಿ

ಸರ್ಕಾರಿ ಪ್ರಕೃತಿ ಚಿಕಿತ್ಸೆ, ಯೋಗ ಕಾಲೇಜಿನಲ್ಲಿ ಮುಕ್ತ ದಿನ ಆಚರಣೆ

ಎರಡು ದಿನಗಳ ವಸ್ತುಪ್ರದರ್ಶನ



ಮೈಸೂರು, ನ. 17(ಆರ್‌ಕೆ)– ಮೈಸೂರಿನ ಬೃಂದಾವನ ಬಡಾವಣೆಯಲ್ಲಿರುವ ಸರ್ಕಾರಿ ಪ್ರಕೃತಿ ಚಿಕಿತ್ಸೆ ಮತ್ತು ಯೋಗ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಎರಡು ದಿನಗಳ ಮುಕ್ತ ದಿನ ಆಚರಣೆ ಆಯೋಜಿಸಲಾಗಿದೆ.

ಮುಕ್ತ ದಿನಾಚರಣೆ ಅಂಗವಾಗಿ ಏರ್ಪಡಿಸಿರುವ ಪ್ರಕೃತಿ ಚಿಕಿತ್ಸೆ ಮತ್ತು ವೈದ್ಯಕೀಯ ವಸ್ತುಪ್ರದರ್ಶನವನ್ನು ಶಾಸಕ ಕೆ.ಹರೀಶ್ ಗೌಡ ಉದ್ಘಾಟಿಸಿದರು. ಆಯುಷ್ ಇಲಾಖೆ ಆಯುಕ್ತೆ ಇಕೆ. ಲೀಲಾವತಿ, ಜಿಲ್ಲಾ ಆಯುಷ್ ಅಧಿಕಾರಿ ಡಾ.ಪುಷ್ಪಾ, ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಜೆಎಸ್‌ಎಸ್ ಸಂಸ್ಥೆಯ ಶ್ರೀಹರಿ, ಕಾಲೇಜು ಪ್ರಾಂಶುಪಾಲ ಡಾ. ಗಜಾನನ ಹೆಗಡೆ, ವೈದ್ಯರುಗಳಾದ ಡಾ. ಹರಿ ಗಣೇಶ್, ಡಾ. ಬಿ.ಸಿ. ನಟರಾಜ್, ಡಾ.ಕೆ.ಎಸ್. ರಾಧಾ ಕೃಷ್ಣ ರಾಮರಾವ್, ಡಾ. ಲಕ್ಷ್ಮೀ ನಾರಾಯಣ ಶೆಣೈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ನ್ಯಾಚುರೋಪತಿ, ಅನಾಟಮಿ, ಬಯೋಕೆಮಿಸ್ಟ್ರಿ, ಡಯಾಬೆಟಿಕ್, ಫಾಸ್ಟಿಂಗ್, ಅಕ್ಯುಪಂಚರ್, ಮೈಕ್ರೋ ಬಯಾಲಜಿ, ಕ್ರೊಮೋ ಥೆರಿ, ಹೈಡ್ರೋ ಥೆರಪಿ, ಥೆರೋಪೆಟಿಕ್ ಯೋಗ, ಫಿಸಿಯಾಲಜಿ, ಮಟಪಾಸ್ ಸೇರಿದಂತೆ ವೈದ್ಯಕೀಯ ಮಹಾವಿದ್ಯಾಲಯದ ಎಲ್ಲಾ ವಿಭಾಗಗಳ ಚಿಕಿತ್ಸಾ ಕ್ರಮ, ಬೋಧನಾ ವಿಷಯಗಳು, ವಿವಿಧ ಬಗೆಯ ಥೆರಪಿಗಳ ಬಗ್ಗೆ ಸ್ವತಃ ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿಗಳೇ ತಯಾರಿಸಿರುವ ನ್ಯಾಚುರೋಪತಿ ಕುರಿತ ವಸ್ತುಪ್ರದರ್ಶನವನ್ನು ಶಾಸಕರು ಸೇರಿದಂತೆ ಅತಿಥಿಗಳು ವೀಕ್ಷಿಸಿ ಪ್ರಶಂಸಿಸಿದರು.

ಮೈಸೂರಿನ ಹಲವು ಶಾಲಾ–ಕಾಲೇಜು ವಿದ್ಯಾರ್ಥಿಗಳು, ಶಿಕ್ಷಕರು, ಯೋಗ ತರಬೇತಿ ಸಂಸ್ಥೆಗಳ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ವೈದ್ಯಕೀಯ ವಸ್ತುಪ್ರದರ್ಶನವನ್ನು ವೀಕ್ಷಿಸಿದರು. ಈ ಸಂದರ್ಭ ಮಾತನಾಡಿದ ಶಾಸಕ ಕೆಹರೀಶ್‌ಗೌಡರು, ಯಾವುದೇ ಅಡ್ಡ ಪರಿಣಾಮಗಳಿಲ್ಲದೆ, ರೋಗ ಗುಣಪಡಿಸುವ ಪ್ರಕೃತಿ ಚಿಕಿತ್ಸೆಗೆ ಈಗ ಹೆಚ್ಚು ಮಹತ್ವ ಬಂದಿದೆ. ಜನರಿಗೆ ಈ ಪ್ರಾಚೀನ ಚಿಕಿತ್ಸಾ ಪದ್ಧತಿ ಬಗ್ಗೆ ಹೆಚ್ಚು ಅರಿವು ಮೂಡಿಸಬೇಕೆಂದು ಸಲಹೆ ನೀಡಿದರು.

ಆರ್‌ಬಿಐನ ಕನ್ನಡ ಕೈಂಕರ್ಯ ನಾಡು ಮೆಚ್ಚುವಂತದ್ದು

ಹಿರಿಯ ಸಾಹಿತಿ ಬನ್ನೂರು ರಾಜು ಪ್ರಶಂಸೆ



ಮೈಸೂರು, ನ. 17– ಎಲ್ಲಾ ಜಾತಿ, ಮತ, ಧರ್ಮ, ಜನಾಂಗ, ವರ್ಗ ಸೇರಿದಂತೆ ಅನೇಕ ಭಾಷಿಕರನ್ನು ಒಳಗೊಂಡು ಅನೇಕತೆಯಲ್ಲಿ ಏಕತೆಯನ್ನು ಸಾಧಿಸುತ್ತಾ ಕನ್ನಡವನ್ನು ಕಟ್ಟುವ ಕೈಂಕರ್ಯವನ್ನು ಅಭಿಮಾನದಿಂದ ಮಾಡುತ್ತಿರುವ ಭಾರತೀಯ ರಿಸರ್ವ್ ಬ್ಯಾಂಕ್ ನೋಟು ಮುದ್ರಣಾಲಯ(ಆರ್‌ಬಿಐ)ದ ಕನ್ನಡಾಭಿಮಾನ ನಾಡು ಮೆಚ್ಚುವಂತದ್ದೆಂದು ಸಾಹಿತಿ ಬನ್ನೂರು ಕೆ.ರಾಜು ಶ್ಲಾಘಿಸಿದರು.

ಮೈಸೂರಿನ ನೋಟು ಮುದ್ರಣ ನಗರದಲ್ಲಿರುವ ಪ್ರತಿಷ್ಠಿತ ಭಾರತೀಯ ರಿಸರ್ವ್ ಬ್ಯಾಂಕ್ ನೋಟು ಮುದ್ರಣಾಲಯದ ಕನ್ನಡ ರಾಜ್ಯೋತ್ಸವ ಸಮಿತಿಯು ನೋಟು ಮುದ್ರಣಾಲಯದ ಸಮುದಾಯ ಭವನದ ಆವರಣದಲ್ಲಿ ಏರ್ಪಡಿಸಿದ್ದ ಐವತ್ತನೇ ಸುವರ್ಣ ಕರ್ನಾಟಕ ರಾಜ್ಯೋತ್ಸವ ಮತ್ತು ಅರವತ್ತೆಂಟನೇ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಮಾತನಾಡಿದ ಅವರು, ಇಲ್ಲಿ ಅಧಿಕಾರಿಗಳಿಂದ ಹಿಡಿದು ಸಾಮಾನ್ಯ ಉದ್ಯೋಗಿಗಳ ತನಕ ಭಾರತದ ಬಹುತೇಕ ರಾಜ್ಯಗಳ ಜನರಿದ್ದು, ಹಾಗೆಯೇ ಹಲವು ಭಾಷಿಕರೂ ಇದ್ದಾರೆ. ಇದೊಂದು ರೀತಿ ಮಿನಿ ಭಾರತವೇ ಆಗಿದ್ದು ನಮ್ಮ ರಾಷ್ಟ್ರಕವಿ ಕುವೆಂಪು ಹೇಳುವಂತೆ ಸರ್ವ ಜನಾಂಗದ ಶಾಂತಿಯ ತೋಟವಾಗಿದ್ದು, ಇಲ್ಲಿ ಕನ್ನಡ ಬಾರದ ಕನ್ನಡೇತರರಿಗೆ ಶಿಕ್ಷಕಿ ಸವಿತಾ ಅವರ ಸಾರಥ್ಯದಲ್ಲಿ ಕನ್ನಡ ಕಲಿಸುವ ಕಾಯಕವೂ ನಡೆಯುತ್ತಿದೆಯೆಂದರು. ಪ್ರತಿಯೊಬ್ಬರಿಗೂ ಭಾಷೆಯಷ್ಟೇ ಬದುಕು ದೊಡ್ಡದು. ಆದ್ದರಿಂದ ವರನಟ ಡಾ.ರಾಜ್ ಕುಮಾರ್ ಹಾಡಿರುವಂತೆ ಕಲಿಯೋಕೆ ಕೋಟಿ ಭಾಷೆ ಆಡೋಕೆ ಒಂದೇ ಭಾಷೆ ಅದು ಕನ್ನಡ ಮಾತ್ರ. ತಾಯಿ ಕರುಳಿನಿಂದ ಬಳುವಳಿಯಾಗಿ ಬಂದಿರುವ ಕನ್ನಡ ನುಡಿಯೆಂದರೆ ಅದೊಂದು ಮಹದದ್ಭುತ. ಅಂಥಾ ತಾಯ್ತನ ನಮ್ಮ ಮಾತೃ ಭಾಷೆ ಕನ್ನಡದಲ್ಲಿದೆ. ಹಾಗಾಗಿ ಜ್ಞಾನಕ್ಕಾಗಿ, ಅರಿವಿಗಾಗಿ, ಬದುಕಿಗಾಗಿ ಎಷ್ಟು ಭಾಷೆಗಳನ್ನು ಕಲಿತರೂ ಸರಿಯೇ. ಆದರೆ ಮಾತೃಭಾಷೆ ಜೀವ ಮತ್ತು ಜೀವನವಾಗಬೇಕು ಎಂದು ಕರೆ ನೀಡಿದರು.

ಕು.ರುಜುಲಾ ಭಾನುಪ್ರಕಾಶ್ ಮಾಹಿತಿಪೂರ್ಣವಾಗಿ ವಿವರಿಸಿ ನೆರೆದಿದ್ದವರ ಮೆಚ್ಚುಗೆ ಗಳಿಸಿದ್ದು ಸಮಾರಂಭದ ವಿಶೇಷವಾಗಿತ್ತು. ಇದಕ್ಕೂ ಮುನ್ನ ಭಾರತೀಯ ರಿಸರ್ವ್ ಬ್ಯಾಂಕ್ ನೋಟು ಮುದ್ರಣಾಲಯದ ಹಿರಿಯ ಪ್ರಧಾನ ವ್ಯವಸ್ಥಾಪಕರಾದ ಹರ್ಷಕುಮಾರ್ ಮನ್ರಾಲ್ ಅವರು ತಾಯಿ ಭುವನೇಶ್ವರಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಕನ್ನಡ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಕನ್ನಡ ಭಾಷೆಗೆ ಅದರದೇ ಆದ ವಿಶಿಷ್ಟ ಇತಿಹಾಸವಿದ್ದು ಜಾಗತಿಕವಾಗಿ ಮಹತ್ವ ಗಳಿಸಿದೆ ಎಂದು ಹೇಳಿದರು.

ಹಿರಿಯ ಅಧಿಕಾರಿಗಳಾದ ಜೋಗಾರೆಡ್ಡಿ, ರಜನಿಕಾಂತ್, ಎಸ್.ಎಂ.ಬ್ಯಾನರ್ಜಿ, ಪ್ರಭುಕುಮಾರ್ ಮಾತನಾಡಿದರು. ಆರ್‌ಬಿಐನ ಉಪ ಪ್ರಧಾನ ವ್ಯವಸ್ಥಾಪಕರೂ ಆದ ಕನ್ನಡ ರಾಜ್ಯೋತ್ಸವ ಸಮಿತಿಯ ಅಧ್ಯಕ್ಷ ಎಲ್.ರವಿ ಅಧ್ಯಕ್ಷತೆ ವಹಿಸಿದ್ದರು. ಉಪಾಧ್ಯಕ್ಷ ಭಾನುಪ್ರಕಾಶ್, ಪ್ರಧಾನ ಕಾರ್ಯದರ್ಶಿ ಮಹಾಲಿಂಗ ಪ್ರಭು, ಕಾರ್ಯದರ್ಶಿ ತೋಟಪ್ಪ ಶೆಟ್ಟಿ, ಖಜಾಂಚಿ ಚೇತನ್, ಪಿ.ರಾಜಣ್ಣ, ಚಂದ್ರಶೇಖರ್, ಬಸವರಾಜು ಇನ್ನಿತರರಿದ್ದರು. ಇದೇ ವೇಳೆ ಪತ್ರಕರ್ತರೂ ಆದ ಸಾಹಿತಿ ಬನ್ನೂರು ಕೆ.ರಾಜು ಅವರನ್ನು ಗೌರವಿಸಲಾಯಿತು. ಕಾರ್ಯಕ್ರಮದ ಪ್ರಾರಂಭದಲ್ಲಿ ಭುವನೇಶ್ವರಿ ಪ್ರಾರ್ಥನೆ ಮಾಡಿದರೆ, ರವಿಶಂಕರ್ ಎಲ್ಲರನ್ನೂ ಸ್ವಾಗತಿಸಿದರು. ಕೊನೆಯಲ್ಲಿ ಲಕ್ಷ್ಮೀ ನಾರಾಯಣ ವಂದಿಸಿದರು. ಈಶ್ವರಪ್ಪ ಕಡ್ಡಿಪುಡಿ ಅವರು ಇಡೀ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಿರೂಪಿಸಿದರು.

ಪತ್ರಾಗಾರ ಪರಿಚಯ ಕಾರ್ಯಾಗಾರ

ಮೈಸೂರು, ನ.17–ಮೈಸೂರು ವಿಶ್ವವಿದ್ಯಾನಿಲಯದ ಇತಿಹಾಸ ಅಧ್ಯಯನ ವಿಭಾಗ ಹಾಗೂ ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ ವಿಭಾಗಿಯ ಪತ್ರಾಗಾರ ಕಚೇರಿ ಮೈಸೂರು ಇವರ ಸಹಯೋಗದಲ್ಲಿ ಇತಿಹಾಸ ಸಂಶೋಧನೆಯಲ್ಲಿ ಪತ್ರಾಗಾರದ ದಾಖಲೆಗಳು ವಿಷಯ ಕುರಿತು ಪತ್ರಾಗಾರ ಪರಿಚಯ ಕಾರ್ಯಾಗಾರವನ್ನು ನವೆಂಬರ್ 18 ರಂದು ಬೆಳಗ್ಗೆ 11 ಗಂಟೆಗೆ ಮಾನಸ ಗಂಗೋತ್ರಿಯ ಇತಿಹಾಸ ಅಧ್ಯಯನ ವಿಭಾಗದ ನಾಲ್ವಡಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಇತಿಹಾಸ ಅಧ್ಯಯನ ವಿಭಾಗದ ಅಧ್ಯಕ್ಷರು ಹಾಗೂ ಪ್ರಾಧ್ಯಾಪಕರಾದ ಪ್ರೊ. ವೈ ಹೆಚ್ ನಾಯಕವಾಡಿ ಕಾರ್ಯಕರ್ಮದ ಅಧ್ಯಕ್ಷತೆ ವಹಿಸಲಿದ್ದು, ಪ್ರಾಧ್ಯಾಪಕರಾದ ಪ್ರೊ..ಕೆ ಸದಾಶಿವ ಕಾರ್ಯಕ್ರಮವನ್ನು ಉದ್ಘಾಟಿಸುವರು.



ಕಳೆದ ಒಂದು ತಿಂಗಳಿಂದ ಜಿಲ್ಲಾ ಮಟ್ಟದಲ್ಲಿ ನಡೆದ ವಿವಿಧ ಕ್ರೀಡಾ ಸ್ಪರ್ಧೆಗಳಲ್ಲಿ ಭಾಗವಹಿಸಿದ್ದ ಮೈಸೂರಿನ ದಟ್ಟಗಳ್ಳಿ ಬಡಾವಣೆಯಲ್ಲಿರುವ ಎಸ್‌ವಿಜಿ ಸೆಂಟರ್ ಆಫ್ ಎಕ್ಸಲೆನ್ಸ್ ಕಾಲೇಜಿನ ವಿದ್ಯಾರ್ಥಿಗಳು ಉತ್ತಮ ಪ್ರದರ್ಶನ ನೀಡಿ ಹಲವು ಬಹುಮಾನಗಳೊಂದಿಗೆ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಸಂಸ್ಥೆಯ ಅಧ್ಯಕ್ಷ ವಿಶ್ವನಾಥ ಶೇಷಾಚಲ, ಕಾಲೇಜಿನ ಕಾರ್ಯದರ್ಶಿ ಶ್ರೀಮತಿ ಶೃತಿ ವಿಶ್ವನಾಥ ಶೇಷಾಚಲ, ಕಾಲೇಜಿನ ಆಡಳಿತ ಅಧಿಕಾರಿಯಾದ ಜಯದೇವ ರಾಜೇ ಅರಸ್, ಪ್ರಾಂಶುಪಾಲ ರಚನ್ ಅಪ್ಪಣ್ಣಮಯ್ಯ, ಉಪ ಪ್ರಾಂಶುಪಾಲ ಡಾ.ಪ್ರದೀಪ್, ದೈಹಿಕ ಶಿಕ್ಷಣ ನಿರ್ದೇಶಕ ಹರೀಶ್ ಹಾಗೂ ಸಿಬ್ಬಂದಿ ವರ್ಗದವರು ಅಭಿನಂದಿಸಿದರು.

ಸಾಂಸ್ಕೃತಿಕ ಸೌರಭ, ಯುವಸೌರಭ; ಚಿಗುರು ಕಾರ್ಯಕ್ರಮಗಳಿಗೆ ಅರ್ಜಿ ಆಹ್ವಾನ

ಮೈಸೂರುನ.17– 2023–24ನೇ ಸಾಲಿನಲ್ಲಿ ಕರ್ನಾಟಕ ಸಂಭ್ರಮ–50 ಅಂಗವಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಸಾಂಸ್ಕೃತಿಕ ಸೌರಭ, ಯುವಸೌರಭ ಹಾಗೂ ಚಿಗುರು ಕಾರ್ಯಕ್ರಮಗಳನ್ನು ಏರ್ಪಡಿಸಲಿದ್ದು, ಕಾರ್ಯಕ್ರಮದಲ್ಲಿ ಪ್ರದರ್ಶನ ನೀಡಬಯಸುವ ಕಲಾವಿದರುಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ನವೆಂಬರ್ 24ರ ಸಂಜೆ 5.30 ರೊಳಗೆ ಸಹಾಯಕ ನಿರ್ದೇಶಕರ ಕಚೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕಲಾಮಂದಿರ ಇಲ್ಲಿಗೆ ಅರ್ಜಿಗಳನ್ನು ಸಲ್ಲಿಸಬೇಕು.

ಸಾಂಸ್ಕೃತಿಕ ಸೌರಭಕ್ಕೆ ಆಕಾಶವಾಣಿಯ ಬಿಬಿಐ ಮತ್ತು ಎ ಗ್ರೇಡ್ ಕಲಾವಿದರು, ಸರ್ಕಾರದಿಂದ ಕೊಡ ಮಾಡುವ ಪ್ರಶಸ್ತಿ ಪುರಸ್ಕೃತ ಕಲಾವಿದರು ಮಾತ್ರ ಅರ್ಜಿ ಸಲ್ಲಿಸಬಹುದು. ಯುವ ಸೌರಭಕ್ಕೆ 15 ರಿಂದ 30 ವರ್ಷದೊಳಗಿನ ಪ್ರತಿಭಾವಂತ ಯುವ ಕಲಾವಿದರು ಅರ್ಜಿ ಸಲ್ಲಿಸಬಹುದಾಗಿದ್ದು, ಚಿಗುರು ಕಾರ್ಯಕ್ರಮಕ್ಕೆ 8 ರಿಂದ 14 ವರ್ಷದೊಳಗಿರುವ ಪ್ರತಿಭಾವಂತ ಮಕ್ಕಳು ಅರ್ಜಿ ಸಲ್ಲಿಸಬಹುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಎಂ.ಡಿ.ಸುದರ್ಶನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಭ್ರಷ್ಟಾಚಾರ ಬೇಡ ಎಂದು ಹೇಳುವುದೇ ಅದರ ವಿರುದ್ಧ ಹೋರಾಡುವ ಮೊದಲ ಮಾರ್ಗ

- ಕೇಂದ್ರ ರೇಷ್ಮೆ ಸಂಶೋಧನೆ ಮತ್ತು ತರಬೇತಿ ಸಂಸ್ಥೆ ನಿರ್ದೇಶಕ ಡಾ.ಎಸ್.ಗಾಂಧಿ ದಾಸ್ ಅಭಿಮತ
- ಸಿಬ್ಬಂದಿಗೆ ಆಯೋಜಿಸಿದ್ದ ಜಾಗೃತಿ ಅಭಿಯಾನದ ಸಮಾರೋಪ



ಮೈಸೂರು,ನ.17(ಎಂಟಿವೈ)– ಭಾರತ ಸಂಸ್ಕೃತಿ ಮತ್ತು ಪ್ರಾಮಾಣಿಕತೆಗೆ ಹೆಸರುವಾಸಿಯಾಗಿದ್ದು, ಈ ಹಿನ್ನೆಲೆಯಲ್ಲಿ ಎಲ್ಲರೂ ತಮ್ಮ ಕಾರ್ಯ ವ್ಯಾಪ್ತಿಯಲ್ಲಿ ಭ್ರಷ್ಟಾಚಾರಕ್ಕೆ ಆಸ್ಪದ ನೀಡದೆ ಪ್ರಾಮಾಣಿಕವಾಗಿ ಸೇವೆ ಸಲ್ಲಿಸಬೇಕು ಎಂದು ಕೇಂದ್ರ ರೇಷ್ಮೆ ಸಂಶೋಧನೆ ಮತ್ತು ತರಬೇತಿ ಸಂಸ್ಥೆ ನಿರ್ದೇಶಕ ಡಾ.ಎಸ್.ಗಾಂಧಿ ದಾಸ್ ಸಲಹೆ ನೀಡಿದ್ದಾರೆ.

ಮೈಸೂರಿನ ರೇಷ್ಮೆ ಸಂಶೋಧನಾ ಮತ್ತು ತರಬೇತಿ ಸಂಸ್ಥೆ ಸಭಾಂಗಣದಲ್ಲಿ ಸಿಬ್ಬಂದಿಗಳಿಗಾಗಿ ಆಯೋಜಿಸಿದ್ದ ಜಾಗೃತಿ ಅಭಿಯಾನದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ಕೇಂದ್ರ ಜಾಗೃತ ಆಯೋಗ ನಿರ್ದೇಶನದಂತೆ ಮೈಸೂರಲ್ಲಿ ಜಾಗೃತಿ ಅರಿವು ಸಪ್ತಾಹ ನಡೆಸುವ ಮೂಲಕ ಸಿಬ್ಬಂದಿಗೆ ತರಬೇತಿ ನೀಡಲಾಗಿದೆ. ಅಲ್ಲದೆ, ರೇಷ್ಮೆ ಮಾರುಕಟ್ಟೆ ಸೇರಿದಂತೆ ವಿವಿಧೆಡೆಯಲ್ಲಿ ಅರಿವು ಮೂಡಿಸುವ ಕಾರ್ಯಕ್ರಮ ನಡೆಸಲಾಗಿದೆ. ಜೆಮ್ ಪೋರ್ಟಲ್‌ನಲ್ಲಿ ಪಾರದರ್ಶಕ ವ್ಯವಹಾರ ನಡೆಸುವ ಸಂಬಂಧ ರೈತರಿಗೆ ಮನವರಿಕೆ ಮಾಡಿಕೊಡಲಾಗಿದೆ. 'ಭ್ರಷ್ಟಾಚಾರ ತ್ಯಜಿಸಿ, ರಾಷ್ಟ್ರ ನಿರ್ಮಾಣಕ್ಕೆ ಬದ್ಧರಾಗಿರಿ' ಎಂಬ ಧ್ಯೇಯವಾಕ್ಯ ಅನುಸರಿಸಬೇಕು. ಕೆಲಸದ ಸ್ಥಳದಲ್ಲಿ ಭ್ರಷ್ಟಾಚಾರಕ್ಕೆ ಆಸ್ಪದ ನೀಡದೆ, ಪ್ರಾಮಾಣಿಕತೆ ಅನುಸರಿಸಬೇಕು. ಭ್ರಷ್ಟಾಚಾರ ಬೇಡ ಎಂದು ಹೇಳುವುದೇ ಭ್ರಷ್ಟಾಚಾರ ವಿರುದ್ಧ ಹೋರಾಡುವ ಮಾರ್ಗವಾಗಿದೆ ಎಂದು ಅಭಿಪ್ರಾಯಪಟ್ಟರು. ಭಾರತ ಎಲ್ಲಾ ಕ್ಷೇತ್ರಗಳಲ್ಲೂ ಅಭಿವೃದ್ಧಿ ಸಾಧಿಸಬೇಕಾದರೆ, ಭ್ರಷ್ಟಾಚಾರದ ಸಮಸ್ಯೆ ಸಂಪೂರ್ಣವಾಗಿ ಹೋಗಲಾಡಿಸಬೇಕು. ಅದಕ್ಕಾಗಿ ಎಲ್ಲರೂ ಒಗ್ಗಟ್ಟಾಗಿ ಪ್ರಾಮಾಣಿಕ ಪ್ರಯತ್ನ ಮಾಡಬೇಕು. ಈ ನಿಟ್ಟಿನಲ್ಲಿ ಸಂಸ್ಥೆಯು ಸಾರ್ವಜನಿಕ ಹಿತಾಸಕ್ತಿ ಬಹಿರಂಗಪಡಿಸುವಿಕೆ ಮತ್ತು ಮಾಹಿತಿದಾರರ ರಕ್ಷಣೆ ರೆಸಲ್ಯೂಷನ್ 2004(ಪಿಐಡಿ ಪಿಐ) ಕುರಿತು ಜಾಗೃತಿ ಕಾರ್ಯಕ್ರಮ ನಡೆಸಿತ್ತು. ಪ್ರತಿಯೊಬ್ಬರು ಪ್ರಾಮಾಣಿಕರಾಗಿ, ಪಾರದರ್ಶಕವಾಗಿ ಕೆಲಸ ಮಾಡಿದಾಗ ಮಾತ್ರ ದೇಶದ ಅಭಿವೃದ್ಧಿಗೆ ನೆರವಾಗಬಹುದು ಎಂದರು.

ಇದೇ ವೇಳೆ ಲಕ್ಷ್ಮಿಪುರಂ ಠಾಣೆಯ ಇನ್ಸ್‌ಪೆಕ್ಟರ್ ಬಿ.ಎಸ್.ರವಿಶಂಕರ್ ಮಾತನಾಡಿ, ಆರ್ಥಿಕ ಭ್ರಷ್ಟಾಚಾರಕ್ಕಿಂತ ಮಾನಸಿಕ ಭ್ರಷ್ಟಾಚಾರ ಅಪಾಯಕಾರಿಯಾಗಿದೆ. 1988ರ ಭ್ರಷ್ಟಾಚಾರ ನಿರ್ಬಂಧ ಕಾಯ್ದೆ ಹಾಗೂ 2018ರ ತಿದ್ದುಪಡಿಯಿಂದಾಗಿ ಕಾಯ್ದೆ ಮತ್ತಷ್ಟು ಕಠಿಣವಾಗಿದೆ. ಇದರಿಂದ ಯಾವುದೇ ರೂಪದಲ್ಲಿ ಯಾವುದೇ ವಸ್ತು ಪಡೆಯುವುದು, ಆಮಿಷಗಳಿಗೆ ಒಳಗಾಗುವುದು ಭ್ರಷ್ಟಾಚಾರವಾಗುತ್ತದೆ. ಅಕ್ರಮವಾಗಿ ಆಸ್ತಿ ಸಂಪಾದಿಸಲು ಪ್ರಯತ್ನಿಸದೆ, ಪ್ರಾಮಾಣಿಕರಾಗಿ ಕಾರ್ಯನಿರ್ವಹಿಸುವುದು ನೆಮ್ಮದಿ ನೀಡುತ್ತದೆ. ಭ್ರಷ್ಟಾಚಾರಿಗಳಿಗೆ ತಕ್ಕಪಾಠ ಕಲಿಸಲು ಲೋಕಾಯುಕ್ತ ಸಂಸ್ಥೆಯ ಅಧಿಕಾರಿಗಳು ಸದಾ ಸಿದ್ಧರಿರುತ್ತಾರೆ. ಲಂಚಗುಳಿತನ ತಡೆಗಟ್ಟಲು ಯಾವ ಕ್ರಮ ಕೈಗೊಳ್ಳಬೇಕು ಎಂಬುದು ಲೋಕಾಯುಕ್ತ ಅಧಿಕಾರಿಗಳಿಗೆ ತಿಳಿದಿರುತ್ತದೆ. ಈ ಹಿನ್ನೆಲೆಯಲ್ಲಿ ಲಂಚ ಪಡೆಯುವಾಗ ರೆಡ್‌ಹ್ಯಾಂಡ್ ಆಗಿ ಸಿಕ್ಕಿ ಬೀಳುವ ಮೂಲಕ ತಮ್ಮ ಜೀವನ ಹಾಳು ಮಾಡಿಕೊಳ್ಳಬಾರದು. ಭ್ರಷ್ಟಾಚಾರದ ಸುಳಿಗೆ ಸಿಕ್ಕಿಕೊಂಡರೆ ನಂತರ ಕೋರ್ಟ್, ಕಚೇರಿಗೆ ಅಲೆಯುವಂತಾಗಿ ಜೀವನ ನರಕ ಮಾಡಿಕೊಳ್ಳಬಾರದು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಕೇಂದ್ರ ರೇಷ್ಮೆ ಸಂಶೋಧನಾ ಮತ್ತು ತರಬೇತಿ ಸಂಸ್ಥೆಯ ವಿಜ್ಞಾನಿಗಳಾದ ಡಾ.ಕೆ.ಬಿ.ಚಂದ್ರಶೇಖರ್, ಡಾ. ರಘುನಾಥ್, ಡಾ. ಆರ್.ಭಾಗ್ಯ, ಡಾ.ಎಸ್.ಬಾಲಸರಸ್ವತಿ, ಡಾ.ಗಾಯಿತ್ರಿ, ಡಾ.ಮೀನಾಲ್, ಎಂ.ಎನ್.ಚಂದ್ರಶೇಖರ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ವಾಲ್ಮೀಕಿ ಆಶ್ರಮ ಶಾಲಾ ವಿದ್ಯಾರ್ಥಿಗಳಿಗೆ ಆರೋಗ್ಯ ತಪಾಸಣೆ



ಮೈಸೂರು, ನ.17(ಎಂಟಿವೈ)– ಕೇಂದ್ರ ಸರ್ಕಾರ ಘೋಷಿಸಿರುವ ಜನಜಾತಿ ಗೌರವ ದಿವಸ್ ಅಂಗವಾಗಿ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ ವತಿಯಿಂದ ಚಾಮರಾಜನಗರ ಜಿಲ್ಲೆಯ ವಾಲ್ಮೀಕಿ ಆಶ್ರಮ ಶಾಲೆಯ ವಿದ್ಯಾರ್ಥಿಗಳಿಗೆ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲು ಉದ್ದೇಶಿಸಲಾಗಿದ್ದು, ಇಂದು ಕೋಳಿಪಾಳ್ಯದಲ್ಲಿರುವ ಆಶ್ರಮ ಶಾಲೆಯ ವಿದ್ಯಾರ್ಥಿಗಳಿಗೆ ಆರೋಗ್ಯ ತಪಾಸಣೆ ನಡೆಸಿ, ಅಗತ್ಯವುಳ್ಳವರಿಗೆ ಚಿಕಿತ್ಸೆ ನೀಡಲಾಯಿತು.

ಚಾಮರಾಜನಗರ ತಾಲೂಕು ಕೋಳಿಪಾಳ್ಯದಲ್ಲಿರುವ ಸರ್ಕಾರಿ ಬುಡಕಟ್ಟು ಆಶ್ರಮ ಶಾಲೆಯಲ್ಲಿ ಇಂದು ಬೆಳಗ್ಗೆ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ಜೆಎಸ್‌ಎಸ್ ಉನ್ನತ ಶಿಕ್ಷಣ ಸಂಸ್ಥೆ ಹಾಗೂ ವಾಕ್ ಮತ್ತು ಶ್ರವಣ ಸಂಸ್ಥೆಗಳ ಸಹಯೋಗದಲ್ಲಿ ಆಯೋಜಿಸಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ಉಪ ನಿರ್ದೇಶಕಿ ಬಿ.ಎಸ್.ಪ್ರಭಾ ಅರಸ್ ಉದ್ಘಾಟಿಸಿ, ಸಂಸ್ಥೆ ವತಿಯಿಂದ ಈಗಾಗಲೇ ಮೈಸೂರು ಜಿಲ್ಲೆಯ ವಿವಿಧೆಡೆಯಿರುವ ಆಶ್ರಮ ಶಾಲೆಗಳಲ್ಲಿ ಓದುತ್ತಿರುವ ಬುಡಕಟ್ಟು ಸಮುದಾಯ ಮಕ್ಕಳಿಗೆ ಆರೋಗ್ಯ ತಪಾಸಣೆ ಮಾಡಿ, ಸೂಕ್ತ ಚಿಕಿತ್ಸೆ ನೀಡಲಾಗಿದೆ. ಹಲವು ಶಿಬಿರಗಳ ಮೂಲಕ ಪ್ರತಿಯೊಂದು ಶಾಲೆಯ ಮಕ್ಕಳ ಆರೋಗ್ಯ ತಪಾಸಣೆ ಮಾಡಲಾಗಿದ್ದು, ಈ ವೇಳೆ ಕೆಲವರು ಅಪೌಷ್ಟಿಕತೆಯಿಂದ ಬಳಲುತ್ತಿರುವುದು ಕಂಡು ಬಂದಿದೆ. ಇದರೊಂದಿಗೆ ಶ್ರವಣ ದೋಷ, ಅಲರ್ಜಿ ಸೇರಿದಂತೆ ಇನ್ನಿತರ ಆರೋಗ್ಯ ಸಮಸ್ಯೆ ಕಂಡು ಬಂದ ಮಕ್ಕಳನ್ನು ಮೈಸೂರಿಗೆ ಕರೆತಂದು ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಲಾಗಿದೆ. ಇಂದಿನಿಂದ ಹಂತ ಹಂತವಾಗಿ ಚಾಮರಾಜನಗರ ಜಿಲ್ಲೆಯಲ್ಲಿರುವ ಎಲ್ಲಾ ಸರ್ಕಾರಿ ಬುಡಕಟ್ಟು ವಾಲ್ಮೀಕಿ ಆಶ್ರಮ ಶಾಲೆ ಮಕ್ಕಳಿಗೂ ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ ವತಿಯಿಂದ ಉಚಿತವಾಗಿ ಆರೋಗ್ಯ ತಪಾಸಣೆ ನಡೆಸಲಾಗುವುದು ಎಂದರು.

ಇದು ಜಿಲ್ಲೆಯಲ್ಲಿ ಮೊದಲನೇ ಆರೋಗ್ಯ ತಪಾಸಣಾ ಶಿಬಿರವಾಗಿದ್ದು ರಂಗಸಂದ್ರ, ಪುಣಜನೂರು, ಕೋಳಿಪಾಳ್ಯ, ಆಶ್ರಮ ಶಾಲೆಗಳ 136 ಮಕ್ಕಳಿಗೆ ಕಿವಿ, ಮೂಗು, ಗಂಟಲು, ರಕ್ತಪರೀಕ್ಷೆ, ದಂತಪರೀಕ್ಷೆ, ಕಣ್ಣು ಪರೀಕ್ಷೆಯನ್ನು 40 ಜನ ವೈದ್ಯರ ತಂಡ ತಪಾಸಣೆ ನಡೆಸಿದೆ. ಆಶ್ರಮ ಶಾಲೆಗಳಲ್ಲಿ ಸೋಲಿಗ ಮತ್ತು ಲಂಬಾಣಿ ಜನಾಂಗದ ಮಕ್ಕಳು ಹೆಚ್ಚಾಗಿದ್ದಾರೆ. ಜಿಲ್ಲೆಯ 20 ಆಶ್ರಮ ಶಾಲೆಗಳಲ್ಲಿ ಸುಮಾರು 2 ಸಾವಿರ ಮಕ್ಕಳು ವ್ಯಾಸಂಗ ಮಾಡುತ್ತಿದ್ದಾರೆ. ಉಚಿತ ಚಿಕಿತ್ಸೆಯ ಜೊತೆಗೆ ಉಚಿತವಾಗಿ ಔಷಧಿಯನ್ನು ವಿತರಿಸಲಾಗುವುದು. ಅಗತ್ಯವುಳ್ಳವರಿಗೆ ಹೆಚ್ಚಿನ ಚಿಕಿತ್ಸೆ ಬೇಕಾದಲ್ಲಿ ಮೈಸೂರಿಗೆ ಕರೆತಂದು ಚಿಕಿತ್ಸೆ ಕೊಡಿಸಲಾಗುವುದು. ಪೋಷಕರು ಮಕ್ಕಳ ಶಿಕ್ಷಣದ ಜೊತೆಗೆ ಅವರ ಆರೋಗ್ಯದ ಕಡೆಗೂ ಹೆಚ್ಚು ಗಮನ ಕೊಡಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ತಜ್ಞ ವೈದ್ಯರಾದ ಡಾ.ಮಹಾದೇವಪ್ಪ, ಡಾ.ಇಂದಿರಾ, ಡಾ.ಕೆ.ಬಿ.ಚೇತಕ್, ಡಾ. ರವೀಶ್ ಗಣಿ, ತಾಲೂಕು ಕಲ್ಯಾಣಾಧಿಕಾರಿ ಸುಬ್ಬರಾಯ, ಹೇಮಚಂದ್ರ ಮುಖ್ಯಶಿಕ್ಷಕರಾದ ಸಿ.ಕುಮಾರಸ್ವಾಮಿ, ಸೋಮಣ್ಣ, ಬಸವಣ್ಣ, ನಿಧಿ ಮಂಜುನಾಥ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಸರ್ಕಾರದಿಂದ ನೆಪ ಮಾತ್ರ ಬರ ನಿರ್ವಹಣೆ

ರೈತ ಮಹಿಳೆಯರಿಗೆ ನಾಟಿಕೋಳಿ ಮರಿಗಳ ವಿತರಿಸಿ ಶಾಸಕ ಜಿ.ಡಿ.ಹರೀಶ್‌ಗೌಡ ಆರೋಪ

ಹುಣಸೂರು.ನ.17– ರಾಜ್ಯ ಸರ್ಕಾರ ಬರ ನಿರ್ವಹಣೆ ಕಾರ್ಯಕ್ರಮದಲ್ಲಿ ಕೈಗೊಂಡಿರುವ ಕಾರ್ಯಕ್ರಮಗಳು ಸಮಾಧಾನ ತಂದಿಲ್ಲ. ನೆಪ ಮಾತ್ರಕ್ಕೆ ಬರ ನಿರ್ವಹಣೆ ಕಾರ್ಯ ಕೈಗೊಂಡಿದೆ ಎಂದು ಶಾಸಕ ಜಿ.ಡಿ.ಹರೀಶ್‌ಗೌಡ ಆರೋಪಿಸಿದರು.

ನಗರದ ಹೆಚ್.ಡಿ.ಕೋಟೆ ಸರ್ಕಲ್ ಬಳಿಯ ಪಶು ವೈದಕೀಯ ಸಹಾಯಕ ನಿರ್ದೇಶಕರ ಕಚೇರಿಯ ಆವರಣದಲ್ಲಿ ರಾಜ್ಯ ಸಹಕಾರ ಕುಕ್ಕುಟ ಮಹಾ ಮಂಡಲ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮ ದಲ್ಲಿ ರೈತ ಮಹಿಳೆಯರಿಗೆ ನಾಟಿಕೋಳಿ ಮರಿಗಳನ್ನು ವಿತರಿಸಿ ಮಾತನಾಡಿದ ಅವರು, ತಾಲೂಕಿನಲ್ಲಿ ಬರದ ಛಾಯೆ ತೀವ್ರವಾಗಿದೆ. ಈ ಬಾರಿ ರೈತರಿಗೆ ಕೃಷಿ ಪರಿಕರ ಹಾಗೂ ಯಾಂತ್ರೋಪಕರಣಗಳನ್ನು ಯಾವುದೇ ಯೋಜನೆಯಡಿ ನೀಡಿಲ್ಲ. ಗ್ಯಾರಂಟಿ ಯೋಜನೆಗಳ ಕಾರಣ ಹೇಳಿ ರೈತರನ್ನು ಸರ್ಕಾರ ಶೋಷಿಸುತ್ತಿದೆ ಎಂದು ಆರೋಪಿಸಿದರು.



ಪಶುಪಾಲನೆ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಚನ್ನಬಸಪ್ಪ ಮಾತನಾಡಿ, ರಾಜ್ಯದಲ್ಲಿ 2022–23ನೇ ಸಾಲಿನಲ್ಲಿ 5 ಲಕ್ಷ ನಾಟಿಕೋಳಿ ಮರಿಗಳನ್ನು ಉತ್ಪಾದಿಸಿ 25,000 ರೈತ ಮಹಿಳೆಯರಿಗೆ ತಲಾ 20 ಮರಿಗಳನ್ನು ವಿತರಿಸಲಾಗುತ್ತಿದೆ. ಇದೇ ರೀತಿ ಈ ಕಾರ್ಯಕ್ರಮದಡಿ ತಾಲೂಕಿನ 106 ರೈತ ಮಹಿಳೆಯರಿಗೆ ಕೋಳಿ ಮರಿಗಳನ್ನು ವಿತರಿಸಲಾಗುತ್ತಿದೆ. ರೈತ ಮಹಿಳೆಯರು ಕೋಳಿ ಮರಿಗಳನ್ನು ಸಾಕುವ ಮೂಲಕ ಕುಕ್ಕುಟೋದ್ಯಮವನ್ನು ರೂಢಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ತಾಲೂಕಿನಲ್ಲಿ ಬರ ಹಿನ್ನೆಲೆಯಲ್ಲಿ ಜಾನುವಾರುಗಳ ಮೇವು ಬೆಳೆಯಲು 7500 ರೈತರಿಗೆ 5 ಕೆಜಿ ತೂಕದ ಮೇವಿನ ಬೀಜ, 1000 ರೈತರಿಗೆ 6 ಕೆಜಿ ತೂಕದ ಮುಸುಕಿನ ಜೋಳ ಬಿತ್ತನೆಬೀಜ, 100 ರೈತರಿಗೆ ಅರ್ಧ ಕೆಜಿ ತೂಕದ ಬಾಜ್ರ (ಕೊಂಬಿನ ಹಕ್ಕಿ) ಬಿತ್ತನೆಬೀಜದ ಪ್ಯಾಕೇಟ್‌ಗಳನ್ನು ವಿತರಿಸಲಾಯಿತು. ಮೈಸೂರಿನ ಕೆಸಿಪಿಎಫ್‌ನ ಡಾ.ನಂಜೇಶ್, ಕಟ್ಟೆಮಳಲವಾಡಿಯ ಹಿರಿಯ ಪಶು ವೈದ್ಯಾಧಿಕಾರಿ ಡಾ.ಭರತ್, ಹನಗೂಡಿನ ಹಿರಿಯ ಪಶು ವೈದ್ಯಾಧಿಕಾರಿ ಡಾ.ಸತೀಶ್‌ಕುಮಾರ್, ಗುರುಪುರದ ಹಿರಿಯ ಪಶು ವೈದ್ಯಾಧಿಕಾರಿ ಡಾ.ದರ್ಶನ್, ನಗರಸಭಾ ಸದಸ್ಯ ಹೆಚ್.ಪಿ.ಸತೀಶ್‌ಕುಮಾರ್ ಉಪಸ್ಥಿತರಿದ್ದರು.



ಸರಗೂರಿನ ಅಂಗನವಾಡಿ ಕೇಂದ್ರದಲ್ಲಿ ತಾಲೂಕು ಆರೋಗ್ಯಾಧಿಕಾರಿ ಕಚೇರಿ ಮತ್ತು ಸಮುದಾಯ ಆರೋಗ್ಯ ಕೇಂದ್ರದ ವತಿಯಿಂದ ಆಯೋಜಿಸಿದ್ದ ಅತಿಸಾರ ಭೇದಿ ನಿಯಂತ್ರಣ ಪಾಕ್ಷಿಕ ಕಾರ್ಯಕ್ರಮವನ್ನು ಪಪಂ ಅಧ್ಯಕ್ಷೆ ರಾಧಿಕಾ ಶ್ರೀನಾಥ್, ತಾಲೂಕು ಆರೋಗ್ಯಾಧಿಕಾರಿ ಡಾ.ಟಿ.ರವಿಕುಮಾರ್ ಉದ್ಘಾಟಿಸಿದರು. ಪಪಂ ಸದಸ್ಯರಾದ ವೀರೇಶ್, ದಿವ್ಯ ನವೀನ್ ಕುಮಾರ್, ಸಮುದಾಯ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ.ಪಾರ್ಥಸಾರಥಿ, ಆರೋಗ್ಯ ಸಿಬ್ಬಂದಿ ಸರಳಾ ರವಿರಾಜ್, ಪುಷ್ಪಾ, ಶಾಂತಿ, ಜಗದೀಶ್, ಮಾನಸ, ವಿದ್ಯಾಶ್ರೀ, ಶ್ವೇತಾ, ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು ಇದ್ದರು.

ಹೊರಗುತ್ತಿಗೆ ನೌಕರರ ನೇರ ಪಾವತಿಗೆ ಆಗ್ರಹ

ತಿ.ನರಸೀಪುರ: ಕಾಂಗ್ರೆಸ್ ಪ್ರಣಾಳಿಕೆ ಘೋಷಣೆಯಂತೆ ನಗರ ಸ್ಥಳೀಯ ಸಂಸ್ಥೆಗಳ ಹೊರಗುತ್ತಿಗೆ ನೌಕರರಿಗೆ ಪೌರಕಾರ್ಮಿಕರ ಮಾದರಿಯಲ್ಲಿ ನೇರ ಪಾವತಿಗೊಳಪಡಿಸುವಂತೆ ಪುರಸಭೆ, ನಗರಪಾಲಿಕೆಯ ಹೊರಗುತ್ತಿಗೆ ನೌಕರರ ಸಂಘದ ರಾಜ್ಯಾಧ್ಯಕ್ಷ ಎಂ.ಬಿ.ನಾಗಣ್ಣಗೌಡ ಆಗ್ರಹಿಸಿದರು.

ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ಪೌರ ಕಾರ್ಮಿಕರ ಖಾಯಂಗೆ ಮುಂದಾಗಿರುವ ಸರ್ಕಾರ ಹೊರಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುವ ವಾಹನ ಚಾಲಕರು, ನೀರು ಸರಬರಾಜು ಸಹಾಯಕರು, ಲೋಡರ್ಸ್, ಕ್ಲೀನರ್ಸ್, ಯುಜಿಡಿ ಕಾರ್ಮಿಕರು ಸೇರಿದಂತೆ 15 ಸಾವಿರಕ್ಕೂ ಹೆಚ್ಚು ನೌಕರರನ್ನು ಗುತ್ತಿಗೆಯಲ್ಲೇ ಉಳಿಸಲಾಗಿದೆ ಎಂದು ಸುದ್ದಿಗೋಷ್ಠಿಯಲ್ಲಿ ಅಸಮಾಧಾನ ವ್ಯಕ್ತಪಡಿಸಿದರು.

ನಗರಗಳ ಸ್ವಚ್ಛತೆ ಹಾಗೂ ಕುಡಿಯುವ ನೀರು ನಿರ್ವಹಣೆಯಲ್ಲಿ ಹೊರಗುತ್ತಿಗೆ ನೌಕರರ ಪಾತ್ರ ಮಹತ್ವದ್ದಾಗಿದೆ. 2017ರಲ್ಲಿ ಪೌರಕಾರ್ಮಿಕರ ನೇಮಕಾತಿಗೊಳಿಸಿದಾಗ ಹೊರಗುತ್ತಿಗೆ ನೌಕರರನ್ನು ಗುತ್ತಿಗೆಯಲ್ಲೇ ಉಳಿಸಲಾಯಿತು. 1964ರ ಪೌರಾಡಳಿತ ಕಾಯ್ದೆ ಪ್ರಕಾರ ಕಸ ಸಾಗಿಸುವ ವಾಹನ ಚಾಲಕರು, ಲೋಡರ್ಸ್, ಕ್ಲೀನರ್ಸ್, ಹೆಲ್ಪರ್ಸ್,



ಯುಜಿಡಿ ಕಾರ್ಮಿಕರನ್ನೂ ಪೌರಕಾರ್ಮಿಕರೆಂದು ಗುರುತಿಸಲಾಗಿದೆ. ಆದರೂ ನಗರಾಭಿವೃದ್ಧಿ ಅಧಿಕಾರಿಗಳು ತಾರತಮ್ಯ ಎಸಗಿ ನೇರ ನೇಮಕಾತಿ ಹಾಗೂ ನೇರ ಪಾವತಿಯಲ್ಲಿ ಹೊರಗುತ್ತಿಗೆ ನೌಕರರಿಗೆ ಅನ್ಯಾಯ ಎಸಗಲಾಗಿದೆ ಎಂದು ಆರೋಪಿಸಿದರು.

ಈಗಲೂ ಹೊರಗುತ್ತಿಗೆ ನೌಕರರನ್ನು ಗುತ್ತಿಗೆಯಲ್ಲೇ ಮುಂದುವರೆಸುವ ಸರ್ಕಾರದ ನೀತಿ ಒಂದು ಕಣ್ಣಿಗೆ ಬೆಣ್ಣೆ ಮತ್ತೊಂದು ಕಣ್ಣಿಗೆ ಸುಣ್ಣ ಎಂಬಂತಾಗಿದೆ. ಒಂದೇ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುವವರ ಮಧ್ಯೆ ಒಡೆದಾಳುವ ನೀತಿ ಅನುಸರಿಸುವುದು ಶೋಭೆಯಲ್ಲ. ಕಳೆದ 2017ರಲ್ಲಿ ಪೌರಕಾರ್ಮಿಕರನ್ನು ಖಾಯಂಗೊಳಿಸಲಾಯಿತು. ನಗರ ಸ್ಥಳೀಯ ಸಂಸ್ಥೆಗಳ ಹೊರಗುತ್ತಿಗೆ ನೌಕರರನ್ನು ನೇರ ಪಾವತಿಗೆ ತರುವುದಾಗಿ ಅಂದು ಕಾಂಗ್ರೆಸ್ ಸರ್ಕಾರ ಅಶ್ವಾಸನೆ ನೀಡಿತ್ತು. ಕಳೆದ ಸರ್ಕಾರದಲ್ಲಿ ತೀವ್ರ ಹೋರಾಟದ ಪರಿಣಾಮ ಹೊರಗುತ್ತಿಗೆ ನೌಕರರ ನೇರ ಪಾವತಿಯ ಕಡತ ಹಣಕಾಸು ಇಲಾಖೆಯ ಪರಿಶೀಲನೆಯಲ್ಲಿರುವಾಗಲೇ ವಿಧಾನಸಭೆಯ ಸಾರ್ವತ್ರಿಕ ಚುನಾವಣೆ ಘೋಷಣೆಯಾಯಿತು. ಈ ವೇಳೆ ಕಾಂಗ್ರೆಸ್ ಪ್ರಣಾಳಿಕೆಯಲ್ಲಿ ಘೋಷಿಸಿದಂತೆ ಹೊರಗುತ್ತಿಗೆ ನೌಕರರನ್ನು ನೇರ ಪಾವತಿಗೆ ತರಲು ನುಡಿದಂತೆ ನಡೆಯಿರಿ ಎಂಬ ಘೋಷಣೆಯೊಂದಿಗೆ ಧರಣಿ ನಡೆಸಿ ಸರ್ಕಾರದ ಗಮನ ಸೆಳೆಯಲಾಗುವುದು ಎಂದರು.

ಸುದ್ದಿಗೋಷ್ಠಿಯಲ್ಲಿ ಎನ್.ಸತೀಶ್, ಭರತ್ ರಾಜ್, ದೇವರಾಜ್, ಶಿವನಾಗು, ಎಂ.ಸತೀಶ್, ಗಣೇಶ್, ಮಣಿ ರಾಜ್, ನಿಂಗರಾಜು, ನವೀನ್, ವಿಶ್ವನಾಥ್, ಮಂಜುನಾಥ್ ಮನೋಜ್, ನಾಗೇಶ್ ಮತ್ತಿತರರು ಉಪಸ್ಥಿತರಿದ್ದರು.

ವ್ಯಕ್ತಿ ಮೇಲೆ ಮಾರಣಾಂತಿಕ ಹಲ್ಲೆ



ಸರಗೂರು: ವೈಮನಸ್ಸಿನ ಹಿನ್ನೆಲೆಯಲ್ಲಿ ವ್ಯಕ್ತಿಗೆ ಕುಟುಂಬವೊಂದು ಮಾರಣಾಂತಿಕ ಹಲ್ಲೆ ನಡೆಸಿರುವ ಘಟನೆ ತಾಲೂಕಿನ ಚಾಮಲಾ ಪುರ ಗ್ರಾಮದಲ್ಲಿ ತಡವಾಗಿ ಬೆಳಕಿಗೆ ಬಂದಿದೆ.

ಗ್ರಾಮದ ರಾಜಯ್ಯ ಹಲ್ಲೆಗೊಳಗಾಗಿ ಹೆಚ್.ಡಿ.ಕೋಟೆಯ ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಇದೇ ಗ್ರಾಮದ ಶಿವಲಿಂಗಯ್ಯ, ಈತನ ಪತ್ನಿ ತಾಯಮ್ಮ ಹಾಗೂ ಕುಟುಂಬದವರು ದೀಪಾವಳಿ ಹಬ್ಬದ ದಿನ ರಾತ್ರಿ ರಾಜಯ್ಯಗೆ ಮಾರಣಾಂತಿಕ ಹಲ್ಲೆ ನಡೆಸಿದ್ದಾರೆ. ಕೊತ್ತೇಗಾಲ ಗ್ರಾಮದ ಸಿ.ತಿಮ್ಮಯ್ಯನವರ ಮಗ ಕೆ.ಟಿ.ಹರೀಶ್, ಮೈಸೂರು ನಿವಾಸಿ ಮೂರ್ತಿ, ಕೆ.ಮಹದೇವಯ್ಯ, ರೇವತಿ, ದಿಲೀಪ, ಜಯಂತ್ ಅವರ ಕುಮ್ಮಕ್ಕಿನಿಂದ ಶಿವಲಿಂಗಯ್ಯನ ಕುಟುಂಬ ಕಲ್ಲು, ದೊಣ್ಣೆಗಳಿಂದ ಹಲ್ಲೆ ನಡೆಸಿ, ಕೊಲೆ ಬೆದರಿಕೆ ಹಾಕಿದ್ದಾರೆ ಎಂದು ಹಲ್ಲೆಗೊಳಗಾದ ರಾಜಯ್ಯ ಸರಗೂರು ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ಇದೇ ವೇಳೆ ತಾಲೂಕು ಬಾಬು ಜಗಜೀ ವನರಾಂ ವಿಚಾರ ವೇದಿಕೆಯ ಅಧ್ಯಕ್ಷ ಕೆ.ನಾಗಣ್ಣ, ಸಮುದಾಯದ ಮುಖಂಡರು, ಗಡಿಯಜಮಾನರು ಹೆಚ್.ಡಿ.ಕೋಟೆ ಸಾರ್ವಜನಿಕ ಆಸ್ಪತ್ರೆಗೆ ಭೇಟಿ ನೀಡಿ ರಾಜಯ್ಯನವರ ಆರೋಗ್ಯ ವಿಚಾರಿಸಿದರು.

ರೈತ ಮುಖಂಡರ ಬಂಧನ ಖಂಡಿಸಿ ಪ್ರತಿಭಟನೆ



ಬನ್ನೂರು: ಮೈಸೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಕಾರ್ಯಕ್ರಮಕ್ಕೆ ಅಡ್ಡಿ ಪಡಿಸಲಿದ್ದಾರೆ ಎಂಬ ಹಿನ್ನೆಲೆಯಲ್ಲಿ ರೈತ ಮುಖಂಡರನ್ನು ಬಂಧಿಸಿರುವುದನ್ನು ಖಂಡಿಸಿ ಇಲ್ಲಿನ ಪೊಲೀಸ್ ಠಾಣೆ ಎದುರು ಹಾಗೂ ಸಂತೇಮಾಳದ ಬಳಿಯ ರಸ್ತೆ ತಡೆದು ಶುಕ್ರವಾರ ರೈತರು ಪ್ರತಿಭಟನೆ ನಡೆಸಿದರು.

ಪೊಲೀಸರು ಗುರುವಾರ ರಾತ್ರಿ ರೈತ ಮುಖಂಡರಾದ ಬನ್ನೂರು ನಾರಾಯಣ್, ಎಂ.ವಿ. ಕೃಷ್ಣಪ್ಪ, ಶಿವರಾಂ, ಅತ್ತಹಳ್ಳಿ ದೇವರಾಜು ಅವರನ್ನು ಬಂಧಿಸಿದ್ದಾರೆ. ಇದು ಖಂಡನೀಯ ಎಂದು ಪ್ರತಿಭಟನಾಕಾರರು ಆರೋಪಿಸಿದರು. ರೈತಪರ ಹೋರಾಟ ಮಾಡುವ ನಾಯಕರನ್ನು ಯಾವುದೇ ಸೂಚನೆ ನೀಡದೇ ಪೊಲೀಸರು ಏಕಾಏಕಿ ಮನೆಗೆ ನುಗ್ಗಿ ಬಂಧಿಸಿರುವುದು ಸರಿಯಲ್ಲ. ರೈತ ಮುಖಂಡರು ಯಾವುದೇ ದರೋಡೆ ಹಾಗೂ ಲೂಟಿಕೋರರಲ್ಲ. ಇಲ್ಲವೇ ಕಳ್ಳತನ ಮಾಡಿದವರಲ್ಲ. ಹೀಗಿರುವಾಗ ರೈತ ಮುಖಂಡರನ್ನು ಬಂಧಿಸಿರುವುದು ಎಷ್ಟು ಸರಿ? ಎಂದು ಪೊಲೀಸರ ವಿರುದ್ಧ ಘೋಷಣೆ ಕೂಗಿದರು.

ಪ್ರತಿಭಟನೆಯಲ್ಲಿ ಕಾರ್ಮಿಕ ಮುಖಂಡ ಶಿವರಾಜು, ಮೇಗಲಕೊಪ್ಪಲಿನ ರೈತ ಮುಖಂಡ ರಂಗಸ್ವಾಮಿ, ಅರುಣ, ನವೀನ, ಮಧು, ಕುಮಾರ, ಚೇತನ, ವೀರಭದ್ರ, ಮಹೇಶ, ಸಿದ್ದೇಶ, ಅತ್ತಹಳ್ಳಿ ಗೋಪಿ, ರಾಮಕೃಷ್ಣ, ಬನ್ನೂರು ಜಯರಾಂ, ಶಂಕರ, ಮಹೇಶ್, ರಮೇಶ್, ರಾಮ, ಪಾರ್ಥ, ನಿಂಗಣ್ಣ, ಚಿನ್ನಸ್ವಾಮಿ, ಚಂದ್ರು, ಕೃಷ್ಣ, ಗಣೇಶ್, ಹೊರಹಳ್ಳಿ ನಾರಾಯಣ್ ಸೇರಿದಂತೆ ಪ್ರಮುಖರು ಇದ್ದರು.

ನಾಳೆ ಕಾಲಭೈರವೇಶ್ವರ ದೇವಾಲಯ ವಾರ್ಷಿಕೋತ್ಸವ

ಕೆ.ಆರ್.ನಗರ: ತಾಲೂಕಿನ ಚೀರ್ನಹಳ್ಳಿ ಗ್ರಾಮದ ಶ್ರೀ ಕಾಲಭೈರವೇಶ್ವರಸ್ವಾಮಿ ದೇವಾಲಯದ 12ನೇ ವಾರ್ಷಿಕೋತ್ಸವ ಸಮಾರಂಭವ ನ.19ರಂದು ನಡೆಯಲಿದೆ.

ಗ್ರಾಮದ ಶ್ರೀ ಕಾಲಭೈರವೇಶ್ವರ ಟ್ರಸ್ಟ್ ವತಿಯಿಂದ ವಾರ್ಷಿಕೋತ್ಸವದ ಅಂಗವಾಗಿ ದೇವರಿಗೆ ವಿಶೇಷ ಪೂಜಾ ಕಾರ್ಯ ಹಮ್ಮಿಕೊಳ್ಳಲಾಗಿದೆ. ಅಂದು ಸಂಜೆ ಬೆಂಗಳೂರಿನ ಮಿತ್ರಮಂಡಳಿ ತಂಡದವರಿಂದ ನೃತ್ಯ ಹಾಗೂ ಮಿಮಿಕ್ರಿ ಸೇರಿದಂತೆ ರಸಮಂಜರಿ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ತಾಲೂಕು ಕುರುಬರ ಸಂಘದ ಅಧ್ಯಕ್ಷ ಚಿರ್ನಹಳ್ಳಿ ಶಿವಣ್ಣ ತಿಳಿಸಿದ್ದಾರೆ.

ಅತಿಸಾರ ಭೇದಿ ನಿಯಂತ್ರಣಕ್ಕೆ ಮುನ್ನೆಚ್ಚರಿಕೆ ಸೂಕ್ತ



ಹೆಚ್.ಡಿ.ಕೋಟೆ: ಮಕ್ಕಳಲ್ಲಿ ಅತಿಸಾರ ಭೇದಿ ಆಗದಂತೆ ಆರೋಗ್ಯ ಇಲಾಖೆಯೊಂದಿಗೆ ಆಶಾ ಹಾಗೂ ಅಂಗನವಾಡಿ ಕಾರ್ಯಕರ್ತೆಯರು ಮುನ್ನೆಚ್ಚರಿಕೆ ವಹಿಸುವುದು ಸೂಕ್ತ ಎಂದು ತಹಶೀಲ್ದಾರ್ ಶ್ರೀನಿವಾಸ್ ಸಲಹೆ ನೀಡಿದರು.

ಪಟ್ಟಣದ ಪುರಸಭಾ ಸಭಾಂಗಣದಲ್ಲಿ ಆರೋಗ್ಯ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಹಾಗೂ ತಾಲೂಕು ಆಡಳಿತ ವತಿಯಿಂದ ಆಯೋಜಿಸಿದ್ದ ಅತಿಸಾರ ಭೇದಿ ನಿಯಂತ್ರಣ ಪಾಕ್ಷಿಕ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಕಾಲದಲ್ಲಿ ಓಆರ್‌ಎಸ್ ಪೌಡರ್ ಹಾಗೂ ಜಿಂಕ್ ಮಾತ್ರೆಗಳನ್ನು ನೀಡಬೇಕು. ಕಾರ್ಯಕರ್ತೆಯರು ವೇಳಪಟ್ಟಿ ಪ್ರಕಾರ ಗ್ರಾಮಗಳಿಗೆ ತೆರಳಿ ಅರಿವು ಮೂಡಿಸಬೇಕು. ಆರೋಗ್ಯ ಇಲಾಖೆಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಮಕ್ಕಳ ತಾಯಿಂದರಿಗೆ ಮಾಹಿತಿ ತಲುಪಿಸುವ ಕೆಲಸ ಮಾಡಬೇಕು ಎಂದು ಸೂಚಿಸಿದರು.

ತಾಲೂಕು ಆರೋಗ್ಯಾಧಿಕಾರಿ ಡಾ.ಟಿ.ರವಿಕುಮಾರ್ ಮಾತನಾಡಿ, ಯಾವುದೇ ಮಗು ಭೇದಿಯಿಂದ ಸಾಯಬಾರದು ಎಂದು ರಾಜ್ಯ ಸರ್ಕಾರ ಅತಿಸಾರ ಭೇದಿ ನಿಯಂತ್ರಣ ಪಾಕ್ಷಿಕ ಕಾರ್ಯಕ್ರಮ ಹಮ್ಮಿಕೊಂಡು ಜನರಿಗೆ ಅರಿವು ಮೂಡಿಸಲಾಗುತ್ತಿದೆ. 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ನ.21ರ ವರೆಗೆ ತಾಲೂಕಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸುರಕ್ಷಾಧಿಕಾರಿಗಳು, ಸಮುದಾಯ ಆರೋಗ್ಯಾಧಿಕಾರಿಗಳು, ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು ಮನೆ ಮನೆಗೆ ಭೇಟಿ ನೀಡಿ, ಓಆರ್‌ಎಸ್ ಮತ್ತು ಜಿಂಕ್ ಮಾತ್ರೆಗಳನ್ನು ವಿತರಿಸಲಿದ್ದು ಸಾರ್ವಜನಿಕರು ಪಡೆದುಕೊಳ್ಳಬೇಕು ಎಂದರು.

ಗ್ರೇಡ್–2 ತಹಶೀಲ್ದಾರ್ ಸಣ್ಣರಾಮಪ್ಪ, ಸಿಡಿಪಿಓ ಆಶಾ, ಪುರಸಭಾ ಮುಖ್ಯಾಧಿಕಾರಿ ಸುರೇಶ್, ಆರೋಗ್ಯ ಇಲಾಖೆ ರವಿರಾಜ್, ಸರಳಾ, ಅರಳಪ್ಪ ಹಾಜರಿದ್ದರು.

ಕಾರು ಡಿಕ್ಕಿ: ಬೈಕ್ ಸವಾರನ ಸಾವು

ಹುಲ್ಲಹಳ್ಳಿ, ನ.17–ಮದುವೆಗೆ ತೆರಳುತ್ತಿದ್ದ ಬೈಕ್ ಸವಾರ ಕಾರು ಡಿಕ್ಕಿಯಾಗಿ ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ನಂಜನಗೂಡು ತಾಲೂಕಿನ ಜೋಗಿಪಾಳ್ಯದ ಹುಂಡಿ ಸಮೀಪ ಶುಕ್ರವಾರ ಬೆಳಗ್ಗೆ ನಡೆದಿದೆ.



ನಂಜನಗೂಡು ತಾಲೂಕಿನ ವಳಗೆರೆ ಗ್ರಾಮದ ದೇವಣ್ಣ ಎಂಬುವರ ಮಗ ಸುರೇಶ್ (42) ಮೃತಪಟ್ಟಿದ್ದು, ಈತ ಬೆಳಗ್ಗೆ 10 ಗಂಟೆಯಲ್ಲಿ ಸಂಗಮದಲ್ಲಿ ನಡೆಯುತ್ತಿದ್ದ ಮದುವೆಗೆ ಬೈಕ್‌ನಲ್ಲಿ ತೆರಳುವಾಗ ಕಾರು ಬೈಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ಸುರೇಶ ಮೃತಪಟ್ಟಿದ್ದಾರೆ.

ಪ್ರತಿಭಟನೆ: ಅಪಘಾತ ಮಾಡಿರುವ ತಮಿಳುನಾಡು ಮೂಲದ ಕಾರು ಚಾಲಕನಿಗೆ ಶಿಕ್ಷೆ ನೀಡಿ, ಮೃತ ಮಹೇಶ್ ಕುಟುಂಬಕ್ಕೆ ಸೂಕ್ತ ಪರಿಹಾರ ಕೊಡಿಸಬೇಕು ಎಂದು ಒತ್ತಾಯಿಸಿ, ಮೃತನ ಸಂಬಂಧಿಕರು ಹಾಗೂ ವಳಗೆರೆ ಗ್ರಾಮಸ್ಥರು ಹುಲ್ಲಹಳ್ಳಿ ಠಾಣೆ ಮುಂಭಾಗ ಶವವನ್ನಿಟ್ಟು ಪ್ರತಿಭಟನೆ ನಡೆಸಿದರು. ವೃತ್ತ ನಿರೀಕ್ಷಕ ಚಂದ್ರಶೇಖರ್ ಮತ್ತು ಪಿಎಸ್‌ಐ ರಮೇಶ್ ಕರಕಡ್ಡಿ ಅವರು ಮೃತನ ಕುಟುಂಬಕ್ಕೆ ಸೂಕ್ತ ಪರಿಹಾರ ಕೊಡಿಸುವುದಾಗಿ ಭರವಸೆ ನೀಡಿದರು. ನಂತರ ಗ್ರಾಮಸ್ಥರು ಪ್ರತಿಭಟನೆಯನ್ನು ಹಿಂಪಡೆದರು. ಮೃತ ಸುರೇಶ್‌ಗೆ ಪತ್ನಿ ನೇತ್ರಾವತಿ ಹಾಗೂ ಇಬ್ಬರು ಹೆಣ್ಣು ಮಕ್ಕಳು ಇದ್ದಾರೆ. ಈ ಸಂಬಂಧ ಹುಲ್ಲಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ನಾಳೆ ದಕ್ಷಿಣೇಶ್ವರ ದೀಪಸ್ಥಂಭ ಅನಾವರಣ

ಹುಣಸೂರು: ನಗರದ ಕಲ್ಕುಣಿಕೆ ಸರ್ಕಲ್ ನಲ್ಲಿರುವ ಈಶ್ವರ ದೇವಸ್ಥಾನದಲ್ಲಿ ನ.19 ರಂದು ಶ್ರೀ ದಕ್ಷಿಣೇಶ್ವರಸ್ವಾಮಿಯ ಕುಂಬಾಭಿಷೇಕ, ದೀಪ ಸ್ಥಂಭ ಅನಾವರಣ, ಸುಮಂಗಲಿಯರಿಂದ ಮಹಾಲಕ್ಷ್ಮೀ ಅನುಷ್ಠಾನ, ಮಹಾ ಮಂತ್ರೋಪದೇಶ ಹಾಗೂ ಪೂಜಾ ಮಹೋತ್ಸವ ನಡೆಯಲಿದೆ.

ಅಂದು ಬೆಳಗ್ಗೆ 6 ಗಂಟೆಗೆ ಆಗ್ರೋದಕ, ಯಾಗಶಾಲೆ ಪ್ರವೇಶ, ಗಣಪತಿ ಪೂಜೆ, ಪುಣ್ಯಾ, ರಕ್ಷಾಬಂಧನ, ವಾಸ್ತು ರಾಕ್ಷೋಘ್ನ, ಬಲಿಪೂಜೆ, ಕಳಸರಾಧನೆ ಹಾಗೂ ಹೋಮ ನಡೆಯಲಿದೆ. ನ.20ರಂದು ಬೆಳಗ್ಗೆ 6ಕ್ಕೆ ಗಣಪತಿ ಪೂಜೆ, ನಿತ್ಯಪ್ರುಣ್ಯಂ, ರುದ್ರಾಭಿಷೇಕ, ದೀಪಸ್ಥಂಭ ಅನಾವರಣ, ಕುಂಬಾಭಿಷೇಕ, ಬೆಳಗ್ಗೆ 10.45ಕ್ಕೆ ಮಹಾಮಂಗಳಾರತಿ, ಮಧ್ಯಾಹ್ನ 12ಕ್ಕೆ ಅನ್ನಸಂತರ್ಪಣೆ ನಡೆಯಲಿದೆ. ಸಂಜೆ 7ಕ್ಕೆ ಸುಮಂಗಲಿಯರಿಂದ ಮಹಾಲಕ್ಷ್ಮೀ ಅನುಷ್ಠಾನ ಪೂಜೆ ನಡೆಯಲಿದೆ ಸೇವಾ ಸಮಿತಿ ಪ್ರಕಟಣೆಯಲ್ಲಿ ತಿಳಿಸಿದೆ.

ಪೌರಕಾರ್ಮಿಕರಿಗೆ ಮೀಸಲಾತಿ ಸೌಲಭ್ಯ

ಜಿಲ್ಲಾ ಸಫಾಯಿ ಕರ್ಮಚಾರಿ ವಿಚಕ್ಷಣ ಸಮಿತಿ ಸದಸ್ಯ ಕೆ.ನಂಜಪ್ಪ ಹೇಳಿಕೆ

ತಿ.ನರಸೀಪುರ.ನ.17– ಯಾವುದೇ ಸುರಕ್ಷಿತ ವಿಧಾನಗಳನ್ನು ಅನುಸರಿಸದೇ ಬರಿಗೈಯಲ್ಲಿ ಯುಜಿಡಿಯನ್ನು ಸ್ವಚ್ಛಗೊಳಿಸುತ್ತಿದ್ದ ಪೌರಕಾರ್ಮಿಕರನ್ನು ಸರ್ಕಾರ ಗುರುತಿಸಿ, ಅವರಿಗೆ ಮೀಸಲಾತಿ ಸೌಲಭ್ಯ ಕಲ್ಪಿಸುತ್ತಿದೆ ಎಂದು ಮೈಸೂರು ಜಿಲ್ಲಾ ಸಫಾಯಿ ಕರ್ಮಚಾರಿ ವಿಚಕ್ಷಣ ಸಮಿತಿ ಸದಸ್ಯ ಬಸವನಗುಡಿ ಕೆ.ನಂಜಪ್ಪ ಹೇಳಿದರು.

ಪಟ್ಟಣದ ಪುರಸಭೆ ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಪೌರಕಾರ್ಮಿಕರಿಗೆ ಗುರುತಿನ ಕಾರ್ಡ್ ವಿತರಿಸಿ ಮಾತನಾಡಿದ ಅವರು, ಹಿಂದೆ ಜೀತಪದ್ಧತಿ ಹಾಗೂ ಆದಿವಾಸಿಗಳಿಗೆ ಸರ್ಕಾರ ಪುನರ್ವಸತಿ ಕಲ್ಪಿಸಿಕೊಟ್ಟಿರುವ ಹಾಗೇ ಅದೇ ಮಾದರಿಯಲ್ಲಿ ಬರಿಗೈಯಲ್ಲಿ ಯುಜಿಡಿ ಸ್ವಚ್ಛಗೊಳಿಸುತ್ತಿದ್ದ ಪೌರ



ಕಾರ್ಮಿಕರಿಗೆ ಐಡಿ ಕಾರ್ಡ್ ನೀಡಲಾಗುತ್ತಿದೆ. ಈ ಕಾರ್ಡ್‌ನಿಂದ ಸರ್ಕಾರದ ವಿಶೇಷ ಸೌಲಭ್ಯಗಳನ್ನು ಪಡೆದುಕೊಳ್ಳಬಹುದು ಎಂದು ಮಾಹಿತಿ ನೀಡಿದರು.

ಪುನರ್ವಸತಿ ಸೇರಿದಂತೆ ಶಿಕ್ಷಣ, ಆರೋಗ್ಯ, ಮನೆ ಮುಂತಾದ ಯಾವುದೇ ಸರ್ಕಾರದ ಯೋಜನೆಗಳಲ್ಲಿ ಇವರಿಗೆ ಮೊದಲ ಆದ್ಯತೆಯೊಂದಿಗೆ ಮೀಸಲಾತಿ ನೀಡಲಾಗುತ್ತದೆ. ಹಿಂದೆ ಬರಿಗೈಯಲ್ಲಿ ಮಲ ಹೊರುವ ಪದ್ಧತಿ ಜಾರಿಯಲ್ಲಿತ್ತು. ಈಗ ಅದನ್ನು ನಿಷೇಧಿಸಲಾಗಿದೆ, ಆದರೂ ಈ ಪದ್ಧತಿ ಸಂಪೂರ್ಣವಾಗಿ ನಿಷೇಧವಾಗಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಹಿಂದೆ ಮಲ ಹೊರುವ ಪದ್ಧತಿಯಲ್ಲಿ ಕಾಯಕ ಮಾಡುತ್ತಿದ್ದವರನ್ನು ಸರ್ಕಾರ ಗುರುತಿಸಿ ಅವರಿಗೆ ವಿಶೇಷ ಯೋಜನೆನ್ನು ಜಾರಿಗೆ ತಂದಿದೆ. ರಾಜ್ಯ ಸರ್ಕಾರ ಶೇ.70 ರಷ್ಟು ಸಬ್ಸಿಡಿ ರೂಪದಲ್ಲಿ ಸಾಲಸೌಲಭ್ಯ ನೀಡುತ್ತಿದೆ. ಅಲ್ಲದೇ ಹಿಂದೆ ಪೌರಕಾರ್ಮಿಕರು ಮೃತಪಟ್ಟಲ್ಲಿ ನೀಡುತ್ತಿದ್ದ 10 ಲಕ್ಷ ರೂ. ಪರಿಹಾರ ಹಣವನ್ನು 30 ಲಕ್ಷ ರೂ.ಗೆ ಹೆಚ್ಚಿಸಲಾಗಿದೆ. ಅರ್ಹಫಲಾನುಭವಿಗಳು ಸರ್ಕಾರದ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಳ್ಳಬೇಕೆಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಮುಖ್ಯಾಧಿಕಾರಿ ವಸಂತ ಕುಮಾರಿ, ಆರೋಗ್ಯಾಧಿಕಾರಿ ಮಧು, ಪರಿಸರ ಅಭಿಯಂತರಾದ ರೀತು, ವ್ಯವಸ್ಥಾಪಕ ಮಹೇಂದ್ರ, ಸಮುದಾಯ ಸಂಘಟಕ ಮಹದೇವು, ಪುಷ್ಪಲತಾ, ನಂಜುಂಡಸ್ವಾಮಿ, ಪೌರಕಾರ್ಮಿಕ ಮುರುಗ, ಸೋಮ ಮತ್ತಿತರರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ



ಪದ್ಮ ಚಿತ್ರಮಂದಿರ	**(ದೂ: 2521923)**
ಮಂಗಳ ವರುಂ(ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	**(ದೂ: 2422871)**
ಘೋಸ್ಟ್ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	**(ದೂ: 2497199)**
ಟೈಗರ್–3 (ಹಿಂದಿ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	**(ಮೊ:9900820093)**
ರಾಜ ಯೋಗ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಲಿಯೋ (ಕ)	2 ಪ್ರದರ್ಶನಗಳು
ರಾಜಕಮಲ್	
ಟೈಗರ್–3 (ಹಿಂದಿ)	4 ಪ್ರದರ್ಶನಗಳು
ಸಂಗಂ	
ಸಪ್ತ ಸಾಗರದಾಚೆ ಎಲ್ಲೋ–ಸೈಡ್ B(ಕ)	4 ಪ್ರದರ್ಶನಗಳು
ಲಿಡೋ	
ಗರಡಿ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಮಂಗಳ ವರುಂ (ಕ)	4 ಪ್ರದರ್ಶನಗಳು
ಪ್ರಭಾ	
ನೇತ್ರಂ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	**ಟೈಗರ್ 3(ಹಿಂ):** ಬೆ.10.20ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ, **ಟಗರುಪಲ್ಯ (ಕ):** ಮ.1.20ಕ್ಕೆ.
ಸ್ಕ್ರೀನ್ 2	**ದಿ ವೆಕೆಂಟ್ ಹೌಸ್ (ಕ):** ಬೆ.11ಕ್ಕೆ, **ರಾಜಯೋಗ (ಕ):** ಮ.1.15ಕ್ಕೆ, **ನೇತ್ರಂ (ಕ):** ಸಂ.4.30ಕ್ಕೆ, **ಗರಡಿ (ಕ):** ರಾ.7.10ಕ್ಕೆ, **ಸ್ಪಾರ್ಕ್ ಲೈಫ್ (ತೆ):** ರಾ.10ಕ್ಕೆ.
ಸ್ಕ್ರೀನ್ 3	**ಟ್ರೋಲ್ಸ್ ಬ್ಯಾಂಡ್ ಟುಗೆದರ್ (3ಡಿ)(ಇಂ):** ಬೆ.11ಕ್ಕೆ, ಮ.3.35ಕ್ಕೆ, ಸಂ.5.30ಕ್ಕೆ, **ಬೆಂಬಿಡದ ನಾವಿಕ (ಕ):** ಮ.1ಕ್ಕೆ, **ಶೇಶಮ್ ಮೈಕ್ ಇಲ್ ಫಾತಿಮಾ (ಮ):** ರಾ.7.30ಕ್ಕೆ, **ದಿ ಹಂಗರ್ ಗೇಮ್ಸ್ (ಇಂ):** ರಾ.10.10ಕ್ಕೆ.
ಸ್ಕ್ರೀನ್ 4	**ಸಪ್ತ ಸಾಗರದಾಚೆ ಎಲ್ಲೋ 2 (ಕ):** ಬೆ.10.05ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	**ಸಪ್ತ ಸಾಗರದಾಚೆ ಎಲ್ಲೋ 2 (ಕ):** ಬೆ.9.40ಕ್ಕೆ, ಮ.12.50ಕ್ಕೆ, ಸಂ.4ಕ್ಕೆ, ರಾ.7.10ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 2	**ಸಪ್ತ ಸಾಗರದಾಚೆ ಎಲ್ಲೋ 2 (ಕ):** ಬೆ.9ಕ್ಕೆ, ಮ.12.10ಕ್ಕೆ, ಸಂ.3.20ಕ್ಕೆ, ಸಂ.6.30ಕ್ಕೆ, ರಾ.9.40ಕ್ಕೆ.
ಸ್ಕ್ರೀನ್ 3	**ಟೈಗರ್ 3 (ಹಿಂ):** ಬೆ.9.10ಕ್ಕೆ, ಮ.12.30ಕ್ಕೆ, ಮ.3.50ಕ್ಕೆ, ರಾ.7.10ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 4	**ಮಂಗಳವಾರಂ (ತೆ):** ಬೆ.9.10ಕ್ಕೆ, ಮ.12.25ಕ್ಕೆ, ಸಂ.6.45ಕ್ಕೆ, **ಗರಡಿ (ಕ):** ಮ.3.40ಕ್ಕೆ, **ಟೈಗರ್ 3 (ಹಿಂ):** ರಾ.10ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	**ದಿ ವೆಕೆಂಟ್ ಹೌಸ್ (ಕ):** ಬೆ.11ಕ್ಕೆ, ಸಂ.4.10ಕ್ಕೆ, **ರಾಜಯೋಗ (ಕ):** ಮ.1.05ಕ್ಕೆ, ಸಂ.6.15ಕ್ಕೆ, **ಟಗರುಪಲ್ಯ (ಕ):** ರಾ.9.15ಕ್ಕೆ.
ಸ್ಕ್ರೀನ್ 2	**ಸಪ್ತ ಸಾಗರದಾಚೆ ಎಲ್ಲೋ 2 (ಕ):** ಬೆ.10ಕ್ಕೆ, ಮ.1.15ಕ್ಕೆ, ರಾ.7.30ಕ್ಕೆ, **ಟೈಗರ್ 3 (ಹಿಂ):** ಸಂ.4.20ಕ್ಕೆ.
ಸ್ಕ್ರೀನ್ 3	**ಟೈಗರ್ 3(ಹಿಂ):** ಬೆ.11ಕ್ಕೆ, **ಸಪ್ತ ಸಾಗರದಾಚೆ ಎಲ್ಲೋ 2 (ಕ):** ಮ.3.45ಕ್ಕೆ, ಸಂ.6.35ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	**ಟಗರುಪಲ್ಯ (ಕ):** ಬೆ.10.30ಕ್ಕೆ, ಸಂ.4.10ಕ್ಕೆ, ಸಂ.6.50ಕ್ಕೆ, **ಟೈಗರ್ 3 (ಹಿಂ):** ಮ.1.05ಕ್ಕೆ, ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್

ಮೊ.ನಂ: 8951357139

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಘೋಸ್ಟ್ (ಕ): ಬೆ.9ಕ್ಕೆ, ಬೆ.10.20ಕ್ಕೆ, ಮ.1.15ಕ್ಕೆ, ಮ.3.20ಕ್ಕೆ, ರಾ.7.35ಕ್ಕೆ, ರಾ.9.45ಕ್ಕೆ, ರಾ.10.30ಕ್ಕೆ, **12th ಫೇಲ್ (ಹಿಂ):** ಮ.3.50ಕ್ಕೆ, **ಭಗವಂತ್ ಕೇಸರಿ (ತೆ):** ರಾ.7.05ಕ್ಕೆ, **ಗಣಪತ್: ಎ ಹೀರೋ (ಹಿಂ):** ಸಂ.4.10ಕ್ಕೆ, **ಕಿಲ್ಲರ್ಸ್ ಆಫ್ ಫ್ಲವರ್ ಮೂನ್ (ಇಂ):** ಬೆ.10ಕ್ಕೆ, ಮ.2.05ಕ್ಕೆ, ಸಂ.6.10ಕ್ಕೆ, ರಾ.10.15ಕ್ಕೆ, **ಲಿಯೋ (ಕ):** ಮ.12.45ಕ್ಕೆ, **ಲಿಯೋ (ತ):** ಬೆ.11.55ಕ್ಕೆ, ಸಂ.4.10ಕ್ಕೆ, ಸಂ.6.15ಕ್ಕೆ, ರಾ.9.40ಕ್ಕೆ, ರಾ.10.30ಕ್ಕೆ, **ಮುಜಿಬ್ ದಿ ಮೇಕಿಂಗ್ ಆಫ್ ಎ ನೇಷನ್ (ಹಿಂ):** ರಾ.10ಕ್ಕೆ, **ಟಗರುಪಲ್ಯ (ಕ):** ಮ.1ಕ್ಕೆ, ರಾ.7ಕ್ಕೆ, **ತೇಜಸ್ (ಹಿಂ):** ಬೆ.11.05ಕ್ಕೆ, ಮ.1.45ಕ್ಕೆ, ಸಂ.4.25ಕ್ಕೆ, ರಾ.7.05ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.



ಮೈಸೂರು ತಾಲೂಕು ಡಿಎಂಜಿ ಹಳ್ಳಿ ಗ್ರಾಮ ಪಂಚಾಯಿತಿ ಗ್ರಂಥಾಲಯದಲ್ಲಿ ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ ಆಚರಿಸಲಾಯಿತು. ಈ ಸಂದರ್ಭ ಶಾಲಾ ಮಕ್ಕಳನ್ನು ಗ್ರಂಥಾಲಯಕ್ಕೆ ನೋಂದಾಯಿಸಲಾಯಿತು. ಗ್ರಾಪಂ ಅಧ್ಯಕ್ಷೆ ಶ್ರೀಮತಿ ಸುಮಿತ್ರ, ಪಿಡಿಓ ರುಕ್ಮಾಂದಗ, ಗ್ರಾಮ ಪಂಚಾಯಿತಿ ಉಪಾಧ್ಯಕ್ಷರು, ಸದಸ್ಯರು, ಶಾಲಾ ಮುಖ್ಯ ಶಿಕ್ಷಕರು, ಸಾರ್ವಜನಿಕರು ಉಪಸ್ಥಿತರಿದ್ದರು.

ಹೆಚ್.ಡಿ.ನಾರಾಯಣ ನಿಧನ



ಹುಲ್ಲಹಳ್ಳಿ: ನಂಜನಗೂಡು ತಾಲೂಕಿನ ಹುಲ್ಲಹಳ್ಳಿ ಗ್ರಾಮದ ಈಡಿಗರ ಬೀದಿಯ ನಿವಾಸಿ ಹೆಚ್.ಡಿ. ನಾರಾಯಣ(65) ಶುಕ್ರವಾರ ಹೃದಯಾಘಾತದಿಂದ ನಿಧನರಾದರು.

ಮೃತರು ಪತ್ನಿ, ಮೂವರು ಪುತ್ರಿಯರನ್ನು ಅಗಲಿದ್ದಾರೆ. ಸ್ವಗ್ರಾಮದ ಮೃತರ ತೋಟದಲ್ಲಿ ಅಂತ್ಯಕ್ರಿಯೆ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಜವರೇಗೌಡ



ಹಿರೀಕ್ಯಾತನಹಳ್ಳಿ: ಹುಣಸೂರು ತಾಲೂಕಿನ ಶಿರೇನಹಳ್ಳಿ ಗ್ರಾಮದ ಬೀರೇಶ್ವರ ದೇವಸ್ಥಾನ ಸಮಿತಿಯ ಯಜಮಾನ ಜವರೇಗೌಡ (ಜವರಪ್ಪ (55) ಅನಾರೋಗ್ಯದಿಂದ ಗುರುವಾರ ಮಧ್ಯಾಹ್ನ ನಿಧನರಾದರು. ಮೃತರು ಪತ್ನಿ, ಮೂವರು ಪುತ್ರರು ಸೇರಿದಂತೆ ಅಪಾರ ಬಂಧು–ಬಳಗ ಅಗಲಿದ್ದಾರೆ. ಸ್ವಗ್ರಾಮದಲ್ಲಿ ಶುಕ್ರವಾರ ಮೃತರ ತೋಟದಲ್ಲಿ ಅಂತ್ಯಕ್ರಿಯೆ ನಡೆಯಿತು.

ಮಲ್ಲಾಜಮ್ಮ



ತಿ.ನರಸೀಪುರನ: ತಾಲೂಕಿನ ಮೂಗೂರಸೀಹಳ್ಳಿ ಗ್ರಾಮದ ಮುಖಂಡ ಲೇಟ್ ಬೀರೇಗೌಡರ ಪತ್ನಿ ಮಲ್ಲಾಜಮ್ಮ (78) ಶುಕ್ರವಾರ ಮಧ್ಯಾಹ್ನ ನಿಧನರಾದರು. ಮೃತರು ಪತ್ರಕರ್ತ ಎಸ್.ಬಿ.ಪ್ರಕಾಶ್ ಸೇರಿದಂತೆ ನಾಲ್ವರು ಪುತ್ರರು, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು–ಬಳಗ ಅಗಲಿದ್ದಾರೆ. ಶನಿವಾರ ಮಧ್ಯಾಹ್ನ ಗ್ರಾಮದ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಶಾಸಕ ಜಿ.ಟಿ.ದೇವೇಗೌಡರಿಗೆ ಡಿಸಿಎಂ ಡಿಕೆಶಿ ಆಫರ್!

● ಗೌಡರ ಭೇಟಿ ಮಾಡಿದ ಡಿಸಿಎಂ ಡಿ.ಕೆ.ಶಿವಕುಮಾರ್ ● ಒಳ್ಳೆಯ ಅವಕಾಶ ಬಳಸಿಕೊಳ್ಳುವಂತೆ ಮನವರಿಕೆ ● ಈ ಮೊದಲು ಆಹ್ವಾನವಿತ್ತು; ನಾನು ಜೆಡಿಎಸ್ ಬಿಡಲ್ಲ: ಜಿಟಿಡಿ

ಮೈಸೂರು, ನ.17(ಬಿಎಲ್‌ಯು)– ಜೆಡಿಎಸ್ ಹಾಗೂ ಬಿಜೆಪಿಯ ಹಾಲಿ, ಮಾಜಿ ಶಾಸಕರು, ಪ್ರಭಾವಿ ಮುಖಂಡರ ಆಪರೇಷನ್ ಹಸ್ತದ ಮೂಲಕ ಸೆಳೆಯಲು ಮುಂದಾಗಿರುವ ಕಾಂಗ್ರೆಸ್, ಮೈಸೂರಿನ ಚಾಮುಂಡೇಶ್ವರಿ ಕ್ಷೇತ್ರದ ಜೆಡಿಎಸ್ ಶಾಸಕ ಜಿ.ಟಿ.ದೇವೇಗೌಡರಿಗೂ ಗಾಳ ಹಾಕಿದೆ.



ಕಾಂಗ್ರೆಸ್ ಪಕ್ಷಕ್ಕೆ ನಿಚ್ಚಳ ಬಹುಮತ ಇದ್ದರೂ ಬಿಜೆಪಿ, ಆಪರೇಷನ್ ಕಮಲದ ಮೂಲಕ ಸರ್ಕಾರ ಪತನಗೊಳಿಸ ಬಹುದು ಎಂಬ ಆತಂಕದಿಂದ ಕೈ ನಾಯಕರೇ ಈಗ ಆಪರೇಷನ್ ಹಸ್ತದ ಪ್ರತಿತಂತ್ರ ರೂಪಿಸಿದ್ದಾರೆ. ಈಗಾಗಲೇ ಯಶವಂತಪುರದ ಶಾಸಕ ಎಸ್.ಟಿ. ಸೋಮಶೇಖರ್ ಅವರನ್ನು ಕಾಂಗ್ರೆಸ್‌ಗೆ ಸೆಳೆಯಲು ಹೈಕಮಾಂಡ್‌ನಿಂದ ಗ್ರೀನ್ ಸಿಗ್ನಲ್ ಪಡೆದಿರುವ ಕಾಂಗ್ರೆಸ್ ನಾಯಕರು ಮತ್ತಷ್ಟು ಶಾಸಕರನ್ನು ಕೈ ಪಾಳಯಕ್ಕೆ ಸೇರಿಸಿಕೊಳ್ಳಲು ರಾಜಕೀಯ ತಂತ್ರಗಾರಿಕೆ ರೂಪಿಸಿದ್ದಾರೆ.

ಅದೂ ಎಸ್.ಟಿ.ಸೋಮಶೇಖರ್ ಅವರನ್ನು ಮುಂದಿಟ್ಟುಕೊಂಡೇ ಬಿಜೆಪಿ ಹಾಗೂ ಜೆಡಿಎಸ್ ಶಾಸಕರನ್ನು ಸೆಳೆಯಲು ಮುಂದಾಗಿದ್ದಾರೆ. ವಿಪಕ್ಷ ಶಾಸಕರ ಮನವೊಲಿಸಿ, ಭಾರೀ ಸಂಖ್ಯೆಯಲ್ಲಿ ಸಂಘಟಿಸಿ, ಒಂದೇ ವೇದಿಕೆಯಲ್ಲಿ ಎಲ್ಲರನ್ನು ಕಾಂಗ್ರೆಸ್ ತೆಕ್ಕೆಗೆ ಸೇರಿಸಿಕೊಳ್ಳಲು ಕೈ ಪಡೆ ತಂತ್ರಗಾರಿಕೆ ರೂಪಿಸಿದೆ. ಆಪರೇಷನ್ ಹಸ್ತದ ಉಸ್ತುವಾರಿ ವಹಿಸಿಕೊಂಡಿರುವ ಕೆಪಿಸಿಸಿ ಅಧ್ಯಕ್ಷರೂ ಆದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಶಾಸಕ ಜಿ.ಟಿ.ದೇವೇಗೌಡರನ್ನು ಕಾಂಗ್ರೆಸ್‌ಗೆ ಆಹ್ವಾನಿಸಿದ್ದು, ಕಳೆದ ರಾತ್ರಿ ಬೆಂಗಳೂರಿನ ಸದಾಶಿವ ನಗರದ ಜಿ.ಟಿ.ದೇವೇಗೌಡರ ನಿವಾಸಕ್ಕೆ ಭೇಟಿ ನೀಡಿ ಮಾತುಕತೆ ನಡೆಸಿದ್ದಾರೆ. ನೆಲಮಂಗಲ ಶಾಸಕ ಎನ್.ಶ್ರೀನಿವಾಸ್, ಪುಲಕೇಶಿನಗರದ ಶಾಸಕ ಎ.ಸಿ.ಶ್ರೀನಿವಾಸ್ ಹಾಗೂ ಯಶವಂತಪುರ ಶಾಸಕ ಎಸ್.ಟಿ.ಸೋಮಶೇಖರ್ ಜೊತೆ ಜಿ.ಟಿ.ದೇವೇಗೌಡರನ್ನು ಭೇಟಿ ಮಾಡಿರುವ ಡಿ.ಕೆ.ಶಿವಕುಮಾರ್, ಕಾಂಗ್ರೆಸ್‌ಗೆ ಆಹ್ವಾನಿಸಿದ್ದಾರೆ.

ಆದರೆ, ನಿನ್ನೆ ಈ ವಿಚಾರವನ್ನು ಡಿ.ಕೆ.ಶಿವಕುಮಾರ್ ಅಲ್ಲಗಳೆದಿದ್ದರು. ನಾನು ಜಿ.ಟಿ.ದೇವೇಗೌಡರನ್ನು ಭೇಟಿಯೇ ಮಾಡಿಲ್ಲ ಎಂದು ಸ್ಪಷ್ಟಪಡಿಸಿದ್ದರು. ಆದರೆ ಡಿ.ಕೆ.ಶಿವಕುಮಾರ್ ತಮ್ಮನ್ನು ಭೇಟಿ ಮಾಡಿದ್ದು ನಿಜ, ಕಾಂಗ್ರೆಸ್ ಸೇರುವಂತೆ ಆಹ್ವಾನ ನೀಡಿದ್ದು ನಿಜ ಎಂದು ಜಿ.ಟಿ.ದೇವೇಗೌಡರು ಖಚಿತಪಡಿಸಿದ್ದಾರೆ.


ನಯವಾಗಿ ನಿರಾಕರಿಸಿದ ಜಿಟಿಡಿ

ಗೌರವ ಕಾಪಾಡಿಕೊಳ್ಳುವಂತೆ ಸಲಹೆ

ಈ ಕುರಿತು 'ಮೈಸೂರು ಮಿತ್ರ' ಜೊತೆ ಮಾತನಾಡಿದ ಜಿ.ಟಿ.ದೇವೇಗೌಡರು, ಸದಾಶಿವನಗರದ ನಮ್ಮ ಮನೆಗೆ ಡಿ.ಕೆ.ಶಿವಕುಮಾರ್ ಬಂದಿದ್ದರು. ಅವರೊಡನೆ ಶಾಸಕರಾದ ಎನ್.ಶ್ರೀನಿವಾಸ್, ಎಸ್.ಟಿ.ಸೋಮಶೇಖರ್, ಎ.ಸಿ.ಶ್ರೀನಿವಾಸ್ ಕೂಡ ಇದ್ದರು. ವಿಧಾನಸಭಾ ಚುನಾವಣೆಗೆ ಮುನ್ನವೆ ಕಾಂಗ್ರೆಸ್ ಸೇರುವಂತೆ ಆಹ್ವಾನ ನೀಡಿದ್ದೆವು. ಕಾಂಗ್ರೆಸ್ ಹೈಕಮಾಂಡ್ ಹಾಗೂ ಸಿದ್ದರಾಮಯ್ಯ ಕೂಡ ನಿಮ್ಮನ್ನು ಪಕ್ಷಕ್ಕೆ ಸೇರಿಸಿಕೊಳ್ಳಲು ಸಮ್ಮತಿಸಿದ್ದರು. ಆದರೆ ಮನೆ ಬಾಗಿಲಿಗೆ ಬಂದ ಅದೃಷ್ಟವನ್ನು ನೀವೇ ನಿರಾಕರಿಸಿದ್ರಿ, ಅಂದು ಕಾಂಗ್ರೆಸ್ ಸೇರಿದ್ದರೆ ಇಂದು ಮಂತ್ರಿಯಾಗಿ, ಜಿಲ್ಲಾ ಉಸ್ತುವಾರಿ ಸಚಿವನಾಗಿರಬಹುದಿತ್ತು ಎಂದು ಹಿಂದೆ ನಡೆದ ರಾಜಕೀಯ ಬೆಳವಣಿಗೆಯನ್ನು ಡಿ.ಕೆ.ಶಿವಕುಮಾರ್ ನನಗೆ ನೆನಪು ಮಾಡಿದರು. ಕಾಂಗ್ರೆಸ್ ಸೇರಲು ಈಗಲೂ ಆಹ್ವಾನ ನೀಡುತ್ತಿದ್ದೇವೆ. ಈಗಲೂ ಅವಕಾಶವಿದೆ. ವಯಸ್ಸಾಗಿರುವ ಕಾರಣ ಈ ಅವಕಾಶವನ್ನು ಬಳಸಿಕೊಳ್ಳಿ ಎಂದು ಮನವರಿಕೆ ಮಾಡಿ, ತಮ್ಮೊಂದಿಗೆ ಬರುವಂತೆ ಆಹ್ವಾನ ನೀಡಿದರು. ಆದರೆ ನಾನು ಜೆಡಿಎಸ್ ಬಿಟ್ಟು ಬರುವುದಿಲ್ಲ. ನಾವು 19 ಶಾಸಕರು ಒಗ್ಗಟ್ಟಾಗಿದ್ದೇವೆ. ಕೋರ್ ಕಮಿಟಿ ಅಧ್ಯಕ್ಷನಾಗಿರುವ ನಾನು ಪಕ್ಷ ಸಂಘಟನೆ ಮಾಡುತ್ತೇನೆ. ಜೆಡಿಎಸ್ ಸಂಘಟನೆಯನ್ನು ಮತ್ತಷ್ಟು ಬಲಪಡಿಸುತ್ತೇನೆ ಎಂದು ಡಿ.ಕೆ.ಶಿವಕುಮಾರ್ ಅವರಿಗೆ ತಿಳಿಸಿದೆ. ಈ ಮೂಲಕ ಕಾಂಗ್ರೆಸ್ ಸೇರುವ ಅವರ ಆಹ್ವಾನವನ್ನು ನಿರಾಕರಿಸಿದೆ ಎಂದು ಜಿ.ಟಿ.ದೇವೇಗೌಡರು ಸ್ಪಷ್ಟಪಡಿಸಿದರು. ನೀವು ಹಾಗೂ ಹೆಚ್.ಡಿ.ಕುಮಾರಸ್ವಾಮಿ ಅವರು ವೈಯಕ್ತಿಕ ವಿಚಾರಗಳ ಬಗ್ಗೆ ಟೀಕೆ ಮಾಡಿಕೊಳ್ಳಬೇಡಿ. ಒಬ್ಬರಿಗೊಬ್ಬರು ಅಗೌರವವಾಗಿ ಮಾತನಾಡಬೇಡಿ ಎಂದು ಡಿ.ಕೆ.ಶಿವಕುಮಾರ್ ಅವರಿಗೆ ಸಲಹೆ ನೀಡಿದೆ. ಅದಕ್ಕೆ ಅವರು ಸಕರಾತ್ಮಕವಾಗಿ ಸ್ಪಂದಿಸಿದರು ಎಂದು ಜಿ.ಟಿ.ದೇವೇಗೌಡರು ಹೇಳಿದರು. ಎಸ್.ಟಿ.ಸೋಮಶೇಖರ್ ಹಾಗೂ ಯಲ್ಲಾಪುರ ಶಾಸಕ ಶಿವರಾಮ್ ಹೆಬ್ಬಾರ್ ಈಗಾಗಲೇ ಬಿಜೆಪಿ ಮನೆಯಿಂದ ಒಂದು ಹೆಜ್ಜೆ ಹೊರಗೆ ಇಟ್ಟಂತೆ ಮಾತನಾಡುತ್ತಿದ್ದಾರೆ. ಈ ಮೂಲಕ ಗುಪ್ತಗಾಮಿನಿಯಾಗಿರುವ ಆಪರೇಷನ್ ಹಸ್ತದ ಕೋಟೆಯನ್ನು ಯಾರ್‍ಯಾರು ಹೊಕ್ಕುತ್ತಾರೆ ಎಂಬುವುದನ್ನು ಕಾದು ನೋಡಬೇಕಿದೆ.

ಜೆಡಿಎಸ್ ಪಕ್ಷದಿಂದ ಸಿ.ಎಂ.ಇಬ್ರಾಹಿಂ ಅಮಾನತು

ಬೆಂಗಳೂರು: ಪಕ್ಷ ವಿರೋಧಿ ಚಟುವಟಿಕೆಗಳ ಹಿನ್ನೆಲೆಯಲ್ಲಿ ಸಿ.ಎಂ.ಇಬ್ರಾಹಿಂ ಅವರನ್ನು ಕೂಡಲೇ ಜಾರಿಗೆ ಬರುವಂತೆ ಜಾತ್ಯತೀತ ಜನತಾದಳ ಪಕ್ಷದಿಂದ ಅಮಾನತು ಮಾಡಿ, ಪಕ್ಷದ ರಾಷ್ಟ್ರೀಯ ಅಧ್ಯಕ್ಷರಾದ ಎಚ್.ಡಿ.ದೇವೇಗೌಡ ಆದೇಶ ಹೊರಡಿಸಿದ್ದಾರೆ.



ಸಿ.ಎಂ. ಇಬ್ರಾಹಿಂರವರು ಸಾರ್ವಜನಿಕವಾಗಿ ಪಕ್ಷದ ರಾಷ್ಟ್ರಾಧ್ಯಕ್ಷರ, ರಾಜ್ಯ ಶಾಸಕಾಂಗ ಪಕ್ಷದ ನಾಯಕರ ವಿರುದ್ಧ ಹಾಗೂ ರಾಜ್ಯದಲ್ಲಿ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿಯೊಂದಿಗೆ ಹೊಂದಾಣಿಕೆ ಬಗ್ಗೆ, ಪಕ್ಷದ ರಾಜ್ಯ ಪರಿಷತ್, ಶಾಸಕಾಂಗ ಪಕ್ಷದ ಸಭೆ, ಕೋರ್ ಸಮಿತಿ ಮುಂತಾದ ಸಭೆಗಳಲ್ಲಿ ಒಮ್ಮತದ ನಿರ್ಣಯವಾಗಿದ್ದರೂ ಸಹ ಬಹಿರಂಗವಾಗಿ ಪಕ್ಷ ವಿರೋಧಿ ಹೇಳಿಕೆ ನೀಡಿ, ಪಕ್ಷದ ಹಿತಕ್ಕೆ ಧಕ್ಕೆ ತಂದಿರುತ್ತಾರೆ. ಇಂತಹ ನಡವಳಿಕೆ ಮತ್ತು ಹೇಳಿಕೆಗಳು ಪಕ್ಷದ ವಿರೋಧಿ ಚಟುವಟಿಕೆಗಳಾಗಿರುತ್ತವೆ ಎಂದು ಆದೇಶದಲ್ಲಿ ಹೇಳಲಾಗಿದೆ.

ಕರ್ನಾಟಕ ಪಬ್ಲಿಕ್ ಎಗ್ಸಾಮಿನೇಷನ್ ವಿಧೇಯಕ–2023 ಮುಂದಿನ ಅಧಿವೇಶನದಲ್ಲಿ ಮಂಡನೆ



ಬೆಂಗಳೂರು: ಕರ್ನಾಟಕ ಪಬ್ಲಿಕ್ ಎಗ್ಸಾಮಿನೇಷನ್ (ಭ್ರಷ್ಟಾಚಾರ ಮತ್ತು ಅಕ್ರಮ ವಿಧಾನಗಳ ತಡೆಗಟ್ಟುವಿಕೆ ಕ್ರಮಗಳು) ವಿಧೇಯಕ–2023ಕ್ಕೆ ನಿನ್ನೆ ನಡೆದ ಸಚಿವ ಸಂಪುಟ ಸಭೆಯಲ್ಲಿ ಅನುಮೋದನೆ ನೀಡಲಾಗಿದ್ದು, ಈ ವಿಧೇಯಕ ವನ್ನು ಮುಂದಿನ ವಿಧಾನ ಮಂಡಲ ಅಧಿವೇಶ ನದಲ್ಲಿ ಮಂಡಿಸಲು ನಿರ್ಧರಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಈ ಕುರಿತು ಟ್ವೀಟ್ ಮಾಡಿರುವ ಅವರು, ಈ ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಪಿಎಸ್‌ಐ, ಸಹಾಯಕ ಪ್ರಾಧ್ಯಾಪಕರ ಹುದ್ದೆ, ಎಫ್.ಡಿ.ಎ ಸೇರಿದಂತೆ ಸರ್ಕಾರದ ಹಲವು ನೇಮಕಾತಿಗಳಲ್ಲಿ ವ್ಯಾಪಕವಾಗಿ ಅಕ್ರಮಗಳು ನಡೆದಿದ್ದವು. ಇದರಿಂದ ವರ್ಷಾನುಗಟ್ಟಲೆಯಿಂದ ಪರೀಕ್ಷೆಗೆ ತಯಾರಿ ನಡೆಸಿ, ಪ್ರಾಮಾಣಿಕವಾಗಿ ಪರೀಕ್ಷೆ ಎದುರಿಸಿದ್ದ ಸಾವಿರಾರು ಅಭ್ಯರ್ಥಿಗಳು ಉದ್ಯೋಗದಿಂದ ವಂಚಿತರಾಗಿದ್ದರು. ಇಂತಹ ಅಕ್ರಮ, ಅವ್ಯವಹಾರವನ್ನು ತಡೆಗಟ್ಟಿ, ಅರ್ಹರಿಗೆ ಸರ್ಕಾರಿ ಉದ್ಯೋಗಗಳು ದೊರಕುವಂತೆ ಮಾಡಲು ಕಟ್ಟುನಿಟ್ಟಿನ ಪರೀಕ್ಷಾ ವಿಧಾನ, ಪಾರದರ್ಶಕ ನೇಮಕಾತಿ ಪ್ರಕ್ರಿಯೆಯು ಅಳವಡಿಕೆ ಮಾಡಲು ನೂತನ ಮಸೂದೆಯನ್ನು ಜಾರಿಗೆ ತರಲು ಉದ್ದೇಶಿಸಿದ್ದೇವೆ ಎಂದು ತಿಳಿಸಿದ್ದಾರೆ. ಇದರ ಮೊದಲ ಹಂತವಾಗಿ ವಿಧೇಯಕವನ್ನು ಸಚಿವ ಸಂಪುಟದ ಮುಂದಿಟ್ಟು ಅನುಮೋದನೆಯನ್ನು ಪಡೆದಿದ್ದೇವೆ. ಖಾಲಿ ಹುದ್ದೆಗಳನ್ನು ಭರ್ತಿ ಮಾಡುವುದಷ್ಟೇ ಅಲ್ಲ, ಅರ್ಹರಿಗೆ ಮಾತ್ರ ಉದ್ಯೋಗ ಸಿಗಬೇಕು ಎಂಬುದು ಸರ್ಕಾರದ ಆದ್ಯತೆಯಾಗಿದೆ ಎಂದಿದ್ದಾರೆ.

ಮಧ್ಯಾಹ್ನದ ಬಿಸಿಯೂಟದ ಜೊತೆಗೆ ಮಕ್ಕಳಿಗೆ ರಾಗಿ ಮಾಲ್ಟ

ಬೆಂಗಳೂರು: ಮಕ್ಕಳಲ್ಲಿನ ಅಪೌಷ್ಠಿಕತೆ ನಿವಾರಿಸಲು ಮುಂದಿನ ತಿಂಗಳಿನಿಂದ ವಿದ್ಯಾರ್ಥಿಗಳಿಗೆ ಮಧ್ಯಾಹ್ನದ ಊಟದ ಜೊತೆಗೆ ರಾಗಿ ಮಾಲ್ಟ್ ನೀಡಲು ರಾಜ್ಯ ಸರ್ಕಾರ ನಿರ್ಧರಿಸಿದೆ ಎಂದು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ ಹೇಳಿದ್ದಾರೆ.



ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರು (ಡಿಡಿಪಿಐ), ಬ್ಲಾಕ್ ಶಿಕ್ಷಣಾಧಿಕಾರಿಗಳು (ಬಿಇಒಗಳು), ನೋಡಲ್ ಅಧಿಕಾರಿಗಳು ಮತ್ತು ಶಿಕ್ಷಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲ ಜಿಲ್ಲೆಗಳ ಅಧಿಕಾರಿಗಳೊಂದಿಗೆ ಮೊದಲ ಪರಿಶೀಲನಾ ಸಭೆ ನಡೆಸಿದ ನಂತರ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು. ಶಾಲೆಗಳು ಎರಡು ಮೊಟ್ಟೆಗಳನ್ನು ವಿತರಿಸಲು ಪ್ರಾರಂಭಿಸಿವೆ, ಇದು ವಿದ್ಯಾರ್ಥಿಗಳ ಆರೋಗ್ಯಕ್ಕೆ ಪ್ರಯೋಜನಕಾರಿ ಎಂದು ಸಾಬೀತಾಗಿದೆ ಎಂದರು. ಮುಂದಿನ ಮೂರು ವರ್ಷಗಳಲ್ಲಿ 3,000 ಕರ್ನಾಟಕ ಸಾರ್ವಜನಿಕ ಶಾಲೆಗಳನ್ನು (ಕೆಪಿಎಸ್) ಹಂತ ಹಂತವಾಗಿ ಅಭಿವೃದ್ಧಿಪಡಿಸಲಾಗುವುದು. ಇದಕ್ಕಾಗಿ ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ ನಿಧಿ ಬಳಸಲಾಗುವುದು ಮತ್ತು ಇಲಾಖೆಯು ಅಜೀಂ ಪ್ರೇಮ್‌ಜಿ ಫೌಂಡೇಶನ್‌ನೊಂದಿಗೆ ಮಾತುಕತೆ ನಡೆಸುತ್ತಿದೆ. ಈ ಶಾಲೆಗಳ ಮೂಲಸೌಕರ್ಯಕ್ಕಾಗಿ 600 ಕೋಟಿ ರೂಪಾಯಿ ವೆಚ್ಚ ಮಾಡಲಾಗುತ್ತಿದೆ ಎಂದು ಮಾಹಿತಿ ನೀಡಿದರು.



ಇದಲ್ಲದೆ, ಒಂದು ಅಥವಾ ಎರಡು ಜಿಲ್ಲೆಗಳಿಗೆ ನಾನು ಖುದ್ದಾಗಿ ಭೇಟಿ ನೀಡಿ ಪರಿಶೀಲಿಸಿದ್ದೇನೆ. ಶಿಕ್ಷಣವು ರಾಜ್ಯದ ಅತಿದೊಡ್ಡ ಇಲಾಖೆಗಳಲ್ಲಿ ಒಂದಾಗಿದೆ ಮತ್ತು ಸಂಪನ್ಮೂಲಗಳ ಮೂರನೇ ಒಂದು ಭಾಗವನ್ನು ಬಳಸುತ್ತದೆ. ವರ್ಷಾಂತ್ಯದ ವೇಳೆಗೆ ಎಲ್ಲ ಜಿಲ್ಲೆಗಳ ಪರಿಶೀಲನೆ ಪೂರ್ಣಗೊಳಿಸುತ್ತೇನೆ. ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ (ಕೆಕೆಆರ್‌ಡಿಎಲ್) ಪ್ರತಿನಿಧಿಗಳು ಸಭೆಯ ಭಾಗವಾಗಿದ್ದಕ್ಕೆ ಸಂತೋಷವಾಗಿದೆ ಎಂದು ಸಚಿವರು ಹೇಳಿದರು. ಈ ಪ್ರದೇಶವನ್ನು ನಿರ್ಲಕ್ಷಿಸಲಾಗಿದೆ ಎಂದು ನಾವು ಒಪ್ಪಿಕೊಳ್ಳಬೇಕು ಆದರೆ ನಾವು ಅದನ್ನು ಮುಖ್ಯವಾಹಿನಿಗೆ ತರುತ್ತೇವೆ ಮತ್ತು ಇತರ ಪ್ರದೇಶಗಳನ್ನು ಹಿಂದಿಕ್ಕುತ್ತೇವೆ ಎಂದು ವಿಶ್ವಾಸ ವ್ಯಕ್ತ ಪಡಿಸಿದರು. ಎಸ್‌ಇಪಿಯ ಪ್ರಗತಿಯ ಕುರಿತು ಮಾತನಾಡಿದ ಅವರು, ನಾವು ಎಸ್‌ಇಪಿ ಮೂಲಕ ನಮ್ಮ ರಾಜ್ಯ ಪಠ್ಯಕ್ರಮವನ್ನು ಸುಧಾರಿಸಲು ಪ್ರಯತ್ನಿಸುತ್ತೇವೆ, ಅದನ್ನು ಇತರ ಮಂಡಳಿಗಳಿಗಿಂತ ಉತ್ತಮಗೊಳಿಸುತ್ತೇವೆ, ತಾಂತ್ರಿಕವಾಗಿ ನಾವು ವಿಜ್ಞಾನ ಮತ್ತು ಗಣಿತಕ್ಕೆ ಒಂದೇ ಪಠ್ಯಕ್ರಮವನ್ನು ಅನುಸರಿಸಬೇಕು, ಅದನ್ನು ಬದಲಾಯಿಸಲಾಗುವುದಿಲ್ಲ. ಕೆಲವು ವಿಷಯಗಳಲ್ಲಿ ಮಾತ್ರ ಪಠ್ಯಕ್ರಮವನ್ನು ಬದಲಾಯಿಸಲಾಗುವುದು, ನಾವು ಅದನ್ನು ಹೊಸದಾಗಿ ರಚಿಸಲಾದ ಆಯೋಗಕ್ಕೆ ಬಿಟ್ಟಿದ್ದೇವೆ ಮತ್ತು ವರದಿ ಸಲ್ಲಿಸಿದ ನಂತರ ಹೆಚ್ಚಿನ ಸ್ಪಷ್ಟತೆ ಇರುತ್ತದೆ ಎಂದು ಮಧು ಬಂಗಾರಪ್ಪ ತಿಳಿಸಿದರು.

ಮನ್ರೇಗಾ ಯೋಜನೆಯಡಿ 7,100 ಶೌಚಾಲಯಗಳನ್ನು ನಿರ್ಮಿಸುವುದು, ಶಾಲೆಗಳಲ್ಲಿ 7,311 ಹೆಚ್ಚುವರಿ ಕೊಠಡಿಗಳ ನಿರ್ಮಾಣ ಹಾಗೂ 13,000 ಶಿಕ್ಷಕರ ನೇಮಕಾತಿ ರಾಜ್ಯದ ಶಿಕ್ಷಣದ ಗುಣಮಟ್ಟವನ್ನು ಸುಧಾರಿಸಲು ಸಕಾರಾತ್ಮಕ ಹೆಜ್ಜೆಯಾಗಿದೆ ಎಂದು ಬಂಗಾರಪ್ಪ ಅಭಿಪ್ರಾಯ ಪಟ್ಟರು.

ಬಳ್ಳಾರಿ ಸಂಸದರ ಪುತ್ರನಿಂದ ವಂಚನೆ; ಪೊಲೀಸರಿಗೆ ಯುವತಿ ದೂರು

● ವಾರದ ನಂತರ ಉಪನ್ಯಾಸಕರೂ ಆದ ಸಂಸದರ ಪುತ್ರನಿಂದ ಮೈಸೂರಲ್ಲಿ ಪೊಲೀಸರಿಗೆ ಪ್ರತಿದೂರು

● ಹನಿಟ್ರ್ಯಾಪ್ ಮೂಲಕ ಬೆದರಿಕೆ; ಪರಿಶಿಷ್ಟ ಜಾತಿ, ಪಂಗಡದಡಿ ದೌರ್ಜನ್ಯ ಆರೋಪ

ಮೈಸೂರು, ನ.17–ಮದುವೆಯಾಗುವುದಾಗಿ ನಂಬಿಸಿ, ದೈಹಿಕ ಸಂಪರ್ಕ ಹೊಂದಿದ ನಂತರ ಮೋಸ ಮಾಡಿರುವುದಾಗಿ ಬಳ್ಳಾರಿ ಬಿಜೆಪಿ ಸಂಸದ ವೈ.ದೇವೇಂದ್ರಪ್ಪ ಅವರ ಪುತ್ರ, ಮೈಸೂರಿನ ಮಹಾರಾಜ ಜೂನಿಯರ್ ಕಾಲೇಜು ಉಪನ್ಯಾಸಕ ವೈ.ಡಿ.ರಂಗನಾಥ್ ವಿರುದ್ಧ ಬೆಂಗಳೂರಿನ ಯುವತಿ, ಬಸವನ ಗುಡಿ ಮಹಿಳಾ ಠಾಣೆಗೆ ದೂರು ಸಲ್ಲಿಸಿದ್ದಾರೆ.

ಯುವತಿ ತನ್ನ ವಿರುದ್ಧ ವಂಚನೆ ಪ್ರಕರಣ ದಾಖಲಿಸಿದ ವಾರದ ನಂತರ ರಂಗನಾಥ್ ಅವರು ಆಕೆಯ ವಿರುದ್ಧ ಮೈಸೂರಿನ ವಿಜಯನಗರ ಠಾಣೆಯಲ್ಲಿ ಹನಿಟ್ರ್ಯಾಪ್ ಪ್ರಕರಣ ದಾಖಲಿಸಿದ್ದಾರೆ.

ವಿವರ: ಬೆಂಗಳೂರಿನಲ್ಲಿ ರಿಯಲ್ ಎಸ್ಟೇಟ್ ಡೀಲರ್ ಆಗಿರುವ 24 ವರ್ಷ ವಯಸ್ಸಿನ ಯುವತಿ, ರಂಗನಾಥ್ ವಿರುದ್ಧ ದೂರು ಸಲ್ಲಿಸಿದ್ದು, 2022ರಲ್ಲಿ ಸ್ನೇಹಿತರೊಬ್ಬರ ಮೂಲಕ ಪರಿಚಯವಾದ ರಂಗನಾಥ್, ತನ್ನ ಜೊತೆ ಮೊಬೈಲ್ ಮೂಲಕ ಮಾತನಾಡುತ್ತಿದ್ದರು. ನಂತರದ ದಿನಗಳಲ್ಲಿ ನನ್ನನ್ನು ಪ್ರೀತಿಸುವುದಾಗಿ ಹೇಳುತ್ತಿದ್ದ ಅವರು, ತಾನು ಮೈಸೂರಿನ ಪಿಯು ಕಾಲೇಜಿನಲ್ಲಿ ಉಪನ್ಯಾಸಕನಾಗಿದ್ದು, ಕೈತುಂಬ ಸಂಬಳ ಬರುತ್ತಿದೆ. ನಿನ್ನನ್ನು ಮದುವೆ ಆಗಿ ಚೆನ್ನಾಗಿ ನೋಡಿಕೊಳ್ಳುತ್ತೇನೆ ಎಂದು ಹೇಳಿ ನಂಬಿಸಿರುವುದಾಗಿ ಆಕೆ ದೂರಿನಲ್ಲಿ ತಿಳಿಸಿದ್ದಾರೆ.

ಕಳೆದ ಜ.24ರಂದು ಬೆಂಗಳೂರಿನ ಕೊಡಿಗೆಹಳ್ಳಿಯ ಹೋಟೆಲ್‌ವೊಂದಕ್ಕೆ ತನ್ನನ್ನು ಕರೆಸಿಕೊಂಡು, ನಂತರ ಅಲ್ಲಿಂದ ಮೈಸೂರಿಗೆ ಕರೆದೊಯ್ದು ಸದ್ಯಕ್ಕೆ ಮನೆಗೆ ಕರೆದೊಯ್ಯಲು ಸಾಧ್ಯವಿಲ್ಲ. ಬೆಳಗ್ಗೆ ಮನೆಗೆ ಹೋಗೋಣ ಎಂದು ತಿಳಿಸಿ ಅಲ್ಲಿನ ಪ್ರತಿಷ್ಠಿತ ಹೋಟೆಲ್‌ನಲ್ಲಿ ಇರಿಸಿದ್ದಲ್ಲದೇ, ಅಂದು ರಾತ್ರಿ ಮದ್ಯ ಸೇವನೆ ಮಾಡಿ, ಮದುವೆಯಾಗುವುದಾಗಿ ನಂಬಿಸಿ ದೈಹಿಕ ಸಂಪರ್ಕ ಹೊಂದಿದ ನಂತರ ಮರು ದಿನ ನನ್ನನ್ನು ಬೆಂಗಳೂರಿಗೆ ಕಳುಹಿಸಿಕೊಟ್ಟಿದ್ದಾರೆ. ಇತ್ತೀಚೆಗೆ ನನ್ನೊಂದಿಗೆ ಮಾತನಾಡದೆ ನಿರ್ಲಕ್ಷ್ಯ ಮಾಡಿದ್ದು, ಮದುವೆ ಮಾಡಿಕೊಳ್ಳದೆ ಮೋಸ ಮಾಡಿದ್ದಾರೆ. ಮದುವೆಯಾಗುವಂತೆ ಕೇಳಿದರೆ ಕೊಲೆ ಬೆದರಿಕೆ ಹಾಕುತ್ತಿದ್ದಾರೆ ಎಂದು ಯುವತಿ ನ.6ರಂದು ನೀಡಿದ ದೂರನ್ನು ಬಸವನಗುಡಿ ಮಹಿಳಾ ಠಾಣೆ ಪೊಲೀಸರು ಭಾರತೀಯ ದಂಡ ಸಂಹಿತೆ 417, 420, 506ರಡಿ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ.

ಹನಿಟ್ರ್ಯಾಪ್: ತನ್ನ ಮೇಲೆ ಯುವತಿ ದೂರು ನೀಡಿದ ವಾರದ ನಂತರ ಅಂದರೆ ನ.13ರಂದು ರಂಗನಾಥ್ ಯುವತಿ ಮೇಲೆ ಹನಿಟ್ರ್ಯಾಪ್ ಹಾಗೂ ಪರಿಶಿಷ್ಟ ಜಾತಿ ಮತ್ತು ಪಂಗಡದ ದೌರ್ಜನ್ಯ ವಿರೋಧ ಕಾಯಿದೆಯಡಿ ಪ್ರಕರಣ ದಾಖಲಿಸಿದ್ದಾರೆ.

ಸ್ನೇಹಿತ ಕಲ್ಲೇಶ್ ಅವರಿಂದ ಯುವತಿ ಮತ್ತು ಶ್ರೀನಿವಾಸ್ ಎಂಬಾತ ತನಗೆ ಪರಿಚಯವಾಗಿದ್ದು, ಆಕೆ ನನ್ನನ್ನು ಎರಡು–ಮೂರು ಬಾರಿ ಭೇಟಿಯಾಗಿ ಪ್ರೀತಿಸುವುದಾಗಿ ತಿಳಿಸಿದಳು. ಅದನ್ನು ನಾನು ನಿರಾಕರಿಸಿದ್ದರಿಂದ ಕಳೆದ ಅಕ್ಟೋಬರ್ ಮೊದಲನೇ ವಾರದಲ್ಲಿ ಬೆಂಗಳೂರಿನ ಸ್ಯಾಟಲೈಟ್ ಬಸ್ ನಿಲ್ದಾಣದ ಬಳಿ ಮಧ್ಯಾಹ್ನ ಸುಮಾರು 2.30 ರಿಂದ 4 ಗಂಟೆ ವರೆಗೆ ನನ್ನನ್ನು ಭೇಟಿಯಾಗಿ, ಆಕೆಯನ್ನು ಮದುವೆ ಮಾಡಿಕೊಳ್ಳಲು ನಿರಾಕರಿಸಿದ ಕಾರಣಕ್ಕಾಗಿ ಅವಾಚ್ಯ ಶಬ್ದಗಳಿಂದ ಜಾತಿ ಹೆಸರಿಡಿದು ನಿಂದಿಸಿದ್ದಾಳೆ. ಆನಂತರ ಆಕೆ ನನ್ನ ಜೊತೆ ಇರುವ ಫೋಟೋ ಹಾಗೂ ಆಕೆಯೊಂದಿಗೆ ಮಾತನಾಡಿರುವ ಸಂಭಾಷಣೆಯನ್ನು ಪತ್ನಿಗೆ ಕಳುಹಿಸುವುದಾಗಿ ಬೆದರಿಕೆ ಹಾಕಿದ ಹಿನ್ನೆಲೆಯಲ್ಲಿ ಹೆದರಿದ ನಾನು, ಯುವತಿಯ ಖಾತೆಗೆ 32,500 ರೂ. ವರ್ಗಾವಣೆ ಮಾಡಿದ್ದೇನೆ. ಮತ್ತೆ ಹಣಕ್ಕೆ ಪೀಡಿಸಿದಾಗ ಹಣ ನೀಡಲು ಸಾಧ್ಯವಿಲ್ಲವೆಂದು ತಿಳಿಸಿದ ಹಿನ್ನೆಲೆಯಲ್ಲಿ ಆಕೆ ಶ್ರೀನಿವಾಸ ಎಂಬ ವ್ಯಕ್ತಿಯನ್ನು ಅಕ್ಟೋಬರ್ 28ರಂದು ಮೈಸೂರಿಗೆ ಕಳುಹಿಸಿದ್ದು, ಆತ ಐಶ್ವರ್ಯ ಪೆಟ್ರೋಲ್ ಬಂಕ್ ಎದುರಿನ ಗ್ರೀನ್ ಫುಡ್‌ಕೋರ್ಟ್ ಹೋಟೆಲ್‌ನಲ್ಲಿ ನನ್ನನ್ನು ಭೇಟಿಯಾಗಿ 15 ಲಕ್ಷ ರೂ. ನೀಡಬೇಕೆಂದೂ, ಇಲ್ಲದಿದ್ದರೆ ಯುವತಿಯಿಂದ ಕಿರುಕುಳ ತಪ್ಪಿದ್ದಲ್ಲ ಎಂದು ಬೆದರಿಸಿ ಹೋಗಿದ್ದ.

ಆನಂತರ ನನ್ನ ಸ್ನೇಹಿತ ಕಲ್ಲೇಶ್ ಮೂಲಕ ಕನಿಷ್ಠ 10 ಲಕ್ಷ ರೂ. ನೀಡಿದರೆ ಯುವತಿ ಕಿರುಕುಳ ನೀಡುವುದಿಲ್ಲ ಎಂದು ಹೇಳಿ ಕಳುಹಿಸಿದ್ದಾನೆ.

ಕಲ್ಲೇಶ್ ಅವರು ಯುವತಿಗೆ ಕರೆ ಮಾಡಿ ಮಾತನಾಡಿದಾಗ ಆಕೆ ನನ್ನಿಂದ ಹಣ ದೊರೆಯದಿದ್ದರೆ ಕಿರುಕುಳ ನೀಡುವುದಾಗಿ ಬೆದರಿಕೆ ಹಾಕಿದ್ದಾಳೆ ಎಂದು ರಂಗನಾಥ್ ನೀಡಿದ ದೂರನ್ನು ವಿಜಯನಗರ ಠಾಣೆ ಪೊಲೀಸರು ಪರಿಶಿಷ್ಟ ಜಾತಿ ಮತ್ತು ಪಂಗಡದ ದೌರ್ಜನ್ಯ ವಿರೋಧಿ ಕಾಯ್ದೆಗಳ ಜೊತೆಗೆ ಭಾರತೀಯ ದಂಡ ಸಂಹಿತೆ 506, 504, 384, 34ರಡಿ ದಾಖಲಿಸಿಕೊಂಡು ತನಿಖೆ ಮುಂದುವರೆಸಿದ್ದಾರೆ.

PUBLIC NOTICE

Notice is hereby given that M/S RAJSHIL PAPERS PRIVATE LIMITED, is desirous to sell the under mentioned property to my client and any person or persons claiming any interest on the under mentioned property or any part thereof, is hereby required to communicate the same to me with documentary evidence at my office, situated at DOOR No.2765/1A D13/A1, "KEYANS", 5TH MAIN ROAD, V.V. PURAM (V.V. MOHALLA), MYSORE - 570 002, within 7 (Seven) days from the date of this publication, as otherwise the said sale will be completed without any reference or regard to any such purported claim or interest, which shall be deemed to have been waived for all intents and purposes.

SCHEDULE PROPERTY:Eastern Portion of Industrial Plot bearing No.19 and 20 in Nanjangud Industrial Area, situated in Survey No. 169 of Kallahally Village, Kasaba Hobli, Nanjangud Taluk, Mysore District, admeasuring 7560.00 Square Meters (81375.84 Square Feet) out of 7958.474 Square Meters (85665.01 Square Feet) which is the part of 16080 Square Meters (173085.12 Square Feet) with building measuring 188.49 Square Meters (2028.90 Square Feet) constructed with AC Sheet Roof and Red Oxide Flooring. (Formerly within the jurisdiction of Debur Gram Panchayath and presently, within the jurisdiction of City Municipal Area of Nanjangud).

Sd/- Dhirendra Kumar R. Mehta, Advocate, KEY-ANS LAW SOLUTIONS

Date: 17.11.2023, Place: Mysore

ಮೈಸೂರು ಮಿತ್ರ 44

ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

-ಜಾಹೀರಾತು ವ್ಯವಸ್ಥಾಪಕರು

ಕರ್ನಾಟಕ ಸರ್ಕಾರ

ಜಿಲ್ಲಾ ಪಂಚಾಯತ್, ಮೈಸೂರು–570005

ದೂರವಾಣಿ ಸಂಖ್ಯೆ : 0821–2526347

ಪ.ಸಂ.: ಜಿಪಂಮೈ/ಸ್ವಭಾ.ಮಿ(ಗ್ರಾ)/ಇ–8305/2023–24 ದಿ: 30.10.2023

ಪ್ರಕಟಣೆ

ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಯಡಿ ಮೈಸೂರು ಜಿಲ್ಲಾ ಪಂಚಾಯತ್ ಕಾರ್ಯಾಲಯದಲ್ಲಿ ಖಾಲಿಯಿರುವ ಜಿಲ್ಲಾ MIS ಸಮಾಲೋಚಕರ ಹುದ್ದೆಯನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳುವ ಸಂಬಂಧ ಈ ಕೆಳಕಂಡಂತೆ ತಿಳಿಸಿರುವ ವಿದ್ಯಾರ್ಹತೆ ಹಾಗೂ ಅನುಭವ ಹೊಂದಿರುವ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಕ್ರಸಂ.1 ಹುದ್ದೆಯ ವಿವರ: SBM District MIS Consultant **ವಿದ್ಯಾರ್ಹತೆ ಮತ್ತು ಅನುಭವ:** ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಬಿ.ಇ. ಕಂಪ್ಯೂಟರ್ ಸೈನ್ಸ್, ಎಂ.ಎಸ್ಸಿ ಸಂಖ್ಯಾಶಾಸ್ತ್ರ/ ಎಂ.ಎಸ್ಸಿ ಕಂಪ್ಯೂಟರ್ ಸೈನ್ಸ್ / ಹಾಗೂ ಅಭಿವೃದ್ಧಿ ವಲಯದ ದತ್ತಾಂಶ ನಿರ್ವಹಣೆ ಹಾಗೂ ದತ್ತಾಂಶ ಸಂಶೋಧನೆಗೆ ಸಂಬಂಧಿಸಿದಂತೆ ಕನಿಷ್ಠ 3–5 ವರ್ಷಗಳ ಅನುಭವ. **ಮಾಸಿಕ ಸಮಾಲೋಚನಾ ಶುಲ್ಕ:** ರೂ.25,000/– + ಪ್ರಯಾಣ ಭತ್ಯೆ ರೂ.2,000/–

1) ವಯೋಮಾನ: ಪ್ರಕಟಣೆ ಹೊರಡಿಸಿದ ದಿನಾಂಕಕ್ಕೆ 45 ವರ್ಷಗಳು ಮೀರಿರಬಾರದು. 2) ನಿಗದಿತ ಅರ್ಜಿ ನಮೂನೆಯಲ್ಲಿ ಮಾಹಿತಿಯನ್ನು ಭರ್ತಿ ಮಾಡಿ, ವಯಸ್ಸಿನ ದೃಢೀಕರಣ, ವಿದ್ಯಾರ್ಹತೆ, ಅನುಭವ (ತಿಂಗಳಲ್ಲಿ ನಮೂದಿಸುವುದು), ಪ್ರಮುಖ ಸಾಮರ್ಥ್ಯಗಳು (ಏನಾದರೂ ಇದ್ದಲ್ಲಿ) ಹಾಗೂ Resume ಅನ್ನು ಆನ್‌ಲೈನ್‌ಲ್ಲಿ ಅಳವಡಿಸುವುದು. 3) ಪ್ರಕಟಣಾ ದಿ: 17.11.2023 ಸಮಯ 12.01 AM ರಿಂದ ಹಾಗೂ ಅರ್ಜಿ ಸಲ್ಲಿಸಲು ಕೊನೆಯ ದಿ: 26.11.2023 ಸಮಯ 11.59 PM ರವರೆಗೆ 4) ಅರ್ಜಿ ಹಾಗೂ ಹೆಚ್ಚಿನ ಮಾಹಿತಿಯು NIC ವೆಬ್ ಸೈಟ್: mysore.nic.in ನಲ್ಲಿ ಲಭ್ಯವಿರುತ್ತದೆ.

ಸಹಿ/– ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ

DIPR/DDMYS/KSMCA/623/2023-24